ಮೈಸೂರು ಮಿತ್ರ

ಮೈಸೂರು–ಮಂಡ್ಯ–ಚಾಮರಾಜನಗರ–ಕೊಡಗು–ಹಾಸನ

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ

ಸೆಪ್ಟೆಂಬರ್ 14 ಬುಧವಾರ 2022

ಸಂಪುಟ: 43 | ಸಂಚಿಕೆ: 149 | ಪುಟಗಳು: 10

ದೂರವಾಣಿ: 2496520, 2496521, 2496526, 2496527, 2496528,
ಜಾಹೀರಾತು: 2496522, 2496523, ನಗರ ಕಚೇರಿಗಳು: ಕೆ.ಆರ್. ಸರ್ಕಲ್,
ವಿಶ್ವೇಶ್ವರಯ್ಯ ಕಟ್ಟಡ Ph: 2431774, ಡಿ.ದೇವರಾಜ ಅರಸು ರಸ್ತೆ, Ph: 2428695

ಸುದ್ದಿ, ಫೋಟೋಗೆ: news@mysurumithra.com
ಜಾಹೀರಾತು: ad@mysurumithra.com
website: www.mysurumithra.com

₹4



ಬಿಚ್ಚು ನುಡಿ
ವಿಕ್ರಂ ಮುತ್ತಣ್ಣ

40% ಕಮಿಷನ್‌ಗೆ ಪೀಡಿಸಿದರೂ
100% ಸೇಫ್

■ ಪುಟ–4

ಚಾಮರಾಜನಗರ ಜಿಲ್ಲೆಯಲ್ಲಿ ಭೂಮಿ ಕಂಪಿಸಿದ ಅನುಭವ

ಭಯಭೀತರಾದ ಜನ

ಚಾಮರಾಜನಗರ, ಸೆ.13–ತಾಲೂಕಿನ ಚಂದಕವಾಡಿ ಹೋಬಳಿ ವ್ಯಾಪ್ತಿಯಲ್ಲಿ ಮಂಗಳವಾರ ರಾತ್ರಿ ಭೂಮಿ ಕಂಪಿಸಿದ ಅನುಭವವಾಗಿದ್ದು, ಭಾರೀ ಸದ್ದು ಕೇಳಿ ಬಂದಿದೆ ತಾಲೂಕಿನ ಚಂದಕವಾಡಿ ಹೋಬಳಿಯ ▶ 8ನೇ ಪುಟಕ್ಕೆ

ಐದಕ್ಕಿಂತ ಅಧಿಕ ಕ್ರಿಮಿನಲ್ ಪ್ರಕರಣಗಳಲ್ಲಿ ಭಾಗಿಯಾದವರ ಮೇಲೆ

ಗೂಂಡಾ ಕಾಯ್ದೆಯಡಿ ಕ್ರಮ

● ಸರ್ಕಾರದ ನಿರ್ಧಾರ ● ರಾಜ್ಯದಲ್ಲಿ ಕಾನೂನು ಸುವ್ಯವಸ್ಥೆ ಹದಗೆಡುತ್ತಿರುವ ಹಿನ್ನೆಲೆಯಲ್ಲಿ ದಿಟ್ಟ ಹೆಜ್ಜೆ



ಬೆಂಗಳೂರು, ಸೆ. 13(ಕೆಎಂಶಿ)– ಐದಕ್ಕಿಂತ ಹೆಚ್ಚು ಕ್ರಿಮಿನಲ್ ಪ್ರಕರಣಗಳಲ್ಲಿ ಭಾಗಿಯಾದವರನ್ನು ಗೂಂಡಾ ಕಾಯ್ದೆಯಡಿ ಕಠಿಣ ಶಿಕ್ಷೆಗೊಳಪಡಿಸಲು ಸರ್ಕಾರ ಮುಂದಾಗಿದೆ.

ರಾಜ್ಯದಲ್ಲಿ ಪದೇ ಪದೇ ಕಾನೂನು ಸುವ್ಯವಸ್ಥೆ ಹದಗೆಡುತ್ತಿದ್ದು, ಇದರಲ್ಲಿ ಕ್ರಿಮಿನಲ್ ಹಿನ್ನೆಲೆ ಉಳ್ಳವರ ಪಾತ್ರವಿದೆ. ಇದನ್ನು ಅರಿತಿರುವ ರಾಜ್ಯ ಸರ್ಕಾರ, ಉತ್ತರ ಪ್ರದೇಶದ ಮಾದರಿಯಲ್ಲಿ 5 ಕ್ಕಿಂತ ಹೆಚ್ಚು ಕ್ರಿಮಿನಲ್ ಪ್ರಕರಣ ಇರುವವರನ್ನು ಗುರುತಿಸಿ ಅವರನ್ನು ಗೂಂಡಾ ಕಾಯ್ದೆಯಡಿ ಬಂಧಿಸಿ, ಗಡಿಪಾರು ಮಾಡುವ ತೀರ್ಮಾನ ಕೈಗೊಂಡಿದೆ.

ಗಡಿಪಾರು ಅಷ್ಟೇ ಅಲ್ಲದೆ ಈ ಗೂಂಡಾಗಳ ಆಸ್ತಿ ಪಾಸ್ತಿಗಳನ್ನು ಜಪ್ತಿ ಮಾಡುವ ಮಹತ್ವದ ತೀರ್ಮಾನವನ್ನು ಕೈಗೊಂಡಿರುವ ಸರ್ಕಾರ ಇಂತಹವರನ್ನು ಗುರುತಿಸಿ ಪಟ್ಟಿಮಾಡುವಂತೆ ಪೊಲೀಸರಿಗೆ ಆದೇಶ ಮಾಡಲಾಗಿದೆ. ಇದೇ ಸಂದರ್ಭದಲ್ಲಿ ಸಿದ್ದರಾಮಯ್ಯ ಆಡಳಿತದಲ್ಲಿ ಸಣ್ಣಪುಟ್ಟ ಗಲಭೆ ನಡೆಸಿ ಎರಡು ಪ್ರಕರಣಗಳಲ್ಲಿ ಭಾಗಿಯಾದವರನ್ನು ಗೂಂಡಾ ಪಟ್ಟಿಗೆ ಸೇರಿಸಲಾಗಿದೆ. ಇಂತಹವರ ವರದಿಯನ್ನು ನೋಡಿಕೊಂಡು ಅವರನ್ನು ಗೂಂಡಾ ಕಾಯ್ದೆಯಿಂದ ಕೈಬಿಡಲು ತೀರ್ಮಾನ ಕೈಗೊಳ್ಳಲಾಗಿದೆ. ಗೃಹ ಇಲಾಖೆಯ ಉನ್ನತ ಮೂಲಗಳು ಇದನ್ನು ಖಚಿತಪಡಿಸಿದ್ದು, ಐದಕ್ಕಿಂತ ಹೆಚ್ಚು



ಪ್ರಕರಣಗಳಲ್ಲಿ ಭಾಗಿಯಾರುವವರು ತಮ್ಮ ಚಾಳಿಯನ್ನು ಮುಂದುವರಿಸಿದ್ದಾರೆಯೇ ಇಲ್ಲವೇ ಎಂದು ತಿಳಿಯಲು ಪ್ರತ್ಯೇಕ ಪೊಲೀಸ್ ತಂಡವನ್ನು ರಚಿಸುವಂತೆ ಅಧಿಕಾರಿಗಳಿಗೆ ಸೂಚಿಸಲಾಗಿದೆ.

ಇಂತಹವರು ಈಗಲೂ ಕ್ರಿಮಿನಲ್ ಚಟುವಟಿಕೆಗಳಲ್ಲಿ ಭಾಗಿಯಾಗಿದ್ದರೆ ತಕ್ಷಣವೇ ಅವರನ್ನು ಗೂಂಡಾ ಕಾಯ್ದೆಯಡಿ ಶಿಕ್ಷಿಸಲು ಸರ್ಕಾರ ಸೂಚಿಸಿದೆ.

ಇಂತಹವರಿಗೆ ಜೈಲು ಶಿಕ್ಷೆ ವಿಧಿಸುವುದು, ಗಡಿಪಾರು ಮಾಡುವುದು ಅಥವಾ ಅವರ ಆಸ್ತಿಪಾಸ್ತಿಯನ್ನು ವಶಪಡಿಸಿಕೊಳ್ಳುವುದು ಅನಿವಾರ್ಯ ಎಂದು ಸರ್ಕಾರ ಸೂಚಿಸಿದೆ ಎಂದು ಮೂಲಗಳು ಸ್ಪಷ್ಟಪಡಿಸಿವೆ. ಗೂಂಡಾ ಕಾಯ್ದೆಯನ್ನು ಪರಿಣಾಮಕಾರಿಯಾಗಿ ಬಳಸಿಕೊಳ್ಳದೆ ಹೋದರೆ ರಾಜ್ಯದಲ್ಲಿ ಅಶಾಂತಿಯ ವಾತಾವರಣ ದಿನದಿಂದ ದಿನಕ್ಕೆ ಹೆಚ್ಚುತ್ತಾ ಹೋಗುತ್ತವೆ ಎಂಬ ಮಾಹಿತಿಯ ಹಿನ್ನೆಲೆಯಲ್ಲಿ ಸರ್ಕಾರ ಈ ಕ್ರಮಕ್ಕೆ ಮುಂದಾಗಿದೆ.

ಇತ್ತೀಚೆಗೆ ಪ್ರಕರಣವೊಂದರಲ್ಲಿ ಭಾಗಿಯಾದ ನಾಲ್ವರ ಪೈಕಿ ಓರ್ವನಿಗೆ ಜೈಶ್–ಎ–ಮಹಮ್ಮದ್ ಉಗ್ರಗಾಮಿ ಸಂಘಟನೆಯ ಸಂಪರ್ಕವಿದೆ ಎಂಬುದು ತನಿಖೆಯಿಂದ ಬಯಲಿಗೆ ಬಂದಿದ್ದು, ಇದಾದ ನಂತರ ಸಮಾಜಘಾತಕ ಶಕ್ತಿಗಳ ಮೇಲೆ ಹದ್ದಿನ ಕಣ್ಣಿಡಲು ಸರ್ಕಾರ ಬಯಸಿದೆ. ಈ ಮಧ್ಯೆ ರಾಜ್ಯದಲ್ಲಿ ಪೊಲೀಸ್ ಇಲಾಖೆಯನ್ನು ಮತ್ತಷ್ಟು ಸುಭದ್ರಗೊಳಿಸಲು ಹೊಸತಾಗಿ ನಾನ್ನೂರೈವತ್ತು ಮಂದಿ ಸಬ್ ಇನ್ಸ್‌ಪೆಕ್ಟರ್ ಮತ್ತು ಸಾವಿರದ ಆರು ನೂರು ಮಂದಿ ಕಾನ್ಸ್‌ಟೇಬಲ್‌ಗಳನ್ನು ನೇಮಕ ಮಾಡಿಕೊಳ್ಳಲು ಸರ್ಕಾರ ಸಜ್ಜಾಗಿದೆ.

ಪೊಲೀಸ್ ಇಲಾಖೆಯನ್ನು ಸುಸಜ್ಜಿತಗೊಳಿಸಬೇಕು. ಆ ಮೂಲಕ ಕ್ರಿಮಿನಲ್ ಚಟುವಟಿಕೆಗಳನ್ನು ಮತ್ತಷ್ಟು ಪರಿಣಾಮಕಾರಿಯಾಗಿ ಹತ್ತಿಕ್ಕಬೇಕು ಎಂಬುದು ಸರ್ಕಾರದ ನಿರ್ಧಾರ ಎಂದು ಇದೇ ಮೂಲಗಳು ವಿವರ ನೀಡಿವೆ.

ದಸರಾಗೆ ಬಂದ 'ಲಕ್ಷ್ಮಿ'ಗೆ ಪುತ್ರ ಪ್ರಾಪ್ತಿ

ಮೈಸೂರು ಅರಮನೆ ಅಂಗಳದ ಗಜಪಡೆ ಪರಿವಾರದಲ್ಲಿ ಸಂತಸ

● ಬಂಡೀಪುರದ ರಾಂಪುರ ಆನೆ ಶಿಬಿರದಿಂದ ಬಂದಿರುವ 'ಲಕ್ಷ್ಮಿ'ಗೆ ಗಂಡು ಮರಿ ಜನನ ● ದಸರಾ ಗಜಪಡೆಯ ಹೆಣ್ಣಾನೆಗಳಲ್ಲೇ ಇದು ಅತ್ಯಂತ ಕಿರಿಯ ಆನೆ ● 15 ವರ್ಷದ ಹಿಂದೆ 'ಸರಳ' 'ಚಾಮುಂಡಿ'ಗೆ ಜನ್ಮ ನೀಡಿತ್ತು



ಎಂ.ಟಿ.ಯೋಗೇಶ್ ಕುಮಾರ್

ಮೈಸೂರು, ಸೆ.13– ದಸರಾ ಮಹೋತ್ಸವದಲ್ಲಿ ಪಾಲ್ಗೊಳ್ಳಲು ಆಗಮಿಸಿರುವ ಗಜಪಡೆಯ 22 ವರ್ಷದ ಹೆಣ್ಣಾನೆ 'ಲಕ್ಷ್ಮಿ' ಅರಮನೆ ಅಂಗಳದಲ್ಲಿ ಮಂಗಳವಾರ ರಾತ್ರಿ 8.10ಕ್ಕೆ ಗಂಡು ಮರಿಗೆ ಜನ್ಮ ನೀಡಿದೆ. ದಸರಾ ಮಹೋತ್ಸವದ ಸಂದರ್ಭದಲ್ಲಿ ಅರಮನೆ ಅಂಗಳದಲ್ಲಿ ದಸರಾ ಆನೆಯೊಂದು ಮರಿಗೆ ಜನ್ಮ ನೀಡಿದ ಎರಡನೇ ಪ್ರಸಂಗ ಇದಾಗಿದ್ದು, ರಾಜವಂಶಸ್ಥರು ಸೇರಿದಂತೆ ಗಜಪಡೆಯ ಮಾವುತರು, ಕಾವಾಡಿಗಳು ಹಾಗೂ ಅರಣ್ಯ ಅಧಿಕಾರಿಗಳಲ್ಲಿ ಸಂತಸ ಮೂಡಿದೆ. ರಾಜವಂಶಸ್ಥ ಶ್ರೀಕಂಠದತ್ತ ನರಸಿಂಹರಾಜ ಒಡೆಯರ್ ಸಹೋದರಿ ವಿಶಾಲಾಕ್ಷಿ ದೇವಿಯವರು ▶ 8ನೇ ಪುಟಕ್ಕೆ

ಕೆಲ ತಿಂಗಳು ಅರಮನೆ ಆವರಣದಲ್ಲೇ 'ಲಕ್ಷ್ಮಿಪುತ್ರ'

ಲಕ್ಷ್ಮಿಪುತ್ರನಿಂದ ಗಜಪಡೆ ಆನೆಗಳ ಸಂಖ್ಯೆ 15ಕ್ಕೆ ಏರಿಕೆಯಾಗಿದೆ. ಆದರೆ 'ಲಕ್ಷ್ಮಿ' ಹಾಗೂ ಮರಿ ಆನೆ ಅರಮನೆ ಆವರಣದಲ್ಲೇ ಉಳಿಯಲಿದ್ದು, 13 ಆನೆಗಳು ಮಾತ್ರ ಜಂಬೂಸವಾರಿಯಲ್ಲಿ ಭಾಗಿಯಾಗಲಿವೆ. ಪ್ರಸವದ ಬಳಿಕ ಮೂರ್‍ನಾಲ್ಕು ತಿಂಗಳು ತಾಯಿ ಮತ್ತು ಮರಿಯನ್ನು ಕ್ಯಾಂಪ್‌ಗೆ ಸಾಗಿಸುವುದು ಸೂಕ್ತವಲ್ಲ ಎಂದು ಪಶು ವೈದ್ಯರು ಅಭಿಪ್ರಾಯಿಸಿರುವ ಹಿನ್ನೆಲೆಯಲ್ಲಿ ಇನ್ನೂ ಕೆಲ ತಿಂಗಳು ಅರಮನೆ ಅಂಗಳದಲ್ಲೇ ಉಳಿಸುವ ಸಾಧ್ಯತೆ ದಟ್ಟವಾಗಿದೆ.

ಪ್ರಸಕ್ತ ಸಾಲಿನಲ್ಲಿ 20 ಸಾವಿರ ಅಂಗನವಾಡಿ ಕೇಂದ್ರಗಳಲ್ಲಿ

ಶಾಲಾಪೂರ್ವ ಶಿಕ್ಷಣ ಜಾರಿ

● ಮಹಿಳಾ ಮತ್ತು ಮಕ್ಕಳ ಕಲ್ಯಾಣ ಸಚಿವ ಆಚಾರ್ ಹಾಲಪ್ಪ ಬಸಪ್ಪ ಪ್ರಕಟ ● ರಾಷ್ಟ್ರೀಯ ಶಿಕ್ಷಣ ನೀತಿಯಡಿ ಈ ಕ್ರಮ

ಬೆಂಗಳೂರು, ಸೆ. 13(ಕೆಎಂಶಿ)– ಪ್ರಸಕ್ತ ಸಾಲಿನಲ್ಲಿ ರಾಜ್ಯದ 20 ಸಾವಿರ ಅಂಗನವಾಡಿಗಳಲ್ಲಿ ನೂತನ ರಾಷ್ಟ್ರೀಯ ಶಿಕ್ಷಣ ನೀತಿ ಅನುಸಾರ ಶಾಲಾಪೂರ್ವ ಶಿಕ್ಷಣ ಜಾರಿ ಮಾಡಲು ಕ್ರಮ ಕೈಗೊಳ್ಳಲಾಗುವುದು ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವ ಆಚಾರ್ ಹಾಲಪ್ಪ ಬಸಪ್ಪ ವಿಧಾನಪರಿಷತ್‌ನಲ್ಲಿಂದು ಹೇಳಿದರು.



ವಿಧಾನಪರಿಷತ್‌ನಲ್ಲಿ ಗೋವಿಂದರಾಜು ಅವರ ಪ್ರಶ್ನೆಗೆ ಉತ್ತರಿಸಿದ ಸಚಿವರು, ರಾಜ್ಯದ ಅಂಗನವಾಡಿ ಕೇಂದ್ರಗಳಲ್ಲಿ ವ್ಯಾಸಂಗ ಮಾಡುತ್ತಿರುವ ಮಕ್ಕಳಿಗೆ ರಾಷ್ಟ್ರೀಯ ಶಿಕ್ಷಣ ನೀತಿಯ ಪಠ್ಯಕ್ರಮಗಳನ್ನು ಜಾರಿ ಮಾಡಲಾಗುವುದು ಎಂದರು. ನೂತನ ಶಿಕ್ಷಣ ನೀತಿಯನ್ವಯ ಶಾಲಾ ಪೂರ್ವ ಶಿಕ್ಷಣಕ್ಕೆ ಪಠ್ಯಕ್ರಮ ರೂಪಿಸಲು ಈಗಾಗಲೇ ಆರು



ಸಮಿತಿಗಳನ್ನು ರಚಿಸಲಾಗಿದೆ. ಆ ಸಮಿತಿಗಳ ಶಿಫಾರಸು ಆಧರಿಸಿ ಪಠ್ಯಕ್ರಮ ಸೇರಿ ಇತರ ಸಿದ್ಧತೆಗಳನ್ನು ಕೈಗೊಳ್ಳಲಾಗುವುದು. ಸದರಿ ಪಠ್ಯಕ್ರಮ ಬೋಧನೆಗಾಗಿ ಕಾರ್ಯಕರ್ತರಿಗೆ ಅಗತ್ಯ ತರಬೇತಿ ನೀಡಲಾಗುವುದು ಎಂದು ಹೇಳಿದರು. ಈ ವರ್ಷ ರಾಜ್ಯದ 20 ಸಾವಿರ ಅಂಗನವಾಡಿಗಳಲ್ಲಿ ಎನ್‌ಇಪಿ ಅನುಸಾರ ಶಾಲಾಪೂರ್ವ ಶಿಕ್ಷಣವನ್ನು ಜಾರಿ ಮಾಡಲಾಗುವುದು. ತದನಂತರ ಅಗತ್ಯವಿದ್ದರೆ ಕಾರ್ಯಕರ್ತರಿಗೆ ಆರು ತಿಂಗಳಿನಿಂದ ▶ 8ನೇ ಪುಟಕ್ಕೆ

ಹವಾಮಾನ ಮುನ್ಸೂಚನೆ ಪರಿಗಣಿಸದೇ ಇದ್ದದ್ದು

ಮಳೆ, ನೆರೆಯಿಂದ ಕೋಟ್ಯಾಂತರ ನಷ್ಟಕ್ಕೆ ಕಾರಣವಾಯ್ತು...

● ಸರ್ಕಾರದ ವಿರುದ್ಧ ವಿಪಕ್ಷ ನಾಯಕ ಸಿದ್ದರಾಮಯ್ಯ ವಾಗ್ದಾಳಿ ● ಹೋದಲ್ಲೆಲ್ಲಾ ನೀರೇ ನೀರು; ಅನಿವಾರ್ಯವಾಗಿ ದೋಣಿ ಏರಬೇಕಾಯ್ತು ● ಮಳೆ ಹಾನಿಗೆ ಸರಿಯಾದ ಪರಿಹಾರ ಕಲ್ಪಿಸಿಲ್ಲ

ಬೆಂಗಳೂರು, ಸೆ13(ಕೆಎಂಶಿ)–ಹವಾಮಾನ ಇಲಾಖೆಯ ಮುನ್ಸೂಚನೆ ಕಡೆಗಣಿಸಿದ ಪರಿಣಾಮವೇ ರಾಜ್ಯದಲ್ಲಿ ಭಾರೀ ಮಳೆ ಹಾಗೂ ನೆರೆಗೆ ಕೋಟ್ಯಾಂತರ ರೂಪಾಯಿ ನಷ್ಟವಾಗಿದೆ ಎಂದು ಪ್ರತಿಪಕ್ಷದ ನಾಯಕ ಸಿದ್ದರಾಮಯ್ಯ ವಿಧಾನಸಭೆಯಲ್ಲಿಂದು ಸರ್ಕಾರವನ್ನು ತರಾಟೆಗೆ ತೆಗೆದುಕೊಂಡರು.



ಅತಿವೃಷ್ಟಿ ಕುರಿತಂತೆ ನಿಯಮ 69ರಡಿ ಮಾತನಾಡಿದ ಅವರು, ಈ ಬಾರಿ ವಾಡಿಕೆಗಿಂತ ಹೆಚ್ಚು ಮಳೆಯಾದ್ದರಿಂದ ಭಾರೀ ದುಷ್ಪರಿಣಾಮ ಎದುರಿಸಬೇಕಾಯಿತು. ಈ ಬಗ್ಗೆ ಇಲಾಖೆ ಮಾಹಿತಿ ನೀಡಿದ್ದರೂ ಅದನ್ನು ಪರಿಗಣಿಸದೇ ಜನರನ್ನು ಸಂಕಷ್ಟಕ್ಕೆ ದೂಡಿದ್ದೀರಿ ಎಂದು ಆರೋಪಿಸಿದರು. ಮಳೆ ಮತ್ತು ನೆರೆಯಲ್ಲಿ ಸಂಕಷ್ಟಕ್ಕೆ ಒಳಗಾದವರಿಗೆ ತಕ್ಷಣವೇ ಅವರಿಗೆ ಪರ್ಯಾಯ ವ್ಯವಸ್ಥೆ ಕಲ್ಪಿಸುವಲ್ಲಿ ವಿಫಲವಾದ್ದರಿಂದ ನೂರಾರು ಮಂದಿ ಪ್ರಾಣ ಕಳೆದುಕೊಂಡರು, ಸಾವಿರಾರು ಜಾನುವಾರುಗಳು ಸಾವಿಗೀಡಾಗಿವೆ. ▶ 8ನೇ ಪುಟಕ್ಕೆ

ಅಶೋಕಾ ಈಗಲೂ ಕಬಡ್ಡಿ ಆಡ್ತಿಯಾ...

ಬೆಂಗಳೂರು: ಏನಪ್ಪಾ ಅಶೋಕಾ ಇನ್ನೂ ಕಬಡ್ಡಿ ಆಡ್ತಿದ್ದೀಯಾ?. ಹೀಗೆಂದು ಸಚಿವ ಆರ್.ಅಶೋಕ್ ಅವರನ್ನು ವಿಧಾನಸಭೆಯಲ್ಲಿ ಪ್ರತಿಪಕ್ಷ ನಾಯಕ ಸಿದ್ದರಾಮಯ್ಯ ಕೆಣಕಿದರು. ಕಬಡ್ಡಿಯಲ್ಲಿ ಕ್ಯಾಚ್ ಹಾಕುವುದೇ ಸಮಸ್ಯೆ ಸಾರ್ ಎಂದ ಅಶೋಕ್, ಸಿದ್ದರಾಮಯ್ಯ ಅವರಿಗೆ ತಮ್ಮ ಕಷ್ಟ ಹೇಳಿಕೊಂಡರು. ರಾಜ್ಯದಲ್ಲಿ ಪ್ರವಾಹ, ಬೆಳೆ ಹಾನಿ ಕುರಿತು ಚರ್ಚೆ ಸಂದರ್ಭದಲ್ಲಿ ಸಿದ್ದರಾಮಯ್ಯ ಮಾತನಾಡುತ್ತಿದ್ದಾಗ ಸಚಿವ ಅಶೋಕ್ ಪದೇ ಪದೆ ಮಧ್ಯೆ ಪ್ರವೇಶಿಸಿ, ಸ್ಪಷ್ಟನೆ ನೀಡುತ್ತಿದ್ದರು. ಹೀಗೆ ಎದ್ದು, ಕೂತು ಮಾಡುವುದು ಬೇಡ. ಒಂದೇ ಬಾರಿಗೆ ಉತ್ತರಕೊಡುವಿಯಂತೆ ಎಂದರು. ಆಗ ಸಿದ್ದರಾಮಯ್ಯ, ಅಶೋಕ್ ನೀನು ಈಗಲೂ ಕಬಡ್ಡಿ ಆಡುತ್ತಿದ್ದೀಯಾ ಎಂದು ಕೆಣಕಿದರು.

ಮೊಟ್ಟೆ ಎಸೆದ್ರೆ ನೀವೇನು ವೀರರಾ, ಶೂರರಾ? ಇದಕ್ಕೆಲ್ಲಾ ಹೆದರೋ ಮಕ್ಕಳಲ್ಲ

ಬೆಂಗಳೂರು: ವಿಧಾನಸಭೆಯಲ್ಲಿಂದು ಮಳೆ ಹಾನಿ ಕುರಿತಾಗಿ ಚರ್ಚಿಸುತ್ತಿದ್ದ ಪ್ರತಿಪಕ್ಷ ನಾಯಕ ಸಿದ್ದರಾಮಯ್ಯ ಮಳೆ ಹಾನಿ ಪರಿಶೀಲನೆಗೆ ಕೊಡಗು, ಚಿಕ್ಕಮಗಳೂರು ಜಿಲ್ಲೆಗಳಿಗೆ ಹೋಗಿದ್ದೆ. ಕೊಡಗಿಗೆ ಹೋಗುತ್ತಿದ್ದಾಗ ನನಗೆ ಕಪ್ಪು ಬಾವುಟ ತೋರಿಸಿ, ಮೊಟ್ಟೆ ಹೊಡೆಯಲು ಶುರು ಮಾಡಿದರು ಎಂದು ವಿಷಯ ಪ್ರಸ್ತಾಪಿಸಿದರು.

ಈ ವೇಳೆ ಸ್ಪೀಕರ್ ಕಾಗೇರಿ ಮಧ್ಯಪ್ರವೇಶಿಸಿ ಅದು ಬೇರೆ ಯಾವುದೋ ಕಾರಣಕ್ಕೆ ಎಂದು ಮಾಧ್ಯಮಗಳಲ್ಲಿ ಬರುತ್ತಿತ್ತು ಎಂದರು. ಆಗ ನಿಮಗೆ ಗೊತ್ತಾ ಎಂದು ಸಿದ್ದರಾಮಯ್ಯ ಮರು ಪ್ರಶ್ನಿಸಿದರು. ಈ ವೇಳೆ ಸ್ಪೀಕರ್ ಕೊಡಗಿನವರು ಅತಿವೃಷ್ಟಿ ಪರಿಶೀಲನೆ ಮಾಡಲು ಬಂದಾಗ ಹೀಗೆ ಮಾಡಿದ್ರಾ ಎಂದು ಸ್ಪೀಕರ್ ಪ್ರಶ್ನೆ ಮಾಡಿದರು. ಇದಕ್ಕೆ ಸಾವರ್ಕರ್, ಟಿಪ್ಪು ಬಗ್ಗೆ ಮಾತನಾಡಿದ್ದೀರಿ ಎಂದು ಬಿಜೆಪಿ ಶಾಸಕ ಕೆ.ಜಿ ಬೋಪಯ್ಯ ತಿರುಗೇಟು ನೀಡಿದರು. ಈ ವೇಳೆ ಶಾಸಕ ಅಪ್ಪಚ್ಚು ರಂಜನ್ ಕೂಡ ಸಾಥ್ ನೀಡಿದರು. ಇದಕ್ಕೆ ಸಿಡಿಮಿಡಿಗೊಂಡ ಸಿದ್ದರಾಮಯ್ಯ, ಕಪ್ಪು ಬಾವುಟ, ಮೊಟ್ಟೆ ಹೊಡೆಯುವುದು ನಮಗೂ ಗೊತ್ತು. ನಾವು ಹಿಂದೆ ಇದೇ ಮಾಡಿರುವುದು. ಇದಕ್ಕೆಲ್ಲಾ ನಾನು ಹೆದರೋದಿಲ್ಲ. ಮೊಟ್ಟೆ ಎಸೆದ್ರೆ ನೀವೇನು ವೀರರಾ, ಶೂರರಾ. ಇದಕ್ಕೆಲ್ಲಾ ಹೆದರೋ ಮಕ್ಕಳಲ್ಲ ನಾವು. ಅದೇ ಮೊಟ್ಟೆ ಎಸೆಯೋ ಕೆಲಸ ಇಡೀ ರಾಜ್ಯಾದ್ಯಂತ ಮಾಡಿಸಬಲ್ಲೆ. ಆದರೆ ಅಂತ ಕೆಲಸ ಮಾಡಲ್ಲ ಎಂದರು.

ಮಧ್ಯಪ್ರವೇಶ ಮಾಡಿದ ಶಾಸಕ ಅಪ್ಪಚ್ಚು ರಂಜನ್, ಮೊಟ್ಟೆ ಹೊಡೆದಿದ್ದು ನಿಮ್ಮ ಪಕ್ಷದವರೇ ಎಂದರು. ಇದಕ್ಕೆ ಸಿಟ್ಟಾದ ಸಿದ್ದರಾಮಯ್ಯ, ಕೂತ್ಕೊಳ್ಳಿ, ಹೋಗಿ ಬಿಡಿಸಿಕೊಂಡು ಬಂದವರು ನೀವೇ ತಾನೆ ಎಂದು ಅಪ್ಪಚ್ಚು ರಂಜನ್ ಅವರನ್ನು ತರಾಟೆಗೆ ತೆಗೆದುಕೊಂಡರು. ನಿಮ್ಮ ಜೊತೆಗಿರುವ ಫೋಟೋ ಇದೆ ನಾಚಿಕೆ ಆಗಲ್ವಾ? ಎಲ್ಲ ಅಪ್ಪಚ್ಚು ರಂಜನ್ ಅವರೇ ಮಾಡಿಸಿದ್ದು ಎಂದು ಆರೋಪಿಸಿದರು. ಈ ಸಂದರ್ಭ ಆಡಳಿತ ಹಾಗೂ ಪ್ರತಿಪಕ್ಷದ ಸದಸ್ಯರ ನಡುವೆ ಮಾತಿನ ಚಕಮಕಿ ನಡೆಯಿತು. ಈ ಹಿಂದೆ ಟಿಪ್ಪು ಪೇಟಾ ಹಾಕೊಂಡು ▶ 8ನೇ ಪುಟಕ್ಕೆ

ಮಳೆ ಹಾನಿಗೆ 600 ಕೋಟಿ ಬಿಡುಗಡೆ



ಬೆಂಗಳೂರು, ಸೆ. 13(ಕೆಎಂಶಿ)– ರಾಜ್ಯದಲ್ಲಿ ಸುರಿದ ಮಳೆಯಿಂದ ಮೂಲಭೂತ ಸೌಕರ್ಯಗಳಿಗೆ ಹಾನಿಯಾಗಿದ್ದು ತತ್‌ಕ್ಷಣವೇ ಪರಿಹಾರ ಕಾರ್ಯ ಕೈಗೊಳ್ಳಲು 600 ಕೋಟಿ ರೂ. ಬಿಡುಗಡೆ ಮಾಡಲಾಗಿದೆ ಎಂದು ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ವಿಧಾನಸಭೆಗೆ ತಿಳಿಸಿದರು.

ಪ್ರಶ್ನೋತ್ತರ ಅವಧಿಯಲ್ಲಿ ಶಾಸಕ ಕೆ.ಮಹದೇವ ಅವರ ಪ್ರಶ್ನೆಗೆ ಉತ್ತರಿಸಿದ ಅವರು, ರಾಜ್ಯಾದ್ಯಂತ ಸುರಿದ ಭಾರೀ ಮಳೆಯಿಂದಾಗಿ ನಿರೀಕ್ಷೆಗೂ ಮೀರಿದ ಹಾನಿಯಾಗಿದೆ. ಲೋಕೋಪಯೋಗಿ ಇಲಾಖೆ ಯಿಂದ 300 ಕೋಟಿ, ಹಾಗೂ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಇಲಾಖೆಯಿಂದ 300 ಕೋಟಿ ಸೇರಿ ಒಟ್ಟು 600 ಕೋಟಿ ರೂ.ಗಳನ್ನು ತತ್‌ಕ್ಷಣವೇ ಪರಿಹಾರ ಕೈಗೊಳ್ಳಲು ಬಿಡುಗಡೆ ಮಾಡಲಾಗಿದೆ. ಇಂಧನ, ಲೋಕೋಪಯೋಗಿ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್, ಕಂದಾಯ ಸೇರಿದಂತೆ ಹಲವಾರು ಇಲಾಖೆಗಳಿಗೆ ಸೇರಿದ ಮೂಲಭೂತ ಸೌಕರ್ಯಗಳು ಅಪಾರ ಪ್ರಮಾಣದಲ್ಲಿ ಹಾನಿಗೊಳಗಾಗಿವೆ. ಅಧಿಕಾರಿಗಳಿಗೆ 2 ಹಂತದಲ್ಲಿ ಸಮೀಕ್ಷೆ ನಡೆಸಲು ಸೂಚಿಸಲಾಗಿದೆ. ಮೊದಲು ತತ್‌ಕ್ಷಣವೇ ಎಲ್ಲೆಲ್ಲಿ ಅಗತ್ಯವಿದೆಯೋ ಅಂತಹ ಕಡೆ ಪರಿಹಾರ ಕೈಗೊಳ್ಳಲು ಡಿಸಿಗಳಿಗೆ ಸೂಚಿಸಲಾಗಿದೆ. 2ನೇ ಹಂತದಲ್ಲಿ ವಿಸ್ತೃತವಾದ ಚರ್ಚೆ ನಡೆಸಬೇಕೆಂದು ಸೂಚಿಸಲಾಗಿದೆ. ವರದಿ ಬಂದ ನಂತರ ಪರಿಹಾರ ಬಿಡುಗಡೆ ಮಾಡಲಾಗುವುದು. ಎನ್‌ಡಿಆರ್‌ಎಫ್ ನಿಯಮಗಳ ಪ್ರಕಾರ ಪರಿಹಾರವನ್ನು ಬಿಡುಗಡೆ ಮಾಡಲಿದ್ದೇವೆ ಎಂದರು.



ಮಂಚೇಗೌಡನಕೊಪ್ಪಲಿನಲ್ಲಿ ಚಾಮರಾಜ ಕ್ಷೇತ್ರದ ಶಾಸಕ ಎಲ್.ನಾಗೇಂದ್ರ ಅವರ ಹುಟ್ಟುಹಬ್ಬವನ್ನು ಕ್ಷೇತ್ರದ ಪ್ರಧಾನ ಕಾರ್ಯದರ್ಶಿ ಪುನೀತ್ ನೇತೃತ್ವದಲ್ಲಿ ಆಚರಿಸಲಾಯಿತು. ಈ ವೇಳೆ 500ಕ್ಕೂ ಹೆಚ್ಚು ಮಹಿಳೆಯರಿಗೆ ಸೀರೆ ವಿತರಣೆ ಮಾಡಲಾಯಿತು.

ರಾಜ್ಯದಲ್ಲಿ ಬಿಜೆಪಿ ಸರ್ಕಾರದ ಸಾಧನೆ ಶೂನ್ಯ

ಮೈಸೂರು ಜಿಪಂ ಮಾಜಿ ಅಧ್ಯಕ್ಷ ಕೆ.ಮರೀಗೌಡ ವಾಗ್ದಾಳಿ



ಮೈಸೂರು. ಸೆ.13– ರಾಜ್ಯದಲ್ಲಿ ಬಿಜೆಪಿ ಸರ್ಕಾರದ ಸಾಧನೆ ಶೂನ್ಯವಾಗಿದ್ದು, ಲಂಚ, ಭ್ರಷ್ಟಾಚಾರ, ಹಗರಣಗಳನ್ನು ಮಾಡುತ್ತ ಕಾಲಹರಣ ಮಾಡುತ್ತಿದ್ದಾರೆಂದು ಜಿಲ್ಲಾ ಪಂಚಾಯ್ತಿ ಮಾಜಿ ಅಧ್ಯಕ್ಷ ಕೆ.ಮರೀಗೌಡ ಲೇವಡಿ ಮಾಡಿದರು.

ರಾಮಕೃಷ್ಣನಗರದ 58ನೇ ವಾರ್ಡ್‌ನ ಗಣಪತಿ ದೇವಸ್ಥಾನದ ಆವರಣದಲ್ಲಿ ನಡೆದ ಬೂತ್‌ಮಟ್ಟದ ಪದಾಧಿಕಾರಿಗಳ ಆಯ್ಕೆ ಹಾಗೂ ಭಾರತ ಐಕ್ಯತಾಯಾತ್ರೆಯ ಪೂರ್ವಭಾವಿ ಸಭೆಯಲ್ಲಿ ಮಾತನಾಡಿದ ಅವರು, ಸಿದ್ದರಾಮಯ್ಯ ನವರು ಮುಖ್ಯಮಂತ್ರಿಯಾಗಿದ್ದ ಅವಧಿಯಲ್ಲಿ ಮೈಸೂರು ನಗರಕ್ಕೆ ಸಾವಿರಾರು ಕೋಟಿ ನೀಡಿ, ಅಭಿವೃದ್ಧಿಪಡಿಸಿದರು. ಅವುಗಳಲ್ಲಿ ಜಯದೇವ ಆಸ್ಪತ್ರೆ, ಜಿಲ್ಲಾ ಆಸ್ಪತ್ರೆ, ಟ್ರಾಮಾಸೆಂಟರ್, ಕಾಂಕ್ರೀಟ್ ರಸ್ತೆ, ಮಹಾರಾಣಿ ಕಾಲೇಜು, ಗಾಜಿನ ಮನೆ, ಅಂಬೇಡ್ಕರ್ ಪ್ರತಿಮೆ, ಮೆಗಾ ಡೈರಿ ಮುಖ್ಯವಾದವು. ಬಿಜೆಪಿ ಸರ್ಕಾರ ಬಂದ ಮೇಲೆ ರಸ್ತೆಯಲ್ಲಿ ಬಿದ್ದಿರುವ ಗುಂಡಿಗಳನ್ನು ಸಹ ಮುಚ್ಚಲಾಗಿಲ್ಲ. ಇಲ್ಲಿನ ಕಾರ್ಪೋರೇಟರ್ ಜನರ ಕೈಗೆ ಸಿಗುತ್ತಿಲ್ಲ. ಇಂತಹ ಜನರಿರುವ ಸರ್ಕಾರವನ್ನು ಮನೆಗೆ ಕಳುಹಿಸಿ. ಸಾಮಾಜಿಕ ನ್ಯಾಯಕ್ಕೆ ಬದ್ಧವಾಗಿರುವ ಕಾಂಗ್ರೆಸ್ ಪಕ್ಷವನ್ನು ಅಧಿಕಾರಕ್ಕೆ ತರಬೇಕು. ಚಾಮುಂಡೇಶ್ವರಿ ಯಲ್ಲಿ ಅಭ್ಯರ್ಥಿ ಯಾರೇ ಆಗಲಿ ಎಲ್ಲರೂ ಒಗ್ಗಟ್ಟಿನಿಂದ ಕೆಲಸ ಮಾಡಿ ಜೆಡಿಎಸ್ ಅಭ್ಯರ್ಥಿಯನ್ನು ಸೋಲಿಸೋಣ ಎಂದ ಅವರು, ರಾಹುಲ್ ಗಾಂಧಿ ನೇತೃತ್ವದ ಭಾರತ ಜೋಡೊ ಯಾತ್ರೆ ಚಾಮುಂಡೇಶ್ವರಿ ಕ್ಷೇತ್ರದ ಕಡಕೊಳಕ್ಕೆ ಆಗಮಿಸಿದ ಸಂದರ್ಭದಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಯಶಸ್ವಿಗೊಳಿಸಬೇಕೆಂದು ಮನವಿ ಮಾಡಿದರು. ಕಾಂಗ್ರೆಸ್ ಮುಖಂಡರಾದ ಕೃಷ್ಣಕುಮಾರ್ ಸಾಗರ್, ಸಿದ್ದರಾಜು, ಮಹಾದೇವ, ಕೃಷ್ಣಪ್ಪ, ಗುಡ್ಡಪ್ಪ, ರಾಮಶೆಟ್ಟಿ, ಜವರಪ್ಪ, ಗುರುಸ್ವಾಮಿ, ರಾಮನಾಯ್ಕ, ಹರಳಪ್ಪ, ಸಿದ್ದಪ್ಪಾಜಿ, ಬಿ.ರವಿ, ರೇಖಾ, ಸುಕನ್ಯ, ಸತೀಶ್ ಕುಮಾರ್, ವಾರ್ಡ್ ಅಧ್ಯಕ್ಷ ರಾಜು, ಕಾರ್ಯದರ್ಶಿ ಶಂಕರ್, ಮುರಳಿ, ನಾಗಮ್ಮ, ಮೇರಿ, ತಮ್ಮಣ್ಣ, ಕುಮಾರ್, ಕೆಂಪೇಗೌಡ, ಮಹೇಶ್‌ಕುಮಾರ್ ಉಪಸ್ಥಿತರಿದ್ದರು.

ಶಾಲಾ–ಕಾಲೇಜು ವಿದ್ಯಾರ್ಥಿನಿಯರು, ಮಹಿಳಾ ಗುಂಪುಗಳಿಗೆ

ಸುಸ್ಥಿರ ಋತುಸ್ರಾವದ ನೈರ್ಮಲ್ಯ ಜಾಗೃತಿ ಕಾರ್ಯಕ್ರಮ

ಮೈಸೂರು, ಸೆ.13(ಆರ್‌ಕೆಬಿ)– ಮೈಸೂರು ರೋಟರಿ (ಪೂರ್ವ) ಮತ್ತು ಹಸಿರು ದಳ ವತಿಯಿಂದ ಮೈಸೂರು ಜಿಲ್ಲೆಯ ಗ್ರಾಮೀಣ ಮತ್ತು ನಗರ ಪ್ರದೇಶಗಳ ಶಾಲಾ ಕಾಲೇಜು ವಿದ್ಯಾರ್ಥಿನಿಯರು ಹಾಗೂ ಮಹಿಳಾ ಗುಂಪುಗಳಿಗೆ ಸುಸ್ಥಿರ ಋತುಸ್ರಾವದ ನೈರ್ಮಲ್ಯಗಳ ಜಾಗೃತಿ ಕಾರ್ಯಕ್ರಮ ಹಮ್ಮಿಕೊಳ್ಳಲಾಗುತ್ತಿದೆ ಎಂದು ರೋಟರಿ ಪೂರ್ವ ಅಧ್ಯಕ್ಷೆ ಎಲಿಜಬೆತ್ ಶಕುಂತಲಾ ತಿಳಿಸಿದರು.

ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿ, ಈ ಕುರಿತು ಹಲವಾರು ಕಾರ್ಯಕ್ರಮಗಳ ಮೂಲಕ ಪರಿಸರ ಪ್ರಜ್ಞೆ ಮೂಡಿಸುವುದು ಸಂಸ್ಥೆಯ ಉದ್ದೇಶ. ಏಕಬಳಕೆಯ ಪ್ಲಾಸ್ಟಿಕ್ ಇತ್ತೀಚೆಗೆ ಹೆಚ್ಚಾಗಿ ಬಳಕೆಯಾಗುತ್ತಿದೆ. ಇದರ ಬದಲು ಬಟ್ಟೆಗಳಿಂದ ತಯಾರಿಸಿದ ಸ್ಯಾನಿಟರಿ ಪ್ಯಾಡ್ ಬಳಕೆ ಕುರಿತು ಅರಿವು ಮೂಡಿಸಲಾಗುತ್ತಿದೆ ಎಂದರು. ಬುಧವಾರ (ಸೆ.14)ರ ಸಂಜೆ 7ಕ್ಕೆ ಅರಸು ಜಿಮ್ಖಾನ ಕ್ಲಬ್‌ನಲ್ಲಿ ಘನತ್ಯಾಜ್ಯ ನಿರ್ವಹಣೆ ಮತ್ತು ಸುಸ್ಥಿರ ಋತುಚಕ್ರದ ಅಭ್ಯಾಸ ಕುರಿತು ಮಾಹಿತಿ ನೀಡಲಾಗುವುದು ಎಂದರು. ಗೋಷ್ಠಿಯಲ್ಲಿ ಕಾರ್ಯದರ್ಶಿ ಲತಾ ಕುಮಾರ್, ಸಹನಾ, ಚೈತ್ರ ಇದ್ದರು.

ಥಿಯರಮ್ ಡಿಜಿಟಲ್ ಇಂಡಿಯಾ ನೆರವು



ಥಿಯರಮ್ ಇಂಡಿಯಾ, ತನ್ನ ಸಿಎಸ್‌ಆರ್ ಅಭಿಯಾನದಡಿ ಮೈಸೂರಿನ ವನಿತಾ ಸದನ ಸಂಸ್ಥೆಗೆ ಕಂಪ್ಯೂಟರ್‌ಗಳನ್ನು ವಿತರಿಸಿದೆ. ಈ ವೇಳೆ ಥಿಯರಮ್‌ನ ಸಂಸ್ಥಾಪಕ ಮತ್ತು ಸಿಇಒ ಜಯ್ ಕುಲಕರ್ಣಿ, ಭಾರತದ ವಿಪಿ ಆನಂದ್ ಸುಬ್ರಮಣಿಯನ್, ಸ್ವಯಂ ಸೇವಕರು ಉಪಸ್ಥಿತರಿದ್ದರು.

ಮೈಸೂರು ಗೀತಾ ಬುಕ್ ಹೌಸ್ ಮಾಲೀಕ ಸತ್ಯನಾರಾಯಣ ರಾವ್‌ಗೆ ಪತ್ನಿ ವಿಯೋಗ

ಮೈಸೂರು, ಸೆ.13–ಮೈಸೂರಿನ ಹೆಸರಾಂತ ಗೀತಾ ಬುಕ್‌ಹೌಸ್ ಮಾಲೀಕರು ಮತ್ತು ವಿಧಾನಪರಿಷತ್ ಮಾಜಿ ಸದಸ್ಯರೂ ಆದ ಪ್ರೊ. ಎಂ.ಸತ್ಯನಾರಾಯಣ ರಾವ್ ಅವರ ಧರ್ಮಪತ್ನಿ ಶ್ರೀಮತಿ ಪದ್ಮಜ ಎಸ್.ರಾವ್ ಅವರು ಮಂಗಳವಾರ ಮಧ್ಯಾಹ್ನ ಕೃಷ್ಣಮೂರ್ತಿಪುರಂನಲ್ಲಿರುವ ತಮ್ಮ ನಿವಾಸದಲ್ಲಿ ನಿಧನರಾದರು. ಅವರಿಗೆ 77 ವರ್ಷ ವಯಸ್ಸಾಗಿತ್ತು.

ದಿವಂಗತರು ಪತಿ ಎಂ.ಸತ್ಯನಾರಾಯಣರಾವ್, ಇಬ್ಬರು ಪುತ್ರಿಯರು, ಓರ್ವ ಪುತ್ರ ಸೇರಿದಂತೆ ಅಪಾರ ಬಂಧು–ಬಳಗವನ್ನು ಅಗಲಿದ್ದಾರೆ.

ಪುತ್ರ ಮತ್ತು ಪುತ್ರಿಯರು ವಿದೇಶದಲ್ಲಿರುವುದರಿಂದ ಅವರು ಬುಧವಾರ ರಾತ್ರಿ ಮೈಸೂರಿಗೆ ತಲುಪುವ ಸಾಧ್ಯತೆ ಇದೆಯಾದ್ದರಿಂದ ಗುರುವಾರ(ಸೆ.15) ಬೆಳಗ್ಗೆ ಮೈಸೂರಿನ ಚಾಮುಂಡಿಬೆಟ್ಟದ ತಪ್ಪಲಿನಲ್ಲಿರುವ ಹರಿಶ್ಚಂದ್ರ ಘಾಟ್‌ನಲ್ಲಿ ದಿವಂಗತರ ಅಂತ್ಯಕ್ರಿಯೆ ನೆರವೇರಿಸಲಾಗುವುದು ಎಂದು ಕುಟುಂಬದ ಮೂಲಗಳು ತಿಳಿಸಿವೆ.

ಕೆಎಸ್‌ಆರ್‌ಟಿಸಿ ಬಸ್, ಟ್ಯಾಕ್ಸಿ ಚಾಲಕರಿಗೆ ಜೀವರಕ್ಷಣಾ ಕೌಶಲ್ಯ ತರಬೇತಿ ಆರಂಭ

ಇದೇ ಪ್ರಥಮ ಬಾರಿ ಆರೋಗ್ಯ ಇಲಾಖೆಯಿಂದ ಸಾರ್ಥಕ ಕಾರ್ಯಕ್ರಮ



ಮೈಸೂರಿನ ಜಯಲಕ್ಷ್ಮೀಪುರಂನ ಜಿಲ್ಲಾ ಆರೋಗ್ಯ ತರಬೇತಿ ಕೇಂದ್ರದಲ್ಲಿ ಮಂಗಳವಾರ ಕೆಎಸ್‌ಆರ್‌ಟಿಸಿ ಬಸ್ ಚಾಲಕರಿಗೆ ಹೃದಯಾಘಾತ ಸಂಭವಿಸಿದರೆ ಕೈಗೊಳ್ಳಬೇಕಾದ ಅಗತ್ಯ ಕ್ರಮಗಳ ಬಗ್ಗೆ ಪ್ರಾತ್ಯಕ್ಷಿಕೆ ಮೂಲಕ ತರಬೇತಿ ನೀಡಲಾಯಿತು.

ಮೈಸೂರು, ಸೆ. 13(ಆರ್‌ಕೆ)– ಅಪಘಾತ ಸಂಭವಿಸಿದಾಗ, ಹೃದಯಾಘಾತವಾದ ವೇಳೆ, ಮೂರ್ಛೆ, ಲಕ್ವ ಹೊಡೆದಾಗ, ನೀರಿನಲ್ಲಿ ಮುಳುಗಿದ ಸಂದರ್ಭ ಆಸ್ಪತ್ರೆಗೆ ಕರೆದೊಯ್ಯುವ ಮೊದಲು ರೋಗಿಯನ್ನು ಪ್ರಥಮ ಚಿಕಿತ್ಸೆ ಮೂಲಕ ಪ್ರಾಣ ರಕ್ಷಿಸುವ ಕೌಶಲ್ಯದ ಬಗ್ಗೆ ಕೆಎಸ್‌ಆರ್‌ಟಿಸಿ ಬಸ್ ಹಾಗೂ ಟ್ಯಾಕ್ಸಿ ಚಾಲಕರಿಗೆ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಿಂದ ತರಬೇತಿ ನೀಡಲಾಗುತ್ತಿದೆ.

ಮೈಸೂರಿನ ಜಯಲಕ್ಷ್ಮೀಪುರಂನಲ್ಲಿರುವ ಜಿಲ್ಲಾ ಆರೋಗ್ಯ ತರಬೇತಿ ಕೇಂದ್ರದಲ್ಲಿ ಇದೇ ಪ್ರಥಮ ಬಾರಿಗೆ ಇಲಾಖೆಯು ಆರಂಭಿಸಿರುವ ಎರಡು ದಿನಗಳ ತರಬೇತಿ ಕಾರ್ಯಕ್ರಮವನ್ನು, ಕಾರ್ಮಿಕ ಇಲಾಖೆ ಜಿಲ್ಲಾ ಕಾರ್ಮಿಕ ಅಧಿಕಾರಿ ರಾಜೇಶ್ ಜಾಧವ್ ಉದ್ಘಾಟಿಸಿದರು.

ನಂತರ ವಾಹನ ಚಾಲಕರನ್ನುದ್ದೇಶಿಸಿ ಮಾತನಾಡಿದ ಅವರು, 2020ನೇ ಸಮೀಕ್ಷೆ ಪ್ರಕಾರ ದೇಶದಲ್ಲಿ ಒಟ್ಟು 4,49,002 ರಸ್ತೆ ಅಪಘಾತಗಳು ಸಂಭವಿಸಿದ್ದು, 1,51,113 ಮಂದಿ ಸಾವನ್ನಪ್ಪಿದ್ದಾರೆ. ಒಟ್ಟು 4,51,361 ಮಂದಿಗೆ ಗಾಯಗಳಾಗಿವೆ. ಆ ಪೈಕಿ ಸುರಕ್ಷತಾ ಪರಿಕರಗಳನ್ನು ಧರಿಸದೇ ವಾಹನ ಚಾಲನೆ ಮಾಡಿದ ಕಾರಣ ಒಟ್ಟು 65,551 ಮಂದಿ ಸಾವನ್ನಪ್ಪಿದ್ದಾರೆಂದು ತಿಳಿದು ಬಂದಿದೆ ಎಂದರು.

ಹೆಲ್ಮೆಟ್ ಧರಿಸದ 30,148 ಡ್ರೈವರ್‌ಗಳು ಹಾಗೂ 14,518 ಮಂದಿ ಸಾವನ್ನಪ್ಪಿದ್ದರೆ, ಸೀಟ್ ಬೆಲ್ಟ್ ಧರಿಸದೆ ಕಾರು ಚಾಲನೆ ಮಾಡುತ್ತಿದ್ದ 9,562 ಮತ್ತು ಹಿಂಬದಿ ಸೀಟ್‌ನಲ್ಲಿ ಪ್ರಯಾಣಿಸುತ್ತಿದ್ದ 11,323 ಮಂದಿ ಮರಣ ಹೊಂದಿದ್ದಾರೆ. ಆದ್ದರಿಂದ ದ್ವಿಚಕ್ರ ವಾಹನ ಓಡಿಸುವವರಷ್ಟೇ ಅಲ್ಲದೆ, ಹಿಂಬದಿ ಸವಾರರೂ ಹೆಲ್ಮೆಟ್ ಧರಿಸಬೇಕು ಎಂದ ಜಾಧವ್, ಕಾರಿನ ಮುಂದಿನ ಸೀಟಿನವರಂತೆ ಹಿಂಬದಿಯಲ್ಲಿ ಪ್ರಯಾಣಿಸುವವರೂ ಸಹ ತಪ್ಪದೇ ಸೀಟ್ ಬೆಲ್ಟ್ ಧರಿಸಬೇಕೆಂದು ಸಲಹೆ ನೀಡಿದರು.

ಅಪಘಾತ ಸಂಭವಿಸಿದಾಗ, ತೀವ್ರ ಹೃದಯಾಘಾತ ಹಾಗೂ ಇನ್ನಿತರ ತುರ್ತು ಸಂದರ್ಭಗಳಲ್ಲಿ ರಕ್ತ ಸೋರಿಕೆ ತಡೆಗಟ್ಟುವುದು, ಪ್ರಾಣ ಹೋಗದಂತೆ ಪ್ರಥಮ ಚಿಕಿತ್ಸೆ ನೀಡಿ ರೋಗಿಯನ್ನು ಆಸ್ಪತ್ರೆಗೆ ತಲುಪುವವರೆಗೆ ರಕ್ಷಿಸುವುದು ಅತ್ಯವಶ್ಯವಾಗಿದ್ದು, ಪ್ರತಿಯೊಬ್ಬರೂ ಈ ಕೌಶಲ್ಯವನ್ನು ಹೊಂದಬೇಕು ಎಂದ ಜಾಧವ್, ಕಾರ್ಮಿಕ ಇಲಾಖೆಯು ಮರಣ ಹೊಂದಿದ ವಾಹನ ಚಾಲಕರು ಕಟ್ಟಡ ನಿರ್ಮಾಣ ಸೇರಿದಂತೆ ಎಲ್ಲಾ ಕ್ಷೇತ್ರಗಳ ಅಸಂಘಟಿತ ಕಾರ್ಮಿಕರುಗಳಿಗೆ ಸುರಕ್ಷತಾ ಪರಿಕರಗಳನ್ನು ನೀಡುತ್ತಿರುವುದಲ್ಲದೆ, ಕಾರ್ಮಿಕರು ಸಾವನ್ನಪ್ಪಿದರೆ 5 ಲಕ್ಷ ರೂ. ಪರಿಹಾರ ನೀಡುವ ಯೋಜನೆಗಳಿವೆ. ಪ್ರತಿಯೊಬ್ಬರೂ ಇಲಾಖೆಯಲ್ಲಿ ನೋಂದಣಿ ಮಾಡಿಸಿಕೊಂಡು ಇ–ಶ್ರಮ್ ಕಾರ್ಡ್ ಪಡೆಯುವಂತೆ ಸಲಹೆ ನೀಡಿದರು.

ಜಿಲ್ಲಾ ಆರೋಗ್ಯ ತರಬೇತಿ ಕೇಂದ್ರದ ಪ್ರಾಂಶುಪಾಲ ಡಾ.ಎಲ್.ರವಿ, ಮೈಸೂರು ಜಿಲ್ಲಾ ಪತ್ರಕರ್ತರ ಸಂಘದ ಅಧ್ಯಕ್ಷ ಎಸ್.ಟಿ. ರವಿಕುಮಾರ್, ಕೆಎಸ್‌ಆರ್‌ಟಿಸಿ ಕಾರ್ಮಿಕ ಕ್ಷೇಮಾಭಿವೃದ್ಧಿ ಅಧಿಕಾರಿ ಪುಟ್ಟೇಗೌಡ ಹಾಗೂ ಮೈಸೂರು ಜಿಲ್ಲಾ ವಾಹನ ಚಾಲಕರು ಮತ್ತು ಮಾಲೀಕರ ಸಂಘದ ಅಧ್ಯಕ್ಷ ಎಸ್.ನಾಗರಾಜ್ ತರಬೇತಿ ಉದ್ಘಾಟನಾ ಕಾರ್ಯಕ್ರಮದಲ್ಲಿ ಮಾತನಾಡಿದರು. ವಿವಿ ಪುರಂ ಹೆರಿಗೆ ಆಸ್ಪತ್ರೆ ವೈದ್ಯಕೀಯ ಅಧಿಕಾರಿ ಡಾ. ಕೆಂಪೇಗೌಡ, ಆರೋಗ್ಯ ಶಿಕ್ಷಣ ಅಧಿಕಾರಿ ಡಾ.ಶಿವಣ್ಣ, ಅರವಳಿಕೆ ತಜ್ಞ ಡಾ. ಮಂಜುನಾಥ್, ಮಳವಳ್ಳಿ ಪ್ರಾಥಮಿಕ ಆರೋಗ್ಯ ಕೇಂದ್ರದ ವೈದ್ಯಾಧಿಕಾರಿ ಡಾ. ಸುರೇಶ್, ನರ್ಸಿಂಗ್ ಅಧಿಕಾರಿಗಳಾದ ದಿವ್ಯ, ಶರತ್, ಶಿವಶಂಕರ್ ಸೇರಿದಂತೆ ಹಲವರು ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದರು. ಕೆಎಸ್‌ಆರ್‌ಟಿಸಿ ಬಸ್ ಮತ್ತು ಟ್ಯಾಕ್ಸಿ ಚಾಲಕರು ಸೇರಿ ಒಟ್ಟು 100 ಮಂದಿ ಪ್ರಥಮ ಚಿಕಿತ್ಸಾ ತರಬೇತಿ ಶಿಬಿರದಲ್ಲಿ ಪಾಲ್ಗೊಂಡಿದ್ದರು. ಬೆಳಗ್ಗೆಯಿಂದ ಸಂಜೆವರೆಗೂ ನಡೆದ ತರಬೇತಿಯಲ್ಲಿ ಪಾಲ್ಗೊಂಡಿದ್ದ ಪ್ರಶಿಕ್ಷಣಾರ್ಥಿಗಳಿಗೆ ಎದೆನೋವು, ಹೃದಯಾಘಾತ, ಪಾರ್ಶ್ವವಾಯು, ಮುಳುಗುವುದು, ವಿಷ ಸೇವನೆ, ಪ್ರಜ್ಞಾಹೀನ, ರಕ್ತಸ್ರಾವ ತಡೆಯುವುದು, ಗಾಯ ನಿರ್ವಹಣೆ, ವಿದ್ಯುತ್ ಸ್ಪರ್ಶ, ನಾಯಿ–ಹಾವು ಕಡಿದಾಗ ಸೇರಿದಂತೆ ಇನ್ನಿತರ ವೈದ್ಯಕೀಯ ತುರ್ತು ಸಂದರ್ಭಗಳಲ್ಲಿ ಪ್ರಥಮ ಚಿಕಿತ್ಸೆ ನೀಡುವ ಕುರಿತು ಪ್ರಾತ್ಯಕ್ಷಿಕೆ ಮೂಲಕ ಅರಿವು ಮೂಡಿಸಿ, ಪ್ರಮಾಣ ಪತ್ರವನ್ನು ನೀಡಲಾಯಿತು.

ದಸರಾ ವೇಳೆ ಮೈಸೂರು ಸ್ವಚ್ಛತೆ, ಪಾರಂಪರಿಕತೆಗೆ ಧಕ್ಕೆ ಆಗಕೂಡದು

ನಗರಪಾಲಿಕೆ ಅಧಿಕಾರಿಗಳಿಗೆ ಮೇಯರ್ ಸೂಚನೆ



ಮೈಸೂರು, ಸೆ.13(ಎಂಟಿವೈ)– ದಸರಾ ವೇಳೆ ದೇಶ–ವಿದೇಶಗಳಿಂದ ಹೆಚ್ಚಿನ ಸಂಖ್ಯೆಯಲ್ಲಿ ಪ್ರವಾಸಿಗರು ಆಗಮಿಸುವ ಹಿನ್ನೆಲೆಯಲ್ಲಿ ಮೈಸೂರಿನ ಸ್ವಚ್ಛತೆ ಹಾಗೂ ಪಾರಂಪರಿಕತೆಗೆ ಧಕ್ಕೆಯಾಗದಂತೆ ಅಗತ್ಯ ಕ್ರಮಕೈಗೊಳ್ಳಲು ಸೂಚಿಸಲಾಗಿದೆ ಎಂದು ಮೇಯರ್ ಶಿವಕುಮಾರ್ ತಿಳಿಸಿದ್ದಾರೆ.

ನಗರ ಪ್ರದಕ್ಷಿಣೆ ಬಳಿಕ ಪತ್ರಕರ್ತರೊಂದಿಗೆ ಮಾತನಾಡಿದ ಅವರು, ನಾಡಹಬ್ಬ ದಸರಾ ಆರಂಭಕ್ಕೆ 13 ದಿನ ಬಾಕಿ ಇದೆ. ಮೈಸೂರಿಗೆ ಬರುವ ಪ್ರವಾಸಿಗರಿಗೆ ಏನೂ ಸಮಸ್ಯೆ ಆಗದಂತೆ ನಗರಪಾಲಿಕೆ ಅಗತ್ಯ ಕ್ರಮ ಕೈಗೊಳ್ಳಲಿದೆ. ಮೈಸೂರಿನ ಗುಂಡಿ ಬಿದ್ದ ರಸ್ತೆಗಳ ದುರಸ್ತಿಗೆ ಸಾರ್ವಜನಿಕರು ಆಗ್ರಹಿಸಿದ್ದಾರೆ. ಈಗಾಗಲೇ ರಸ್ತೆಗಳ ಅಭಿವೃದ್ಧಿಗೆ ಶಾಸಕ ಎಲ್.ನಾಗೇಂದ್ರ ನೂರಾರು ಕೋಟಿ ರೂ.ಗಳನ್ನು ಸರ್ಕಾರದಿಂದ ಮಂಜೂರು ಮಾಡಿಸಿಕೊಂಡು ಬಂದಿದ್ದಾರೆ. ರಸ್ತೆಗಳ ಅಭಿವೃದ್ಧಿಗೆ ಟೆಂಡರ್ ಪ್ರಕ್ರಿಯೆ ಪೂರ್ಣಗೊಂಡು, ಕಾರ್ಯಾದೇಶವನ್ನೂ ನೀಡಲಾಗಿದೆ. ಆದರೆ, ಕಳೆದ ಕೆಲವು ದಿನಗಳಿಂದ ಎಡೆಬಿಡದೆ ಮಳೆ ಸುರಿಯುತ್ತಿರುವುದರಿಂದ ರಸ್ತೆ ಅಭಿವೃದ್ಧಿ ಕಾಮಗಾರಿ ಸಾಧ್ಯವಾಗಿಲ್ಲ ಎಂದು ಹೇಳಿದರು.

ಮಳೆ ನಿಲ್ಲದಿದ್ದರೆ ಹೊಸ ಟೆಕ್ನಾಲಜಿ ಬಳಕೆ: ದಸರಾ ಸಮೀಪಿಸುತ್ತಿರುವುದರಿಂದ ಗುಂಡಿ ಬಿದ್ದ ರಸ್ತೆಗಳನ್ನು ತ್ವರಿತಗತಿಯಲ್ಲಿ ದುರಸ್ತಿ ಮಾಡಲೇಬೇಕಾದ ಅನಿವಾರ್ಯತೆ ಎದುರಾಗಿದೆ. ಹವಾಮಾನ ವರದಿಯಂತೆ ಇನ್ನು 3–4 ದಿನ ಮಳೆ ಬರುವುದಿಲ್ಲ ಎಂದು ತಿಳಿದು ಬಂದಿದೆ. ಈ ಅವಧಿಯಲ್ಲಿ ಗುಂಡಿ ಬಿದ್ದ ರಸ್ತೆ ದುರಸ್ತಿ ಮಾಡಲು ಅಗತ್ಯ ಕ್ರಮ ಕೈಗೊಳ್ಳಲಾಗುತ್ತದೆ. ಒಂದು ವೇಳೆ ರಸ್ತೆ ರಿಪೇರಿಗೆ ಮಳೆ ಅಡ್ಡಿಯಾದರೆ, 'ಕೋಲ್ಡ್ ಮಿಕ್ಸ್' ಮೂಲಕ ಮಳೆ ನಡುವೆಯೂ ರಸ್ತೆ ರಿಪೇರಿ ಮಾಡಲಾಗುತ್ತದೆ. ಈ ವಿಧಾನದಲ್ಲಿ ಕೆಲವು ರಾಸಾಯನಿಕ ವಸ್ತುಗಳ ಬಳಕೆ ಮಾಡುವುದರಿಂದ ಮಳೆ ನಡುವೆಯೂ ಗುಂಡಿ ಬಿದ್ದ ರಸ್ತೆಯನ್ನು ದುರಸ್ತಿ ಮಾಡಬಹುದು. ಈ ಹಿನ್ನೆಲೆಯಲ್ಲಿ ಅನಿವಾರ್ಯವಾದರೆ ನೂತನ ಟೆಕ್ನಾಲಜಿ ಬಳಸಿ ದುರಸ್ತಿ ಮಾಡಲಾಗುತ್ತದೆ ಎಂದರು.

ತಾತ್ಕಾಲಿಕ ಪಾರ್ಕಿಂಗ್: ಪುರಭವನದ ಆವರಣದಲ್ಲಿ ನಡೆಯುತ್ತಿರುವ ಮಲ್ಟಿಲೆವೆಲ್ ಪಾರ್ಕಿಂಗ್ ಕಟ್ಟಡದ ಕಾಮಗಾರಿಯನ್ನು ಪರಿಶೀಲಿಸಿದ್ದೇನೆ. ಕಾಮಗಾರಿಗೆ ಇನ್ನಷ್ಟು ವೇಗ ನೀಡುವಂತೆ ಸೂಚಿಸಲಾಗಿದೆ. ದಸರಾ ಹಿನ್ನೆಲೆಯಲ್ಲಿ ಪುರಭವನದ ಆವರಣ ಹಾಗೂ ಮಲ್ಟಿಲೆವೆಲ್ ಪಾರ್ಕಿಂಗ್ ಕಟ್ಟಡದ ಒಂದು ಭಾಗದಲ್ಲಿ ತಾತ್ಕಾಲಿಕ ಪಾರ್ಕಿಂಗ್ ವ್ಯವಸ್ಥೆ ಮಾಡಲು ಕ್ರಮ ಕೈಗೊಳ್ಳಲಾಗುತ್ತದೆ. ಇದರಿಂದ ಸುಮಾರು 200ಕ್ಕೂ ಹೆಚ್ಚು ಕಾರ್‌ಗಳನ್ನು ನಿಲ್ಲಿಸಬಹುದಾಗಿದ್ದು, ದಸರಾ ಕಾರ್ಯಕ್ರಮ ವೀಕ್ಷಣೆಗೆಂದು ಬರುವ ಪ್ರವಾಸಿಗರಿಗೆ ವಾಹನ ನಿಲುಗಡೆಗೆ ಸಹಕಾರಿಯಾಗಲಿದೆ ಎಂದರು.

2023ರ ವಿಧಾನಸಭೆ ಚುನಾವಣೆಯಲ್ಲಿ 130–140 ಸ್ಥಾನ ಗೆಲ್ಲುವ ವಿಶ್ವಾಸವಿದೆ



ಹಾಸನ: 2023ರ ವಿಧಾನಸಭೆ ಚುನಾವಣೆಯಲ್ಲಿ 130–140 ಸ್ಥಾನ ಗೆಲ್ಲುವ ವಿಶ್ವಾಸವಿದೆ ಎಂದು ಹಾಸನದಲ್ಲಿ ಮಾಜಿ ಮುಖ್ಯಮಂತ್ರಿ ಹೆಚ್.ಡಿ.ಕುಮಾರಸ್ವಾಮಿ ಹೇಳಿದರು. 2006ರಲ್ಲಿ ನನ್ನ ತಂದೆಯವರ ಇಚ್ಛೆಗೆ ವಿರುದ್ಧವಾಗಿ ಹೋದೆ. ಅದರ ಪರಿಣಾಮವಾಗಿ ಅವರ ಆರೋಗ್ಯಕ್ಕೆ ತೊಂದರೆ ಆಯ್ತು ಮುಂದಿನ ಚುನಾವಣೆಯಲ್ಲಿ 130ರಿಂದ 140 ಸ್ಥಾನ ಗೆಲ್ಲುತ್ತೇವೆ. ನನ್ನ ಜನ್ಮ ಭೂಮಿಯಿಂದ ಸವಾಲು ಸ್ವೀಕರಿಸಿ ಹೊರಟಿದ್ದೇನೆ. ಪ್ರಜ್ವಲ್ ರೇವಣ್ಣ, ಸೂರಜ್ ಎಲ್ಲರ ಭವಿಷ್ಯ ನನಗೆ ಮುಖ್ಯ. ಜನಪರ ಸರ್ಕಾರ ರಚನೆ ಆಗಲು ನನಗೆ ಸಹಾಯ ಮಾಡಿ ಎಂದು ಮಾಜಿ ಸಿಎಂ ಹೆಚ್.ಡಿ.ಕುಮಾರಸ್ವಾಮಿ ಹೇಳಿದರು.

ಅಧಿಕಾರ ಇರಲಿ ಇಲ್ಲದಿರಲಿ, ನಾವು ಬಡ ರೈತನ ಮಕ್ಕಳು. ಹಾಸನ ರಾಜಕಾರಣದಲ್ಲಿ ಕೆಲವರು ಗೊಂದಲ ಸೃಷ್ಟಿಸುತ್ತಿದ್ದಾರೆ. ನಿಮ್ಮ ಮನೆ ಮಕ್ಕಳು ತಪ್ಪು ಮಾಡಿದರೆ ನೀವು ಕ್ಷಮಿಸಲ್ಲವೇ. ನಾನು ಈ ಜಿಲ್ಲೆಯ ಮಣ್ಣಿನಲ್ಲಿ ಜನ್ಮ ಪಡೆದವನು. ರಾಮನಗರ ಜಿಲ್ಲೆ ಜನ ನನಗೆ ರಾಜಕೀಯ ಜನ್ಮ ಕೊಟ್ಟಿದ್ದಾರೆ. ನನ್ನ ದುಡಿಮೆ ಈ ಜಿಲ್ಲೆಯ ಜನರಿಗೆ ಸಲ್ಲಿಸುವ ಗೌರವ. ನಮ್ಮಿಂದ ತಪ್ಪಾಗಿದರೆ ಕ್ಷಮಿಸಿ, ಕ್ಷಮಿಸುವ ಅಧಿಕಾರ ನಿಮಗಿದೆ. ಹೆಚ್.ಡಿ.ರೇವಣ್ಣ ಹೇಳಿಕೆಯನ್ನು ತಪ್ಪಾಗಿ ಅರ್ಥೈಸಿಕೊಳ್ತಾರೆ. ಹೆಚ್.ಡಿ.ರೇವಣ್ಣ ಸಿಡುಕಿನಿಂದ ಮಾತನಾಡುವ ವ್ಯಕ್ತಿ ಅಷ್ಟೇ. ಆದರೆ ಜಿಲ್ಲೆಯ ಅಭಿವೃದ್ಧಿ ಬಗ್ಗೆ ಸದಾ ಆಲೋಚಿಸುವ ವ್ಯಕ್ತಿ ಎಂದು ಮಾಜಿ ಸಿಎಂ ಹೆಚ್.ಡಿ.ಕುಮಾರಸ್ವಾಮಿ ಹೇಳಿದರು.

ಬಿಜೆಪಿ ಶಾಸಕ ಪ್ರೀತಂಗೌಡ ವಿರುದ್ಧ ಕುಮಾರಸ್ವಾಮಿ ವಾಗ್ದಾಳಿ: ನೆಲಮಂಗಲದಿಂದ ಹಾಸನಕ್ಕೆ 4 ಪಥದ ರಸ್ತೆ ನಿರ್ಮಾಣ. ಬೆಂಗಳೂರು–ಅರಸೀಕೆರೆ ರೈಲ್ವೆ ಯೋಜನೆ ಮಾಡಿದ್ಯಾರು? ಈಗ ಯಾವುದೋ ಏರ್‌ಪೋರ್ಟ್ ಯೋಜನೆ ಬಗ್ಗೆ ಹೇಳ್ತಾರೆ ಎಂದು ಬಿಜೆಪಿ ಶಾಸಕ ಪ್ರೀತಂಗೌಡ ವಿರುದ್ಧ ಕುಮಾರಸ್ವಾಮಿ ವಾಗ್ದಾಳಿ ಮಾಡಿದರು. ನಾನು ಸಿಎಂ ಆಗಿದ್ದಾಗ ಹಾಸನ ಜಿಲ್ಲೆಗೆ ಅನುದಾನ ಕೊಟ್ಟಿದ್ದೆ. ಅನುದಾನವನ್ನು ಬೇರೆ ಕಾಲೇಜಿಗೆ ವರ್ಗಾವಣೆ ಮಾಡಿದ್ದರು. ಜಿಲ್ಲೆಯಲ್ಲಿ ಅಭಿವೃದ್ಧಿ ಕುಂಠಿತ ಆಗಲು ಬಿಜೆಪಿ ಕಾರಣ. ನಾನು ಸಿಎಂ ಆದಾಗ 189 ಪದವಿ ಕಾಲೇಜು ಸ್ಥಾಪನೆ ಮಾಡಿದ್ದು, ಈ ಕಾಲೇಜುಗಳ ಸ್ಥಾಪನೆ ಆಗಲು ಹೆಚ್.ಡಿ.ರೇವಣ್ಣ ಕಾರಣ. ನಾನು ನಿಮ್ಮ ಹತ್ತಿರ ಇಲ್ಲ, ಆದರೆ ಸಮಸ್ಯೆಗೆ ಸ್ಪಂದಿಸಿದ್ದೇನೆ. ಹಣ ಮಾಡೋದಾಗಿದ್ರೆ ಬೇಕಾದಷ್ಟು ಮಾಡಬಹುದಿತ್ತು. ಆದರೆ ನಾವು ಯಾವುದೇ ಹಣ ಸಂಪಾದನೆ ಮಾಡಿಲ್ಲ. ನಾವು ಕೋಟ್ಯಾಂತರ ಜನರ ಹೃದಯದಲ್ಲಿ ನೆಲೆಸಿಲ್ಲವೇ ಇದೇ ನಮ್ಮ ಸಂಪಾದನೆ. ಪ್ರಧಾನಿ ಮೋದಿ ಐಟಿ, ಇಡಿ ಮೂಲಕ ಹೆದರಿಸುತ್ತಿದ್ದಾರೆ. ಆದರೆ ನಮ್ಮನ್ನು ಹೆದರಿಸಲು ಆಗಲ್ಲ ಎಂದು ಮಾಜಿ ಮುಖ್ಯಮಂತ್ರಿ ಹೆಚ್.ಡಿ.ಕುಮಾರಸ್ವಾಮಿ ಹೇಳಿದರು.

ಪುರುಷೋತ್ತಮ ಸ್ವಯಂ ಉದ್ಯೋಗ ಸಾಲಕ್ಕೆ ಅರ್ಜಿ ಸಲ್ಲಿಸಲು ನೆರವು




ಮೈಸೂರು, ಸೆ.13(ಎಸ್‌ಬಿಡಿ)– ರಾಜ್ಯ ಬ್ರಾಹ್ಮಣ ಅಭಿವೃದ್ಧಿ ಮಂಡಳಿಯ 'ಪುರುಷೋತ್ತಮ ಯೋಜನೆ'ಯಡಿ ಸ್ವಯಂ ಉದ್ಯೋಗ ಸಾಲಸೌಲಭ್ಯಕ್ಕೆ ಅರ್ಜಿ ಸಲ್ಲಿಸಲು ಸಹಕರಿಸುವ ಉದ್ದೇಶದಿಂದ ಮೈಸೂರಿನ ವಿಪ್ರ ಸಹಾಯವಾಣಿ ಹಾಗೂ ಕೆ.ಎಂ.ನಿಶಾಂತ್ 'ಜನ ಸೇವಾ ಕೇಂದ್ರ'ದ ಸಹಯೋಗದಲ್ಲಿ ಕಾರ್ಯಕ್ರಮ ಹಮ್ಮಿಕೊಂಡಿದ್ದು, ಮೊದಲ ದಿನವೇ ನೂರಾರು ಮಂದಿ ಇದರ ಪ್ರಯೋಜನ ಪಡೆದಿದ್ದಾರೆ.

ಮೈಸೂರಿನ ರಾಮಾನುಜ ರಸ್ತೆಯಲ್ಲಿರುವ ಕೆ.ಎಂ.ನಿಶಾಂತ್ 'ಜನ ಸೇವಾ ಕೇಂದ್ರ'ದಲ್ಲಿ ಕರ್ನಾಟಕ ರಾಜ್ಯ ಬ್ರಾಹ್ಮಣ ಅಭಿವೃದ್ಧಿ ಮಂಡಳಿ ನಿರ್ದೇಶಕ ಎಂ.ಆರ್. ಬಾಲಕೃಷ್ಣ, ಅರ್ಹರಿಂದ ಅರ್ಜಿ ಸ್ವೀಕರಿಸುವ ಮೂಲಕ ವಿಶೇಷ ಅಭಿಯಾನಕ್ಕೆ ಚಾಲನೆ ನೀಡಿದರು. ಮಂಡಳಿ ಮೂಲಕ ಸ್ವಯಂ ಉದ್ಯೋಗಕ್ಕೆ ನೀಡಲಾಗುವ ತಲಾ 1 ಲಕ್ಷ ರೂ. ಸಾಲ ಸೌಲಭ್ಯಕ್ಕಾಗಿ ನೂರಾರು ಮಂದಿ ಸರತಿಯಲ್ಲಿ ನಿಂತು ಅರ್ಜಿ ಸಲ್ಲಿಸಿದರು.

ಈ ವೇಳೆ ಬಿಜೆಪಿ ನಗರ ಯುವಮೋರ್ಚಾ ಉಪಾಧ್ಯಕ್ಷರೂ ಆದ ಜನ ಸೇವಾ ಕೇಂದ್ರದ ಮುಖ್ಯಸ್ಥ ಕೆ.ಎಂ.ನಿಶಾಂತ್ ಮಾತನಾಡಿ, ನಿರುದ್ಯೋಗಿ ಬ್ರಾಹ್ಮಣರನ್ನು ಸ್ವಯಂ ಉದ್ಯೋಗಿಯಾಗಲು ಪ್ರೋತ್ಸಾಹಿಸುವ ಮೂಲಕ ಅವರನ್ನು ಆರ್ಥಿಕವಾಗಿ ಪುನಶ್ಚೇತನಗೊಳಿಸುವ ಉದ್ದೇಶದಿಂದ ಈ ಸಾಲ ಸೌಲಭ್ಯ ನೀಡಲಾಗುತ್ತಿದೆ. ಆದರೆ ಯೋಜನೆಗೆ ಅರ್ಜಿ ಸಲ್ಲಿಸುವುದು, ಅದಕ್ಕೆ ಬೇಕಾದ ದಾಖಲೆಗಳ ಬಗ್ಗೆ ಬಹಳಷ್ಟು ಜನರಿಗೆ ತಿಳಿದಿಲ್ಲ. ಹಾಗಾಗಿ ವಿಪ್ರ ಸಹಾಯವಾಣಿ ಹಾಗೂ ನಮ್ಮ ಜನ ಸೇವಾ ಕೇಂದ್ರದ ವತಿಯಿಂದ ಅರ್ಹರನ್ನು ಗುರುತಿಸಿ ಅವರಿಗೆ ಅಗತ್ಯ ಮಾಹಿತಿ ನೀಡಿ, ಅರ್ಜಿ ಸಲ್ಲಿಸಲು ನೆರವು ನೀಡಲಾಗುತ್ತಿದೆ. ಈಗಾಗಲೇ ನೂರಾರು ವಿಪ್ರ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿ ವೇತನ ಹಾಗೂ ಸಹಾಯ ಧನ ಪಡೆಯಲು ಸಹಾಯ ಮಾಡಿದ್ದು, ಸ್ವ–ಉದ್ಯೋಗಕ್ಕೆ ಸಾಲ ಸೌಲಭ್ಯ ಪಡೆಯುವುದಕ್ಕೂ ಈಗಾಗಲೇ 160 ಜನರಿಗೆ ಅರ್ಜಿ ವಿತರಿಸಲಾಗಿದೆ. ತಿಂಗಳೊಳಗೆ 500 ಜನರಿಗಾದರೂ ನೆರವಾಗುವ ಗುರಿ ಹೊಂದಲಾಗಿದೆ. ಸಾಮಾನ್ಯ ವರ್ಗದ ಆರ್ಥಿಕವಾಗಿ ಹಿಂದುಳಿದವರಿಗೆ ಕೇಂದ್ರ ಸರ್ಕಾರ ಶೇ.10ರಷ್ಟು ಮೀಸಲಾತಿ ನೀಡಿರುವುದರಿಂದಾಗಿ ಇಂತಹ ಯೋಜನೆಗಳು ಬ್ರಾಹ್ಮಣ ಸಮುದಾಯಕ್ಕೆ ದೊರಕುತ್ತಿವೆ. ಇದಕ್ಕಾಗಿ ಪ್ರಧಾನಿ ಮೋದಿ ಅವರಿಗೆ ಕೃತಜ್ಞರಾಗಿದ್ದೇವೆ ಎಂದು ತಿಳಿಸಿದರು.

ವಿಪ್ರ ಸಹಾಯವಾಣಿಯ ವಿಕ್ರಂ ಅಯ್ಯಂಗಾರ್ ಮಾತನಾಡಿ, ಅರ್ಜಿಯೊಂದಿಗೆ ಇಡಬ್ಲ್ಯೂಎಸ್ ಪ್ರಮಾಣ ಪತ್ರ, ಆಧಾರ್ ಕಾರ್ಡ್, ಪಾಸ್‌ಪೋರ್ಟ್ ಅಳತೆಯ ಭಾವಚಿತ್ರ, ಕೆನರಾ ಬ್ಯಾಂಕ್ ಪಾಸ್ ಪುಸ್ತಕ, ಪ್ಯಾನ್ ಕಾರ್ಡ್ ಹಾಗೂ ಪ್ರಾಜೆಕ್ಟ್ ರಿಪೋರ್ಟ್ ಸಲ್ಲಿಸಬೇಕು ಎಂದರು. ಮುಖಂಡರಾದ ಸಿ.ವಿ.ಪಾರ್ಥಸಾರಥಿ, ಕೆ.ಪಿ.ಮಧುಸೂದನ್, ಸತೀಶ್, ಸಂಪತ್, ಮದ್ವೇಶ್ ಮನ್ನಾರಿ, ಜಗದೀಶ್, ಎಂ.ಎನ್.ಧನುಷ್, ನವೀನ್, ವಿಜಯ್‌ಕುಮಾರ್, ನಾಗೇಂದ್ರ ಮತ್ತಿತರರಿದ್ದರು.

ಮೈಸೂರು ಹಾಗೂ ಸುತ್ತಮುತ್ತ ಇಂದು...



ಇಂದಿನ ಪಂಚಾಂಗ

14.09.2022 ಬುಧವಾರ, ಮಳೆ ನಕ್ಷತ್ರ: ಉತ್ತರ 14.09.2022 ರಿಂದ 26.09.2022
ಶ್ರೀ ಶುಭಕೃತು ನಾಮ ಸಂವತ್ಸರ, ದಕ್ಷಿಣಾಯನ, ವರ್ಷ ಋತು, ಭಾದ್ರಪದ ಮಾಸ, ಕೃಷ್ಣ ಪಕ್ಷ,
ತಿಥಿ : ತೃತೀಯ, ನಕ್ಷತ್ರ : ರೇವತಿ, ರಾಹುಕಾಲ: ಮಧ್ಯಾಹ್ನ 12 ರಿಂದ 1.30ರವರೆಗೆ

ಮೈಸೂರು ಆಕಾಶವಾಣಿ



ಬೆಳಗ್ಗೆ: 6.05 ಚಿಂತನ, 6.20 ಗೀತಾರಾಧನ, 6.35 ನಖಶಿಖಾಂತ–ಆರೋಗ್ಯ ಸೌಂದರ್ಯಗಳ ವೈಜ್ಞಾನಿಕ ಮಾಹಿತಿ–ಡಾ. ಕೇಶವ ಕೊರಸೆ, 6.40 ಅರಿವಿನ ಶಿಖರ, 6.50 ರೈತರಿಗೆ ಸಲಹೆ, 10.00 ಕಮಲಾ ಶಂಕರ್–ಗಿಟಾರ್ ವಾದನ, 11.00 ನಿಮ್ಮೊಂದಿಗೆ ಮೈಸೂರು ಆಕಾಶವಾಣಿ

ಮಧ್ಯಾಹ್ನ: 12.30 ದೇವರನಾಮ, 12.45 ಲಾಕ್‌ಡೌನ್ ಕಥಾ ನಾಟಕ–ಲಾಕ್‌ಡೌನ್ ಕಥೆಗಳನ್ನಾಧರಿಸಿದ ಸರಣಿ "ಸಪ್ತಪದಿ", ಮೂಲಕಥೆ– ಸವಿತಾ ಮಾಧವಶಾಸ್ತ್ರಿ, ನಾಟಕರೂಪ– ಜಿ.ಎಲ್. ತ್ರಿಪುರಾಂತಕ, ಪ್ರಸ್ತುತಿ– ಪ್ರಭುಸ್ವಾಮಿ ಮಳಿಮಠ್, 1.20 ಭಾವಗೀತೆ, 3.00 ಲಯ ಸಂಭ್ರಮ–ತಾಳ, ಲಯ ರಸಾಸ್ವಾದ, ಪರಿಕಲ್ಪನೆ– ಹೆಚ್.ಎಲ್.ಶಿವಶಂಕರಸ್ವಾಮಿ, ನಿರ್ಮಾಣ– ಎಸ್.ಸುಬ್ರಹ್ಮಣ್ಯ, 4.00 ಮಹಿಳಾರಂಗ–ಸ್ತ್ರೀ ಚೇತನ ನೇರ ಕಾರ್ಯಕ್ರಮದಲ್ಲಿ ಭಾಗವಹಿಸುವವರು ವಸ್ತ್ರ ವಿನ್ಯಾಸಕಿ ಹಾಗೂ ಮೈಸೂರು ಸಾಹಿತ್ಯ ಹಬ್ಬದ ಸಂಯೋಜಕಿ ಶುಭಾ ಸಂಜಯ್ ಅರಸ್, 4.30 ಚಟ್‌ಪಟ್ ಚುರುಮುರಿ, ಪ್ರಸ್ತುತಿ – ಪ್ರಭುಸ್ವಾಮಿ ಮಳಿಮಠ್ ಹಾಗೂ ಕೆ.ಬಿ.ಮೀನಾ, 4.45 ಹಿಂದಿ ಪಾಠ–ಡಾ. ಮಾಧವಿ ಭಂಡಾರಿ, 6.50 ಕಿಸಾನ್‌ವಾಣಿ, 10.00 ಹಳ್ಳಿಹಾಡು–ಚಾಮರಾಜನಗರ ಜಿಲ್ಲೆ ಗುಂಡ್ಲುಪೇಟೆ ತಾಲೂಕು ತೆರಕಣಾಂಬಿ ಹೋಬಳಿ ಕರಿಕಲ್ಲು ಮಾದಳ್ಳಿಯ ಬಸವರಾಜಯ್ಯ ಅವರೊಂದಿಗೆ ಸಂದರ್ಶನ.

■ **ಜೆಎಸ್‌ಎಸ್ ಆಯುರ್ವೇದ ಆಸ್ಪತ್ರೆ :** ಹಿಮ್ಮಡಿ, ಪಾದದಲ್ಲಿ ನೋವು–ಉರಿ–ಊತದ ಬಗ್ಗೆ ಚಿಕಿತ್ಸಾ ಶಿಬಿರ, ಸ್ಥಳ: ಆಸ್ಪತ್ರೆ ಆವರಣ, ಲಲಿತಾದ್ರಿಪುರ ರಸ್ತೆ, ಆಲನಹಳ್ಳಿ, ಬೆಳಗ್ಗೆ 9.30ರಿಂದ.

■ **ರಾಮ್‌ಸನ್ಸ್ ಕಲಾ ಪ್ರತಿಷ್ಠಾನ :** ಬೊಂಬೆ ಮನೆ, ದಸರೆಯ ಬೊಂಬೆ ಪ್ರದರ್ಶನ, ಸ್ಥಳ: ರಾಮ್‌ಸನ್ಸ್ ಬೊಂಬೆ ಮನೆ, ನಜರ್‌ಬಾದ್ ಮುಖ್ಯ ರಸ್ತೆ, ಬೆಳಗ್ಗೆ 10ರಿಂದ.

■ **ಅಗರವಾಲ್ಸ್ ಕಣ್ಣಿನ ಆಸ್ಪತ್ರೆ :** ಹಿರಿಯ ನಾಗರಿಕರಿಗೆ ಉಚಿತ ಕಣ್ಣಿನ ತಪಾಸಣಾ ಶಿಬಿರ, ಸ್ಥಳ: ಕುವೆಂಪುನಗರ, ಸಯ್ಯಾಜಿರಾವ್ ರಸ್ತೆಯ ಆಸ್ಪತ್ರೆ ಶಾಖೆಗಳು, ಬೆಳಗ್ಗೆ 10 ರಿಂದ.

ಕೊಡಗಲ್ಲಿ ಹೊರಗಿನವರ ಮೇಲೆ ಹದ್ದಿನಕಣ್ಣು




● ವಿಧಾನಸಭೆಯಲ್ಲಿ ಗೃಹ ಸಚಿವ ಆರಗ ಜ್ಞಾನೇಂದ್ರ ಹೇಳಿಕೆ ● ಕೇರಳ ಗಡಿ ಭಾಗಕ್ಕೆ ಹೊಂದಿಕೊಂಡಿರುವ ಹಿನ್ನೆಲೆಯಲ್ಲಿ ಅಗತ್ಯ ಎಚ್ಚರಿಕಾ ಕ್ರಮ ● ಜಿಲ್ಲೆಯ ಸೂಕ್ಷ್ಮ ಸ್ಥಳಗಳಲ್ಲಿ 95 ಸಿಸಿಟಿವಿ ಕ್ಯಾಮರಾ ಅಳವಡಿಕೆ



ಬೆಂಗಳೂರು,ಸೆ.13(ಕೆಎಂಶಿ)– ಅತ್ಯಂತ ಸೂಕ್ಷ್ಮ ಪ್ರದೇಶವಾಗಿರುವ ಕೊಡಗಿನಲ್ಲಿ ಹೊರಭಾಗಗಳಿಂದ ಬಂದಿರುವವರ ಮೇಲೆ ತೀವ್ರ ನಿಗಾ ವಹಿಸಲು ಪೊಲೀಸ್ ಇಲಾಖೆಗೆ ಕಟ್ಟುನಿಟ್ಟಿನ ಸೂಚನೆ ನೀಡಲಾಗಿದೆ ಎಂದು ಗೃಹ ಸಚಿವ ಆರಗ ಜ್ಞಾನೇಂದ್ರ ತಿಳಿಸಿದ್ದಾರೆ.

ಈ ಜಿಲ್ಲೆಯು ಕೇರಳ ಗಡಿ ಭಾಗಕ್ಕೆ ಹೊಂದಿಕೊಂಡಿರುವುದರಿಂದ ಬೇರೆ ಬೇರೆ ರಾಜ್ಯಗಳಿಂದ ಆಗಮಿಸುತ್ತಾರೆ. ಅವರು ಎಲ್ಲಿಂದ ಬರುತ್ತಾರೆ, ಏನು ಮಾಡುತ್ತಾರೆ, ಅವರ ಚಲನವಲನಗಳ ಮೇಲೆ ಮಾಹಿತಿ ಕಲೆ ಹಾಕಲು ಪೊಲೀಸರಿಗೆ ಸೂಚಿಸಲಾಗಿದೆ ಎಂದರು. ಕೆಲವರು ಅಪರಾಧ ಚಟುವಟಿಕೆಗಳಲ್ಲಿ ಭಾಗಿಯಾಗಿ ಕೇರಳಕ್ಕೆ ಹೋಗುವುದು ಇಲ್ಲವೇ ಕೇರಳದಲ್ಲಿ ಕಾನೂನು ಬಾಹಿರ ಚಟುವಟಿಕೆಗಳನ್ನು ನಡೆಸಿ ಇಲ್ಲಿಗೆ ಬರುವುದು ಸರ್ವೆ ಸಾಮಾನ್ಯವಾಗಿದೆ.



ಹೀಗಾಗಿ ಇಂಥವರ ಮೇಲೆ ಹದ್ದಿನಕಣ್ಣಿಡಲು ಸೂಚಿಸಲಾಗಿದೆ ಎಂದರು.

ಕೊಡಗಲ್ಲಿ 95 ಸಿಸಿಟಿವಿ ಕ್ಯಾಮರಾಗಳನ್ನು ಅಳವಡಿಸಲಾಗಿದೆ. ಅಲ್ಲದೆ 10 ಸಿಸಿ ಕ್ಯಾಮರಾಗಳನ್ನು ಪೊಲೀಸ್ ಇಲಾಖೆಯಿಂದ ಹಾಕಲಾಗಿದೆ. ಸೋಮವಾರ ಪೇಟೆಯಲ್ಲಿ 48, ಕುಶಾಲನಗರದಲ್ಲಿ 55 ಸಿಸಿ ಕ್ಯಾಮರಾಗಳನ್ನು ಅಳವಡಿಸಲಾಗಿದೆ ಎಂದರು.

ಪೊಲೀಸ್ ಇಲಾಖೆಯಿಂದ ಅಳವಡಿಸಿಕೊಂಡಿರುವ ಕ್ಯಾಮರಾಗಳಿಗೆ ವಾರ್ಷಿಕ ನಿರ್ವಹಣೆ, ದುರಸ್ತಿಯನ್ನು ಗೃಹ ಇಲಾಖೆಯಿಂದ ಮಾಡಲಾಗುತ್ತಿದೆ. ಖಾಸಗಿಯಾಗಿ ಅಳವಡಿಸಿಕೊಂಡಿದ್ದರೆ ಖಾಸಗಿಯವರೇ ನಿರ್ವಹಣೆ ಮಾಡಬೇಕು. ಎಲ್ಲಾದರೂ ಕ್ಯಾಮರಾಗಳು ದುರಸ್ತಿಯಾಗಿ ಕಾರ್ಯ ನಿರ್ವಹಿಸದೆ ಇದ್ದರೆ ಪೊಲೀಸ್ ಠಾಣೆ ಗಮನಕ್ಕೆ ತನ್ನಿ, ತಕ್ಷಣವೇ ಕ್ರಮ ಕೈಗೊಳ್ಳಲಿದ್ದೇವೆ ಎಂದು ಭರವಸೆ ನೀಡಿದರು.

ಸಾರ್ವಜನಿಕರ ಹಿತದೃಷ್ಟಿಯಿಂದ ಅಪರಾಧಗಳನ್ನು ತಡೆಗಟ್ಟಲು ಖಾಸಗಿಯವರು, ಉದ್ಯಮಿಗಳು ಹಾಗೂ ವಾಣಿಜ್ಯ ಉದ್ಯಮಿಗಳಿಂದ ಸಿಸಿಟಿವಿ ಕ್ಯಾಮರಾಗಳನ್ನು ಅಳವಡಿಸಲಾಗುತ್ತದೆ ಎಂದು ಸದನಕ್ಕೆ ತಿಳಿಸಿದರು. ಈ ಹಂತದಲ್ಲಿ ಶಾಸಕ ಯು.ಟಿ. ಖಾದರ್ ಮತ್ತಿತರ ಶಾಸಕರು ಸಿಸಿ ಕ್ಯಾಮರಾಗಳನ್ನು ಅಳವಡಿಸಲು ಶಾಸಕರ ಕ್ಷೇತ್ರ ಅನುದಾನ ಇಲ್ಲವೇ ಜಿಲ್ಲಾ ಖನಿಜ ನಿಧಿಯಿಂದ ಬಳಕೆ ಮಾಡಿಕೊಳ್ಳಲು ಅವಕಾಶ ನೀಡಲು ಅಧಿಸೂಚನೆ ಹೊರಡಿಸಬೇಕೆಂದು ಮನವಿ ಮಾಡಿದರು. ಇದಕ್ಕೆ ಪ್ರತಿಕ್ರಿಯಿಸಿದ ಜ್ಞಾನೇಂದ್ರ, ಪರಿಶೀಲಿಸಿ ಕ್ರಮ ಕೈಗೊಳ್ಳಲಾಗುತ್ತದೆ. ಅಪರಾಧವನ್ನು ತಡೆಗಟ್ಟಲು ನಾವು ಎಲ್ಲ ರೀತಿಯ ಮುನ್ನೆಚ್ಚರಿಕೆ ಕ್ರಮಗಳನ್ನು ತೆಗೆದುಕೊಂಡಿದ್ದೇವೆ ಎಂದು ಹೇಳಿದರು.



ಹುಟ್ಟುಹಬ್ಬ ಆಚರಿಸಿಕೊಂಡ ಶಾಸಕ ಎಲ್.ನಾಗೇಂದ್ರ ಅವರನ್ನು ಕನ್ನೇಗೌಡನಕೊಪ್ಪಲು ಶ್ರೀ ಮರುಳೇಶ್ವರ ದೇವಸ್ಥಾನ ಧರ್ಮದರ್ಶಿ ಸಮಿತಿ ಟ್ರಸ್ಟ್ ವತಿಯಿಂದ ಆತ್ಮೀಯವಾಗಿ ಅಭಿನಂದಿಸಲಾಯಿತು. ಈ ಸಂದರ್ಭದಲ್ಲಿ ಟ್ರಸ್ಟ್ ಅಧ್ಯಕ್ಷ ಡಾ.ಎಂ.ಮಹದೇವಯ್ಯ, ಉಪಾಧ್ಯಕ್ಷರಾದ ನಿಂಗಪ್ಪ, ನಂಜುಂಡಸ್ವಾಮಿ, ಕಾರ್ಯದರ್ಶಿ ಪ್ರೊ. ಕೆ.ಆರ್.ರಂಗಯ್ಯ, ಆರ್.ಶಿವಲಿಂಗು, ಪಿ.ಮಹದೇವಪ್ಪ, ಬಿ.ಸೋಮಣ್ಣ, ಕೆ.ಶಿವಲಿಂಗು ಉಪಸ್ಥಿತರಿದ್ದರು.

ವಿವಿಧ ಬೇಡಿಕೆ ಈಡೇರಿಕೆಗೆ ಆಗ್ರಹಿಸಿ ಪಾಲಿಕೆ ಎದುರು
ಇಂದು ಪೌರಕಾರ್ಮಿಕರ ಧರಣಿ

ಮೈಸೂರು, ಸೆ.13(ಆರ್‌ಕೆಬಿ)– ಪೌರಕಾರ್ಮಿಕರು, ವಿವಿಧ ಬೇಡಿಕೆ ಈಡೇರಿಕೆಗೆ ಆಗ್ರಹಿಸಿ ಬುಧವಾರ (ಸೆ.14) ಬೆಳಗ್ಗೆ 11 ಗಂಟೆಗೆ ನಗರಪಾಲಿಕೆ ಆವರಣದಲ್ಲಿ ಸಾಂಕೇತಿಕ ಧರಣಿ ನಡೆಸಲಿದ್ದಾರೆ. ಇದಕ್ಕೆ ಸ್ಪಂದಿಸದಿದ್ದರೆ ದಸರಾ ವೇಳೆ ಸ್ವಚ್ಛತಾ ಕಾರ್ಯ ಬಹಿಷ್ಕರಿಸಲಿರುವುದಾಗಿ ಮೈಸೂರು ನಗರಪಾಲಿಕೆ ಪೌರಕಾರ್ಮಿಕರ ಒಕ್ಕೂಟದ ಪ್ರಧಾನ ಕಾರ್ಯದರ್ಶಿ ರಾಮಾಂಜನೇಯ ತಿಳಿಸಿದರು.



> “ಮೃತ ಪೌರಕಾರ್ಮಿಕರ ಕುಟುಂಬದವರಿಗೆ 5 ಲಕ್ಷ ರೂ. ಪರಿಹಾರ ನೀಡಬೇಕು. ಕೈಬಿಟ್ಟಿರುವ ಸುಮಾರು 48 ಪೌರಕಾರ್ಮಿಕರನ್ನು ಕೂಡಲೇ ಕೆಲಸಕ್ಕೆ ತೆಗೆದುಕೊಳ್ಳಬೇಕು. ದೂರದ ಊರುಗಳಿಂದ ಬರುತ್ತಿರುವ ಮಹಿಳಾ ಪೌರಕಾರ್ಮಿಕರಿಗಾಗಿ ಪಾಲಿಕೆಯ ಎಲ್ಲ 45 ವಾರ್ಡ್‌ಗಳಲ್ಲಿಯೂ ವಿಶ್ರಾಂತಿ ಕೊಠಡಿ ನಿರ್ಮಿಸಬೇಕು.
> –ರಾಮಾಂಜನೇಯ

ಮೈಸೂರು ಪತ್ರಕರ್ತರ ಭವನದಲ್ಲಿ ಮಂಗಳವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿ, ಮಳಲವಾಡಿಯಲ್ಲಿ ಕಾಯಂ ಪೌರಕಾರ್ಮಿಕರಿಗೆ ಗೃಹ ಭಾಗ್ಯ ಯೋಜನೆ ಅಡಿಯಲ್ಲಿ ಗುರುತಿಸಿರುವ ಜಾಗದಲ್ಲಿ ಮನೆ ನಿರ್ಮಿಸಿ ಕೊಡಬೇಕು. ಪಾಲಿಕೆ ನೇರ ಪಾವತಿ ಯೋಜನೆ ಅಡಿಯಲ್ಲಿ ಕೆಲಸ ನಿರ್ವಹಿಸುತ್ತಿದ್ದ ಪೌರಕಾರ್ಮಿಕರಲ್ಲಿ ಕೆಲವರು ಮೃತರಾಗಿದ್ದಾರೆ. ಹಲವರು ನಿವೃತ್ತಿ ಹೊಂದಿದ್ದಾರೆ. ಹೀಗಾಗಿ ಇವರ ಕುಟುಂಬದವರಿಗೆ ಅನುಕಂಪದ ಆಧಾರದ ಮೇಲೆ ಕೆಲಸ ನೀಡಬೇಕು ಎಂಬಿತ್ಯಾದಿ ಬೇಡಿಕೆಗಳನ್ನು ಈಡೇರಿಸುವಂತೆ ಆಗ್ರಹಿಸಿದರು. ಗೋಷ್ಠಿಯಲ್ಲಿ ಅಧ್ಯಕ್ಷ ರಾಜು, ಪದಾಧಿಕಾರಿಗಳಾದ ರಾಮಯ್ಯ, ವೆಂಕಟೇಶ್, ನರಸಿಂಹ ಇನ್ನಿತರರಿದ್ದರು.

ಪೌರಕಾರ್ಮಿಕರ ಪ್ರತಿಭಟನೆಗೆ ನಗರಪಾಲಿಕೆ ಖಾಯಂ ಪೌರಕಾರ್ಮಿಕರ ಬೆಂಬಲವಿಲ್ಲ

ಮೈಸೂರು, ಸೆ.13 (ಎಂಕೆ)– ಮೈಸೂರು ನಗರ ಪಾಲಿಕೆ ಪೌರಕಾರ್ಮಿಕರ ಒಕ್ಕೂಟದ ವತಿಯಿಂದ ಸೆಪ್ಟೆಂಬರ್ 14ರಂದು ಹಮ್ಮಿಕೊಂಡಿರುವ ಪ್ರತಿಭಟನೆಗೆ ಮೈಸೂರು ನಗರಪಾಲಿಕೆ ಖಾಯಂ ಪೌರಕಾರ್ಮಿಕರ ಹಾಗೂ ಗುತ್ತಿಗೆ ಪೌರಕಾರ್ಮಿಕರ ಮಹಾ ಸಂಘ ಬೆಂಬಲವಿಲ್ಲ ಎಂದು ತಿಳಿಸಿದೆ.

ಪೌರಕಾರ್ಮಿಕರ ಪ್ರಮುಖ ಬೇಡಿಕೆಯಾದ ಖಾಯಂ ವಿಚಾರ ಸೇರಿದಂತೆ ಇನ್ನಿತರೆ ಸೌಲಭ್ಯಗಳನ್ನು ಒದಗಿಸಲು ರಾಜ್ಯ ಸರ್ಕಾರ ಮತ್ತು ಸಫಾಯಿ ಕರ್ಮಚಾರಿ ಆಯೋಗ ಮೂರು ತಿಂಗಳ ಅವಧಿ ಕೋರಿದೆ. ಅಲ್ಲದೆ ಖಾಯಂ ಮಾಡಲು ಸರ್ಕಾರದ ಮಟ್ಟದಲ್ಲಿ ಸಮಿತಿ ರಚನೆಯಾಗಿದ್ದು, ಕೆಲ ಪ್ರಕ್ರಿಯೆಗಳು ನಡೆಯುತ್ತಿವೆ. ಹಾಗೆಯೇ ಮೈಸೂರು ದಸರಾ ಇರುವುದರಿಂದ ಪ್ರತಿಭಟನೆಗೆ ಬೆಂಬಲ ನೀಡಲು ಸಾಧ್ಯವಿಲ್ಲ ಎಂದು ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಲಾಗಿದೆ.

ಉಪ್ಪಾರ ವಿದ್ಯಾರ್ಥಿಗಳಿಂದ ಪ್ರತಿಭಾ ಪುರಸ್ಕಾರಕ್ಕೆ ಅರ್ಜಿ ಆಹ್ವಾನ

ಮೈಸೂರು,ಸೆ.13(ಆರ್‌ಕೆಬಿ)–ಮೈಸೂರು ಜಿಲ್ಲಾ ಉಪ್ಪಾರ ನೌಕರರ ಮತ್ತು ವೃತ್ತಿಪರರ ಸಂಘದ ವತಿಯಿಂದ ಉಪ್ಪಾರ ಸಮುದಾಯದ ವಿದ್ಯಾರ್ಥಿಗಳಿಗಾಗಿ ಎಸ್‌ಎಸ್‌ಎಲ್‌ಸಿ ಮತ್ತು ದ್ವಿತೀಯ ಪಿಯುಸಿ ಪರೀಕ್ಷೆಗಳಲ್ಲಿ ಶೇ.85ಕ್ಕಿಂತ ಹೆಚ್ಚು ಹಾಗೂ ಸಿಬಿಎಸ್‌ಸಿ ಪರೀಕ್ಷೆಯಲ್ಲಿ ಶೇ.75ಕ್ಕಿಂತ ಹೆಚ್ಚು ಅಂಕ ಗಳಿಸಿದ ಉಪ್ಪಾರ ಸಮುದಾಯದ ವಿದ್ಯಾರ್ಥಿಗಳಿಂದ ಪ್ರತಿಭಾ ಪುರಸ್ಕಾರಕ್ಕಾಗಿ ಅರ್ಜಿ ಆಹ್ವಾನಿಸಲಾಗಿದೆ ಎಂದು ಸಂಘದ ಪ್ರಧಾನ ಕಾರ್ಯದರ್ಶಿ ಲಿಂಗಣ್ಣ ತಿಳಿಸಿದರು.



ಮೈಸೂರು ಪತ್ರಕರ್ತರ ಭವನದಲ್ಲಿ ಮಂಗಳವಾರ ಸುದ್ದಿಗೋಷ್ಠಿಯಲ್ಲಿ ತಿಳಿಸಿದ ಅವರು, ಉಪ್ಪಾರ ಸಮುದಾಯ ಎಲ್ಲ ರೀತಿಯಲ್ಲೂ ಹಿಂದುಳಿದಿದೆ. ಹೀಗಾಗಿ ಶೈಕ್ಷಣಿಕವಾಗಿ ನಮ್ಮ ಸಮುದಾಯದ ವಿದ್ಯಾರ್ಥಿಗಳನ್ನು ಸನ್ಮಾನಿಸಿ, ಉತ್ತೇಜಿಸುವ ಸಲುವಾಗಿ ಈ ಕಾರ್ಯಕ್ರಮವನ್ನು ನವೆಂಬರ್ 6ರಂದು ಮೈಸೂರಿನ ಕಲಾಮಂದಿರದಲ್ಲಿ ಆಯೋಜಿಸಲಾಗುವುದು. ಆಸಕ್ತ ಉಪ್ಪಾರ ಸಮುದಾಯದ ವಿದ್ಯಾರ್ಥಿಗಳು ಸೆ.30ರೊಳಗಾಗಿ ಅರ್ಜಿ ಸಲ್ಲಿಸಬೇಕು ಎಂದು ತಿಳಿಸಿದರು.

ಅಂತಿಮ ಪದವಿ, ಸ್ನಾತಕೋತ್ತರ ಪದವಿಗಳಲ್ಲಿ ಅತ್ಯುತ್ತಮ ಶ್ರೇಣಿಯಲ್ಲಿ ಉತ್ತೀರ್ಣರಾದವರು, ಪಿಹೆಚ್.ಡಿ ಮಾಡಿದವರು, ಬಡ್ತಿ, ನಿವೃತ್ತಿ ಹೊಂದಿದ ನೌಕರರು, ವಿಶೇಷ ಸ್ಥಾನಮಾನ ಪಡೆದ ಸಮಾಜದ ಜನಪ್ರತಿನಿಧಿಗಳು ಹಾಗೂ ಸಮಾಜ ಸೇವಕರನ್ನು ಇದೇ ಸಂದರ್ಭದಲ್ಲಿ ಸನ್ಮಾನಿಸಲಾಗುವುದು ಎಂದರು. ಹೀಗಾಗಿ ಹೆಚ್ಚಿನ ಮಾಹಿತಿಗೆ ದೂ.99809 06469 ಮೂಲಕ ಸಂಪರ್ಕಿಸಬಹುದು ಎಂದರು. ಸುದ್ದಿಗೋಷ್ಠಿಯಲ್ಲಿ ಸಂಘದ ಅಧ್ಯಕ್ಷ ಜವರಶೆಟ್ಟಿ, ಫಿಲಂ ಮಹದೇವಶೆಟ್ಟಿ, ಶಿವರಾಜು ಉಪಸ್ಥಿತರಿದ್ದರು.



ಭಾನುವಾರ ಹುಟ್ಟುಹಬ್ಬ ಆಚರಿಸಿಕೊಂಡ ಚಾಮರಾಜ ಕ್ಷೇತ್ರದ ಶಾಸಕ ಎಲ್.ನಾಗೇಂದ್ರ ಅವರನ್ನು ಎಂ.ಎಂ. ಎಂಟರ್ ಪ್ರೈಸಸ್‌ನ ಮಂಜು, ಮಧು, ನಿತಿನ್ ಶೆಟ್ಟಿ, ಒಂಟಿಕೊಪ್ಪಲು ತೇಗು ಮೆಸ್‌ನ ಶ್ಯಾಮ್ ಇನ್ನಿತರರು ಮೈಸೂರಿನ ಕಾಳಿದಾಸ ರಸ್ತೆಯ ಚೋಪತಿ ವೃತ್ತದಲ್ಲಿ ಭಾರೀ ಗಾತ್ರದ ಸೇಬಿನ ಹಾರ ಹಾಕುವ ಮೂಲಕ ಆತ್ಮೀಯವಾಗಿ ಅಭಿನಂದಿಸಿ, ಶುಭಾಶಯ ಕೋರಿದರು. ಈ ವೇಳೆ ಬಿಜೆಪಿ ಮುಖಂಡ ಚೌಡಪ್ಪ ಇನ್ನಿತರರು ಉಪಸ್ಥಿತರಿದ್ದರು.

ನಟ ಅಶ್ವಥ್ ನಿನಾಸಂ ವಿರುದ್ಧ ಹಲ್ಲೆ ಆರೋಪ

ಮೈಸೂರಿನ ಕೆ.ಆರ್.ಠಾಣೆಯಲ್ಲಿ ದೂರು–ಪ್ರತಿದೂರು



ಅಶ್ವಥ್ ನಿನಾಸಂ

ಮೈಸೂರು, ಸೆ.13(ಆರ್‌ಕೆ)–ಹಾಲು ಸರಬರಾಜು ಮಾಡಿದ ಹಣ ಪಾವತಿ ಸಂಬಂಧ ಮೈಸೂರಿನ ಸಹಕಾರ ಸಂಘಗಳ ನೋಂದಣಾಧಿಕಾರಿ ಕಚೇರಿಯಲ್ಲಿ ನಟ ಅಶ್ವಥ್ ನಿನಾಸಂ ಹಾಗೂ ಸಹಚರ ಅಶೋಕ್ ಕುಲಕರ್ಣಿ ತಮ್ಮ ಮೇಲೆ ಹಲ್ಲೆ ನಡೆಸಿದ್ದಾರೆ ಎಂದು ಬನ್ನೂರು ಹೋಬಳಿ, ಯಾಚೇನಹಳ್ಳಿ ಗ್ರಾಮದ ಹಾಲು ಉತ್ಪಾದಕರ ಸಹಕಾರ ಸಂಘದ ಕಾರ್ಯದರ್ಶಿ ರಾಹುಲ್ ಗೌಡ, ಮೈಸೂರಿನ ಕೆ.ಆರ್.ಠಾಣೆಗೆ ದೂರು ನೀಡಿದ್ದಾರೆ.

ಗ್ರಾಮದಲ್ಲಿ ಹಸು ಸಾಕಾಣಿಕೆ ಮಾಡಿ ಹಾಲನ್ನು ನಮ್ಮ ಡೈರಿಗೆ ಪೂರೈಸುತ್ತಿರುವ ಅಶ್ವಥ್, ಡೈರಿಯಿಂದ ಪಶು ಆಹಾರ ಪಡೆಯುತ್ತಿದ್ದು, ಅದರ ಬಾಬ್ತು 89,000 ರೂ. ಬಾಕಿ ಇದ್ದ ಕಾರಣ, ಹಾಲು ಪೂರೈಸಿದ್ದ 69,000 ರೂ.ಗಳನ್ನು ಜಮಾ ಮಾಡಿಕೊಳ್ಳುತ್ತೇವೆಂದು ಹೇಳಿದ ಹಿನ್ನೆಲೆಯಲ್ಲಿ ಅಶ್ವಥ್ ನನ್ನನ್ನು ಮೈಸೂರಿನ ಅಸಿಸ್ಟೆಂಟ್ ರಿಜಿಸ್ಟ್ರಾರ್ ಕಚೇರಿ ಬಳಿ ಅಶೋಕ್ ಕುಲಕರ್ಣಿ ಜೊತೆ ಬಂದು ಏಕಾಏಕಿ ಹಲ್ಲೆ ಮಾಡಿ, ಅವಾಚ್ಯ ಶಬ್ದಗಳಿಂದ ನಿಂದಿಸಿದ್ದಾರೆ ಎಂದು ರಾಹುಲ್‌ಗೌಡ ದೂರು ನೀಡಿದ್ದಾರೆ. ಅದಕ್ಕೆ ಪ್ರತಿಯಾಗಿ ಅಶ್ವಥ್ ನಿನಾಸಂ ಸಹ ರಾಹುಲ್‌ಗೌಡರ ವಿರುದ್ಧ ದೂರು ನೀಡಿದ್ದು, ಇಬ್ಬರ ದೂರುಗಳನ್ನು ಪಿಟಿಷನ್ ಎಂದು ಪರಿಗಣಿಸಿ ವಿಚಾರಣೆ ಮಾಡುತ್ತಿದ್ದೇವೆ. ಎಫ್‌ಐಆರ್ ದಾಖಲಿಸಿಲ್ಲ ಎಂದು ಕೆ.ಆರ್.ಠಾಣೆ ಇನ್ಸ್‌ಪೆಕ್ಟರ್ ಮಹೇಶ್ 'ಮೈಸೂರು ಮಿತ್ರ'ನಿಗೆ ತಿಳಿಸಿದ್ದಾರೆ.

ರಸ್ತೆ ಅಗಲೀಕರಣ ಕುರಿತು ಸಂಸದರಿಂದ ಅಧಿಕಾರಿಯೊಂದಿಗೆ ಚರ್ಚೆ



ಮೈಸೂರಿನ ಹೂಟಗಳ್ಳಿಯಿಂದ ಇಲವಾಲದವರೆಗಿನ ರಸ್ತೆ ಅಗಲೀಕರಣ, ಹುಣಸೂರು ಬೈಪಾಸ್ ಅನ್ನು 4 ಪಥ ಮಾಡುವುದು, ಪಿರಿಯಾಪಟ್ಟಣ ನಗರ ಭಾಗದ 4 ಕಿ.ಮೀ. ರಸ್ತೆ ಅಗಲೀಕರಣ ಹಾಗೂ ಮೈಸೂರು ರಿಂಗ್ ರಸ್ತೆಯಲ್ಲಿ ಬರುವ ಕೆಆರ್‌ಎಸ್ ಜಂಕ್ಷನ್ ಫ್ಲೈ ಓವರ್ ನಿರ್ಮಾಣದ ಕುರಿತು ಮೈಸೂರು–ಕೊಡಗು ಸಂಸದ ಪ್ರತಾಪ್‌ಸಿಂಹ ಅವರು ಪ್ರಾದೇಶಿಕ ಅಧಿಕಾರಿ ವಿಜಯಕುಮಾರ್ ಅವರೊಂದಿಗೆ ಚರ್ಚಿಸಿದರು.

ಇಂದು ಕೆಲವೆಡೆ ವಿದ್ಯುತ್ ವ್ಯತ್ಯಯ



ಮೈಸೂರು,ಸೆ.13–ಚೆಸ್ಕಾಂನಿಂದ ತುರ್ತು ಕಾಮಗಾರಿ ಹಮ್ಮಿಕೊಂಡಿದ್ದು, ಸೆ.14ರಂದು ಬೆಳಗ್ಗೆ 10ರಿಂದ ಸಂಜೆ 5.30ರವರೆಗೆ ಮಹದೇವಪುರ ಮುಖ್ಯ ರಸ್ತೆ, ಬೀಡಿ ಕಾಲೋನಿ, ಶಾಂತಿನಗರ, ಕೆ.ಎಂಹುಂಡಿ, ನೆಹರು ನಗರ, ಡಿ.ಟಿ.ಎಸ್.ರಾವ್‌ನಗರ, ಹಂಚ್ಯಾ, ಸಾತಗಳ್ಳಿ, ಸಾತಗಳ್ಳಿ ಎ ಮತ್ತು ಬಿ ವಲಯ, ದೇವನೂರು ಎ, ಬಿ ವಲಯ, ರಾಜೀವ್‌ನಗರ 1ನೇ, 2ನೇ, 3ನೇ ಹಂತ, ಹುಡ್ಕೋ ಬಡಾವಣೆ, ಮಾದೇಗೌಡ ವೃತ್ತ, ಲಿಡ್ಕರ್ ಕಾಲೋನಿ, ಕೆಎಸ್‌ಎಫ್‌ಸಿ ಬಡಾವಣೆ, ಕೈಫ್ ಮಸೀದಿ, ಕಾವೇರಿ ಬಡಾವಣೆ, ಸನ್‌ಪ್ಯೂರ್ ಬಡಾವಣೆ, ವಿಟಿಯು ಕಾಲೇಜು, ರಾಜ್‌ಕುಮಾರ್ ರಸ್ತೆ, ಟೀಚರ್ಸ್ ಬಡಾವಣೆ, ಜೆಎಸ್‌ಎಸ್ ಬಡಾವಣೆ, ಕಲ್ಯಾಣಗಿರಿ, ಮಾನಸಿನಗರ, ವಿದ್ಯಾಶಂಕರ ಬಡಾವಣೆ, ಬನ್ನೂರು ರಸ್ತೆ, ವಿದ್ಯಾವಿಕಾಸ್ ಕಾಲೇಜು ಸುತ್ತಮುತ್ತ ವಿದ್ಯುತ್ ವ್ಯತ್ಯಯವಾಗಲಿದೆ.

ಸೆ.30ರಿಂದ ರಾಷ್ಟ್ರೀಯ ಅಧ್ಯಯನ ಶಿಬಿರ

ಮೈಸೂರು,ಸೆ.13–ಕರ್ನಾಟಕ ಸಾಹಿತ್ಯ ಅಕಾಡೆಮಿ ವತಿಯಿಂದ ಸೆ.30ರಿಂದ ಅ.2ರವರೆಗೆ ಆಂಧ್ರಪ್ರದೇಶದಲ್ಲಿ ಭಾರತೀಯ ಸಂಸ್ಕೃತಿ ಮತ್ತು ಬುಡಕಟ್ಟು ಸಮುದಾಯ ಶಿಬಿರವನ್ನು ನಡೆಸಲು ಉದ್ದೇಶಿಸಿದ್ದು, ಆಸಕ್ತರಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಅರ್ಜಿಯನ್ನು ಸಲ್ಲಿಸಲು ಬಯಸುವ ಅಭ್ಯರ್ಥಿಗಳು 20ರಿಂದ 45 ವರ್ಷ ವಯಸ್ಸುಳ್ಳ ದೇಶದ ಎಲ್ಲಾ ಭಾಗದ ಕನ್ನಡ ಭಾಷೆಯನ್ನು ಬಲ್ಲ ಪರಿಶಿಷ್ಟ ಪಂಗಡದ ಅಭ್ಯರ್ಥಿಗಳು ಮಾತ್ರ ಅರ್ಜಿ ಸಲ್ಲಿಸಬಹುದು. ಅರ್ಜಿ ಸಲ್ಲಿಸಲು ಸೆ.19 ಕೊನೆಯ ದಿನಾಂಕ. ಹೆಚ್ಚಿನ ಮಾಹಿತಿಗಾಗಿ http://sahithyaacademy.karnataka.gov.in ವೆಬ್‌ಸೈಟ್‌ನಿಂದ ಅರ್ಜಿ ನಮೂನೆ ಹಾಗೂ ವಿವರಗಳನ್ನು ಪಡೆದುಕೊಳ್ಳಬಹುದು.

ಸೆ.20ರಂದು ಸಾರಿಗೆ ಅದಾಲತ್

ಮೈಸೂರು,ಸೆ.13–ಸಾರಿಗೆ ಇಲಾಖೆಯಿಂದ ಸೆ.20ರಂದು ಬೆಳಗ್ಗೆ 11.30 ಗಂಟೆಗೆ ಕಾರ್ಯದರ್ಶಿ ಪ್ರಾದೇಶಿಕ ಸಾರಿಗೆ ಪ್ರಾಧಿಕಾರ ಹಾಗೂ ಉಪಸಾರಿಗೆ ಆಯುಕ್ತರು ಮತ್ತು ಹಿರಿಯ ಪ್ರಾದೇಶಿಕ ಸಾರಿಗೆ ಅಧಿಕಾರಿಗಳ ಕಚೇರಿ, ಕೊಠಡಿ ಸಂಖ್ಯೆ 8ರಲ್ಲಿ ಸಾರಿಗೆ ಅದಾಲತ್ ಹಮ್ಮಿಕೊಂಡಿರುವುದರಿಂದ ಸಾರ್ವಜನಿಕರು ಸಾರಿಗೆ ಕಚೇರಿಗೆ ಸಂಬಂಧಿಸಿದ ಅಹವಾಲುಗಳು ಇದ್ದಲ್ಲಿ, ದಾಖಲಾತಿಗಳೊಂದಿಗೆ ಖುದ್ದು ಹಾಜರಾಗುವಂತೆ ಪ್ರಕಟಣೆ ತಿಳಿಸಿದೆ.

ಸಹಕಾರ ಕ್ಷೇತ್ರದಲ್ಲಿ ಅ.2ರಿಂದ ಯಶಸ್ವಿನಿ ಯೋಜನೆ ಜಾರಿ



ಬೆಂಗಳೂರು,ಸೆ.13(ಕೆಎಂಶಿ)–ಸಹಕಾರ ಕ್ಷೇತ್ರಗಳಲ್ಲಿರುವವರಿಗೆ ಚಿಕಿತ್ಸೆ ನೀಡುವ ಯಶಸ್ವಿನಿ ಯೋಜನೆಯನ್ನು ಅ.2ರಿಂದ ಜಾರಿ ಮಾಡಲಾಗುತ್ತಿದೆ ಎಂದು ಸಹ ಕಾರ ಎಸ್.ಟಿ.ಸೋಮಶೇಖರ್ ವಿಧಾನಪರಿಷತ್‌ನಲ್ಲಿ ಪ್ರಕಟಿಸಿದರು. ಪ್ರಶ್ನೋತ್ತರ ವೇಳೆಯಲ್ಲಿ ಪ್ರಕಾಶ್ ರಾಥೋಡ್ ಪ್ರಶ್ನೆಗೆ ಉತ್ತರಿಸಿದ ಅವರು, 2003ರಲ್ಲಿ ಅಂದಿನ ಮುಖ್ಯಮಂತ್ರಿ ಎಸ್.ಎಂ.ಕೃಷ್ಣ, ಯಶಸ್ವಿನಿ ಯೋಜನೆ ಜಾರಿ ಮಾಡಿದ್ದರು. ಸಿದ್ದರಾಮಯ್ಯ ಆಡಳಿತದಲ್ಲಿ ಈ ಯೋಜನೆಯನ್ನು ಕೈಬಿಡಲಾಗಿತ್ತು. ಬದಲಿಗೆ ಆಯುಷ್ಮಾನ್ ಭಾರತ ಜಾರಿ ಮಾಡಲಾಗಿದೆ. ಅದರಡಿ 1650 ಕಾಯಿಲೆಗಳಿಗೆ ಚಿಕಿತ್ಸೆ ನೀಡಲಾಗುತ್ತಿದೆ. ಯಶಸ್ವಿನಿ ಜಾರಿ ಮಾಡಲು ಆರೋಗ್ಯ ಇಲಾಖೆಯಿಂದ ಈ ಯೋಜನೆಯನ್ನು ಪ್ರತ್ಯೇಕ ಮಾಡಲಾಗಿದೆ. ಜೊತೆಗೆ ಹಣಕಾಸು ಇಲಾಖೆ ಅನುಮತಿ ಪಡೆಯಲಾಗಿದೆ ಎಂದರು.

ಆಯುಷ್ಮಾನ್ ಭಾರತ್–ಆರೋಗ್ಯ ಕರ್ನಾಟಕ ಸೇವೆಗಳ ಕುರಿತು
ಸೆ.16ರಂದು ನೇರ ಫೋನ್–ಇನ್ ಕಾರ್ಯಕ್ರಮ

ಮೈಸೂರು, ಸೆ.13(ಆರ್‌ಕೆಬಿ)– 'ಆಯುಷ್ಮಾನ್ ಭಾರತ್–ಆರೋಗ್ಯ ಕರ್ನಾಟಕ' ಯೋಜನೆಯ ಸೇವೆಗಳ ಕುರಿತಂತೆ ಮೈಸೂರಿನ ಜೆಎಸ್‌ಎಸ್ ಎಫ್‌ಎಂ 91.2 ಸಮುದಾಯ ಬಾನುಲಿ ಕೇಂದ್ರವು ಸೆ.16ರಂದು ಬೆಳಗ್ಗೆ 11.30ರಿಂದ ಮಧ್ಯಾಹ್ನ 12.30ರವರೆಗೆ ಆಯುಷ್ಮಾನ್ ಭಾರತ್–ಆರೋಗ್ಯ ಕರ್ನಾಟಕ ಯೋಜನೆಯ ನೋಡಲ್ ಅಧಿಕಾರಿ ಡಾ.ಮಂಜುಪ್ರಸಾದ್ ಹಾಗೂ ಯೋಜನೆಯ ಜಿಲ್ಲಾ ಸಂಯೋಜಕಿ ಡಾ.ಮೊನಿಷಾ ಅವರೊಂದಿಗೆ ಸಾರ್ವಜನಿಕ ನೇರ ಫೋನ್‌ಇನ್ ಕಾರ್ಯಕ್ರಮ ಆಯೋಜಿಸಿದೆ. ಆಯುಷ್ಮಾನ್ ಭಾರತ್–ಆರೋಗ್ಯ ಕರ್ನಾಟಕ ಯೋಜನೆಯಡಿ ಇರುವ ಆರೋಗ್ಯ ಸೇವಾ ಸೌಲಭ್ಯಗಳು, ಸೇವೆಗಳನ್ನು ಪಡೆಯಲು ಇರುವ ನಿಯಮಗಳು, ಫಲಾನುಭವಿಗಳು, ರೆಫರಲ್ಸ್ ನಿಯಮಗಳು, ಖಾಸಗಿ ನೋಂದಾಯಿತ ಆಸ್ಪತ್ರೆಗಳಲ್ಲಿ ಈ ಯೋಜನೆಯಡಿ ನೇರವಾಗಿ ಚಿಕಿತ್ಸೆ ಪಡೆಯಲು ಇರುವ ಸಂದರ್ಭಗಳು, ಯೋಜನೆಯಲ್ಲಿ ನಿಮಗಿರುವ ಅಡೆತಡೆಗಳ ಕುರಿತು ಯಾವುದೇ ಪ್ರಶ್ನೆಗಳಿದ್ದರೆ ಅಧಿಕಾರಿಗಳೊಂದಿಗೆ ನೇರವಾಗಿ ಮಾತನಾಡಿ, ಪರಿಹಾರ ಕಂಡುಕೊಳ್ಳಬಹುದು ಎಂದು ಜೆಎಸ್‌ಎಸ್ ರೇಡಿಯೋ ಕೇಂದ್ರ ತಿಳಿಸಿದೆ. ಪ್ರಶ್ನೆಗಳನ್ನು ದೂ.ಸಂಖ್ಯೆ 8296725912 ಅಥವಾ 0821–2546563 ಸಂಪರ್ಕಿಸಬಹುದು. ಜೆಎಸ್‌ಎಸ್ ಎಫ್‌ಎಂ ರೇಡಿಯೋ ಆಲಿಸಲು ಗೂಗಲ್ ಪ್ಲೇ ಸ್ಟೋರ್‌ನಿಂದ https://play.google.com/store/apps/details?id=com.atc.jss ಈ ಆ್ಯಪ್ ಲಿಂಕ್ ಅನ್ನು ಡೌನ್‌ಲೋಡ್ ಮಾಡಿಕೊಳ್ಳಬಹುದು.



ಮೈಸೂರಿನ ಶ್ರೀ ಕೃಷ್ಣರಾಜೇಂದ್ರ ಸಹಕಾರ ಬ್ಯಾಂಕಿನ 97ನೇ ವಾರ್ಷಿಕ ಮಹಾಸಭೆಯನ್ನು ಬ್ಯಾಂಕ್ ಅಧ್ಯಕ್ಷ ಪ್ರತಿಧ್ವನಿ ಪ್ರಸಾದ್ ಉದ್ಘಾಟಿಸಿದರು. ಈ ವೇಳೆ ಉಪಾಧ್ಯಕ್ಷ ಡಿ.ಬಸವರಾಜು, ನಿರ್ದೇಶಕರಾದ ನಂ.ಸಿದ್ದಪ್ಪ, ತಾಯೂರು ವಿಠಲಮೂರ್ತಿ, ಅರುಣ್ ಸಿದ್ದಪ್ಪ, ನವೀನ್ ಕುಮಾರ್, ಹೆಚ್.ವಿ.ಭಾಸ್ಕರ್, ಎಂ.ಪಾರ್ವತಮ್ಮ, ಸರ್ವಮಂಗಳ, ಕೆ.ಬಿ.ಶಂಕರನಾರಾಯಣ ಶಾಸ್ತ್ರಿ, ಹೆಚ್.ವಾಸು, ಎಂ.ಡಿ.ಪಾರ್ಥಸಾರಥಿ, ಬಿ.ನಾಗರಾಜ್, ಪ್ರಭಾರ ವ್ಯವಸ್ಥಾಪಕ ಅನಂತವೀರಪ್ಪ ಉಪಸ್ಥಿತರಿದ್ದರು.

ಪಿಹೆಚ್.ಡಿ



ಮೈಸೂರು: ಡಾ.ಲೋಕನಾಥ್ ಅವರ ಮಾರ್ಗದರ್ಶನದಲ್ಲಿ ಮಹೇಶ ಭೌತಶಾಸ್ತ್ರ ವಿಷಯದಲ್ಲಿ ಸಂಶೋಧನೆ ನಡೆಸಿ ಸಾದರಪಡಿಸಿದ ಮಹಾಪ್ರಬಂಧವನ್ನು ಮೈಸೂರು ವಿವಿ ಪಿಎಚ್.ಡಿ ಪದವಿಗೆ ಅಂಗೀಕರಿಸಿದೆ.

ವಿದ್ವಾಂಸ ಡಾ.ಕೆ.ಎಂ.ಮಹದೇವಯ್ಯ ಸೇರಿ ವಿವಿಧ ಕ್ಷೇತ್ರದ ಸಾಧಕರಿಗೆ ಅಭಿನಂದನೆ

ಮೈಸೂರು,ಸೆ.13(ಆರ್‌ಕೆಬಿ)–ಮೈಸೂರಿನ ಹೊಸಮಠ ನಟರಾಜ ಪ್ರತಿಷ್ಠಾನ, ವೆಂಕಟಗಿರಿ ಪ್ರಕಾಶನದ ವತಿಯಿಂದ ಮೈಸೂರಿನ ಸರ್ಕಾರಿ ಮಹಾರಾಜ ಸಂಸ್ಕೃತ ಕಾಲೇಜಿನ ಪ್ರಾಂಶುಪಾಲ, ವಿದ್ವಾಂಸ ಡಾ.ಕೆ.ಎಂ. ಮಹದೇವಯ್ಯ ಅವರನ್ನು ಮಂಗಳವಾರ ಹೊಸಮಠ ಸಭಾಂಗಣದಲ್ಲಿ ಅಭಿನಂದಿಸಲಾಯಿತು.

ಇದೇ ಸಂದರ್ಭದಲ್ಲಿ ಭಾಷ್ಯಂ ಸ್ವಾಮೀಜಿ, ಚಿಂತಕ ರಘುರಾಂ ಕೆ.ವಾಜಪೇಯಿ, ವಿಶ್ರಾಂತ ಪ್ರಾಧ್ಯಾಪಕ ಡಾ. ವೈ.ಸಿ.ನಂಜುಂಡಯ್ಯ, ಉದ್ಯಮಿ ಕೇಬಲ್ ವೆಂಕಟೇಶ್, ಪ್ರಾಧ್ಯಾಪಕಿ ಡಾ.ಬಿ.ಅನುಪಮಾ, ಮೈಸೂರಿನ ಸಂಸ್ಕೃತ ಪಾಠಶಾಲೆಗಳ ವಿಷಯ ಪರಿವೀಕ್ಷಕ ಮಲ್ಲಣ್ಣ, ಆಗಮಿಕ ವಿದ್ವಾನ್ ಎಸ್.ಕೃಷ್ಣಮೂರ್ತಿ, ಭಾರತ ಕನ್ನಡ ಸಾಹಿತ್ಯ ಪರಿಷತ್ ರಾಜ್ಯಾಧ್ಯಕ್ಷ ಡಾ.ರಾಘವೇಂದ್ರಕುಮಾರ್, ನಿವೃತ್ತ ಮುಖ್ಯೋಪಾಧ್ಯಾಯಿನಿ ಡಾ.ಸುನಂದಾ ಭೂಪಾಲಿ, ಜ್ಯೋತಿಷಿ ವಿದ್ವಾನ್ ಚಂದ್ರಶೇಖರಯ್ಯ, ಎಸ್.ಕೆ.ಸೋಮಶೇಖರ್, ವೈದೇಹಿ ಇನ್ನಿತರರನ್ನು ಸನ್ಮಾನಿಸಲಾಯಿತು.

ಈ ಸಂದರ್ಭದಲ್ಲಿ ಮಾತನಾಡಿದ ನಟರಾಜ ಪ್ರತಿಷ್ಠಾನದ ವಿಶೇಷಾಧಿಕಾರಿ ಪ್ರೊಎಸ್.ಶಿವರಾಜಪ್ಪ ಸಂಗೀತ, ನೃತ್ಯ, ಸಾಹಿತ್ಯ, ಗಾಯನ ಇಂತಹ ಎಲ್ಲಾ ಕ್ಷೇತ್ರಗಳಲ್ಲೂ ಮೈಸೂರು ಹೆಸರಾಗಿದೆ. ಸಮಾಜಕ್ಕೆ ನಾಲ್ವಡಿ ಕೃಷ್ಣರಾಜ ಒಡೆಯರ್, ಸಂಗೀತ ಮತ್ತು ಸಾಹಿತ್ಯದಲ್ಲಿ ಜಯಚಾಮರಾಜ ಒಡೆಯರ್ ಬಹು ದೊಡ್ಡ ಕೊಡುಗೆ ನೀಡಿದ್ದಾರೆ. ಅಂಥವರ ನಾಡಿನಲ್ಲಿ ವಿವಿಧ ಕ್ಷೇತ್ರಗಳ ಸಾಧಕರನ್ನು ಅಭಿನಂದಿಸುತ್ತಿರುವುದು ನಿಜಕ್ಕೂ ಉತ್ತಮ ಕಾರ್ಯ ಎಂದರು.



ಸಮಾರಂಭಕ್ಕೆ ಹೊಸಮಠದ ಶ್ರೀ ಚಿದಾನಂದ ಸ್ವಾಮೀಜಿ ಚಾಲನೆ ನೀಡಿದರು. ವೆಂಕಟಗಿರಿ ಪ್ರಕಾಶನದ ಸಂಸ್ಥಾಪಕ ಪ್ರೊ.ನೀ.ಗಿರಿಗೌಡ ಅಧ್ಯಕ್ಷತೆ ವಹಿಸಿದ್ದರು. ಮಾಜಿ ಮೇಯರ್ ಸುನಂದಾ ಪಾಲನೇತ್ರ, ಪಾಲಿಕೆ ಸದಸ್ಯ ಬಿ.ವಿ.ಮಂಜುನಾಥ್, ಪಾಲಿಕೆ ಉಪಆಯುಕ್ತ ಡಾ.ದಾಸೇಗೌಡ, ಪತ್ರಕರ್ತ ಅಂಶಿ ಪ್ರಸನ್ನಕುಮಾರ್ ಇನ್ನಿತರರು ಉಪಸ್ಥಿತರಿದ್ದರು.

ನಕ್ಕರೆ ಅದೇ ಸ್ವರ್ಗ

ನ್ಯಾಯಾಧೀಶರು : ನೀನು ಹೆಂಡತಿಯನ್ನು ಮಾರಿದ್ದೇಕೆ?

ತಿಮ್ಮ : "ಸ್ವಾಮಿ ಅವಳೇ ಹೇಳಿದ್ದು. ನಾನು ಒಲಿದರೆ ನಾರಿ, ಮುನಿದರೆ ಮಾರಿ ಅಂತ. ಮೊನ್ನೆ ಮುನಿದ್ಲು, ಅದಕ್ಕೆ ಮಾರಿದೆ!"

ಮೈಸೂರು ಮಿತ್ರ

ಬುಧವಾರ, 14 ಸೆಪ್ಟೆಂಬರ್ 2022

ಸತ್ಯೇನೋತ್ತಭಿತಾ ಭೂಮಿಃ!! ನಹಿ ಸತ್ಯಾತ್ಪರೋ ಧರ್ಮಃ!
(ಭೂಮಿಯು ಸತ್ಯದ ಮೇಲೆ ನಿಂತಿದೆ, ಸತ್ಯಕ್ಕಿಂತ ಮಿಗಿಲಾದ ಧರ್ಮವಿಲ್ಲ)

ಸಂಪಾದಕ: ಎಂ. ಗೋವಿಂದೇಗೌಡ *M.A.*

ಅಮೃತವಾಹಿನಿ

ಸಮಯ ಹಾಗೂ ಪರಿಸರಗಳೇ ಮನುಷ್ಯನನ್ನು ದುರ್ಬಲ ಅಥವಾ ಸಬಲರನ್ನಾಗಿ ಮಾಡುತ್ತವೆ. –ಕಾರ್ಲೈಲ್

ವೇದ ಸುಳ್ಳಾದರೂ ಗಾದೆ ಸುಳ್ಳಾಗದು

ಒಣ ಮಾತು ಒಣಗಿದ ಹುಲ್ಲು, ಒಳ್ಳೆಯ ಮಾತು ಬೆಳ್ಳಗಿನ ಹಾಲು

ನಿಮ್ಮ ಪತ್ರಗಳು

ಸರ್ಕಾರ, ಜಿಲ್ಲಾಡಳಿತದ ಬೇಜವಾಬ್ದಾರಿಗೆ ಸಿಲುಕಿ ನರಳುತ್ತಿರುವ ಮೈಸೂರು ನಗರ

ಮಾನ್ಯರೆ,

ರಾಜ್ಯದ ವ್ಯವಸ್ಥಿತ ನಗರಗಳ ಪೈಕಿ ಮುಂಚೂಣಿಯಲ್ಲಿದ್ದ ಮೈಸೂರು ನಗರ, ಇಂದಿನ ಆಡಳಿತಾರೂಢ ಸರ್ಕಾರದ ಬೇಜವಾಬ್ದಾರಿ ಹಾಗೂ ಜಿಲ್ಲಾಡಳಿತದ ಅಸಡ್ಡೆಗೆ ಸಿಲುಕಿ ನರಳುತ್ತಿದೆ.

ಮೈಸೂರು ನಿರ್ಮಾತೃ ನಾಲ್ವಡಿ ಕೃಷ್ಣರಾಜ ಒಡೆಯರ್ ಅವರ ದೂರದೃಷ್ಟಿತ್ವದ ಫಲವಾಗಿ ಸುಸಜ್ಜಿತ ಮೈಸೂರು ನಗರ ನಿರ್ಮಾಣಗೊಂಡಿದ್ದು ಇತಿಹಾಸದ ಪುಟಗಳಲ್ಲಿ ದಾಖಲಾಗಿದೆ. ಅಂತಹ ನಗರ ಇಂದು ಹಾಳುಹಂಪೆ ಮಾದರಿಯತ್ತ ಹೊರಳುತ್ತಿರುವುದು ಆಡಳಿತ ವ್ಯವಸ್ಥೆಯ ವೈಫಲ್ಯಕ್ಕೆ ಹಿಡಿದ ಕನ್ನಡಿಯಾಗಿದೆ.

ಬದಲಾದ ಕಾಲಘಟ್ಟದಲ್ಲಿ ಅಭಿವೃದ್ಧಿಯ ಪಥದತ್ತ ಸಾಗಬೇಕಿದ್ದ ಮೈಸೂರು ನಗರದ ರಸ್ತೆಗಳು ಬೇಜವಾಬ್ದಾರಿ ಆಡಳಿತ ವ್ಯವಸ್ಥೆಗೆ ಕನ್ನಡಿ ಹಿಡಿದಿದ್ದರೆ, ಮುಂದಾಲೋಚನೆಯೇ ಇಲ್ಲದೆ ಮಾಡಿದ ಯೋಜನೆಗಳು ಮೈಸೂರು ನಗರವನ್ನು ನೀರಿನಲ್ಲಿ ಮುಳುಗಿಸುತ್ತಿರುವುದು ಇತ್ತೀಚೆಗೆ ಸುರಿದ ಮಳೆಯಿಂದ ಸಾಬೀತಾಗಿದೆ.

ಸರ್ಕಾರದಲ್ಲಿ ಹಣವಿದ್ದು, ಯಾವುದೇ ರೀತಿಯ ಕೊರತೆ ಇಲ್ಲ ಎಂದು ಬೊಬ್ಬೆ ಹೊಡೆಯುವ ಆಡಳಿತಾರೂಢ ಪಕ್ಷಗಳ ಸಚಿವರು, ಶಾಸಕರು ಮೈಸೂರು ನಗರದ ಮೋರಿಗಳನ್ನು ಸ್ವಚ್ಛ ಮಾಡಿಸಲು ಸಾಧ್ಯವಾಗಿಲ್ಲದಿರುವುದು, ಇವರ ಆಡಳಿತ ವೈಖರಿಯ ವೈಫಲ್ಯಕ್ಕೆ ಸಾಕ್ಷಿಯಾಗಿದೆ.

ಈ ಬಾರಿ ಅದ್ಧೂರಿ ದಸರಾ ಎಂದು ಘೋಷಿಸಲಾಗಿದ್ದು, ಕೋಟ್ಯಾಂತರ ರೂ.ಗಳನ್ನು ಅದಕ್ಕಾಗಿ ವ್ಯಯಿಸಲಾಗುತ್ತಿದೆ. ಆದರೆ, ಮೈಸೂರು ನಗರದ ಹೃದಯದಲ್ಲಿರುವ ರಸ್ತೆಗಳು ಆಡಳಿತ ವ್ಯವಸ್ಥೆಯ ಕರ್ತವ್ಯಲೋಪಕ್ಕೆ ಸಾಕ್ಷಿಯಾಗಿದ್ದು, ಅದ್ಧೂರಿ ದಸರಾ ಎಂಬುದು ಆಡಂಬರದ ಹೇಳಿಕೆಯಾಗಿದೆ. ವಿಶ್ವವಿಖ್ಯಾತ ದಸರಾ ಮಹೋತ್ಸವಕ್ಕೆ ದಿನಗಣನೆ ಆರಂಭವಾಗಿದ್ದರೂ, ಈವರೆಗೆ ಮೈಸೂರಿನ ಹದಗೆಟ್ಟ ರಸ್ತೆಗಳನ್ನು ಸರಿಪಡಿಸುವ ಗೋಜಿಗೆ ಹೋಗದಿರುವುದು ಅಧಿಕಾರಿ ವರ್ಗ ಹಾಗೂ ಆಡಳಿತ ವ್ಯವಸ್ಥೆಯ ನಡುವೆ ಹೊಂದಾಣಿಕೆ ಇಲ್ಲದಿರುವುದನ್ನು ಎತ್ತಿ ತೋರುತ್ತಿದೆ.

ಈ ಬಗ್ಗೆ ರಾಜ್ಯ ಸರ್ಕಾರ ಹಾಗೂ ಜಿಲ್ಲಾಡಳಿತ ತತ್‌ಕ್ಷಣ ಕ್ರಮ ತೆಗೆದುಕೊಳ್ಳದಿದ್ದಲ್ಲಿ ದಸರಾ ಮಹೋತ್ಸವದ ಈ ಹೊತ್ತಿನಲ್ಲಿ ಮೈಸೂರಿನ ಮಾನ ವಿಶ್ವದೆಲ್ಲೆಡೆ ಹರಾಜಾಗುವುದು ನಿಶ್ಚಿತ. ಇದರಿಂದ ಸ್ವಚ್ಛ ಮತ್ತು ಸುಂದರ ನಗರವಾದ ಮೈಸೂರಿನ ಹೆಸರಿಗೆ ಧಕ್ಕೆಯಾಗಲಿದೆ. ಆದ್ದರಿಂದ ರಾಜ್ಯ ಸರ್ಕಾರ ಹಾಗೂ ಜಿಲ್ಲಾಡಳಿತ ಮೈಸೂರು ನಗರದ ಅವ್ಯವಸ್ಥೆಯನ್ನು ಕೂಡಲೇ ಸರಿಪಡಿಸಬೇಕು. ಒಂದು ವೇಳೆ ಈ ನಿಟ್ಟಿನಲ್ಲಿ ಕ್ರಮ ತೆಗೆದುಕೊಳ್ಳದಿದ್ದಲ್ಲಿ ಹೋರಾಟ ಅನಿವಾರ್ಯವಾಗಲಿದೆ.

–ಕೆ.ವಿ.ಮಲ್ಲೇಶ್' ಅಧ್ಯಕ್ಷರು, ಅನಿಕೇತನ ಸೇವಾ ಟ್ರಸ್ಟ್, ಮೈಸೂರು.

ಗೌರಿ–ಗಣೇಶ ವಿಸರ್ಜಿತ ವಿಗ್ರಹಗಳಿಗೆ ಮುಕ್ತಿ

ಮಾನ್ಯರೆ,

ಒಂದು ವಸ್ತುನಿಷ್ಠ ಪತ್ರಿಕೆ ತನ್ನ ಪತ್ರಿಕಾ ಧರ್ಮ ಹಾಗೂ ತನ್ನ ಬರವಣಿಗೆಯಿಂದ ಸಮಾಜವನ್ನು ಬಡಿದು ಎಬ್ಬಿಸಬಹುದು ಎಂಬುದನ್ನು 'ಮೈಸೂರು ಮಿತ್ರ' ಗೌರಿ–ಗಣೇಶನ ವಿಸರ್ಜಿತ ವಿಗ್ರಹಗಳಿಗೆ ಮುಕ್ತಿ ಕೊಡಿಸುವ ಮೂಲಕ ತೋರಿಸಿದೆ.

ಸೆಪ್ಟೆಂಬರ್ 9ರ ಸಂಚಿಕೆಯ 12ನೆಯ ಪುಟದಲ್ಲಿ ಪ್ರಕಟವಾದ ಪ್ರಖರ ಹಾಗೂ ವಸ್ತುಸ್ಥಿತಿಯ ಅರಿವು ಮೂಡಿಸಿದ ಬರಹ, ಸಂಬಂಧಿಸಿದವರನ್ನು ಎಚ್ಚರಿಸಿ ನಾಗರಿಕರಿಗೂ ಚಾಟಿ ಏಟು ನೀಡಿ ಸಮಸ್ಯೆಗೆ ಶೀಘ್ರ ಪರಿಹಾರ ಸಿಕ್ಕಿದ್ದು ನೆಮ್ಮದಿ, ಸಂತಸ ಎರಡೂ ತಂದಿದೆ. ಹಬ್ಬದ ಶುರುವಿನಲ್ಲಿದ್ದ ಉತ್ಸಾಹ ಕೊನೆಯಲ್ಲೂ ಇರಬೇಕೆಂಬ ಸೂಕ್ಷ್ಮತೆಯನ್ನು ಮಿತ್ರ ಎತ್ತಿ ತೋರಿಸಿದೆ. ಈ ಬಗ್ಗೆ ಸ್ಪಂದಿಸಿದ 'ಮೈಸೂರು ಮಿತ್ರ' ದಿನಪತ್ರಿಕೆ, ಓದುಗ ಬ್ಯಾಂಕ್ ಶಿವಕುಮಾರ್ ಹಾಗೂ ಕಾವೇರಿ ನೀರಾವರಿ ನಿಗಮದ ಅಧಿಕಾರಿ ಮತ್ತು ಸಂಬಂಧಿಸಿದ ಎಲ್ಲರಿಗೂ ಅಭಿನಂದನೆಗಳು.

–ಶಿವಮೊಗ್ಗ ನಾ. ದಿನೇಶ್ ಅಡಿಗ, ಮೈಸೂರು

ಲೋಕಾಯುಕ್ತಕ್ಕೆ ಮತ್ತೆ ಆನೆ ಬಲ

ಮಾನ್ಯರೆ,

2016ರಲ್ಲಿ ಸಿದ್ದರಾಮಯ್ಯನವರು ಮುಖ್ಯಮಂತ್ರಿಯಾಗಿದ್ದ ಅವಧಿಯಲ್ಲಿ ರಚನೆಗೊಂಡ ಭ್ರಷ್ಟಾಚಾರ ನಿಗ್ರಹ ದಳವನ್ನು ಕರ್ನಾಟಕ ಹೈಕೋರ್ಟ್ ರದ್ದುಪಡಿಸಿ ಎಸಿಬಿ ಬಳಿ ಇದ್ದ ಪ್ರಕರಣಗಳನ್ನು ಲೋಕಾಯುಕ್ತಕ್ಕೆ ವರ್ಗಾವಣೆ ಮಾಡುವಂತೆ ಆದೇಶಿಸಿದೆ.

ಜನರ ನಿರೀಕ್ಷೆಯಂತೆ ಲೋಕಾಯುಕ್ತ ಬಲಗೊಂಡರೆ ಭ್ರಷ್ಟ ರಾಜಕಾರಣಿಗಳು ಹಾಗೂ ಭ್ರಷ್ಟ ಅಧಿಕಾರಿಗಳಿಗೆ ನಡುಕ ಹುಟ್ಟಿಸುತ್ತದೆ. ಯಾರ ನಿಯಂತ್ರಣವೂ ಇರದ ಲೋಕಾಯುಕ್ತ ಸ್ವಯಂ ಸಂಸ್ಥೆ. ಭ್ರಷ್ಟಾಚಾರ ನಿಗ್ರಹ ದಳದಲ್ಲಿದ್ದ ಪ್ರಕರಣಗಳು ವರ್ಗಾವಣೆಗೊಂಡರೆ ನ್ಯಾಯಸಮ್ಮತವಾಗಿ ಇತ್ಯರ್ಥವಾಗಿ ಭ್ರಷ್ಟರಿಗೆ ನಡುಕು ಹುಟ್ಟಿಸುವಲ್ಲಿ ಯಶಸ್ವಿಯಾಗಲಿದೆ. ಹಲ್ಲು ಕಿತ್ತ ಹಾವಿನಂತಿರುವ ಭ್ರಷ್ಟಾಚಾರ ನಿಗ್ರಹ ದಳದಲ್ಲಿದ್ದ ಕಡತಗಳನ್ನು ಹಸ್ತಾಂತರ ಮಾಡುವುದರ ಮೂಲಕ ಲೋಕಾಯುಕ್ತರಿಗೆ ಆನೆ ಬಲ ಮತ್ತೆ ಮರುಕಳಿಸಿದೆ. ಲೋಕಾಯುಕ್ತ ಸಂಸ್ಥೆ ತನ್ನ ಅಧಿಕಾರ ಅವಧಿಯಲ್ಲಿ ದೊಡ್ಡ ಪ್ರಮಾಣದ ಭ್ರಷ್ಟಾಚಾರದ ರಾಜಕಾರಣಿಗಳನ್ನು, ಹಾಗೂ ಅಧಿಕಾರಿಗಳ ಭ್ರಷ್ಟಾಚಾರ ಬಯಲು ಮಾಡುವುದರ ಮೂಲಕ ಜನ ಸಾಮಾನ್ಯರ ಮನಸ್ಸಿನಲ್ಲಿ ನ್ಯಾಯದ ಅಸ್ಮಿತೆಯ ನಂಬಿಕೆಯು ಹೆಚ್ಚಿಸಿತು ಮತ್ತೆ ಜನಸಾಮಾನ್ಯರ ನಂಬಿಕೆಯನ್ನು ಹೆಚ್ಚಿಸುವಂತಾಗಲಿ ಎಂಬ ಆಶಯ.

–ಕಂಗಾಣಿಸೋಮು ಪಿ.ಸಿ., ಕ್ಯಾತಮಾರನಹಳ್ಳಿ, ಮೈಸೂರು

ಜೆ.ಪಿ.ನಗರದಲ್ಲಿ ಬಸ್ಸುಗಳ ಸಮಸ್ಯೆ ನಿವಾರಿಸಿ

ಮಾನ್ಯರೆ,

ನಾನು ನಗರ ಬಸ್ಸಿನ ನಿತ್ಯ ಪ್ರಯಾಣಿಕ. ನಗರ ಸಾರಿಗೆ ಬಸ್ಸುಗಳ ಸಮಸ್ಯೆಯಿಂದಾಗಿ ನಮಗೆ ನಮ್ಮ ಕಾರ್ಯಸ್ಥಳಗಳಿಗೆ ತಲುಪಲು ಪ್ರತಿನಿತ್ಯ ವಿಳಂಬವಾಗುತ್ತಿದೆ. ಬೆಳಗ್ಗೆ 8.30 ರಿಂದ 9.30 ರವರೆಗೆ ಬಸ್ಸುಗಳ ಅಭಾವವಿರುತ್ತದೆ. ಇದರಿಂದಾಗಿ ಗೊಬ್ಬಳಿಮರ ತಂಗುದಾಣದಲ್ಲಿ ಬಹಳ ಜನದಟ್ಟಣೆಯಿರುತ್ತದೆ. ಶಾಲಾ ಕಾಲೇಜು ವಿದ್ಯಾರ್ಥಿಗಳು ಮತ್ತು ನೌಕರರಿಗೆ ಪ್ರತಿದಿನ ಬಹಳ ತೊಂದರೆಯಾಗುತ್ತಿದೆ. ಈ ಬಗ್ಗೆ ಅನೇಕ ಬಾರಿ ಪತ್ರಿಕೆಗಳ ಮೂಲಕ ಸಂಬಂಧಪಟ್ಟ ಸಾರಿಗೆ ಅಧಿಕಾರಿಗಳ ಗಮನ ಸೆಳೆದಿದ್ದರೂ ಯಾವುದೇ ಪ್ರಯೋಜನವಾಗಿಲ್ಲ. ಕುವೆಂಪುನಗರ ಘಟಕಕ್ಕೆ ಸೇರಿದ 10ಎ, 11ಆ, 11ಆರ್‌ಜಿ, 62 ಆರ್‌ಜೆ ಬಸ್ಸುಗಳ ಸಂಚಾರ 2 ವರ್ಷಗಳಿಂದ ಸ್ಥಗಿತವಾಗಿದ್ದು, ಇದುವರೆವಿಗೂ ಕಾರ್ಯಾಚರಣೆಗೊಂಡಿಲ್ಲ. ಈ ಬಸ್ಸುಗಳು ಮರು ಕಾರ್ಯಾಚರಣೆಗೊಂಡರೆ ಅರ್ಧ ಸಮಸ್ಯೆ ಪರಿಹಾರವಾಗುತ್ತದೆ. ಒಮ್ಮೆ ನಗರ ಸಾರಿಗೆ ಅಧಿಕಾರಿಗಳು ಗೊಬ್ಬಳಿಮರ ತಂಗುದಾಣಕ್ಕೆ ಭೇಟಿ ನೀಡಿದರೆ ಸಮಸ್ಯೆಯ ಗಂಭೀರತೆಯ ಅರಿವಾಗುತ್ತದೆ. ಈಗಲಾದರೂ ಸಂಬಂಧಪಟ್ಟ ನಗರ ಸಾರಿಗೆ ಅಧಿಕಾರಿಗಳು ಇತ್ತ ಗಮನಹರಿಸಿ ಆದಷ್ಟು ಶೀಘ್ರ ಸ್ಥಗಿತವಾಗಿರುವ ಬಸ್ಸುಗಳನ್ನು ಮರು ಕಾರ್ಯಾಚರಣೆಗೊಳಿಸಬೇಕೆಂದು ಮನವಿ.

–ಪರಶಿವಮೂರ್ತಿ, ಜೆ.ಪಿ.ನಗರ, ಮೈಸೂರು.



ಬಿಚ್ಚು ನುಡಿ

ವಿಕ್ರಂ ಮುತ್ತಣ್ಣ

40% ಕಮಿಷನ್‌ಗೆ ಪೀಡಿಸಿದರೂ 100% ಸೇಫ್



ಚುನಾವಣೆಗಳು ಬರುವುದರ ಜೊತೆಗೆ ಆಪಾದನೆಗಳನ್ನು ಹೊತ್ತು ತರುತ್ತವೆ. ಅದೇ ರೀತಿ ಅವು ಮುಂದುವರೆಯುತ್ತವೆ. ಆಪಾದನೆಗಳನ್ನು ಮಾಡುವ ರಾಜಕಾರಣ ಯಾವತ್ತಿಗೂ ಅಭಿಯೋಜನೆಯಲ್ಲಿ (prosecution) ಮುಕ್ತಾಯಗೊಳ್ಳುವುದಿಲ್ಲ. ವಿರೋಧ ಪಕ್ಷಗಳು ಮಾಡುವ ಆಪಾದನೆಗಳು ಬಹಳ ವಿರಳವಾಗಿ ತಾರ್ಕಿಕ ಅಂತ್ಯ ಕಾಣುತ್ತವೆ.

ಸಾಮಾನ್ಯವಾಗಿ ವಿರೋಧ ಪಕ್ಷಗಳು ಅಬ್ಬರಿಸುತ್ತವೆ, ಹಾರಾಡುತ್ತವೆ. ಸಾಲದೆಂಬಂತೆ ಆಗಾಗ ಜಾಥಾಗಳನ್ನು ಆಯೋಜಿಸುತ್ತವೆ, ಧರಣಿ ಕೂರುತ್ತವೆ ಹಾಗೂ ಆಡಳಿತ ಪಕ್ಷದ ಭ್ರಷ್ಟಾಚಾರದ ವಿರುದ್ಧ ಬಂದ್‌ಗಳನ್ನು ಆಚರಿಸುತ್ತವೆ. ಆದರೆ, ವಿರೋಧ ಪಕ್ಷಗಳೇ ಅಧಿಕಾರಕ್ಕೆ ಬಂದಾಗ, ತಾವು ಅದುವರೆಗೆ ಹೋರಾಡಿದಂತಹ ಸಮಸ್ಯೆಗಳ ಬಗ್ಗೆ ಏನನ್ನೂ ಮಾಡುವುದಿಲ್ಲ!

ಈಗ ಕರ್ನಾಟಕದಲ್ಲಿ ಕಾಂಗ್ರೆಸ್ ಪಕ್ಷವು ಮತ್ತೆ 40% ಕಮಿಷನ್ ವಿಷಯವನ್ನು ಕೆದಕುತ್ತಿದೆ. ಹೋಗಲಿ, ಆ ಪಕ್ಷವು ಅಧಿಕಾರಕ್ಕೆ ಬಂದರೆ ಅದರ ಬಗ್ಗೆ ಕ್ರಮ ತೆಗೆದುಕೊಳ್ಳುವುದೇ? ನಾವು ಈ ಪ್ರಶ್ನೆಯನ್ನು ಏತಕ್ಕಾಗಿ ಕೇಳುತ್ತಿದ್ದೇವೆಂದರೆ, ಕಾಂಗ್ರೆಸ್ ಪಕ್ಷವು ಸ್ವತಂತ್ರ ನ್ಯಾಯಮೂರ್ತಿಗಳಡಿ ದಕ್ಷ ರೀತಿ ಕಾರ್ಯನಿರ್ವಹಿಸುತ್ತಿದ್ದ ಲೋಕಾಯುಕ್ತ ಅಧಿಕಾರವನ್ನು ಹಿಂದಕ್ಕೆ ಪಡೆದು, ಮುಖ್ಯಮಂತ್ರಿಯವರ ಅಧೀನದಲ್ಲಿ ಕಾರ್ಯನಿರ್ವಹಿಸುವ ಭ್ರಷ್ಟಾಚಾರ ನಿಗ್ರಹ ದಳಕ್ಕೆ (ACB-Anti Corruption Bureau) ಒಪ್ಪಿಸಿತ್ತು.

ನಮ್ಮ ಅದೃಷ್ಟವೆಂಬಂತೆ ಇತ್ತೀಚೆಗೆ ರಾಜ್ಯ ಹೈಕೋರ್ಟ್ ಪೀಠ, ರಾಜ್ಯದಲ್ಲಿ ಕಾರ್ಯನಿರ್ವಹಿಸುತ್ತಿದ್ದ ಎಸಿಬಿಯನ್ನು ರದ್ದುಪಡಿಸಿ, ಒಂದು ಪ್ರಶ್ನೆಯನ್ನು ಕೇಳಿತು. **ಎಸಿಬಿ, ಮುಖ್ಯಮಂತ್ರಿಗಳ ಅಡಿಯಲ್ಲಿ ಅಥವಾ ಅಧೀನದಲ್ಲಿ ಕಾರ್ಯನಿರ್ವಹಿಸುತ್ತಿರುವಾಗ, ಮುಖ್ಯಮಂತ್ರಿ ಹಾಗೂ ಆಡಳಿತ ಪಕ್ಷದ ಸದಸ್ಯರ ವಿರುದ್ಧ ಕ್ರಮ ಕೈಗೊಳ್ಳಲು ಹೇಗೆ ಸಾಧ್ಯ?**

ಈ ಹಿಂದೆ ಕಾಂಗ್ರೆಸ್ ಸರ್ಕಾರವು ಎಸಿಬಿಯನ್ನು ಅಸ್ತಿತ್ವಕ್ಕೆ ತಂದಾಗ, ಭಾರತೀಯ ಜನತಾ ಪಕ್ಷವು ವಿರೋಧ ಪಕ್ಷವಾಗಿತ್ತು. ಆದರೆ ಇದೇ ಬಿಜೆಪಿ ಅಧಿಕಾರಕ್ಕೆ ಬಂದಾಗ ಎಸಿಬಿಯನ್ನು ರದ್ದುಗೊಳಿಸುವ ಯಾವುದೇ ಕ್ರಮವನ್ನು ತೆಗೆದುಕೊಳ್ಳಲಿಲ್ಲ. ಕೊನೆಗೆ ಆ ಕೆಲಸವನ್ನು ಕೋರ್ಟ್ ಮಾಡಬೇಕಾಯಿತು.

ಆದ್ದರಿಂದ, ಪ್ರತಿಯೊಂದು ರಾಜಕೀಯ ಪಕ್ಷವೂ ಭ್ರಷ್ಟಾಚಾರಿಗಳನ್ನು ಶಿಕ್ಷೆಗೆ ಒಳಪಡಿಸುವ ಸಂಸ್ಥೆಗಳನ್ನು ತನ್ನ ನಿಯಂತ್ರಣದಲ್ಲಿ ಇಟ್ಟುಕೊಳ್ಳಲು ಬಯಸುತ್ತದೆ ಎಂಬುದು ಸ್ಪಷ್ಟವಾಗಿದೆ. ಕಾರಣ ಇಷ್ಟೇ, ರಾಜಕೀಯ ಸಂಘಟನೆ ಇಲ್ಲವೆ ಪಕ್ಷಗಳು ಭಾರೀ ಪ್ರಮಾಣದ ಭ್ರಷ್ಟಾಚಾರದಲ್ಲಿ ತೊಡಗಿರುತ್ತವೆ.

ಇತ್ತೀಚೆಗೆ ಕರ್ನಾಟಕ ರಾಜ್ಯ ಗುತ್ತಿಗೆದಾರರ ಸಂಘವು, ಅದರ ಅಧ್ಯಕ್ಷರಾದ ಕೆಂಪಣ್ಣನವರ ನೇತೃತ್ವದಲ್ಲಿ ಕಾಂಗ್ರೆಸ್ ಹಿರಿಯ ನಾಯಕ ಹಾಗೂ ವಿಧಾನಸಭೆಯಲ್ಲಿ ವಿರೋಧ ಪಕ್ಷದ ನಾಯಕರಾದ ಸಿದ್ದರಾಮಯ್ಯನವರನ್ನು, 40% ಕಮಿಷನ್ ಬೇಡಿಕೆ ಸಂಬಂಧ ಭೇಟಿ ಮಾಡಿತ್ತು.

ನಂತರ, ಮಾಧ್ಯಮದವರೊಂದಿಗೆ ಮಾತನಾಡಿದ ಕೆಂಪಣ್ಣನವರು, ಈ ವಿಷಯವನ್ನು ತಾವು ವಿಧಾನಸಭೆಯ ಅಧಿವೇಶನದಲ್ಲಿ ಪ್ರಸ್ತಾಪಿಸುವುದಾಗಿ ಸಿದ್ದರಾಮಯ್ಯ ತಮಗೆ ಭರವಸೆ ನೀಡಿದ್ದಾರೆಂದು ತಿಳಿಸಿದರು.

ಅರೆ, ...ನಿಜವಾಗಿಯೂ ಸಾಧ್ಯನಾ? ಅದು ಹೇಗೆ? ಯಾವ ಮುಖ ಹಾಗೂ ನೈತಿಕ ಹಕ್ಕಿದೆ ಎಂದು ಈ ಜನ– ಗುತ್ತಿಗೆದಾರರು ಮತ್ತು ಕಾಂಗ್ರೆಸ್ ಪಕ್ಷ ಸದನದಲ್ಲಿ ಈ ವಿಷಯವನ್ನು ಪ್ರಸ್ತಾಪಿಸುತ್ತಾರೆ?

ಗುತ್ತಿಗೆದಾರರು ತಪ್ಪು ಮಾಡಿಲ್ಲವೇ? ಸಂಘದ ಅಧ್ಯಕ್ಷರಾದ ಕೆಂಪಣ್ಣನವರು ಈಗ ಹತಾಶೆಯಿಂದ ಹೇಳುತ್ತಾರೆ. "ಇವರೆಲ್ಲ ನಾಚಿಕೆಗೆಟ್ಟ ಜನ. ಪರ್ಸೆಂಟೇಜ್ ರೂಪದಲ್ಲಿ ಕಮಿಷನ್ ಕೇಳುತ್ತಾರೆ. ಇವರೆಲ್ಲಾ ನಮ್ಮ ಪ್ರತಿನಿಧಿಗಳೇ?"

ಕೆಂಪಣ್ಣನವರಿಗೆ ತನ್ನ ಸಹೋದ್ಯೋಗಿ ಸರ್ಕಾರಿ ಗುತ್ತಿಗೆದಾರರು ನಿರ್ಮಿಸಿದ ಕಾಲುವೆಗಳು ಬಿರುಕು ಬಿಟ್ಟಾಗ, ಅವರು ನಿರ್ಮಿಸಿದ ಶಾಲೆಗಳು ಕೊಂಪೆಗಳಾದಾಗ, ಹಾಗೂ ಕೇವಲ ಎರಡೇ ಮಳೆಗಾಲದ ಅವಧಿಯಲ್ಲಿ ಅವರು ನಿರ್ಮಿಸಿದಂತಹ ರಸ್ತೆಗಳು ಕೊಚ್ಚೆ ಗುಂಡಿಗಳಾಗಿ ಮಾರ್ಪಾಟಾದಾಗ ಇಂತಹ ಹತಾಶೆ ಏಕಾಗಲಿಲ್ಲ?

ರಾಜಕಾರಣಿಗಳು ತೆರಿಗೆದಾರರ ಹಣವನ್ನು ಲೂಟಿ ಹೊಡೆದು, ಆ ಹಣವನ್ನು ತಮ್ಮಲ್ಲೇ ಹಾಗೂ ಅರೆ–ಬರೆ ಗುತ್ತಿಗೆ ಕಾರ್ಯ ಮಾಡಿದ್ದ ಗುತ್ತಿಗೆದಾರರೊಂದಿಗೆ ಹಂಚಿಕೊಳ್ಳುತ್ತಿದ್ದ ಈ ಎಲ್ಲಾ ವರ್ಷಗಳಲ್ಲಿ ಗುತ್ತಿಗೆದಾರರು ಮೌನಕ್ಕೆ ಶರಣಾಗಿದ್ದರು. ಈಗ ರಾಜಕಾರಣಿಗಳು ಗುತ್ತಿಗೆದಾರರನ್ನೇ ದೋಚಲು ಬಂದಾಗ, ಸಮಸ್ಯೆ ಉಂಟಾಗಿದೆಯೇ?

ಈಗ ಗುತ್ತಿಗೆದಾರರು, ಪ್ರತಿಭಟನೆ ನಡೆಸಲು ಆಸಕ್ತರಾಗಿದ್ದಾರೆ. ಅತ್ಯಂತ ಖೇದಕರ ಸಂಗತಿ ಎಂದರೆ ಗುತ್ತಿಗೆದಾರರ ಪ್ರತಿಭಟನೆ ಲಂಚದ ಬೇಡಿಕೆಯ ವಿರುದ್ಧವಲ್ಲ, ಹೊರತು ಅದರ ಏರಿಕೆಯ ಬಗ್ಗೆ!

ಈಗ 40% ಕಮಿಷನ್ ಬೇಡಿಕೆಯ ಬಗ್ಗೆ ಮಾತನಾಡುತ್ತಿರುವ ಸಿದ್ದರಾಮಯ್ಯನವರು, ಕೆಲವು ತಿಂಗಳ ಹಿಂದೆ ಕೆಂಪಣ್ಣನವರು ಆಡಿದ್ದ ಮಾತುಗಳನ್ನು ಜ್ಞಾಪಕಕ್ಕೆ ತಂದುಕೊಳ್ಳಬೇಕು. ಆಗ ಕೆಂಪಣ್ಣನವರು "ಹಿಂದಿನ ದಶಕಗಳಲ್ಲೆಲ್ಲಾ ಸ್ಥಳೀಯ ಮುಖಂಡರಿಗೆ 2% ಲಂಚ ನೀಡಲಾಗುತ್ತಿತ್ತು" ಎಂದು ಹೇಳಿದ್ದರು. ನಂತರ ಕಾಂಗ್ರೆಸ್ ಸರ್ಕಾರದ ಅವಧಿಯಲ್ಲಿ (2018–19) ಓರ್ವ ಸಚಿವರ ವ್ಯಾಪ್ತಿಗೆ ಬರುವ ಇಲಾಖೆಯು, ಟೆಂಡರ್ ಮೊತ್ತದ 10% ಕಮಿಷನ್ ರೂಪದಲ್ಲಿ ಪಡೆಯುತ್ತಿತ್ತು.

ಕೆಂಪಣ್ಣನವರು, 40% ಕಮಿಷನ್ ವಿಚಾರದ ದೂರನ್ನು ಮಾಜಿ ಮುಖ್ಯಮಂತ್ರಿಯೊಬ್ಬರ ಬಳಿ ನೀಡಿರುವುದು ತಮಾಷೆಯೆನಿಸುತ್ತದೆ. ಏಕೆಂದರೆ ಅವರೇ ಹೇಳುವಂತೆ, ಅವರು ಮುಖ್ಯಮಂತ್ರಿಯಾಗಿದ್ದ ಅವಧಿಯಲ್ಲಿ ಕಮಿಷನ್ 10%ಗೆ ಹೆಚ್ಚಾಯಿತು.

ಕಾಂಗ್ರೆಸ್‌ನವರಿಗೆ ತಾವು ಕಮಿಷನ್ ಅನ್ನು 10%ಗೆ ಏರಿಸಿದ ಆರೋಪದ ಬಗ್ಗೆ ನಾಚಿಕೆಯಿಲ್ಲ. ಅದರ ಬದಲು, ಬಿಜೆಪಿ ಸರ್ಕಾರವು ಅದನ್ನು 30%ಗೆ ಹೆಚ್ಚಿಸಿದ ಬಗ್ಗೆ ಆಕ್ರೋಶವಿದೆ. ಕಾಂಗ್ರೆಸ್‌ನವರಿಗೆ, ಬಿಜೆಪಿಯವರು ತಮಗಿಂತ ಹೆಚ್ಚಿಗೆ ಲೂಟಿ ಹೊಡೆಯುತ್ತಿದ್ದಾರೆ ಎಂಬ ಮತ್ಸರ ಈಗ (ಹೊಟ್ಟೆಕಿಚ್ಚು) ಕಾಡುತ್ತಿದೆಯೇ?

ಆಡಳಿತ ಪಕ್ಷದ ವೈಫಲ್ಯಗಳು ಹಾಗೂ ಶೋಷಣೆಗಳನ್ನು ಬೆಳಕಿಗೆ ತರುವುದು ವಿರೋಧ ಪಕ್ಷದ ಕರ್ತವ್ಯವಾಗಿದೆ. ಆದರೆ ಅವರು ಆ ರೀತಿ ಮಾಡುವುದಿಲ್ಲ. ಏಕೆ?

ಆರೋಪಗಳನ್ನು ಮಾಡುವ ಕಲೆಯಲ್ಲಿ ಪ್ರಾವೀಣ್ಯತೆಗಳಿಸಿದ್ದ ಮತ್ತು "ಆರೋಪಗಳ ಮಹಾಗುರು" ಎನಿಸಿಕೊಂಡಿರುವ ದೆಹಲಿ ಮುಖ್ಯಮಂತ್ರಿ ಅರವಿಂದ ಕೇಜ್ರಿವಾಲ್ ಹೇಳುವುದು ಪ್ರಾಯಶಃ ಸರಿಯೆನಿಸುತ್ತದೆ. ಅವರು ಹೇಳುತ್ತಾರೆ "ಎರಡು ಪಕ್ಷಗಳ (ಕಾಂಗ್ರೆಸ್ ಮತ್ತು ಬಿಜೆಪಿ) ನಡುವೆ ಗಂಡ–ಹೆಂಡತಿಯಂತಹ ಸಂಬಂಧವಿದೆ. ಒಬ್ಬರ ರಹಸ್ಯ ಮತ್ತೊಬ್ಬರಿಗೆ ತಿಳಿದಿದೆ. ಈ ಸಂಬಂಧ ನಮ್ಮನ್ನು ಎಚ್ಚರಗೊಳಿಸಬೇಕು".

ಕರ್ನಾಟಕ ರಾಜ್ಯ ಗುತ್ತಿಗೆದಾರರ ಸಂಘದ ಅಧ್ಯಕ್ಷರು, ಬೆಂಗಳೂರಿನ ರಾಜರಾಜೇಶ್ವರಿನಗರ ವಿಧಾನಸಭಾ ಕ್ಷೇತ್ರದ ಶಾಸಕರೂ ಆದ ಹಾಲಿ ತೋಟಗಾರಿಕಾ ಸಚಿವ, ಜೊತೆಗೆ ಕೋಲಾರ ಜಿಲ್ಲಾ ಉಸ್ತುವಾರಿ ಸಚಿವರೂ ಆಗಿರುವ ಮುನಿರತ್ನ ಅವರು ಭ್ರಷ್ಟರು. ಅವರು ಗುತ್ತಿಗೆದಾರರನ್ನು ಇನ್ನಿಲ್ಲದಂತೆ ಶೋಷಿಸುತ್ತಿದ್ದಾರೆಂದು ದೂರಿದ್ದಾರೆ.

ಮುನಿರತ್ನ, 2019ರ ತನಕ ಕಾಂಗ್ರೆಸ್ ಶಾಸಕರಾಗಿದ್ದರು. ಕಾಂಗ್ರೆಸ್ ಪಕ್ಷದಲ್ಲಿದ್ದಾಗ, ಅವರು 1500 ಕೋಟಿ ರೂಪಾಯಿಗಳ ನಕಲಿ ಬಿಲ್ಲುಗಳ ಹಗರಣದಲ್ಲಿ ಆರೋಪಿಯಾಗಿದ್ದರು. ಲೋಕಾಯುಕ್ತ ದಾಳಿಯ ಸಮಯದಲ್ಲಿ, ಅವರ ಮನೆಯಲ್ಲಿ ಸರ್ಕಾರಿ ಭೂಮಿಗೆ ಸಂಬಂಧಿಸಿದ ಭಾರೀ ಪ್ರಮಾಣದ ದಾಖಲೆ ಪತ್ರಗಳು ಸಿಕ್ಕಿದ್ದವು.

ಆಗ ಬಿಜೆಪಿಯು ಅವರ ವಿಚಾರಣೆಗೆ ಆಗ್ರಹಪಡಿಸಿತು. ಆದರೆ ಕಾಂಗ್ರೆಸ್ ಪಕ್ಷ ಏನನ್ನೂ ಮಾಡಲಿಲ್ಲ. ಕೊನೆಗೆ ಅದರ ಕತೆಯೇ ಮುಗಿಯಿತು ಬಿಡಿ!

2018ರ ವಿಧಾನಸಭಾ ಚುನಾವಣೆಯಲ್ಲಿ, ಮುನಿರತ್ನರವರು ಪುನಃ ಅದೇ ಕ್ಷೇತ್ರದಿಂದ ಕಾಂಗ್ರೆಸ್ ಟಿಕೆಟ್ ಮೇಲೆ ಸ್ಪರ್ಧಿಸಿದರು. ಈ ವೇಳೆ ಚುನಾವಣಾ ಆಯೋಗವು, ಅಪಾರ್ಟ್‌ಮೆಂಟ್ ಒಂದರ ಮೇಲೆ ದಾಳಿ ನಡೆಸಿ, 9,000ಕ್ಕೂ ಅಧಿಕ ಮತದಾರರ ಗುರುತಿನ ಚೀಟಿಗಳನ್ನು ವಶಪಡಿಸಿಕೊಂಡಿತು. ಈ ಪ್ರಕರಣದಲ್ಲಿ, ಮುನಿರತ್ನರವರ ಹೆಸರು ಕೇಳಿ ಬಂದಿತ್ತು. ಆಗ ಪುನಃ ಬಿಜೆಪಿ ಚುನಾವಣಾ ಅಕ್ರಮಗಳಲ್ಲಿ ಮುನಿರತ್ನ ಭಾಗಿಯಾಗಿದ್ದಾರೆ ಎಂದು ಅವರ ವಿರುದ್ಧ ಆರೋಪಿಸಿತ್ತು. ಈ ಸಂದರ್ಭದಲ್ಲಿ, ಪ್ರಧಾನಮಂತ್ರಿ ನರೇಂದ್ರ ಮೋದಿಯವರು, ಕರ್ನಾಟಕ ರಾಜ್ಯದಲ್ಲಿ ಚುನಾವಣಾ ಪ್ರಚಾರ ಕೈಗೊಂಡಿದ್ದರು. ಅವರು ಪ್ರಚಾರ ಭಾಷಣಗಳಲ್ಲಿ, ಹೀಗೆ ಪತ್ತೆಯಾದ ಮತದಾರರ ಗುರುತಿನ ಚೀಟಿಗಳ ಬಗ್ಗೆಯೂ ಪ್ರಸ್ತಾಪಿಸಿ, "ಸಾವಿರಾರು ಮತದಾರರ ಭಾವಚಿತ್ರವುಳ್ಳ ಕಾರ್ಡುಗಳನ್ನು ವಶಪಡಿಸಿಕೊಳ್ಳಲಾಗಿದೆ. ನೀವು (ಮತದಾರರು) ಜಾಗೃತರಾಗಿರಿ. ಇಂತಹ ಪಾಪ ಕೃತ್ಯಗಳನ್ನು ಪ್ರಜಾಪ್ರಭುತ್ವದ ಉತ್ಸವದ ವೇಳೆಯಲ್ಲಿ (ಚುನಾವಣೆ) ನಡೆಯಲು ಬಿಡಬಾರದು" ಎಂದು ಹೇಳಿದ್ದರು.

ಆದರೆ ಮುಂದೇನಾಯಿತು? ಕೇವಲ ಒಂದೇ ವರ್ಷದ ಅಂತರದಲ್ಲಿ ಅಂದರೆ 2019ರಲ್ಲಿ ಬಿಜೆಪಿಯೇ ಮುನಿರತ್ನ ಅವರನ್ನು ಆಪರೇಷನ್ ಕಮಲದ ಮೂಲಕ ಸೆಳೆದುಕೊಂಡು, ಅವರಿಗೆ ಮತ್ತೆ ಅದೇ ರಾಜರಾಜೇಶ್ವರಿ ಕ್ಷೇತ್ರದಿಂದ ಚುನಾವಣೆಗೆ ಸ್ಪರ್ಧಿಸಲು ಟಿಕೆಟ್ ನೀಡಿತು!

ಅಚ್ಚರಿಯಿಲ್ಲ. ಈಗ ಮುನಿರತ್ನರವರು ಅತ್ಯಂತ ಆತ್ಮವಿಶ್ವಾಸದಿಂದ ತಮ್ಮ ವಿರೋಧಿಗಳಿಗೆ ಹಾಗೂ ಗುತ್ತಿಗೆದಾರರಿಗೆ ಎಚ್ಚರಿಕೆ ನೀಡಿದ್ದಾರೆ– ರಾಜ್ಯಪಾಲರು ಮತ್ತು ಲೋಕಾಯುಕ್ತರ ಮುಂದೆ ನನ್ನ ಮೇಲಿನ ಆರೋಪಗಳಿಗೆ ಪುರಾವೆ ಒದಗಿಸಿ, ಇಲ್ಲವೆ ಕ್ಷಮೆ ಯಾಚಿಸಿ, ತಪ್ಪಿದರೆ 50 ಕೋಟಿ ರೂಪಾಯಿಗಳ ಮಾನನಷ್ಟ ಮೊಕದ್ದಮೆ ಎದುರಿಸಿ!

ಅಯ್ಯೋ, ಪ್ಯಾದೆಯಾದ ಕಾಂಗ್ರೆಸ್ಸೇ, ಪ್ಯಾದೆಯಾದ ಬಿಜೆಪಿಯೇ ಹಾಗೂ ಪ್ಯಾದೆಯಾದ ಕರ್ನಾಟಕ ರಾಜ್ಯ ಗುತ್ತಿಗೆದಾರರ ಸಂಘವೇ. ಏಕೆಂದರೆ ಮುನಿರತ್ನರವರು ಕಾಂಗ್ರೆಸ್ ಹಾಗೂ ಬಿಜೆಪಿ ಶಾಸಕರಾಗಿದ್ದವರು. ಅಷ್ಟು ಮಾತ್ರವಲ್ಲ, ಕರ್ನಾಟಕ ರಾಜ್ಯ ಗುತ್ತಿಗೆದಾರರ ಸಂಘದ ಸದಸ್ಯರೂ ಆಗಿದ್ದವರು. ಆದ್ದರಿಂದ ಅವರಿಗೆ ಎಲ್ಲರ ಹುಳುಕು ತಿಳಿದಿದೆ. ಹಾಗಾಗಿ ಮುನಿರತ್ನರವರನ್ನು ಮುಟ್ಟಲು ಯಾರಿಗೂ ಸಾಧ್ಯವಿಲ್ಲ.

"ಕುದುರೆ ವ್ಯಾಪಾರದಲ್ಲಿ ನಿರತವಾದಾಗ ವಿಭಿನ್ನ ಸಿದ್ಧಾಂತಗಳನ್ನು ಹೊಂದಿರುವ ಎರಡು ರಾಷ್ಟ್ರೀಯ ರಾಜಕೀಯ ಪಕ್ಷಗಳು ನಮಗೆ ಕಾಣಬರುತ್ತವೆ. ಆದರೆ ಭ್ರಷ್ಟಾಚಾರದ ವಿಚಾರದಲ್ಲಿ ಇವು ಒಟ್ಟಿಗಿದ್ದು ಕಾನೂನು ಕ್ರಮವನ್ನು ಜರುಗಿಸುವುದನ್ನು ತಡೆಯುತ್ತವೆ".

ಬಿಜೆಪಿಯು "ಕಾಂಗ್ರೆಸ್ ಮುಕ್ತ ಭಾರತ"ವನ್ನು ಬಯಸುವ ಬದಲು "ಭ್ರಷ್ಟಾಚಾರ ಮುಕ್ತ ಭಾರತ" ಬಯಸಿದರೆ ಅದೊಂದು ಉದಾತ್ತವಾದ ಬಯಕೆಯಾಗುವುದು. ಏಕೆಂದರೆ ಜನರು ಕಡಿಮೆ ಹಂತದ ಭ್ರಷ್ಟಾಚಾರದ ನಿರ್ಮೂಲನೆಯನ್ನು ಬಯಸುತ್ತಾರೆ. ಇದೇ ಅವರ "ಮನ್ ಕಿ ಬಾತ್".

ಸುಮಾರು ಜನರ ಹಾಗೆ ನನ್ನ ಅನಿಸಿಕೆಯೂ ಏನೆಂದರೆ ಈ ಎರಡು ರಾಷ್ಟ್ರೀಯ ಪಕ್ಷಗಳ (ಕಾಂಗ್ರೆಸ್ ಮತ್ತು ಬಿಜೆಪಿ) ನಡುವೆ ಪರಸ್ಪರರ ಭ್ರಷ್ಟಾಚಾರವನ್ನು ರಕ್ಷಿಸಿಕೊಳ್ಳುವ ಗುಪ್ತ ಒಪ್ಪಂದವಾಗಿದೆಯೇ? ಏಕೆಂದರೆ ಇವು ಕೇವಲ ಆರೋಪ ಮಾಡುತ್ತವೆಯೇ ಹೊರತು, ಒಬ್ಬೊಬ್ಬರ ಮೇಲೆ ಯಾವತ್ತೂ ಕಾನೂನು ಕ್ರಮವನ್ನು ಜರುಗಿಸುವುದಿಲ್ಲ.

ಆದ್ದರಿಂದಲೇ ನಾನು 100% ಭರವಸೆಯೊಂದಿಗೆ ಹೇಳುತ್ತೇನೆ, ಈ 40% ಕಮಿಷನ್ ವಿಚಾರವು ಚುನಾವಣೆ ಮುಗಿದ ನಂತರ, 1000% ಮುಚ್ಚಿ ಹೋಗುತ್ತದೆ. ಕಾಂಗ್ರೆಸ್‌ಗೆ 100% ಬಹುಮತ ಬಂದರೂ ಕೂಡ.

ಆದ್ದರಿಂದ, ಮತದಾರರೇ ಈ 100% ನಾಟಕವನ್ನು ಆಸ್ವಾದಿಸಿ, ಹಾಗೂ ಮತದಾನ ಮಾಡುವುದಕ್ಕಿಂತ ಮುಂಚೆ 1000 ಬಾರಿ ಯೋಚಿಸಿ. ■

e-mail: vikram@starofmysore.com

ಶಿಕ್ಷಕರ ನೇಮಕಾತಿಗೆ ಪುಟಾಣಿಗಳ ಪ್ರತಿಭಟನೆ



ಮೈಸೂರು,ಸೆ.13(ಎಂಕೆ)– ನಮ್ಮ ಶಾಲೆಗೆ ಶಿಕ್ಷಕರು ಬೇಕಾಗಿದ್ದಾರೆ... ಕೂಡಲೇ ನೇಮಿಸಿ ಎಂದು ಪುಟಾಣಿ ವಿದ್ಯಾರ್ಥಿಗಳೇ ರಸ್ತೆಗಿಳಿದು ಪ್ರತಿಭಟನೆ ನಡೆಸುತ್ತಿದ್ದಾರೆ.

ಹೆಚ್.ಡಿ.ಕೋಟೆ ತಾಲೂಕಿನ ರಾಜೇಗೌಡನಹುಂಡಿಯ ಸರ್ಕಾರಿ ಶಾಲೆ ವಿದ್ಯಾರ್ಥಿಗಳು ಕಳೆದ 3 ದಿನಗಳಿಂದ ಶಿಕ್ಷಕರನ್ನು ನೇಮಿಸಿ ಎಂದು ಶಾಲೆಯ ಮುಂದೆ ಪ್ರತಿಭಟನೆ ನಡೆಸುತ್ತಿದ್ದು, ವಿದ್ಯಾರ್ಥಿಗಳ ಪ್ರತಿಭಟನೆಗೆ ಪೋಷಕರು ಬೆಂಬಲ ನೀಡುತ್ತಿದ್ದಾರೆ. 1ರಿಂದ 7 ತರಗತಿವರೆಗೆ 120ಕ್ಕೂ ಹೆಚ್ಚು ವಿದ್ಯಾರ್ಥಿಗಳಿರುವ ಶಾಲೆಯಲ್ಲಿ ಕೇವಲ ಇಬ್ಬರು ಶಿಕ್ಷಕರಿದ್ದು, ವಿದ್ಯಾರ್ಥಿಗಳು ಸರಿಯಾಗಿ ಪಾಠವಿಲ್ಲದೆ ಕಾಲ ಕಳೆಯುವಂತಾಗಿದೆ. ಇನ್ನೂ 5 ಮಂದಿ ಶಿಕ್ಷಕರ ಅಗತ್ಯವಿದ್ದು, ಕೂಡಲೇ ನೇಮಿಸುವಂತೆ ವಿದ್ಯಾರ್ಥಿಗಳು ಆಗ್ರಹಿಸಿದ್ದಾರೆ. ಶಿಕ್ಷಕರನ್ನು ನೇಮಕ ಮಾಡದಿದ್ದರೆ ನೂರಾರು ಕನಸು ಕಟ್ಟಿರುವ ಮಕ್ಕಳ ಭವಿಷ್ಯದ ಗತಿ ಏನೂ ಎಂಬ ಆತಂಕ ಎದುರಾಗಿದೆ. ಅಕ್ಕ–ಪಕ್ಕದ ಗ್ರಾಮಗಳಿಂದ ವಿದ್ಯಾರ್ಥಿಗಳು ಇಲ್ಲಿಗೆ ಆಗಮಿಸಿ ವಿದ್ಯಾಭ್ಯಾಸ ಪಡೆಯುತ್ತಿದ್ದಾರೆ. ಶಿಕ್ಷಕರನ್ನು ನೇಮಕ ಮಾಡದಿದ್ದರೆ ವಿದ್ಯಾರ್ಥಿಗಳ ಜೊತೆಗೂಡಿ ಪ್ರತಿಭಟನೆ ನಡೆಸಲಾಗುವುದು ಎಂದು ಕೆಲ ಗ್ರಾಮಸ್ಥರು ಎಚ್ಚರಿಸಿದ್ದಾರೆ.

ಮಕ್ಕಳ ಕಳ್ಳರು ಬಂದಿದ್ದಾರೆ ವದಂತಿ: ಅಪರಿಚಿತರ ಮೇಲೆ ಹಲ್ಲೆ ಸಲ್ಲದು

ಮೈಸೂರು, ಸೆ.13(ಎಂಕೆ)– ಇತ್ತೀಚಿನ ದಿನಗಳಲ್ಲಿ ಸಾಮಾಜಿಕ ಜಾಲತಾಣಗಳಲ್ಲಿ 'ಮಕ್ಕಳ ಕಳ್ಳರು ಬಂದಿದ್ದಾರೆ' ಎಂಬ ವದಂತಿಗಳು ಹರಿದಾಡುತ್ತಿದೆ. ಆದ್ದರಿಂದ ಸಂಶಯಾಸ್ಪದ ವ್ಯಕ್ತಿಗಳು ಕಂಡು ಬಂದಲ್ಲಿ ಕೂಡಲೇ 112 ಸಹಾಯವಾಣಿಗೆ ಕರೆ ಮಾಡಿ ಮಾಹಿತಿ ನೀಡುವಂತೆ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಚೇತನ್ ಸೂಚಿಸಿದ್ದಾರೆ. ಜಿಲ್ಲೆಯ ಹುಲ್ಲಹಳ್ಳಿ ಪೊಲೀಸ್ ಠಾಣೆ ವ್ಯಾಪ್ತಿಯ ಕುರಿಹುಂಡಿಯಲ್ಲಿ ಅಲೆಮಾರಿಗಳನ್ನು ಕಂಡ ಗ್ರಾಮಸ್ಥರು ಮಕ್ಕಳ ಕಳ್ಳರೆಂದು ಅನುಮಾನಗೊಂಡು ತಡೆದಿದ್ದು, ಕೂಡಲೇ ಹುಲ್ಲಹಳ್ಳಿ ಪೊಲೀಸ್ ಅಧಿಕಾರಿ ಮತ್ತು ಸಿಬ್ಬಂದಿ ಸ್ಥಳಕ್ಕೆ ಧಾವಿಸಿ ವಿಚಾರಿಸಿದಾಗ ಇವರು ಮಕ್ಕಳ ಕಳ್ಳರಾಗಿರುವುದಿಲ್ಲ. ಆದ್ದರಿಂದ ಸಾರ್ವಜನಿಕರಿಗೆ ತಮ್ಮ ಗ್ರಾಮ ಮತ್ತು ಸುತ್ತಮುತ್ತಲಿನ ಹಳ್ಳಿಗಳಲ್ಲಿ ಸಂಶಯಾಸ್ಪದ ವ್ಯಕ್ತಿಗಳು ಕಂಡು ಬಂದಲ್ಲಿ ಕೂಡಲೇ 112 ಸಹಾಯವಾಣಿಗೆ ಕರೆ ಮಾಡಿ, ಪೊಲೀಸರಿಗೆ ಮಾಹಿತಿ ನೀಡಿದಲ್ಲಿ ಘಟನಾ ಸ್ಥಳಕ್ಕೆ ತಮ್ಮ ಸಿಬ್ಬಂದಿ ಆಗಮಿಸಿ ಕೂಲಂಕಷವಾಗಿ ವಿಚಾರಿಸಲಿದ್ದಾರೆ. ಸಾರ್ವಜನಿಕರು ಯಾವುದೇ ಕಾರಣಕ್ಕೂ ಅಮಾಯಕ ವ್ಯಕ್ತಿಗಳಿಗೆ ತಡೆ ಒಡ್ಡುವುದಾಗಲಿ, ಹಲ್ಲೆ ಮಾಡುವುದಾಗಲಿ ಮಾಡಿದಲ್ಲಿ, ಕಾನೂನು ಕ್ರಮ ಕೈಗೊಳ್ಳಲಾಗುವುದು. ಮಕ್ಕಳ ಕಳ್ಳತನದ ಬಗ್ಗೆ ಸಾಮಾಜಿಕ ಜಾಲತಾಣಗಳಲ್ಲಿ ಸುಳ್ಳು ಮಾಹಿತಿಗಳನ್ನು ಹರಡುವವರ ಮೇಲೆ ಕ್ರಮ ಕೈಗೊಳ್ಳಲಾಗುವುದೆಂದು ಎಚ್ಚರಿಸಿದ್ದಾರೆ.

Printed by T.S. Gopinath, Published by M. Govinde Gowda on behalf of Academy Newspapers Private Limited, 15-C Industrial 'A' Layout, Bannimantap, Mysore-570 015 and Printed at Academy Newspapers Private Limited, 15-C Industrial 'A' Layout, Bannimantap, Mysore-570 015 and Published at 15-C Industrial 'A' Layout, Bannimantap, Mysore-570 015, Editor: M. Govinde Gowda Ph: 2496520 / 2496521 / 2496526 / 2496527 / 2496528. Fax: 0821-2496525. CITY OFFICES: Visveswaraya Building, III Floor, K.R. CIRCLE, MYSORE-570 001, Ph: 2431774 and No. 114, D. DEVARAJ URS ROAD (Opposite Big Bus), MYSORE-570 001. Ph: 2428695. RNI Reg. No. 36581 / 1980 E-mail address: news@mysurumithra.com For advertisements: ad@mysurumithra.com, website: www.mysurumithra.com

ಮೈಸೂರು ಮಿತ್ರ

ಬುಧವಾರ 14 ಸೆಪ್ಟೆಂಬರ್ 2022



ಖಾಸಗಿ ದರ್ಬಾರ್, ಇನ್ನಿತರೆ ಕಾರ್ಯ ನಿಮಿತ್ತ

ಐದು ದಿನ ಅರಮನೆ ಪ್ರವೇಶಕ್ಕೆ ನಿರ್ಬಂಧ

ಸೆ.20, ಸೆ.26, ಅ.4, ಅ.20 ರಂದು ಅರ್ಧ ದಿನ, ಅ.5ರಂದು ದಿನವಿಡೀ ಅರಮನೆ ಪ್ರವೇಶ ನಿಷಿದ್ಧ



ಮೈಸೂರು,ಸೆ.13(ಎಂಟಿವೈ)– ನಾಡಹಬ್ಬ ದಸರಾ ಹಿನ್ನೆಲೆಯಲ್ಲಿ ರಾಜವಂಶಸ್ಥರ ವಿವಿಧ ಧಾರ್ಮಿಕ ಕಾರ್ಯ ನಿಮಿತ್ತ ಮೈಸೂರು ಅರಮನೆಗೆ 5 ದಿನ ಪ್ರವಾಸಿಗರ ಪ್ರವೇಶ ನಿರ್ಬಂಧಿಸಲಾಗಿದೆ. ನಾಲ್ಕು ದಿನ ಅರ್ಧ ದಿನ, ಒಂದು ದಿನ ದಿನವಿಡೀ ಅರಮನೆ ವೀಕ್ಷಣೆಗೆ ಪ್ರವಾಸಿಗರಿಗೆ ನಿರ್ಬಂಧಿಸಲಾಗಿದೆ. ಈ ಸಂಬಂಧ ಅರಮನೆ ಆಡಳಿತ ಮಂಡಳಿ ಪ್ರವಾಸಿಗರ ಪ್ರವೇಶ ನಿಷೇಧ ಕುರಿತಂತೆ ಆದೇಶ ಹೊರಡಿಸಿದೆ.

ಸಿಂಹಾಸನ ಜೋಡಣೆ, ವಿಸರ್ಜನೆ ದಿನ ಅರ್ಧ ದಿನ: ನವರಾತ್ರಿ ವೇಳೆ ಅರಮನೆ ಒಳಗೆ ರಾಜವಂಶಸ್ಥರು ನಡೆಸುವ ಖಾಸಗಿ ದರ್ಬಾರ್ ಸೇರಿದಂತೆ ಕೆಲವು ಧಾರ್ಮಿಕ ಕಾರ್ಯಗಳಿಗೆ ಅಡಚಣೆಯಾಗುವುದನ್ನು ತಡೆಗಟ್ಟಲು ಪ್ರವಾಸಿಗರ ಪ್ರವೇಶ ನಿರ್ಬಂಧಿಸಲಾಗಿದೆ. ಸೆ.20ರಂದು ದರ್ಬಾರ್ ಹಾಲ್‌ನಲ್ಲಿ ಚಿನ್ನದ ಸಿಂಹಾಸನ ಹಾಗೂ ಬೆಳ್ಳಿಯ ಭದ್ರಾಸನ ಜೋಡಣೆ ಮಾಡುವುದರಿಂದ ಅಂದು ಬೆಳಗ್ಗೆ 10ರಿಂದ ಮಧ್ಯಾಹ್ನ 1 ಗಂಟೆವರೆಗೆ ಪ್ರವಾಸಿಗರಿಗೆ ಅರಮನೆ ಪ್ರವೇಶಿಸಲು ಅವಕಾಶ ನಿರಾಕರಿಸಲಾಗಿದೆ. ಮಧ್ಯಾಹ್ನ 1.15ರ ನಂತರ ಪ್ರವಾಸಿಗರು ಅರಮನೆ ಪ್ರವೇಶಿಸಬಹುದಾಗಿದೆ.

ಸೆ.26ರಂದು ಖಾಸಗಿ ದರ್ಬಾರ್ ನಡೆಯುವುದರಿಂದ ಬೆಳಗ್ಗೆ 10.30ರಿಂದ ಮಧ್ಯಾಹ್ನ 1.30ರವರೆಗೆ, ಅ.4ರಂದು ಆಯುಧ ಪೂಜೆ ನಿಮಿತ್ತ ಬೆಳಗ್ಗೆ 10ರಿಂದ ಮಧ್ಯಾಹ್ನ 2 ಗಂಟೆವರೆಗೆ, ಅ.5ರಂದು ಜಂಬೂಸವಾರಿ ದಿನ ದಿನವಿಡೀ ಹಾಗೂ ಸಿಂಹಾಸನ ವಿಸರ್ಜನೆಯ ದಿನವಾದ ಅ.20ರಂದು ಬೆಳಗ್ಗೆ 10 ರಿಂದ ಮಧ್ಯಾಹ್ನ 1 ಗಂಟೆವರೆಗೆ ಪ್ರವಾಸಿಗರಿಗೆ ಅರಮನೆ ಪ್ರವೇಶಕ್ಕೆ ನಿರ್ಬಂಧ ಹೇರಲಾಗಿದೆ. ಈ ಸಂಬಂಧ ಅರಮನೆಯ ಎಲ್ಲಾ ದ್ವಾರಗಳಲ್ಲೂ ಫಲಕ ಹಾಕಲಾಗಿದೆ.

ಮಹಿಳೆಯರು, ಮಕ್ಕಳಿಗೂ ಭರಪೂರ ಮನರಂಜನೆ

ಮಹಿಳಾ ಮತ್ತು ಮಕ್ಕಳ ದಸರಾ ವತಿಯಿಂದ ವಿಭಿನ್ನ ಕಾರ್ಯಗಳ ಹೊನಲು



2 ದಿನ ಮಕ್ಕಳ ದಸರಾ...
ಮೈಸೂರಿನ ಜಗನ್ಮೋಹನ ಅರಮನೆಯಲ್ಲಿ ಸೆ.29 ಮತ್ತು 30 ರಂದು ಮಕ್ಕಳ ದಸರಾ ನಡೆಯಲಿದೆ. ಮಕ್ಕಳಿಂದ 24 ಬಗೆಯ ಸಾಂಸ್ಕೃತಿಕ ಕಾರ್ಯಕ್ರಮಗಳು ನಡೆಯಲಿವೆ. ಸರ್ಕಾರಿ ಶಾಲೆಯ ಮಕ್ಕಳಿಂದ ಸುಗಮ ಸಂಗೀತ, ಕರ್ನಾಟಕ ಡ್ಯಾನ್ಸ್, ಸರಿಗಮಪ, ಯುವ ವಿಜ್ಞಾನಿ, ಯುವ ಕ್ರೀಡಾಪಟುಗಳಾಗಿರುವ ಮಕ್ಕಳು ಭಾಗವಹಿಸಲಿದ್ದಾರೆ.

> “ಎಲ್ಲಾ ಕಲೆಯನ್ನು ಪ್ರೋತ್ಸಾಹಿಸುವುದರ ಜೊತೆಗೆ ಮಹಿಳೆಯರಿಗೆ, ಹಿರಿಯ ನಾಗರಿಕರು, ವಿಕಲಚೇತನರು ಹಾಗೂ ಮಂಗಳಮುಖಿಯರನ್ನು ಒಳಗೊಂಡಂತೆ ಮಹಿಳಾ ಮತ್ತು ಮಕ್ಕಳ ದಸರಾ ನಡೆಯಲಿದೆ. ಈಗಾಗಲೇ 5 ದಿನಗಳು ನಡೆಯುವ ಕಾರ್ಯಕ್ರಮಗಳ ಪಟ್ಟಿ ಅಂತಿಮವಾಗಿದ್ದು, ಪೂರ್ವ ತಯಾರಿ ನಡೆಸಲಾಗುತ್ತಿದೆ.
> – ಪ್ರೇಮ್ ಕುಮಾರ್, ಉಪ ವಿಶೇಷಾಧಿಕಾರಿ, ಮಹಿಳಾ ಮತ್ತು ಮಕ್ಕಳ ದಸರಾ ಉಪಸಮಿತಿ

ಮೋಹನ್ ಕಾಯಕ

ಮೈಸೂರು, ಸೆ.13–ಮಹಿಳೆಯರು ಹಾಗೂ ಮಕ್ಕಳ ಸಡಗರ–ಸಂಭ್ರಮದ ನಡುವೆ ಹಾಸ್ಯದ ಹೊನಲು ಹರಿಯಲಿದೆ...!

ವಿಶ್ವವಿಖ್ಯಾತ ಮೈಸೂರು ದಸರಾ ಮಹೋತ್ಸವದ 'ಮಹಿಳಾ ಮತ್ತು ಮಕ್ಕಳ ದಸರಾ' ಆಚರಣೆಗೆ ಅಣಿಯಾಗುತ್ತಿದ್ದು, ಹತ್ತು–ಹಲವು ಕಾರ್ಯಕ್ರಮಗಳ ಮೂಲಕ ಮಹಿಳೆಯರು, ಮಕ್ಕಳು, ವಿಶೇಷಚೇತನರು ಹಾಗೂ ಲಿಂಗತ್ವ ಅಲ್ಪಸಂಖ್ಯಾತರನ್ನು (ಮಂಗಳಮುಖಿಯರು) ಒಂದೇ ವೇದಿಕೆಯಲ್ಲಿ ಸೇರಿಸಿ, ಪ್ರೋತ್ಸಾಹಿಸುವ ಮಹತ್ವದ ಕಾರ್ಯಕ್ಕೆ ಸಜ್ಜಾಗಲಾಗುತ್ತಿದೆ.

ನಾಡಹಬ್ಬದ ಪ್ರಮುಖ ಆಕರ್ಷಣೆಗಳಲ್ಲಿ ಒಂದಾದ 'ಮಹಿಳಾ ಮತ್ತು ಮಕ್ಕಳ' ದಸರಾ ನಗರದ ಜೆ.ಕೆ.ಮೈದಾನದಲ್ಲಿ 5 ದಿನಗಳ ಕಾಲ ನಡೆಯಲಿದ್ದು, ಸಾಂಸ್ಕೃತಿಕ ಕಾರ್ಯಕ್ರಮಗಳ ಜೊತೆಗೆ ವಿವಿಧ ಬಗೆಯ ಸ್ಪರ್ಧೆಗಳನ್ನು ಆಯೋಜಿಸಲಾಗುವುದು. ಅಲ್ಲದೆ ಫ್ಯಾಷನ್ ಶೋ, ನಾಟಕ ಪ್ರದರ್ಶನ, ಮಿಮಿಕ್ರಿ, ಚುಟುಕು ಹಾಸ್ಯ ಪ್ರಮುಖ ಆಕರ್ಷಣೆಯಾಗಿದ್ದು, ಮಹಿಳಾ ಸ್ವಯಂ ಉದ್ಯೋಗಿಗಳು ವ್ಯಾಪಾರ–ವಹಿವಾಟು ನಡೆಸಲು ಅವಕಾಶ ನೀಡಲಾಗುವುದು.

ದಸರಾ ಉದ್ಘಾಟನೆಯ ಮರುದಿನ ಅಂದರೆ ಸೆ.27 ರಂದು ಜಗತ್ ಪ್ರಸಿದ್ಧ ಮೈಸೂರು ಅರಮನೆ ಆವರಣದಲ್ಲಿ 'ರಂಗೋಲಿ ಚಿತ್ತಾರ'ದ ಮೂಲಕ ಮಹಿಳಾ ಮತ್ತು ಮಕ್ಕಳ ದಸರಾ ಚಾಲನೆ ಪಡೆಯಲಿದ್ದು, ಜೆ.ಕೆ.ಮೈದಾನದಲ್ಲಿರುವ ಅಲುಮ್ನಿ ಸಭಾಂಗಣದಲ್ಲಿ ಉದ್ಘಾಟನೆಯಾಗಲಿದೆ. ಅಂದು ಬೆಳಗ್ಗೆ 7.30 ರಿಂದ 9 ಗಂಟೆಯವರೆಗೆ ಅರಮನೆ ಆವರಣದಲ್ಲಿ ಮಹಿಳೆಯರಿಗಾಗಿ 'ರಂಗೋಲಿ ಸ್ಪರ್ಧೆ' ನಡೆಯಲಿದೆ. ಬಳಿಕ 11 ಗಂಟೆಗೆ ಗಣ್ಯರಿಂದ ಮಹಿಳಾ ಮತ್ತು ಮಕ್ಕಳ ದಸರಾ ಉದ್ಘಾಟನೆಯಾಗಲಿದೆ.

ನಂತರ ಸರ್ಕಾರಿ ಬಾಲಮಂದಿರಗಳಲ್ಲಿರುವ ಮಕ್ಕಳಿಂದ ಸಾಂಸ್ಕೃತಿಕ ಮೆರವಣಿಗೆ, ಕೊಡವ ಸಮಾಜದ ಮಹಿಳೆಯರಿಂದ ಸಾಂಪ್ರದಾಯಿಕ ನೃತ್ಯ ಪ್ರದರ್ಶನ, ಪ್ರತಿಷ್ಠಿತ ಅಪೋಲೋ ಬಿಜಿಎಸ್ ಆಸ್ಪತ್ರೆಯ ಮಹಿಳಾ ವೈದ್ಯರಿಂದ 'ರವಿವರ್ಮ ಚಿತ್ರಕಲೆ' ಆಧಾರಿತ ಫ್ಯಾಷನ್ ಶೋ ಹಾಗೂ ಜಾನಪದ ಮತ್ತು ಭಾವಗೀತೆಗಳ ಸುಗಮ ಸಂಗೀತ ಕಾರ್ಯಕ್ರಮಗಳು ನಡೆಯಲಿವೆ.

ಸೆ.28 ರಂದು ಮಹಿಳೆಯರಿಗೆ ಹಾಗೂ ಲಿಂಗತ್ವ ಅಲ್ಪಸಂಖ್ಯಾತರಿಗೆ ವಿವಿಧ ಸ್ಪರ್ಧೆಗಳ ಜೊತೆಗೆ ಖ್ಯಾತ ಹಾಸ್ಯ ಕಲಾವಿದ ಗೋಪಿ ಮತ್ತು ತಂಡದವರಿಂದ ಮಿಮಿಕ್ರಿ ಹಾಗೂ ಮಕ್ಕಳ ನಾಟಕ ಪ್ರದರ್ಶನ ಇರಲಿದೆ. ಮಹಿಳೆಯರಿಗಾಗಿ ರಾಗಿ ಬಿಸುವ ಸ್ಪರ್ಧೆ, ವೇಷಭೂಷಣ ಹಾಗೂ ಒಲೆ ರಹಿತ ಅಡುಗೆ ಮಾಡುವ ಸ್ಪರ್ಧೆ ನಡೆದರೆ, ಮಂಗಳಮುಖಿಯರಿಗೆ ಮಡಿಕೆ ಹೊಡೆಯುವುದು ಮತ್ತು ಲೆಮನ್ ಅಂಡ್ ಸ್ಪೂನ್ ಸ್ಪರ್ಧೆಗಳನ್ನು ನಡೆಸಲಾಗುತ್ತದೆ.

ಅಂಗನವಾಡಿ ಕಾರ್ಯಕರ್ತೆಯರ ದಿನ: ಸೆ.29ರಂದು ಅಂಗನವಾಡಿ ಕಾರ್ಯಕರ್ತೆಯರು ಗೆಲುವಿಗೆ ಪೈಪೋಟಿ ನಡೆಸಿದರೆ, ಹಾಸ್ಯಗಾರ್ತಿ ಸುಧಾ ಬರಗೂರು ಅವರ ಚುಟುಕು ಹಾಸ್ಯ ಮೋಡಿ ಮಾಡಲಿದೆ. ನೀರು ತುಂಬಿದ ಬಿಂದಿಗೆ ಎತ್ತುಕೊಂಡು ಓಡುವ ಸ್ಪರ್ಧೆ, ಬಲೂನ್ ಊದುವುದು, ಗೀತ–ಗಾಯನ, ಕೇಶ ವಿನ್ಯಾಸ ಸ್ಪರ್ಧೆಗಳನ್ನು ಅಂಗನವಾಡಿ ಕಾರ್ಯಕರ್ತೆಯರಿಗಾಗಿ ಆಯೋಜಿಸಲಾಗುವುದು.

ಚಿಣ್ಣರ ದಸರಾ: ಅಂಗನವಾಡಿ ಕೇಂದ್ರಗಳಲ್ಲಿನ ಪುಟಾಣಿ ಮಕ್ಕಳಿಗಾಗಿ ಚಿಣ್ಣರ ದಸರಾ ಹಮ್ಮಿಕೊಳ್ಳಲಾಗಿದ್ದು, ಸರಿಗಮಪ ಖ್ಯಾತಿಯ ಪುಟಾಣಿ ಜ್ಞಾನೇಶ್ ಚಿಣ್ಣರ ದಸರಾವನ್ನು ಉದ್ಘಾಟಿಸಲಿದ್ದಾರೆ. ವೇಷಭೂಷಣ ಸ್ಪರ್ಧೆ, ವಿವಿಧ ವಿನ್ಯಾಸಗಳಲ್ಲಿ ತರಕಾರಿ ಕತ್ತರಿಸುವ ಸ್ಪರ್ಧೆ ಮೂಲಕ ಎಲ್ಲಡೆ ಚಿಣ್ಣರ ಕಲರವ ನಡೆಯಲಿದೆ. ಬಳಿಕ ಮಜಾಭಾರತ ಖ್ಯಾತಿಯ ರಾಘವೇಂದ್ರ ಮತ್ತು ತಂಡದವರಿಂದ ಹಾಸ್ಯ ಕಾರ್ಯಕ್ರಮ ಎಲ್ಲರನ್ನು ರಂಜಿಸಲಿದೆ.

ಕಡೇ ದಿನವಾದ ಅ.1ರಂದು ಹಿರಿಯ ಮಹಿಳಾ ನಾಗರಿಕರು ಹಾಗೂ ವಿಶೇಷಚೇತರಿಗಾಗಿ ಹಲವು ಆಟೋಟಗಳನ್ನು ಆಯೋಜಿಸಲಾಗಿದೆ. ವೇಗದ ವಾಕಿಂಗ್, ಬಕೆಟ್ ಇನ್ ದ ಬಾಲ್, ಏಕಪಾತ್ರ ಅಭಿನಯ ಸೇರಿದಂತೆ ಇನ್ನಿತರ ಸ್ಪರ್ಧೆಗಳ ಜೊತೆಗೆ ವಿಶೇಷಚೇತನ ಮಕ್ಕಳಿಂದ ಸಾಂಸ್ಕೃತಿಕ ಕಾರ್ಯಕ್ರಮಗಳು ಜರುಗಲಿವೆ.

ಪ್ರದರ್ಶನ ಮತ್ತು ಮಾರಾಟ: ಸ್ತ್ರೀ ಶಕ್ತಿ ಸ್ವಸಹಾಯ ಸಂಘಗಳ ಮಹಿಳಾ ಉದ್ಯಮಿಗಳನ್ನು ಪ್ರೋತ್ಸಾಹಿಸುವ ನಿಟ್ಟಿನಲ್ಲಿ ಸುಮಾರು 42 ಸ್ಟಾಲ್‌ಗಳನ್ನು ನಿರ್ಮಾಣ ಮಾಡಲಿದ್ದು, ಹಲವು ಬಗೆಯ ಕರಕುಶಲ ಹಾಗೂ ಸೌಂದರ್ಯವರ್ಧಕಗಳ ಪ್ರದರ್ಶನ ಮತ್ತು ಮಾರಾಟಕ್ಕೆ ಆದ್ಯತೆ ನೀಡಲಾಗುವುದು. ಈ ಮೂಲಕ ಮಹಿಳೆಯರು ಸ್ವಾವಲಂಬಿಗಳಾಗಿ ಬದುಕುವುದಕ್ಕೆ ಪ್ರೋತ್ಸಾಹ ನೀಡಲಾಗುವುದು ಎಂದು ಮಹಿಳಾ ಮತ್ತು ಮಕ್ಕಳ ದಸರಾ ಉಪಸಮಿತಿ ಉಪ ವಿಶೇಷಾಧಿಕಾರಿ ಹಾಗೂ ಜಿಪಂ ಉಪ ಕಾರ್ಯದರ್ಶಿ(ಆಡಳಿತ) ಪ್ರೇಮ್ ಕುಮಾರ್ 'ಮೈಸೂರು ಮಿತ್ರ'ನಿಗೆ ತಿಳಿಸಿದರು.

ಮೈಸೂರಲ್ಲಿ ರಸ್ತೆಗಿಳಿದ ಮೇಯರ್ ಶಿವಕುಮಾರ್

ನಾಗರಿಕರ ಸಮಸ್ಯೆಗಳ ಪರಿಹಾರಕ್ಕೆ ಅಧಿಕಾರಿಗಳಿಗೆ ಸ್ಥಳದಲ್ಲೇ ತಾಕೀತು

- ಸಣ್ಣಪುಟ್ಟ ಸಮಸ್ಯೆ ಪರಿಹರಿಸದ ಸಿಬ್ಬಂದಿಗೆ ಎಚ್ಚರಿಕೆ
- ದಸರಾ ವೇಳೆ ಪ್ರವಾಸಿಗರಿಗೆ ಯಾವುದೇ ತೊಂದರೆ ಆಗದಂತೆ ಕ್ರಮ ಕೈಗೊಳ್ಳಲು ಸೂಚನೆ



ಮೈಸೂರು, ಸೆ.13(ಎಂಟಿವೈ)– ದಸರಾ ಸಮೀಪಿಸುತ್ತಿರುವ ಹಿನ್ನೆಲೆಯಲ್ಲಿ ಮಂಗಳವಾರ ಮೇಯರ್ ಶಿವಕುಮಾರ್ ಅಧಿಕಾರಿಗಳೊಂದಿಗೆ ಮೈಸೂರಿನ ವಿವಿಧೆಡೆ ಪರಿಶೀಲನೆ ನಡೆಸಿ, ನಾಗರಿಕ ಸಮಸ್ಯೆಗಳ ತ್ವರಿತಗತಿಯಲ್ಲಿ ಬಗೆಹರಿಸಿ, ದಸರಾ ಮಹೋತ್ಸವಕ್ಕೆ ಬರುವ ಪ್ರವಾಸಿಗರಿಗೆ ಯಾವುದೇ ತೊಂದರೆಯಾಗದಂತೆ ಕ್ರಮ ಕೈಗೊಳ್ಳುವಂತೆ ಸೂಚಿಸಿದರು.

ಇಂದು ಬೆಳಗ್ಗೆ ಅಧಿಕಾರಿಗಳೊಂದಿಗೆ ಮೈಸೂರಿನ ವಿವಿಧೆಡೆ ಭೇಟಿ ನೀಡಿ, ಸ್ವಚ್ಛತೆ, ರಸ್ತೆ ಗುಂಡಿ ಮುಚ್ಚುವಿಕೆ, ಚರಂಡಿ ವ್ಯವಸ್ಥೆ ಸರಿಪಡಿಸುವುದು, ಕುಡಿಯುವ ನೀರಿನ ಸಮಸ್ಯೆ ನಿವಾರಣೆ ಸೇರಿದಂತೆ ವಿವಿಧ ಸಮಸ್ಯೆಗಳ ಈಡೇರಿಕೆಗಾಗಿ ಕ್ರಮ ಕೈಗೊಳ್ಳುವಂತೆ ಪಾಲಿಕೆ, ಯುಜಿಡಿ ಹಾಗೂ ವಾಣಿವಿಲಾಸ ನೀರು ಸರಬರಾಜು ಮಂಡಳಿಯ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಮೈಸೂರು–ಬೆಂಗಳೂರು ರಸ್ತೆಯ ಫೈವ್‌ಲೈಟ್ ಸರ್ಕಲ್‌ನಿಂದ ಬೆಳಗ್ಗೆ ಪರಿಶೀಲನೆ ಆರಂಭಿಸಿದ ಮೇಯರ್ ಶಿವಕುಮಾರ್, ಫೈವ್‌ಲೈಟ್ ವೃತ್ತದಲ್ಲಿ ಮ್ಯಾನ್‌ಹೋಲ್‌ನಿಂದ ರಸ್ತೆಯಲ್ಲಿ ನೀರು ಉಕ್ಕಿ ಹರಿಯುತ್ತಿರುವುದನ್ನು ಕಂಡು ಅಸಮಾಧಾನ ವ್ಯಕ್ತಪಡಿಸಿದರು. ರಸ್ತೆಯಲ್ಲಿ ಒಳಚರಂಡಿ ನೀರು ದಾಟಿ ಹೋಗುತ್ತಿದ್ದದ್ದನ್ನು ಕಂಡು ಅಧಿಕಾರಿಗಳನ್ನು ತರಾಟೆಗೆ ತೆಗೆದುಕೊಂಡರು. ಕೂಡಲೇ ದುರಸ್ತಿ ಮಾಡಿ, ಒಳಚರಂಡಿ ನೀರು ರಸ್ತೆ ಮೇಲೆ ಹರಿಯದಂತೆ ತಡೆಗಟ್ಟಲು ಕ್ರಮ ಕೈಗೊಳ್ಳುವಂತೆ ಸೂಚನೆ ನೀಡಿದರು.

ಬಳಿಕ, ಬಿಷಪ್ ಹೌಸ್ ಮಾರ್ಗದ ರಸ್ತೆ ಅಗಲೀಕರಣಕ್ಕೆ ತೊಡಕಾಗಿರುವ ಖಾಸಗಿ ಕಟ್ಟಡದ ಮಾಲೀಕರ ಬೇಡಿಕೆ ಬಗ್ಗೆ ಅಧಿಕಾರಿಗಳು ಮೇಯರ್ ಗಮನಕ್ಕೆ ತಂದರು. ಕಟ್ಟಡದ ಕಾಂಪೌಂಡ್ ತೆರವುಗೊಳಿಸಿದರೆ ಗ್ರಾಮಾಂತರ ಬಸ್ ನಿಲ್ದಾಣದ ಕಡೆಗೆ ಜೋಡಿ ರಸ್ತೆ ನಿರ್ಮಾಣ ಮಾಡಬಹುದೆಂದು ತಿಳಿಸಿದರು. ಅಲ್ಲದೆ, ಇರ್ವಿನ್ ರಸ್ತೆ ಅಗಲೀಕರಣಕ್ಕೆ ವಶಪಡಿಸಿಕೊಂಡ ಜಾಗಕ್ಕೆ ನೀಡಿರುವಂತೆ ಪರಿಹಾರ ನೀಡಿದರೆ ಮಾತ್ರ ರಸ್ತೆ ಅಗಲೀಕರಣಕ್ಕೆ ಸ್ಥಳ ನೀಡುವುದಾಗಿ ಕಟ್ಟಡದ ಮಾಲೀಕರು ಬೇಡಿಕೆ ಇಟ್ಟಿರುವ ಬಗ್ಗೆ ವಿವರಿಸಿದರು. ಇದಕ್ಕೆ ಸ್ಪಂದಿಸಿದ ಮೇಯರ್ ಶಿವಕುಮಾರ್, ಕಾನೂನು ತಜ್ಞರ ಸಲಹೆ ಪಡೆದು ಸಮಸ್ಯೆ ಇತ್ಯರ್ಥಪಡಿಸುವಂತೆ ತಿಳಿಸಿದರು.

ಅದೇ ರಸ್ತೆಯಲ್ಲಿ ಯುಜಿಡಿ ಕಾಮಗಾರಿಗೆ 50 ಮೀಟರ್ ಉದ್ದ ರಸ್ತೆಯನ್ನು ಅಗೆದಿರುವುದರಿಂದ ಬಸ್‌ಗಳ ಸಂಚಾರಕ್ಕೆ ತೊಂದರೆಯಾಗಿರುವುದನ್ನು ಗಮನಿಸಿ, ದಸರಾ ಆರಂಭಕ್ಕೂ ಮುನ್ನ ಕಾಮಗಾರಿ ಪೂರ್ಣಗೊಳಿಸಬೇಕು. ಅಲ್ಲದೆ ದಸರಾ ಮುಗಿಯುವವರೆಗೂ ಮುಂದಿನ ಕಾಮಗಾರಿ ಕೈಗೆತ್ತಿಕೊಳ್ಳದಂತೆ ಸಲಹೆ ನೀಡಿದರು.

ಅಧಿಕಾರಿಗಳಿಗೆ ತರಾಟೆ: ಗ್ರಾಮಾಂತರ ಬಸ್ ನಿಲ್ದಾಣದ ಮುಂಭಾಗದ ರಸ್ತೆಯಲ್ಲಿ ಫುಟ್‌ಪಾತ್‌ಗೆ ಕೆಲವೆಡೆ ಟೈಲ್ಸ್ ಹಾಕದೆ ಇರುವುದು, ಆರ್ಚ್‌ಗೇಟ್‌ನಲ್ಲಿ ಪಾರ್ಥೇನಿಯಂ ಗಿಡ ಬೆಳೆದಿರುವುದನ್ನು ಗಮನಿಸಿದ ಮೇಯರ್, ಇಂತಹ ಸಣ್ಣಪುಟ್ಟ ಸಮಸ್ಯೆಗಳನ್ನು ಸ್ವಯಂ ಬಗೆಹರಿಸದಿದ್ದರೆ ಅಧಿಕಾರಿಗಳಿದ್ದು ಏನು ಪ್ರಯೋಜನ ಎಂದು ಕಿಡಿಕಾರಿದರು.

ಈ ವೇಳೆ ಆರೋಗ್ಯಾಧಿಕಾರಿ ಡಾ.ಡಿ.ಜಿ.ನಾಗರಾಜು ಪ್ರತಿಕ್ರಿಯಿಸಿ, ಗ್ರಾಮಾಂತರ ಬಸ್ ನಿಲ್ದಾಣದ ಮುಂಭಾಗದಲ್ಲಿರುವ ಎರಡು ಖಾಸಗಿ ಕಟ್ಟಡಗಳ ಮಾಲೀಕರು ಯುಜಿಡಿ ಸಂಪರ್ಕವನ್ನೇ ಪಡೆದಿಲ್ಲ. ಇದರಿಂದ ಆ ಕಟ್ಟಡಗಳ ಯುಜಿಡಿ ನೀರು ರಸ್ತೆಗೆ ಹರಿಯುತ್ತಿದೆ. ಹಲವು ಬಾರಿ ನೋಟಿಸ್ ಜಾರಿ ಮಾಡಿದ್ದರೂ ಪ್ರತಿಕ್ರಿಯೆ ನೀಡಿಲ್ಲವೆಂದು ದೂರಿದರು. ಇದಕ್ಕೆ ಅಸಮಾಧಾನಗೊಂಡ ಶಿವಕುಮಾರ್, ಕೂಡಲೇ ನೀರಿನ ಸಂಪರ್ಕವನ್ನು ಬಂದ್ ಮಾಡಿ ಕ್ರಮ ಕೈಗೊಳ್ಳಬೇಕು. ಯುಜಿಡಿ ಸಂಪರ್ಕ ಪಡೆಯದಿದ್ದಲ್ಲಿ ಮಾಲೀಕರ ವಿರುದ್ಧ ಕ್ರಮಕ್ಕೆ ಮುಂದಾಗಿ ಎಂದು ಸೂಚಿಸಿದರು.

ತೆರೆದಿದ್ದ ಮ್ಯಾನ್‌ಹೋಲ್: ಬಿ.ಎನ್.ರಸ್ತೆಯಲ್ಲಿ ಮಲೆ ಮಹಾದೇಶ್ವರ ರಸ್ತೆ(ಛತ್ರಿಮರ)ವರೆಗೆ ಮ್ಯಾನ್‌ಹೋಲ್ ರಿಪೇರಿ ಮಾಡಿದ್ದರೂ ಅದನ್ನು ಸರಿಯಾಗಿ ಮುಚ್ಚದೆ ಹಾಗೆಯೇ ಬಿಟ್ಟಿದ್ದು ಕಂಡು ಬಂದಿದ್ದರಿಂದ ಯುಜಿಡಿ ವಿಭಾಗದ ಅಧಿಕಾರಿಗಳನ್ನು ತರಾಟೆಗೆ ತಗೆದುಕೊಂಡರು. ರಾತ್ರಿ ವೇಳೆ ಹಳ್ಳವನ್ನು ಗಮನಿಸದೆ ಯಾರಾದರೂ ಬಿದ್ದರೆ ಗತಿ ಏನು? ಬೈಕ್ ಸವಾರರು ಬಿದ್ದು ಪ್ರಾಣಾಪಾಯವಾದರೆ ಯಾರು ಹೊಣೆ? ಈ ರೀತಿ ತೆರೆದ ರೀತಿಯಲ್ಲಿ ಬಿಡುತ್ತಾರೆಯೇ ಎಂದು ಪ್ರಶ್ನಿಸಿದರು. ಇದಕ್ಕೆ ಅಧಿಕಾರಿಗಳು ತಡಬಡಾಯಿಸಿದರು. ಈ ವೇಳೆ ಉಪ ಆಯುಕ್ತರಾದ ಎಂ.ಜೆ.ರೂಪಾ, ಕೂಡಲೇ ಮ್ಯಾನ್‌ಹೋಲ್ ಮುಚ್ಚಿಸುವುದಾಗಿ ಹೇಳಿದರು. ಅಲ್ಲದೇ, ಅಲ್ಲಿಯೇ ಇದ್ದ ಎರಡು ಬ್ಯಾರಿಕೇಡ್‌ಗಳನ್ನು ಹಳ್ಳಕ್ಕೆ ಅಡ್ಡಲಾಗಿ ಇರಿಸಿದರು.

ಪಾದಚಾರಿ ಮಾರ್ಗ ನಿರ್ಮಾಣಕ್ಕೆ ಡಿಪಿಆರ್: ಸಂಗಂ ಚಿತ್ರಮಂದಿರದ ರಸ್ತೆಯಲ್ಲಿ ಸಾರ್ವಜನಿಕರಿಗೆ ಓಡಾಡಲು ಫುಟ್‌ಪಾತ್ ನಿರ್ಮಾಣ ಹಾಗೂ ಮಹಾತ್ಮಗಾಂಧಿ ವೃತ್ತದಲ್ಲಿ ಬಟ್ಟೆ ವ್ಯಾಪಾರಿಗಳು ಅತಿಕ್ರಮಿಸಿಕೊಂಡಿರುವುದರಿಂದ ಪಾದಚಾರಿಗಳ ಓಡಾಟಕ್ಕೆ ಪ್ರತ್ಯೇಕ ಮಾರ್ಗ ಕಲ್ಪಿಸುವ ಕ್ರಿಯಾಯೋಜನೆ ತಯಾರಿಸಿ, ಮಂಡಿಸುವಂತೆ ಸಲಹೆ ನೀಡಿದರು. ಸಿದ್ದಪ್ಪ ವೃತ್ತದಿಂದ ನಂಜುಮಳಿಗೆ ವೃತ್ತದವರೆಗೆ ಹದಗೆಟ್ಟಿರುವ ರಸ್ತೆಗಳನ್ನು ವೀಕ್ಷಿಸಿದರಲ್ಲದೆ, ಮಳೆ ನಿಂತ ಮೇಲೆ ಕಾಮಗಾರಿ ಆರಂಭಿಸಬೇಕು. ಅದೇ ರೀತಿ ಬಲ್ಲಾಳ್ ವೃತ್ತದಿಂದ ನ್ಯೂ ಕಾಂತರಾಜ ಅರಸ್ ರಸ್ತೆಯ ತನಕ ಪರಿಶೀಲನೆ ನಡೆಸಿದರು. ಈ ವೇಳೆ ರಸ್ತೆಗಳು ಹಾಳಾಗಿ ಗುಂಡಿಬಿದ್ದಿರುವ ಬಗ್ಗೆ ಸಾರ್ವಜನಿಕರು ದೂರಿದರು. ಮಳೆ ಬೀಳುತ್ತಿರುವುದರಿಂದ ಸಮಸ್ಯೆಯಾಗಿದೆ. ಮೂರ್ನಾಲ್ಕು ದಿನಗಳಲ್ಲಿ ಡಾಂಬರೀಕರಣ ಮಾಡಲಾಗುವುದು ಎಂದು ಭರವಸೆ ನೀಡಿದರು. ಈ ಸಂದರ್ಭದಲ್ಲಿ ನಗರಪಾಲಿಕೆ ಸದಸ್ಯರಾದ ಎಂ.ಸತೀಶ್, ಎಂ.ಬಿ.ನಾಗರಾಜು, ವಾಣಿವಿಲಾಸ ವಾಟರ್ ವರ್ಕ್ಸ್ ಇಇ ಸುವರ್ಣ, ಯುಜಿಡಿ ಇಇ ಸಿಂಧು, ಅಭಿವೃದ್ಧಿ ಅಧಿಕಾರಿ ಮಂಜುನಾಥ್ ಇನ್ನಿತರರು ಉಪಸ್ಥಿತರಿದ್ದರು.

ಮೈಸೂರು ಅರಮನೆ ಅಂಗಳದಲ್ಲಿ ಗುಲಾಬಿ ಹೂವುಗಳಿಂದ ಮೂಡಲಿದೆ 'ದೆಹಲಿಯ ಕೆಂಪುಕೋಟೆ'

- ಭಾರತೀಯ ರಕ್ಷಣಾ ಸಿಬ್ಬಂದಿ ಮುಖ್ಯಸ್ಥರಾಗಿದ್ದ ಜನರಲ್ ಬಿಪಿನ್ ರಾವತ್, ಸ್ವದೇಶಿ ಯುದ್ಧ ನೌಕೆ ಐಎನ್‌ಎಸ್ ವಿಕ್ರಾಂತ್, ಕಿತ್ತೂರು ರಾಣಿ ಚೆನ್ನಮ್ಮ, ಸರ್ದಾರ್ ವಲ್ಲಭ ಬಾಯ್ ಪಟೇಲ್, ನಾಲ್ವಡಿ ಮೊದಲಾದ ಮಹನೀಯರ ಆಕೃತಿ ನಿರ್ಮಾಣ
- 15 ಸಾವಿರ ಹೂವಿನ ಕುಂಡದಲ್ಲಿ 32 ಬಗೆಯ ಹೂವುಗಳ ಪ್ರದರ್ಶನ
- 4 ಲಕ್ಷ ಗುಲಾಬಿಗಳಿಂದ ವಿವಿಧ ಆಕೃತಿ ನಿರ್ಮಾಣ



ಮೈಸೂರು ಅರಮನೆ ಆವರಣದಲ್ಲಿ ದಸರಾ ಫಲಪುಷ್ಪ ಪ್ರದರ್ಶನಕ್ಕೆ ಗುಲಾಬಿ ಗಿಡ ಬೆಳೆಸಿರುವುದು.

> “**ಅರ್ಥಪೂರ್ಣ ಆಚರಣೆಗೆ ಕ್ರಮ**
> 2 ವರ್ಷದ ನಂತರ ಅರಮನೆ ಆವರಣದಲ್ಲಿ ದಸರಾ ಮಹೋತ್ಸವದ ಫಲಪುಷ್ಪ ಪ್ರದರ್ಶನಕ್ಕೆ ಸಿದ್ಧತೆ ಮಾಡಿಕೊಳ್ಳಲಾಗುತ್ತಿದೆ. ಇದಕ್ಕೆ ಉಸ್ತುವಾರಿ ಸಚಿವ ಎಸ್.ಟಿ. ಸೋಮಶೇಖರ್, ಜಿಲ್ಲಾಧಿಕಾರಿ ಡಾ.ಬಗಾದಿ ಗೌತಮ್ ಅವರ ಮಾರ್ಗದರ್ಶನವಿದೆ. ಸ್ವಾತಂತ್ರ್ಯೋತ್ಸವ ಅಮೃತ ಮಹೋತ್ಸವದ ಅಂಗವಾಗಿ ದೇಶಭಕ್ತಿ ಮೂಡಿಸುವ ಆಕೃತಿ ಗಳನ್ನು ಸಿದ್ಧಪಡಿಬೇಕೆಂಬ ಉದ್ದೇಶವಿದೆ.
> – ಟಿ.ಎಸ್.ಸುಬ್ರಹ್ಮಣ್ಯ, ಉಪನಿರ್ದೇಶಕ, ಅರಮನೆ ಮಂಡಳಿ



ಎಂ.ಟಿ.ಯೋಗೇಶ್ ಕುಮಾರ್

ಮೈಸೂರು,ಸೆ.13– ದೇಶದ ಹೆಮ್ಮೆಯ ಪ್ರತೀಕವಾದ ದೆಹಲಿಯ ಕೆಂಪು ಕೋಟೆ ಸೇರಿದಂತೆ ದೇಶಭಕ್ತಿ ಬಿಂಬಿಸುವ ಆಕೃತಿಗಳೊಂದಿಗೆ ಲಕ್ಷಾಂತರ ಹೂವುಗಳು ಮೈಸೂರು ಅರಮನೆ ಆವರಣದಲ್ಲಿ ಸೆ.26ರಿಂದ ಅ.5ರವರೆಗೆ ನಡೆಯಲಿರುವ ದಸರಾ ಫಲಪುಷ್ಪ ಪ್ರದರ್ಶನದಲ್ಲಿ ನೋಡುಗರ ಕಣ್ಮನ ಸೆಳೆಯಲಿವೆ.

ಸ್ವಾತಂತ್ರ್ಯೋತ್ಸವ ಅಮೃತ ಮಹೋತ್ಸವ ಪರಿಕಲ್ಪನೆಯಲ್ಲಿ ಅರಮನೆ ಆಡಳಿತ ಮಂಡಳಿ ಈ ಸಾಲಿನ ಫಲಪುಷ್ಪ ಪ್ರದರ್ಶನ ಆಯೋಜಿಸಲು ಮುಂದಾಗಿದ್ದು, ಈಗಾಗಲೇ ಸಿದ್ಧತಾ ಕಾರ್ಯ ಭರದಿಂದ ಸಾಗಿದೆ. ಕೊರೊನಾ ಹಿನ್ನೆಲೆಯಲ್ಲಿ ಕಳೆದ ಎರಡು ವರ್ಷಗಳಿಂದ ಅರಮನೆ ಆವರಣದಲ್ಲಿ ದಸರಾ ಫಲಪುಷ್ಪ ಪ್ರದರ್ಶನ ನಡೆದಿರಲಿಲ್ಲ. ಕಳೆದ ವರ್ಷ ಹೊಸ ವರ್ಷದ ಸಂಭ್ರಮಾಚರಣೆ ವೇಳೆ ಫಲಪುಷ್ಪ ಪ್ರದರ್ಶನ ಆಯೋಜಿಸಲಾಗಿತ್ತು. ಈ ವೇಳೆ ನಿರೀಕ್ಷೆಗೂ ಮೀರಿದ ಪ್ರತಿಕ್ರಿಯೆ ವ್ಯಕ್ತವಾಗಿತ್ತು. ಇದೀಗ ದಸರಾ ಫಲಪುಷ್ಪ ಪ್ರದರ್ಶನ ವಿಭಿನ್ನವಾಗಿರುವ ಮೂಲಕ ನವರಾತ್ರಿ ಸೊಬಗು ವಿಶಿಷ್ಟವಾಗಿ ಮೂಡಿಬರಲಿದೆ.

15 ಸಾವಿರ ಕುಂಡಗಳಲ್ಲಿ 32 ಜಾತಿಯ ಹೂವು: ಅರಮನೆ ಆವರಣದ ಉದ್ಯಾನವನದಲ್ಲಿ ನಡೆಯುವ ಫಲಪುಷ್ಪ ಪ್ರದರ್ಶನದಲ್ಲಿ ಈ ಬಾರಿ 32 ವಿವಿಧ ತಳಿಗಳ ಲಕ್ಷಾಂತರ ಹೂವಿನ ಗಿಡಗಳು ಕಣ್ಮನ ಸೆಳೆಯಲಿವೆ. ಈಗಾಗಲೇ 15 ಸಾವಿರ ಕುಂಡ(ಪಾಟ್)ಗಳಲ್ಲಿ 32 ಬಗೆ ಹೂವಿನ ಗಿಡಗಳನ್ನು ಬೆಳೆಸಲಾಗಿದೆ. ಮೆರಿಗೋಲ್ಡ್, ಸಾಲ್ವಿಯ, ಡೇಲಿಯ, ಪಿಟೋನಿಯ, ಸೇವಂತಿಗೆ, ಕೋಲಿಯಸ್, ಸಿಲೋಷಿಯ, ನಸ್ಟರ್‌ಸಿಯಂ, ಆಂಟಿರೇನಂ, ಬೋನ್ಸಾಯ್ ಗಿಡಗಳನ್ನು ಬೆಳೆಸಲಾಗಿದೆ. ಇದರೊಂದಿಗೆ ಕ್ರೈಸಾಂಥಿಮಮ್, ಪಿಂಗ್ ಪಾಂಗ್, ಕಾರ್ನೆಷನ್ ಅಸ್ಪಮೇರಿಯ, ಜರ್ಬೆರಾ, ಆಂಥೋರಿಯಮ್, ಆರ್ಕಿಡ್ಸ್, ಬ್ಲೂಡೈಸಿ, ಡ್ರೆಸಿನಾ ಹಾಗೂ ಊಟಿಯಿಂದ ತಂದಿರುವ ವಿವಿಧ ಬಗೆ ಹೂವಿನ ಗಿಡಗಳು ಆಕರ್ಷಿಸಲಿವೆ.

4 ಲಕ್ಷ ಗುಲಾಬಿ: ಇಲ್ಲಿನ ಉದ್ಯಾನವನದಲ್ಲಿ ತಲೆ ಎತ್ತಲಿರುವ ವಿವಿಧ ಆಕೃತಿಗಳಿಗೆ ವಿವಿಧ ಬಣ್ಣಗಳ 4 ಲಕ್ಷ ಗುಲಾಬಿ ಹೂವನ್ನು ಬಳಸಲು ನಿರ್ಧರಿಸಲಾಗಿದೆ. ಅದಕ್ಕಾಗಿ ಈಗಾಗಲೇ ಸಿದ್ಧತೆ ಮಾಡಿಕೊಳ್ಳಲಾಗಿದೆ. ಸೆ.23ರಿಂದ ವಿವಿಧ ಆಕೃತಿಗಳ ತಯಾರಿಕೆ ಆರಂಭವಾಗಲಿದ್ದು, ಸೆ.25ರ ಸಂಜೆಯಿಂದಲೇ ಗುಲಾಬಿ ಹೂವುಗಳ ಜೋಡಣಾ ಕಾರ್ಯ ನಡೆಯಲಿದೆ.

ದೆಹಲಿಯ ಕೆಂಪು ಕೋಟೆ: ದೇಶದ ಹೆಮ್ಮೆಯ ಪ್ರತೀಕವಾದ ದೆಹಲಿಯ ಕೆಂಪು ಕೋಟೆ ಇಲ್ಲಿ ತಲೆ ಎತ್ತಲಿದೆ. ವಿವಿಧ ಬಣ್ಣ ಬಣ್ಣದ ಲಕ್ಷಾಂತರ ಗುಲಾಬಿ ಹೂವುಗಳಿಂದ 60 ಅಡಿ ಉದ್ದ, 10 ಅಡಿ ಅಗಲ, 28 ಅಡಿ ಎತ್ತರದಲ್ಲಿ ಕೆಂಪುಕೋಟೆ ನಿರ್ಮಿಸಲಾಗುತ್ತಿದೆ.

ಸೆಲ್ಫಿ ಪಾಯಿಂಟ್: ವಿವಿಧ ಹೂವುಗಳಿಂದ ಭಾರತ ಹಾಗೂ ಕರ್ನಾಟಕದ ನಕ್ಷೆಯನ್ನು ರಚಿಸಿ, ಸೆಲ್ಫಿ ಪಾಯಿಂಟ್ ನಿರ್ಮಿಸಲಾಗುತ್ತಿದೆ. ಹಾಗಾಗಿ ಫಲಪುಷ್ಪ ಪ್ರದರ್ಶನಕ್ಕೆ ಬರುವ ಪ್ರವಾಸಿಗರು ಭೂಪಟದ ಮುಂದೆ ಸೆಲ್ಫಿ ತೆಗೆದುಕೊಂಡು ಸಂಭ್ರಮಿಸಬಹುದು.

ಒಡೆಯರ್ ಸ್ಮರಣೆ: ಮೈಸೂರು ಸಂಸ್ಥಾನದಲ್ಲಿ ಆಳ್ವಿಕೆ ನಡೆಸಿ ಹಲವು ಪ್ರಥಮಗಳಿಗೆ ನಾಂದಿ ಹಾಡಿದ ನಾಲ್ವಡಿ ಕೃಷ್ಣರಾಜ ಒಡೆಯರ್, ಕೊನೆಯ ಅರಸರಾದ ಜಯಚಾಮರಾಜ ಒಡೆಯರ್ ಅವರ ಆಕೃತಿಗಳನ್ನು ಹೂವುಗಳಿಂದ ಇಲ್ಲಿ ರಚಿಸಲಾಗುತ್ತದೆ. ಇದರೊಂದಿಗೆ ಒಂದೆಡೆ ಜಂಬೂಸವಾರಿ ಮಾದರಿಯ ಆಕೃತಿ, ದ್ವಾರದ ಬಳಿ ಎರಡು ದಸರಾ ಆನೆ ಗಳ ಆಕೃತಿಗಳನ್ನು ನಿರ್ಮಿಸಲಾಗುತ್ತದೆ.

ದೇಶಭಕ್ತಿ ಬಿಂಬಿಸುವ ವಿವಿಧ ಆಕೃತಿಗಳು: ಸ್ವಾತಂತ್ರ್ಯೋತ್ಸವದ ಅಮೃತ ಮಹೋತ್ಸವದ ಹಿನ್ನೆಲೆಯಲ್ಲಿ ಫಲಪುಷ್ಪ ಪ್ರದರ್ಶನದಲ್ಲಿ ಸ್ವಾತಂತ್ರ್ಯ ಸೇನಾನಿಗಳ ಆಕೃತಿಯೊಂದಿಗೆ ದೇಶಭಕ್ತಿ ಬಿಂಬಿಸುವ ಆಕೃತಿಗಳನ್ನು ಹೂವುಗಳಿಂದ ನಿರ್ಮಿಸಲು ಉದ್ದೇಶಿಸಲಾಗಿದೆ. ವೀರ ಮಹಿಳೆ ಕಿತ್ತೂರು ರಾಣಿ ಚೆನ್ನಮ್ಮ, ಭಾರತೀಯ ರಕ್ಷಣಾ ಸಿಬ್ಬಂದಿ ಮುಖ್ಯಸ್ಥರಾಗಿದ್ದ ಜನರಲ್ ಬಿಪಿನ್ ರಾವತ್ ಅವರ ಆಕೃತಿ ಗುಲಾಬಿ ಹೂವುಗಳಿಂದ ಅರಳಲಿದೆ. ಅಲ್ಲದೆ, ಸ್ವದೇಶಿ ನಿರ್ಮಿತ ಭಾರತೀಯ ನೌಕಾದಳದ ಮೊದಲ ಯುದ್ಧ ನೌಕೆ ಐಎನ್‌ಎಸ್ ವಿಕ್ರಾಂತ್ ಮಾದರಿಯನ್ನು ನಿರ್ಮಿಸಲಾಗುತ್ತದೆ. ಪಾಕಿಸ್ತಾನದ ಯುದ್ಧ ವಿಮಾನವನ್ನು ಹೊಡೆದುರುಳಿಸಿ ಪರಮವೀರ ಚಕ್ರ ಪ್ರಶಸ್ತಿಗೆ ಭಾಜನರಾಗಿರುವ ಅಭಿನಂದನ್ ಅವರ ಆಕೃತಿ, ಏಕತೆಯ ಸಂಕೇತವಾಗಿ ಸರ್ದಾರ್ ವಲ್ಲಭ ಬಾಯಿ ಪಟೇಲ್, ಕಾರ್ಗಿಲ್ ಯುದ್ಧದ ವಿಜಯೋತ್ಸವದ ಮಾದರಿಯೂ ತಲೆ ಎತ್ತಲಿವೆ. ಫಲಪುಷ್ಪ ಪ್ರದರ್ಶನದಲ್ಲಿ ಹೂವು, ಹಣ್ಣುಗಳಿಂದ ನಿರ್ಮಿಸಿರುವ ಆಕೃತಿಗಳ ತಾಜಾತನ ಕಾಪಾಡಿಕೊಳ್ಳಲು 4 ದಿನಗಳ ಬಳಿಕ ಮತ್ತೊಮ್ಮೆ ಹೂವು, ಹಣ್ಣುಗಳನ್ನು ಬದಲಿಸಲು ಕ್ರಮ ಕೈಗೊಳ್ಳಲಾಗುತ್ತಿದೆ.

ಉಚಿತ ಗಿಡ ವಿತರಣೆ: ವರಹಾ ಉದ್ಯಾನದಲ್ಲಿ ವರ್ಟಿಕಲ್ ಗಾರ್ಡನ್ ಅಲಂಕರಿಸಲಾಗುತ್ತದೆ. ಅಲ್ಲದೇ, ಫಲಪುಷ್ಪ ಪ್ರದರ್ಶನ ವೀಕ್ಷಣೆಗೆಂದು ಬರುವ ಗಣ್ಯರು ಒಳಗೊಂಡಂತೆ ಮೊದಲ 500 ಮಂದಿಗೆ ಔಷಧೀಯ ಗಿಡಗಳಾದ ಅಲೋವೆರ, ತುಳಸಿ, ವಿಳ್ಯದೆಲೆ ಹಾಗೂ ಇನ್ನಿತರ ಗಿಡಗಳನ್ನು ಉಚಿತವಾಗಿ ವಿತರಿಸಲು ಉದ್ದೇಶಿಸಲಾಗಿದೆ.

ಛಾಯಾಚಿತ್ರ ಹಾಗೂ ವಿಡಿಯೋ ಪ್ರದರ್ಶನ: ಫಲಪುಷ್ಪ ಪ್ರದರ್ಶನದಲ್ಲಿ ದಸರಾ ಅಂದು–ಇಂದು ಕುರಿತು ಛಾಯಾಚಿತ್ರ ಹಾಗೂ ಸಾಕ್ಷ್ಯಚಿತ್ರ ಪ್ರದರ್ಶನ ಏರ್ಪಡಿಸಲಾಗುತ್ತಿದೆ. ಅಲ್ಲದೆ ಆರಂಭದ ದಸರಾದಿಂದ ಇಂದಿನ ದಸರಾವರೆಗೂ ಸಾಕ್ಷ್ಯಚಿತ್ರ ಪ್ರದರ್ಶನ ಆಯೋಜಿಸಲಾಗುತ್ತಿದೆ.

7 ಬ್ಲಾಕ್‌ಗಳಲ್ಲಿ ಗೊಂಬೆ ಪ್ರದರ್ಶನ: ಪ್ರತಿವರ್ಷದಿಂದ ಈ ಬಾರಿಯೂ ಅರಮನೆ ಆವರಣದಲ್ಲಿ ಗೊಂಬೆ ಪ್ರದರ್ಶನದ ವ್ಯವಸ್ಥೆ ಮಾಡಲಾಗುತ್ತಿದ್ದು, ಅದಕ್ಕಾಗಿ 7 ಬ್ಲಾಕ್ ನಿರ್ಮಿಸಲಾಗುತ್ತದೆ. 75ನೇ ಸ್ವಾತಂತ್ರ್ಯೋತ್ಸವದ ಕುರಿತು ಜಯಶ್ರೀ ನಾಗಪ್ರಸಾದ್, ಶ್ರೀ ದೇವಿ ದಿವ್ಯ ದರ್ಶನ ಕುರಿತು ಹೇಮಲತಾ ಕುಮಾರಸ್ವಾಮಿ ಅವರು ಗೊಂಬೆ ಪ್ರದರ್ಶನ ನೀಡಲಿದ್ದಾರೆ. ಅಲ್ಲದೆ, ಮಾನವನ ಜೀವನ ಚಕ್ರ ಕುರಿತು ಹೆಚ್.ಲೀಲಾವತಿ, ಅರಮನೆಯಲ್ಲಿ ದುರ್ಗಾಪೂಜೆ ಕುರಿತು ಮೀರಾ ರಮೇಶ್, ವಿಷ್ಣು ಲೀಲೆ ಕುರಿತು ಅನ್ನಪೂರ್ಣ ಗೋಪಾಲಕೃಷ್ಣ, ದಸರಾ ಬೊಂಬೆ ಕುರಿತು ಕೃಷ್ಣಭಟ್ ಹಾಗೂ ಕೃಷ್ಣನ ಲೀಲೆ ಕುರಿತು ಗೀತಾ ಶ್ರೀಹರಿ ಗೊಂಬೆ ಪ್ರದರ್ಶನ ನೀಡಲಿದ್ದಾರೆ.

ಮೈಸೂರು ಮಿತ್ರ ಬುಧವಾರ 14 ಸೆಪ್ಟೆಂಬರ್ 2022

ನಕಲಿ ದಾಖಲೆ ಸೃಷ್ಟಿಸಿ ವಾರಸುದಾರರಿಲ್ಲದ ಕೋಟ್ಯಾಂತರ ಬೆಲೆಯ ಭೂಮಿ ಕಬಳಿಸಲು ಸಂಚು

ಆರ್‌ಟಿಐ ಕಾರ್ಯಕರ್ತ ಬಿ.ಎನ್.ನಾಗೇಂದ್ರರಿಂದ ಪ್ರಕರಣ ಬಯಲು, ತಪ್ಪಿತಸ್ಥರ ವಿರುದ್ಧ ಕ್ರಿಮಿನಲ್ ಪ್ರಕರಣ ದಾಖಲಿಸುವಂತೆ ಹೆಚ್ಚುವರಿ ತಹಶೀಲ್ದಾರ್ ಎನ್.ವಿಶ್ವನಾಥ್ ಆದೇಶ

ಎಸ್.ಟಿ.ರವಿಕುಮಾರ್

ಮೈಸೂರು, ಸೆ.13–ನಕಲಿ ದಾಖಲೆ ಸೃಷ್ಟಿಸಿ ಬೇರೆಯವರ ಆಸ್ತಿ ಲಪಟಾಯಿಸಲು ಭೂಗಳ್ಳರು ಸಂಚು ನಡೆಸುತ್ತಿರುವ ಪ್ರಕರಣಗಳು ಮೈಸೂರು ಸುತ್ತಮುತ್ತ ದಿನೇ ದಿನೆ ಹೆಚ್ಚಾಗುತ್ತಿವೆ. ವಾರಸುದಾರರಿಲ್ಲದ ಕೋಟ್ಯಾಂತರ ರೂ. ಬೆಲೆ ಬಾಳುವ ಭೂಮಿ ಕಬಳಿಸಲು ಪ್ರತಿಷ್ಠಿತ ಕುಟುಂಬ ಸಂಚು ನಡೆಸುತ್ತಿರುವುದನ್ನು ಮೈಸೂರಿನ ಬೃಂದಾವನ ಬಡಾವಣೆ ನಿವಾಸಿ ಆರ್‌ಟಿಐ ಕಾರ್ಯಕರ್ತ ಬಿ.ಎನ್. ನಾಗೇಂದ್ರ ಬಯಲಿಗೆಳೆದ ಹಿನ್ನೆಲೆಯಲ್ಲಿ, ಅಕ್ರಮವಾಗಿ ಮಾಡಿಕೊಂಡಿದ್ದ ಖಾತೆ ರದ್ದುಪಡಿಸಿರುವ ಮೈಸೂರು ತಾಲೂಕು ಹೆಚ್ಚುವರಿ ತಹಶೀಲ್ದಾರ್ ಎನ್.ವಿಶ್ವನಾಥ್, ಫೋರ್ಜರಿ ಮಾಡಿ ಅಕ್ರಮವಾಗಿ ಖಾತೆ ಮಾಡಿಸಿ ಕೊಂಡಿರುವವರ ವಿರುದ್ಧ ಕ್ರಿಮಿನಲ್ ಮೊಕದ್ದಮೆ ದಾಖಲಿಸುವಂತೆ ಸೆ.7ರಂದು ಆದೇಶ ಹೊರಡಿಸಿದ್ದಾರೆ.

ಮೈಸೂರು ತಾಲೂಕು, ವರುಣಾ ಹೋಬಳಿ, ಲಲಿತಾದ್ರಿ ಪುರ ಗ್ರಾಮದ ಸರ್ವೆ ನಂಬರ್ 206ರಲ್ಲಿ 3.04 ಎಕರೆ ವಿಸ್ತೀರ್ಣದ ಜಮೀನಿನ ಖಾತಾ ಬದಲಾವಣೆಗಾಗಿ 2021ರ ಏಪ್ರಿಲ್ 26ರಂದು ಬೆಂಗಳೂರು ನಗರ ನಿವಾಸಿ ಸುಧೀರ್ ಜಯಗೋಪಾಲ್ ಸಲ್ಲಿಸಿದ್ದ ಅರ್ಜಿಯನ್ನು ವಜಾ ಮಾಡಿ, ಆದೇಶಿಸಿದೆ ಎಂದು ಹೆಚ್ಚುವರಿ ತಹಶೀಲ್ದಾರ್ ತಮ್ಮ ಆದೇಶದಲ್ಲಿ ತಿಳಿಸಿದ್ದಾರೆ. ಈ ಸಂಬಂಧ ಕಚೇರಿಯ ಭೂಮಿ ಶಾಖೆಯಲ್ಲಿ ನಮೂದಿಸಿರುವ ಎಂಆರ್‌ಹೆಚ್ 28/2020–2021 (ವಹಿವಾಟು ಸಂಖ್ಯೆ 81)ರಲ್ಲಿನ ನಡಾವಳಿಯನ್ನು ರದ್ದುಪಡಿಸಲಾಗಿದ್ದು, ಫೋರ್ಜರಿ ದಾಖಲೆ ಸೃಷ್ಟಿಸಿ, ಅಕ್ರಮ ಖಾತೆ ಮಾಡಿಸಿಕೊಳ್ಳಲು ಯತ್ನಿ ಸುತ್ತಿರುವವರ ವಿರುದ್ಧ ಕ್ರಿಮಿನಲ್ ಮೊಕದ್ದಮೆ ದಾಖಲಿಸಿ, ಅಗತ್ಯ ಕ್ರಮವಹಿಸುವಂತೆ ವಿಶ್ವನಾಥ್ ಅವರು ವರುಣಾ ಹೋಬಳಿ ರಾಜಸ್ವ ನಿರೀಕ್ಷಕರಿಗೆ ಆದೇಶಿಸಿದ್ದಾರೆ.

ಅಲ್ಲದೇ ಸೆ2ರಂದು ಮೈಸೂರು ಉಪ ವಿಭಾಗಾಧಿ ಕಾರಿಗಳಿಗೆ ಪತ್ರ ಬರೆದಿರುವ ಅಪರ ಜಿಲ್ಲಾಧಿಕಾರಿ ಡಾ. ಬಿ.ಎಸ್.ಮಂಜುನಾಥಸ್ವಾಮಿ, ಮೈಸೂರು ತಾಲೂಕು ವರುಣಾ ಹೋಬಳಿ, ಲಲಿತಾದ್ರಿಪುರ ಗ್ರಾಮದ ಸರ್ವೆ ನಂಬರ್ 206ರಲ್ಲಿ 3.21 ಎಕರೆ ಜಮೀನು ಹಾಗೂ ತಿ.ನರಸೀಪುರ ತಾಲೂಕು, ತಿರುಮಕೂಡಲು ಗ್ರಾಮದ ಸರ್ವೆ ನಂಬರ್ 55/2ರಲ್ಲಿ 22 ಗುಂಟೆ, 55/6ರಲ್ಲಿ 8 ಗುಂಟೆ ಜಮೀನುಗಳಿಗೆ ಸಂಬಂಧಿಸಿದಂತೆ ತಾಲೂಕು ಕಚೇರಿಗಳ ಸಿಬ್ಬಂದಿ ಭೂಗಳ್ಳರ ಜೊತೆ ಶಾಮೀಲಾಗಿ ಅಕ್ರಮ ದಾಖಲೆ ಸೃಷ್ಟಿಸಿ ಖಾತೆ ಮಾಡಿರುವ ಬಗ್ಗೆ ವಿಚಾರಣೆ ನಡೆಸಿ ತಪ್ಪಿತಸ್ಥರ ವಿರುದ್ಧ ಕಾನೂನು ಕ್ರಮ ಜರುಗಿಸುವಂತೆ ಆರ್‌ಟಿಐ ಕಾರ್ಯಕರ್ತ ಬಿ.ಎನ್.ನಾಗೇಂದ್ರ ಅವರ ಮನವಿಯಂತೆ ಕ್ರಮ ಕೈಗೊಳ್ಳುವಂತೆ ಸೂಚಿಸಿದ್ದಾರೆ.

ಉಲ್ಲೇಖಿಸಲಾದ ಜಮೀನುಗಳಿಗೆ ಸಂಬಂಧಿಸಿದಂತೆ ಅಕ್ರಮವಾಗಿ ಖಾತೆಗೆ ಕ್ರಮ ವಹಿಸಲಾಗಿರುವ ವಂಶವೃಕ್ಷ, ಮರಣ ಪ್ರಮಾಣ ಪತ್ರ ಹಾಗೂ ಇನ್ನಿತರ ದಾಖಲೆಗಳ ನೈಜತೆ ಬಗ್ಗೆ ಕೂಲಂಕಷವಾಗಿ ಪರಿಶೀಲಿಸಿ ನಿಯಮಾನುಸಾರ ಸೂಕ್ತ ಕ್ರಮ ಕೈಗೊಂಡು ತಮಗೆ ಮಾಹಿತಿ ನೀಡುವಂತೆ ಡಾ.ಮಂಜುನಾಥಸ್ವಾಮಿ, ಉಪ ವಿಭಾಗಾಧಿಕಾರಿಗಳಿಗೆ ಬರೆದಿರುವ ಪತ್ರದಲ್ಲಿ ತಿಳಿಸಿದ್ದಾರೆ.

ಸದರಿ ಲಲಿತಾದ್ರಿಪುರ ಸ.ನಂ.206ರ 3.21 ಎಕರೆ ಜಮೀನು ಮೂಲತಃ ಸರ್ಕಾರಿ ಬೀಳು ಆಗಿದ್ದು, ನಂತರ ಆರ್‌ಆರ್ 379ರ ನಡಾವಳಿ ಮೂಲಕ ಅದು ಮೇಲುಕೋಟೆ ವಜ್ರಂ ಶಿಂಗ್ರಯ್ಯಂಗಾರ್ ಎಂಬುವರಿಗೆ ಬಂದ ಸ್ವತ್ತಾಗಿದೆ. ಆರ್‌ಟಿಸಿಯಲ್ಲೂ ಅವರ ಹೆಸರು ನಮೂದಾಗಿದೆ ಎಂದು ಆರ್‌ಟಿಐ ಕಾರ್ಯಕರ್ತ ನಾಗೇಂದ್ರ ಆಗಸ್ಟ್ 22ರಂದು ಮೈಸೂರು ಜಿಲ್ಲಾಧಿಕಾರಿಗಳಿಗೆ ಸಲ್ಲಿಸಿರುವ ದೂರಿನಲ್ಲಿ ತಿಳಿಸಿದ್ದಾರೆ.

ಆದರೆ, ಆ ಆಸ್ತಿ ಕಬಳಿಸಲು ತಿ.ನರಸೀಪುರ ಮಾಜಿ ಶಾಸಕ ಶ್ರೀನಿವಾಸ ಅಯ್ಯಂಗಾರ್ ಅವರ ಬೆಂಗಳೂರು ನಿವಾಸಿ ಲಲಿತಾ ಜೈ ಗೋಪಾಲ್ ಹಾಗೂ ಸದಸ್ಯರು ಮೈಸೂರು ವಾಸಿಗಳೆಂದು ವಿಳಾಸ ನೀಡಿ ವಂಶವೃಕ್ಷ ಪಡೆದು ಪೌತಿ ಖಾತೆಗೆ ಅರ್ಜಿ ಸಲ್ಲಿಸಿದ್ದಾರೆ ಎಂದಿರುವ ನಾಗೇಂದ್ರ, ನಕಲಿ ದಾಖಲೆಗಳನ್ನು ಸಲ್ಲಿಸಿದ್ದರೂ,, ಮೂಲ ಭೂ ಮಾಲೀಕರ ಮರಣ ಪ್ರಮಾಣ ಪತ್ರ, ವಂಶವೃಕ್ಷ ಪಡೆಯದೇ ಚೆಕ್ ಲಿಸ್ಟ್ ತಯಾರಿಸಿ ಪೌತಿ ಖಾತೆ ಮಾಡಲು ಅಧಿಕಾರಿಗಳು ಮುಂದಾಗಿದ್ದಾರೆ ಎಂದು ದೂರಿನಲ್ಲಿ ತಿಳಿಸಿದ್ದಾರೆ.

ವಾರಸುದಾರರಿಲ್ಲದ ಆಸ್ತಿ ಪತ್ತೆ ಮಾಡಿ ಮೈಸೂರು ಮತ್ತು ತಿ.ನರಸೀಪುರ ತಹಶೀಲ್ದಾರ್ ಕಚೇರಿ ಸಿಬ್ಬಂದಿ ಭೂಗಳ್ಳರಿಗೆ ಪೌತಿ ಖಾತೆ ಮಾಡಲು ಮುಂದಾಗಿರುವವರ ವಿರುದ್ಧ ಕ್ರಮ ಜರುಗಿ ಸುವಂತೆ ಅವರು ದೂರು ನೀಡಿದ್ದರ ಹಿನ್ನೆಲೆಯಲ್ಲಿ ತಾಲೂಕು ಹೆಚ್ಚುವರಿ ತಹಶೀಲ್ದಾರ್ ಕ್ರಮ ವಹಿಸಿ ಆದೇಶ ನೀಡಿದ್ದಾರೆ.

ಇತ್ತೀಚೆಗಷ್ಟೇ ನಕಲಿ ಸೀಲುಗಳನ್ನು ಬಳಸಿ ಫೋರ್ಜರಿ ದಾಖಲೆ ಸೃಷ್ಟಿಸಿಕೊಂಡು ಆಸ್ತಿಗಳನ್ನು ಪರಭಾರೆ ಮಾಡುತ್ತಿದ್ದ ಜಾಲವನ್ನು ಕುವೆಂಪುನಗರ ಠಾಣೆ ಪೊಲೀಸರು ರಾಮಕೃಷ್ಣನಗರದಲ್ಲಿ ಭೇದಿಸಿ ಮೂವರನ್ನು ಬಂಧಿಸಿ ತನಿಖೆ ನಡೆಸುತ್ತಿರುವುದನ್ನು ಇಲ್ಲಿ ಸ್ಮರಿಸಬಹುದಾಗಿದೆ.

ಸಿ.ಟಿ.ರವಿ ವಿರುದ್ಧ ಸಿದ್ದರಾಮಯ್ಯನವರ ಅಭಿಮಾನಿಗಳು, ಕಾಂಗ್ರೆಸ್ ಪ್ರತಿಭಟನೆ



ಮೈಸೂರು,ಸೆ.13(ಪಿಎಂ)– ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯರ ಬಗ್ಗೆ ಅವ ಹೇಳನಕಾರಿ ಹೇಳಿಕೆ ನೀಡಿರುವ ಬಿಜೆಪಿ ರಾಷ್ಟ್ರೀಯ ಪ್ರಧಾನ ಕಾರ್ಯದರ್ಶಿ ಸಿ.ಟಿ.ರವಿ ವಿರುದ್ಧ ಕರ್ನಾಟಕ ರಾಜ್ಯ ಸಿದ್ದರಾಮಯ್ಯನವರ ಅಭಿಮಾನಿಗಳ ಬಳಗ ಹಾಗೂ ಕಾಂಗ್ರೆಸ್ ಮುಖಂಡರು, ಕಾರ್ಯಕರ್ತರ ವತಿಯಿಂದ ಮಂಗಳವಾರ ಪ್ರತಿಭಟನೆ ನಡೆಸಲಾಯಿತು.

ಮೈಸೂರಿನ ನ್ಯಾಯಾಲಯ ಎದುರಿನ ಗಾಂಧಿ ಪ್ರತಿಮೆ ಬಳಿ ಜಮಾಯಿಸಿದ ಪ್ರತಿಭಟನಾಕಾರರು, ಸಿ.ಟಿ.ರವಿ ಭಾವಚಿತ್ರಕ್ಕೆ ಮಸಿ ಬಳಿದಿರುವ ಪೋಸ್ಟರ್‌ಗಳನ್ನು ಹಿಡಿದು, ಧಿಕ್ಕಾರ ಕೂಗುವ ಮೂಲಕ ಕಿಡಿಕಾರಿದರಲ್ಲದೆ, ಆ ಪೋಸ್ಟರ್‌ಗಳನ್ನು ದಹಿಸಿ ಆಕ್ರೋಶ ವ್ಯಕ್ತಪಡಿಸಿದರು.

ಇದೇ ವೇಳೆ ಮಾಧ್ಯಮದವರೊಂದಿಗೆ ಮಾತನಾಡಿದ ಕಾಂಗ್ರೆಸ್ ಜಿಲ್ಲಾಧ್ಯಕ್ಷ ಡಾ. ಬಿ.ಜೆ.ವಿಜಯಕುಮಾರ್, 75 ವಸಂತ ಗಳನ್ನು ಪೂರೈಸಿ, ಅರ್ಥಪೂರ್ಣ ಅಮೃತ ಮಹೋತ್ಸವ ಆಚರಿಸಿಕೊಂಡ ರಾಜಕೀಯ ಮುತ್ಸದ್ದಿ ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಬಗ್ಗೆ ಸಿ.ಟಿ.ರವಿ ಅಶ್ಲೀಲವಾಗಿ ಪದ ಬಳಸಿ ಟೀಕೆ ಮಾಡಿರುವುದು ಖಂಡನೀಯ. ಬಿಜೆಪಿ ಯವರು ಸಂಪ್ರದಾಯ, ಸಂಸ್ಕೃತಿ, ಆಚಾರ–ವಿಚಾರದ ಬಗ್ಗೆ ದೊಡ್ಡ ಭಾಷಣ ಮಾಡುತ್ತಾರೆ. ಆದರೆ ಅವರ ವರ್ತನೆಗಳು ಮಾತ್ರ ಈ ಎಲ್ಲದಕ್ಕೂ ವಿರುದ್ಧ ಎಂದು ಕಿಡಿಕಾರಿದರು.

ಈಗಾಗಲೇ ಸಿ.ಟಿ.ರವಿ ವಿರುದ್ಧ ಭ್ರಷ್ಟಾಚಾರದ ಆರೋಪದಲ್ಲಿ ಲೋಕಾಯುಕ್ತ ತನಿಖೆ ಆಗುತ್ತಿದೆ. ಪತ್ನಿ ಸಂಬಂಧಿ ಸುದರ್ಶನ್ ಹೆಸರಿನಲ್ಲಿ ಬೇನಾಮಿ ಆಸ್ತಿಗಳನ್ನು ಮಾಡಿರುವ ಆರೋಪವಿದೆ. ಆರ್‌ಎಸ್‌ಎಸ್‌ನಲ್ಲಿ ನೀತಿ ಪಾಠ ಮಾಡುವ ಈ ವ್ಯಕ್ತಿ ಎಷ್ಟು ಕೆಟ್ಟದಾಗಿ ಮಾತನಾಡು ತ್ತಾರೆ ಎಂಬುದು ಇಡೀ ರಾಜ್ಯಕ್ಕೇ ಗೊತ್ತಿದೆ. ಚಿಕ್ಕಮಗಳೂರಿನ ದತ್ತಪೀಠದ ಹೆಸರಿನಲ್ಲಿ ರಾಜಕಾರಣ ಮಾಡಿಕೊಂಡು ಜನಾಂಗೀಯ ಹಾಗೂ ಜಾತಿ ಸಂಘರ್ಷಕ್ಕೆ ಇವರು ಕಾರಣವಾಗಿದ್ದಾರೆ. ಇಂತಹ ರಾಜಕಾರಣಿಗಳು ಬಿಜೆಪಿಯಲ್ಲಿ ಮಾತ್ರ ಇರಲು ಸಾಧ್ಯವೇ ಹೊರತು ಕಾಂಗ್ರೆಸ್‌ನಲ್ಲಿ ಅಲ್ಲ ಎಂದು ಆಕ್ರೋಶ ವ್ಯಕ್ತಪಡಿಸಿದರು.

ರಾಜ್ಯ ಸಿದ್ದರಾಮಯ್ಯನವರ ಅಭಿಮಾನಿಗಳ ಬಳಗದ ಅಧ್ಯಕ್ಷ ಪಿನಕಲ್ ಪ್ರಕಾಶ್, ಕೆಪಿಸಿಸಿ ಕಾರ್ಯದರ್ಶಿ ಭಾಸ್ಕರ್, ಜಿಲ್ಲಾ ಕಾಂಗ್ರೆಸ್ ವಕ್ತಾರ ಹೆಡತಲೆ ಮಂಜುನಾಥ್, [illegible] ಟೀಶ್, ಉತ್ತನಹಳ್ಳಿ ಶಿವಣ್ಣ ಸಕ್ಕಳ್ಳಿ ಬಸವ ರಾಜ್, ಬ್ರಾಡ್ವೇ ಕಿರಣ್, ಕಾಂಗ್ರೆಸ್ ಕಾನೂನು ಘಟಕದ ಕವಿತಾ ಕಾಳೆ, ಸುರೇಶ್ ಪಾಳ್ಯ, ಪ್ರೇಮ್, ಕಾಂತರಾಜು, ತಿಮ್ಮಯ್ಯ, ಲಕ್ಕೆಗೌಡ ಮತ್ತಿತರರು ಪ್ರತಿಭಟನೆಯಲ್ಲಿ ಪಾಲ್ಗೊಂಡಿದ್ದರು.

ರೈತರ ಹಾಲಿಗೆ ಲಾಭದಾಯಕ ಬೆಲೆ ನಿಗದಿಗೆ ಆಗ್ರಹಿಸಿ ಪ್ರತಿಭಟನೆ



ಮೈಸೂರು,ಸೆ.13(ಪಿಎಂ)– ರೈತರ ಹಾಲಿಗೆ ಲಾಭದಾಯಕ ಬೆಲೆ ನಿಗದಿಗೊಳಿ ಸಬೇಕೆಂಬುದೂ ಸೇರಿದಂತೆ ವಿವಿಧ ಬೇಡಿಕೆಗಳನ್ನು ಈಡೇರಿಸಲು ಒತ್ತಾಯಿಸಿ ಕರ್ನಾಟಕ ಪ್ರದೇಶ ಭಾರತೀಯ ಕಿಸಾನ್ ಸಂಘದ ಜಿಲ್ಲಾ ಘಟಕದ ವತಿಯಿಂದ ಮಂಗಳವಾರ ಪ್ರತಿಭಟನೆ ನಡೆಸಲಾಯಿತು.

ಮೈಸೂರು ಜಿಲ್ಲಾಧಿಕಾರಿ ಕಚೇರಿ ಎದುರು ಜಮಾಯಿಸಿದ ಪ್ರತಿಭಟನಾಕಾರರು, ಹೈನುಗಾರಿಕೆ ವ್ಯವಸಾಯದ ಒಂದು ಭಾಗ ವಾಗಿದೆ. ಇದರಲ್ಲಿ ತೊಡಗಿಸಿಕೊಂಡಿರುವ ಬಡ ಮತ್ತು ಮಧ್ಯಮ ವರ್ಗದ ರೈತ ಕುಟುಂಬಗಳು ಹಾಲಿನ ಉತ್ಪಾದನಾ ವೆಚ್ಚಕ್ಕಿಂತ ಕಡಿಮೆ ಬೆಲೆಗೆ ಹಾಲು ಉತ್ಪಾದ ಕರ ಸಹಕಾರ ಸಂಘಗಳಿಗೆ ಹಾಲು ನೀಡಬೇಕಾದ ಪರಿಸ್ಥಿತಿ ಇದೆ. ಇದರಿಂದ ರೈತರಿಗೆ ಅನ್ಯಾಯವಾಗುತ್ತಿದೆ. ರೈತರ ಹಾಲನ್ನು ಗ್ರಾಹಕರಿಗೆ ಹೆಚ್ಚಿನ ಬೆಲೆ ಮಾರಾಟ ಮಾಡುವ ಮೂಲಕ ಹಾಲು ಒಕ್ಕೂಟ ಹೆಚ್ಚು ಲಾಭ ಮಾಡಿಕೊಳ್ಳುತ್ತಿದೆ ಎಂದು ಆಕ್ರೋಶ ವ್ಯಕ್ತಪಡಿಸಿದರು. ಸಂಘದ ಜಿಲ್ಲಾಧ್ಯಕ್ಷ ಗುರುಪ್ರಸಾದ್, ಉಪಾಧ್ಯಕ್ಷ ಗಿರೀಶ್, ಪ್ರಧಾನ ಕಾರ್ಯದರ್ಶಿ ರವಿ ಮತ್ತಿತರರು ಪ್ರತಿಭಟನೆಯಲ್ಲಿ ಪಾಲ್ಗೊಂಡಿದ್ದರು.

ಎರಡನೇ ಬಾರಿಗೆ ಅಟಾರ್ನಿ ಜನರಲ್ ಆಗಿ ಮುಕುಲ್ ರೊಹಟಗಿ ಆಯ್ಕೆ

ನವದೆಹಲಿ: ಸೆಪ್ಟೆಂಬರ್ 30ಕ್ಕೆ ಹಾಲಿ ಅಟಾರ್ನಿ ಜನರಲ್ ಕೆ.ಕೆ.ವೇಣು ಗೋಪಾಲ್ ಅವಧಿ ಅಂತ್ಯ ಹಿನ್ನೆಲೆ ಹಿರಿಯ ವಕೀಲ ಮುಕುಲ್ ರೋಹಟಗಿ ಅವರನ್ನು ಭಾರತದ ಹದಿನಾಲ್ಕನೇ ಅಟಾರ್ನಿ ಜನರಲ್ ಆಗಿ ನೇಮಿಸಲು ನಿರ್ಧರಿಸಲಾಗಿದೆ.

ಮುಕುಲ್ ರೊಹಟಗಿ ಎರಡನೇ ಬಾರಿಗೆ ಅಟಾರ್ನಿ ಜನರಲ್ ಹುದ್ದೆ ಅಲಂಕರಿಸುತ್ತಿದ್ದು, ಈ ಹಿಂದೆ ಜೂನ್ 2014 ರಿಂದ ಜೂನ್ 2017ರ ಅವಧಿಯಲ್ಲಿ ಮೊದಲ ಬಾರಿಗೆ ಅಟಾರ್ನಿ ಜನರಲ್ ಆಗಿ ಸೇವೆ ಸಲ್ಲಿಸಿದ್ದರು.

ಮಕರ ಸಂಕ್ರಾಂತಿಯಂದು ವಿರಾಜಮಾನನಾಗಲಿದ್ದಾರೆ ಶ್ರೀರಾಮ!

ಐತಿಹಾಸಿಕ ಕ್ಷಣಕ್ಕೆ ಸಾಕ್ಷಿಯಾಗಲಿದೆ ಅಯೋಧ್ಯೆ...



ಅಯೋಧ್ಯೆ, ಉತ್ತರ ಪ್ರದೇಶ: ಕೋಟ್ಯಾಂತರ ಹಿಂದೂಗಳ ಶತ ಶತಮಾನಗಳ ಕನಸು ನನಸಾಗುವ ಕಾಲ ಹತ್ತಿರ ಬರುತ್ತಿದೆ ಅಯೋಧ್ಯೆಯ ಶ್ರೀರಾಮ ದೇಗುಲದಲ್ಲಿ ರಾಮಲಲ್ಲಾ ವಿರಾಜ ಮಾನನಾಗುವ ಶುಭ ದಿನಕ್ಕೆ ಕಾಲ ಕೂಡಿ ಬಂದಿದೆ. ಮಕರ ಸಂಕ್ರಾಂತಿಯ ಶುಭ ದಿನದಂದು ಅಯೋಧ್ಯೆಯ ಮಂದಿರದಲ್ಲಿ ಶ್ರೀರಾಮನ ಮೂರ್ತಿ ಪ್ರತಿಷ್ಠಾಪನೆಗೊಳ್ಳಲಿದೆ. ಆದರೆ, ಅದು 2023ರ ಸಂಕ್ರಾಂತಿ ಹಬ್ಬ ಅಲ್ಲ, 2024ರ ಸಂಕ್ರಾಂತಿ ಹಬ್ಬ. ಸತತ ಹೋರಾಟದ ಮೂಲಕ ಶ್ರೀ ರಾಮ ಜನ್ಮಭೂಮಿ ಅಯೋಧ್ಯೆಯಲ್ಲಿ ರಾಮ ಮಂದಿರ ನಿರ್ಮಾಣವಾಗುತ್ತಿದೆ. ಪ್ರಧಾನಿ ನರೇಂದ್ರ ಮೋದಿ ಶಿಲಾನ್ಯಾಸ ನೆರವೇರಿಸಿದ ಬಳಿಕ ಮಂದಿರ ನಿರ್ಮಾಣ ಕಾರ್ಯ ಭರದಿಂದ ಸಾಗುತ್ತಿದೆ. ಇನ್ನು ಜನವರಿ 14, 2024ರಲ್ಲಿ ನೂತನ ರಾಮ ಮಂದಿರದಲ್ಲಿ ರಾಮ ಲಲ್ಲಾ ಪ್ರತಿಷ್ಠಾಪನೆ ಮಾಡಲಿದ್ದೇವೆ ಎಂದು ರಾಮ ಜನ್ಮಭೂಮಿ ತೀರ್ಥ ಕ್ಷೇತ್ರ ಟ್ರಸ್ಟ್ ಕಾರ್ಯದರ್ಶಿ ಚಂಪತ್ ರೈ ಹೇಳಿದ್ದಾರೆ.

2023ರ ಡಿಸೆಂಬರ್ ಒಳಗೆ ಮಂದಿರ ನಿರ್ಮಾಣ ಪೂರ್ಣ: ಅಯೋಧ್ಯೆಯಲ್ಲಿ ಶ್ರೀರಾಮ ದೇಗುಲ ನಿರ್ಮಾಣ ಕಾರ್ಯ ಭರದಿಂದ ಸಾಗಿದೆ. ಈಗಾಗಲೇ ಶೇಕಡಾ 40ರಷ್ಟು ಮಂದಿರ ನಿರ್ಮಾಣ ಕಾರ್ಯ ಪೂರ್ಣ ಗೊಂಡಿದೆ. ದೇವಾಲಯದ ನಿರ್ಮಾಣ ಕಾರ್ಯವು ಡಿಸೆಂಬರ್ 2023 ರೊಳಗೆ ಪೂರ್ಣಗೊಳ್ಳುವ ನಿರೀಕ್ಷೆಯಿದೆ ಅಂತ ರಾಮ ಜನ್ಮಭೂಮಿ ತೀರ್ಥ ಕ್ಷೇತ್ರಟ್ರಸ್ಟ್ ಹೇಳಿದೆ

ಮಂದಿರ ನಿರ್ಮಾಣಕ್ಕೆ 1800 ಕೋಟಿ ರೂಪಾಯಿ ವೆಚ್ಚ: ತಜ್ಞರು ಸಲ್ಲಿಸಿದ ವರದಿಯ ಆಧಾರದ ಮೇಲೆ, ರಾಮ ಮಂದಿರ ನಿರ್ಮಾಣಕ್ಕೆ ಮಾತ್ರ 1,800 ಕೋಟಿ ರೂಪಾಯಿ ವೆಚ್ಚ ವಾಗಲಿದೆ ಎಂದು ಟ್ರಸ್ಟ್ ಅಂದಾಜಿಸಿತ್ತು.

ಕೃಷ್ಣ ವರ್ಣದ ರಾಮಲಲ್ಲಾನ ಪ್ರತಿಷ್ಠಾಪನೆ: ಇನ್ನು ಅಯೋಧ್ಯೆ ಮಂದಿರದಲ್ಲಿ ಕೃಷ್ಣ ವರ್ಣದ ಬಾಲ ರಾಮ ಅಥವಾ ರಾಮಲಲ್ಲಾನ ವಿಗ್ರಹ ಪ್ರತಿಷ್ಠಾಪನೆಗೆ ರಾಮ ಜನ್ಮಭೂಮಿ ತೀರ್ಥ ಕ್ಷೇತ್ರ ಟ್ರಸ್ಟ್ ನಿರ್ಧರಿಸಿದೆ. ನೀಲಿ ಮಿಶ್ರಿತ ಶ್ವೇತ ಶಿಲೆಯಲ್ಲಿ ವಿಗ್ರಹ ನಿರ್ಮಾಣ ಮಾಡ ಲಾಗುವುದು ಎಂದು ಟ್ರಸ್ಟ್ ಪ್ರಮುಖರ ಮಹತ್ವದ ಸಭೆಯಲ್ಲಿ ನಿರ್ಣಯ ಮಾಡಲಾಗಿದೆ.

ಗುಂಡಿ ಬಿದ್ದ ರಸ್ತೆಯಲ್ಲಿ ವಿನೂತನ ಪ್ರತಿಭಟನೆ



ಮೈಸೂರು,ಸೆ.13(ಪಿಎಂ)– ಕೃಷ್ಣರಾಜ ವಿಧಾನಸಭಾ ಕ್ಷೇತ್ರದಲ್ಲಿ ರಸ್ತೆಗಳು ಗುಂಡಿ ಬಿದ್ದಿದ್ದರೂ ದುರಸ್ತಿ, ಡಾಂಬರೀ ಕರಣ ಮಾಡದೇ ನಗರ ಪಾಲಿಕೆ ನಿರ್ಲಕ್ಷ್ಯ ತಾಳಿದೆ ಎಂದು ಆರೋಪಿಸಿ ಕ್ಷೇತ್ರದ ನಿವಾಸಿಗಳು ವಿನೂತನ ಪ್ರತಿಭಟನೆ ನಡೆಸಿದರು.

ಕುವೆಂಪುನಗರದ ಕೆಎಸ್‌ಆರ್‌ಟಿಸಿ ಡಿಪೋ ರಸ್ತೆಯಲ್ಲಿರುವ ಗುಂಡಿಗಳಲ್ಲಿ ಸಸಿಗಳನ್ನು ನೆಟ್ಟು ಅಣಕಿಸಿ, ಸುತ್ತಲೂ ರಂಗೋಲಿ ಬಿಡಿಸುವ ಮೂಲಕ ಆಕ್ರೋಶ ವ್ಯಕ್ತಪಡಿಸಿದರು. ಕಾಂಗ್ರೆಸ್ ಮುಖಂಡ ಎನ್.ಎಂ.ನವೀನ್ ಕುಮಾರ್, ಮುಖಂಡರಾದ ಎಂ.ರಾಜೇಶ್, ವಿನಯ್ ಕಣಗಾಲ್, ವಾಸುದೇವ್ ಮೂರ್ತಿ, ಭರತ್, ಫಣೀಶ್, ಮಲ್ಲೇಶ್, ವಿಜಯ್, ಆನಂದ್, ಉಮೇಶ್, ರಾಕೇಶ್ ಮತ್ತಿತರರು ಪ್ರತಿಭಟನೆಯಲ್ಲಿ ಪಾಲ್ಗೊಂಡಿದ್ದರು.

ಮಂಡ್ಯದ ಮೈಸೂರು ಸಕ್ಕರೆ ಕಾರ್ಖಾನೆ ಪುನರಾರಂಭದ ಬಾಕಿ 20 ಕೋಟಿ ಅನುದಾನ ಬಿಡುಗಡೆಗೊಳಿಸಿ

ಸಕ್ಕರೆ ಸಚಿವರಲ್ಲಿ ಎಂಎಲ್‌ಸಿಗಳಾದ ದಿನೇಶ್‌ಗೂಳಿಗೌಡ, ಮಧು ಜಿ.ಮಾದೇಗೌಡ ಮನವಿ

ಮೈಸೂರು, ಸೆ.13(ಪಿಎಂ)– ಮಂಡ್ಯದ ಮೈಸೂರು ಸಕ್ಕರೆ ಕಾರ್ಖಾನೆ ಪುನರಾರಂಭಕ್ಕೆ ಕಳೆದ ಸಾಲಿನ ರಾಜ್ಯ ಸರ್ಕಾರದ ಬಜೆಟ್‌ನಲ್ಲಿ ಘೋಷಣೆ ಮಾಡಿದ್ದ



50 ಕೋಟಿ ರೂ. ಅನುದಾನದಲ್ಲಿ ಬಾಕಿ ಉಳಿದಿರುವ 20 ಕೋಟಿ ರೂ. ಬಿಡುಗಡೆಗೆ ಕ್ರಮ ಕೈಗೊಳ್ಳಬೇಕೆಂದು ಸಕ್ಕರೆ ಸಚಿವ ಶಂಕರಪಾಟೀಲ ಮುನೇನಕೊಪ್ಪ ಅವರಲ್ಲಿ ವಿಧಾನ ಪರಿಷತ್ ಸದಸ್ಯರಾದ ದಿನೇಶ್‌ಗೂಳಿಗೌಡ ಮತ್ತು ಮಧು ಜಿ.ಮಾದೇಗೌಡ ಪತ್ರ ಮುಖೇನ ಮನವಿ ಮಾಡಿದ್ದಾರೆ. ಮಂಡ್ಯದಲ್ಲಿರುವ ಮೈಸೂರು ಸಕ್ಕರೆ ಕಾರ್ಖಾನೆಯು ತನ್ನದೇ ಆದ ಇತಿಹಾಸವನ್ನು ಹೊಂದಿದೆ. ಆದರೆ ಇತ್ತೀಚಿನ ವರ್ಷಗಳಲ್ಲಿ ಆರ್ಥಿಕ ನಷ್ಟದಿಂದಾಗಿ ಕಾರ್ಖಾನೆಯು ಸ್ಥಗಿತಗೊಳ್ಳುವಂತಾಗಿತ್ತು. ಸರ್ಕಾರಕ್ಕೆ ಮಂಡ್ಯ ಜಿಲ್ಲೆಯ ಜನಪ್ರತಿನಿಧಿಗಳು ಹಾಗೂ ರೈತ ನಾಯಕರ ಒತ್ತಾಯದ ಮೇರೆಗೆ ಕಾರ್ಖಾನೆಯ ಪುನರಾರಂಭಕ್ಕೆ 50 ಕೋಟಿ ರೂ.ಗಳನ್ನು ನೀಡುವುದಾಗಿ ಕಳೆದ ಸಾಲಿನ ಆಯವ್ಯಯದಲ್ಲಿ ಘೋಷಣೆ ಮಾಡಲಾಗಿತ್ತು.

ಅದರಂತೆ ಸರ್ಕಾರವು 30 ಕೋಟಿ ರೂ. ಮಾತ್ರ ಬಿಡುಗಡೆ ಮಾಡಿದ್ದು, ಈ ತಿಂಗಳ ಪ್ರಾರಂಭದಲ್ಲಿ ಪ್ರಯೋಗಿಕವಾಗಿ ಸಕ್ಕರೆ ಕಾರ್ಖಾನೆಯು ಕಾರ್ಯಾರಂಭ ಮಾಡಿದೆ. ಆದರೆ ತಮಗೆ ಹಣ ಪಾವತಿ ಆಗುವ ಬಗೆಗಿನ ಅನುಮಾನ ಮತ್ತು ಆತಂಕದಿಂದ ರೈತರು ಕಬ್ಬು ಸರಬರಾಜು ಮಾಡಲು ಹಿಂಜರಿಯುತ್ತಿದ್ದಾರೆ. ಕಾರ್ಖಾನೆ ವೆಚ್ಚಗಳು ಸೇರಿದಂತೆ ರೈತರಿಗೆ ಹಣ ಪಾವತಿ ಮಾಡಬೇಕಾಗುವ ಕಾರಣ ಸರ್ಕಾರ ಕೂಡಲೇ ಉಳಿದ 20 ಕೋಟಿ ರೂ. ಬಿಡುಗಡೆ ಮಾಡಬೇಕೆಂದು ರೈತರ ಪರವಾಗಿ ಮನವಿ ಮಾಡುವುದಾಗಿ ಪರಿಷತ್ ಸದಸ್ಯರು ಸಚಿವರಿಗೆ ಬರೆದಿರುವ ಪತ್ರದಲ್ಲಿ ಕೋರಿದ್ದಾರೆ.

ಮದ್ದೂರು ಗ್ರಾಪಂಗಳ ಸದಸ್ಯರ ಬೇಡಿಕೆಯಂತೆ ವಿವಿಧ ಕ್ರಿಯಾ ಯೋಜನೆಗಳ ಸಂಬಂಧ ಕ್ರಮ ವಹಿಸಲು ಅಧಿಕಾರಿಗಳಿಗೆ ಸೂಚಿಸಿ

ಸಿಎಂಗೆ ಪತ್ರ ಮುಖೇನ ಎಂಎಲ್‌ಸಿ ದಿನೇಶ್‌ಗೂಳಿಗೌಡ ಕೋರಿಕೆ

ಮೈಸೂರು,ಸೆ.13(ಪಿಎಂ)– ಮಂಡ್ಯ ಜಿಲ್ಲೆಯ ಮದ್ದೂರು ತಾಲೂಕಿನ ಗ್ರಾಮ ಪಂಚಾಯಿತಿಗಳ ಸದಸ್ಯರ ಬೇಡಿಕೆ ಯಂತೆ ವಿವಿಧ ಕ್ರಿಯಾಯೋ ಜನೆಗಳಿಗೆ ಸಂಬಂಧಿಸಿದ ಅಧಿಕಾರಿ ಗಳು ಕ್ರಮ ಕೈಗೊಳ್ಳಲು ಸೂಕ್ತ ನಿರ್ದೇಶನ ನೀಡುವಂತೆ ಕೋರಿ ಮಂಡ್ಯ ಜಿಲ್ಲೆ ಸ್ಥಳೀಯ ಸಂಸ್ಥೆಗಳ ಕ್ಷೇತ್ರದ ವಿಧಾನ ಪರಿಷತ್ ಸದಸ್ಯ ದಿನೇಶ್ ಗೂಳಿಗೌಡ ಪತ್ರ ಮುಖೇನ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಅವರನ್ನು ಕೋರಿದ್ದಾರೆ.



ಮದ್ದೂರು ತಾಲೂಕು ಗ್ರಾಮ ಪಂಚಾಯಿತಿ ಸದಸ್ಯರ ಒಕ್ಕೂಟದ ವತಿಯಿಂದ ಮಂಗಳವಾರ (ಸೆ.13) ಮದ್ದೂರು ತಾಲೂಕು ಪಂಚಾಯಿತಿ ಆವರಣದಲ್ಲಿ ಪ್ರತಿಭಟನೆ ನಡೆಸಲಾಗಿದೆ. ಮೇಲಿನ ಹಂತದ ಅಧಿಕಾರಿಗಳ ಅಸಹಕಾರ ಮತ್ತು ವಿಕೇಂದ್ರೀಕರಣ ಪರ ಬದ್ಧತೆ ಕೊರತೆಯ ಕಾರಣ ಗ್ರಾಮ ಸ್ವರಾಜ್ ಆಶಯ ಸಂಪೂರ್ಣ ಕುಂಠಿತಗೊಂಡಿದೆ. ಗ್ರಾಮ ಪಂಚಾಯಿತಿ ಗಳನ್ನು ಪ್ರತಿನಿಧಿಸುವ ಸದಸ್ಯರು ಸಕಾಲಿಕವಾಗಿ ಗ್ರಾಮ ಪಂಚಾಯಿತಿಯ ವಿವಿಧ ಕ್ರಿಯಾಯೋಜನೆ ಗಳಿಗೆ ನಿಯಮಾನುಸಾರ ಪಟ್ಟಿ ಗಳನ್ನು ಕಳುಹಿಸಿದ್ದರೂ ಸಂಬಂಧ ಪಟ್ಟ ಅಧಿಕಾರಿಗಳು ಕ್ರಮವಹಿ ಸುತ್ತಿರುವುದಿಲ್ಲ. ಗ್ರಾಮಗಳಲ್ಲಿನ ಅಭಿವೃದ್ಧಿ ಮತ್ತು ಮೂಲ ಸೌಕರ್ಯಗಳ ವಿಷಯದಲ್ಲಿ ಸಂಬಂಧ ಪಟ್ಟ ಇಲಾಖೆಗಳೊಡನೆ ಸಮನ್ವಯ ಸಾಧಿಸಿ ಪಂಚಾಯಿತಿಗಳಿಗೆ ಸಂಪರ್ಕ ಸಂವಹನ ಮಾಡುವಲ್ಲಿ ಜಿಲ್ಲಾ ಮತ್ತು ತಾಲೂಕು ಪಂಚಾಯಿತಿ ಅಧಿಕಾರಿಗಳು ವಿಫಲವಾಗಿದ್ದಾರೆ. ಇದರಿಂದ ಗ್ರಾಮ ಪಂಚಾಯಿತಿ ಸದಸ್ಯರ ಜನತೆಯ ಆಷ್ಟೋತ್ತರಗಳಿಗೆ ಸ್ಪಂದಿಸಲು ಸಾಧ್ಯವಾಗುತ್ತಿಲ್ಲ. ಹಾಗಾಗಿ ಸಂಬಂಧ ಪಟ್ಟ ಅಧಿಕಾರಿಗಳಿಗೆ ಸೂಕ್ತ ನಿರ್ದೇಶನ ನೀಡಬೇಕೆಂದು ಪತ್ರದಲ್ಲಿ ಕೋರಿದ್ದಾರೆ.

ಸೆ.16 ರಂದು ದಿಶಾ ಸಭೆ

ಮಂಡ್ಯ, ಸೆ.9– ಮಂಡ್ಯ ಲೋಕಸಭಾ ಸದಸ್ಯರಾದ ಸುಮಲತಾ ಅಂಬರೀಶ್ ಅವರ ಅಧ್ಯಕ್ಷತೆಯಲ್ಲಿ ಸೆ.16 ರಂದು ಬೆಳಗ್ಗೆ 11 ಗಂಟೆಗೆ ಜಿಲ್ಲಾ ಪಂಚಾಯಿತಿ ಕಾವೇರಿ ಸಭಾಂಗಣದಲ್ಲಿ ದಿಶಾ ಸಭೆಯನ್ನು ನಡೆಸಲಾಗುವುದು ಎಂದು ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಪ್ರಕಟಣೆಯಲ್ಲಿ ತಿಳಿಸಿರುತ್ತಾರೆ.

ಆರ್ಥಿಕ– ಸಾಮಾಜಿಕ ಸುಧಾರಣೆಗೆ ಮಹಿಳೆಯರ ಪಾತ್ರ ಅಪಾರ: ಸುಮಲತಾ



ಮಂಡ್ಯ, ಸೆ.13– ಆರ್ಥಿಕ–ಸಾಮಾಜಿಕ ಸುಧಾರಣೆಗೆ ಮಹಿಳೆಯರ ಪಾತ್ರ ಅಪಾರ ಎಂದು ಸಂಸದೆ ಸುಮಲತಾ ಅಂಬರೀಷ್ ಹೇಳಿದರು.

ತಾಲೂಕಿನ ಬಿ.ಹೊಸೂರು ಕಾಲೋನಿ ಯಲ್ಲಿ ಕರ್ನಾಟಕ ರಾಜ್ಯ ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾನಿಲಯ ಹೊರಾವರಣ ಸ್ನಾತಕ ಮತ್ತು ಸ್ನಾತಕೋತ್ತರ ಅಧ್ಯಯನ ಮತ್ತು ಸಂಶೋಧನಾ ಕೇಂದ್ರದಲ್ಲಿ 2022–23ನೇ ಸಾಲಿನ ವಾರ್ಷಿಕ ದಿನಾಚರಣೆ, ಸ್ನಾತಕ ಪದವಿ ಉದ್ಘಾಟನೆ ಹಾಗೂ ಜ್ಞಾನ ಕಾವೇರಿ ವಾರ್ಷಿಕ ಸಂಚಿಕೆ ಬಿಡುಗಡೆ ಗೊಳಿಸಿ ಅವರು ಮಾತನಾಡಿದರು.

ಇತ್ತೀಚೆಗೆ ಮಹಿಳೆಯರು ಎಲ್ಲಾ ಕ್ಷೇತ್ರ ಗಳಲ್ಲೂ ಸಾಧನೆ ಮಾಡುತ್ತಿದ್ದಾರೆ. ಇದು ಉತ್ತಮ ಬೆಳವಣಿಗೆ. ಮಹಿಳೆಯರಿಗೆ ಕುಟುಂಬದ ನಿರ್ವಹಣೆ ಜೊತೆಗೆ ಮಕ್ಕಳಿಗೆ ಮೊದಲ ಶಿಕ್ಷಕರಾಗಿ ಸಾಮಾಜಿಕ ಜವಾಬ್ದಾರಿ ಇರುತ್ತದೆ. ಈ ಎಲ್ಲವನ್ನು ನಿಭಾಯಿ ಸುವ ಶಕ್ತಿ ಮಹಿಳೆಯರಿಗಿದೆ ಎಂದರು.

ಮಹಿಳೆ ಮನಸ್ಸು ಮಾಡಿದರೆ ಏನು ಬೇಕಾದರೂ ಸಾಧನೆ ಮಾಡಬಹುದು ಎಂಬುದಕ್ಕೆ ಸಾಕಷ್ಟು ನಿದರ್ಶನಗಳು ನಮ್ಮ ಕಣ್ಣ ಮುಂದಿವೆ. ಈ ಹಿಂದೆ ಮಹಿಳೆಯರಿಗೆ ಉನ್ನತ ವ್ಯಾಸಂಗಕ್ಕೆ ಕಳುಹಿಸುತ್ತಿರಲಿಲ್ಲ. ಮದುವೆ ಮಾಡಿ ಕಳುಹಿಸಿದರೆ ಸಾಕು ಎಂದು ಪೋಷಕರು ಭಾವಿಸುತ್ತಿದ್ದರು. ಆದರೆ, ಈಗ ಪರಿಸ್ಥಿತಿ ಬದಲಾಗಿದೆ. ನಿಮಗೆಲ್ಲ ಉತ್ತಮ ಅವಕಾಶಗಳು ಲಭಿಸಿವೆ. ಇದರ ಸದುಪಯೋಗ ಪಡೆದುಕೊಂಡು ಉನ್ನತ ಸ್ಥಾನ ಗಳಿಸಿ ಎಂದು ಶುಭ ಹಾರೈಸಿದರು.

ಈ ವೇಳೆ ಶಾಸಕ ಎಂ.ಶ್ರೀನಿವಾಸ್, ಕರ್ನಾಟಕ ರಾಜ್ಯ ಅಕ್ಕಮಹಾದೇವಿ ಮಹಿಳಾ ವಿವಿಯ ಕುಲಸಚಿವ ಬಿ.ಎಸ್.ನಾವಿ, ಕುಲಪತಿ ಬಿ.ಕೆ.ತುಳಸಿಮಾಲ, ವಿಶೇಷಾಧಿಕಾರಿ ಪ್ರೊ.ಹೇಮಲತಾ, ಕನ್ನಡ ವಿಭಾಗದ ಉಪನ್ಯಾಸಕಿ ಡಾ.ಗೀತಾಮಣಿ ಹಾಗೂ ಸಿಬ್ಬಂದಿ ಹಾಜರಿದ್ದರು.

ಆಣೆ–ಪ್ರಮಾಣ ಮಾಡಲು ಮೇಲುಕೋಟೆಗೆ ಬನ್ನಿ

ಜೆಡಿಎಸ್ ಶಾಸಕರಿಗೆ ಸುಮಲತಾ ಸವಾಲು

ಮಂಡ್ಯ: ರಾಷ್ಟ್ರೀಯ ಹೆದ್ದಾರಿ ಕಾಮಗಾರಿ ಕಮಿಷನ್ ಪಡೆದಿರುವುದಾಗಿ ಜೆಡಿಎಸ್ ಶಾಸಕರು ನನ್ನ ಮೇಲೆ ಇಲ್ಲಸಲ್ಲದ ಆರೋಪ ಮಾಡುತ್ತಿದ್ದಾರೆ. ದಾಖಲೆಗಳನ್ನು ಇಟ್ಟುಕೊಂಡು ಮೇಲುಕೋಟೆಗೆ ಬನ್ನಿ, ಚೆಲುವನಾರಾಯಣಸ್ವಾಮಿ ಮುಂದೆ ಆಣೆ, ಪ್ರಮಾಣ ಮಾಡೋಣ ಎಂದು ಜೆಡಿಎಸ್ ಶಾಸಕರಿಗೆ ಸಂಸದೆ ಸುಮಲತಾ ಬಹಿರಂಗ ಸವಾಲು ಹಾಕಿದರು.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ನಾನು ಎಂ.ಪಿ ಪ್ರಮಾಣ ಪತ್ರದೊಂದಿಗೆ ಮೇಲುಕೋಟೆಗೆ ಬರುತ್ತೇನೆ. ಶಾಸಕರು ಕೂಡ ಎಎಲ್‌ಎ ಪ್ರಮಾಣ ಪತ್ರದೊಂದಿಗೆ ಮೇಲುಕೋಟೆಗೆ ಬಂದು ಆಣೆ, ಪ್ರಮಾಣ ಮಾಡಲಿ. ಆಗ ಯಾರು ಕಮಿಷನ್ ಪಡೆದಿದ್ದಾರೆ ಎಂಬುದು ತಿಳಿಯುತ್ತದೆ. ಸುಮ್ಮನೇ ಮಾತ ನಾಡಬಾರದು, ದಾಖಲೆ ಸಮೇತ ಬಂದು ಆಣೆ ಮಾಡಬೇಕು ಎಂದರು.

ನಾನು ಬೇರೆಯವರ ರೀತಿಯಲ್ಲಿ ಕದ್ದು ಮುಚ್ಚಿ ವ್ಯವಹಾರ ಮಾಡುವುದಿಲ್ಲ, ಪಾರದರ್ಶಕವಾಗಿ ಕೆಲಸ ಮಾಡುತ್ತಿದ್ದೇನೆ. ಕೆಲವರು ಅಂಬರೀಷ್ ವಿರುದ್ಧ ಟೀಕೆ ಮಾಡುತ್ತಿರುವುದು ಅವರ ಅಭಿಮಾನಿಗಳಿಗೆ ನೋವು ತರಿಸಿದೆ. ನಮ್ಮ ನಡುವೆ ಇಲ್ಲದವರ ಬಗ್ಗೆ ಯಾರೂ ಕೆಟ್ಟದಾಗಿ ಮಾತನಾಡಬಾರದು. ಅಂಬರೀಷ್ ವಿರುದ್ಧ ನೀವು ಮಾತನಾಡಿದರೆ ಅದು ನಿಮ್ಮ ವ್ಯಕ್ತಿತ್ವ, ಸಂಸ್ಕೃತಿ ತೋರಿಸುತ್ತದೆ ಎಂದರು.

ಕಡಜದ ಹುಳು ಕಡಿದು ಇಬ್ಬರು ರೈತರು ಸಾವು



ನಾಗರಾಜೇಗೌಡ



ನಂಜಪ್ಪ

ಕೆ.ಆರ್.ಪೇಟೆ, ಸೆ.13– ಕಡಜದ ಹುಳು ಕಡಿದು ಇಬ್ಬರು ರೈತರು ಸಾವನ್ನಪ್ಪಿ, ಓರ್ವ ಗಾಯಗೊಂಡಿರುವ ಘಟನೆ ತಾಲೂಕಿನ ಸಂತೇಬಾಚಹಳ್ಳಿ ಹೋಬಳಿಯ ನಾಗರಘಟ್ಟ ಗ್ರಾಮದಲ್ಲಿ ನಡೆದಿದೆ. ಗ್ರಾಮದ ನಾಗರಾಜೇಗೌಡ(65), ನಂಜಪ್ಪ(60) ಮೃತಪಟ್ಟ ರೈತರು. ಕುಮಾರಸ್ವಾಮಿ ಗಾಯಗೊಂಡ ರೈತ.

ಘಟನೆ ವಿವರ: ಕಳೆದ ಮೂರ್ನಾಲ್ಕು ದಿನಗಳ ಹಿಂದೆ ಜಮೀನಿನಲ್ಲಿ ನಾಗರಾಜೇಗೌಡ, ನಂಜಪ್ಪ, ಕುಮಾರಸ್ವಾಮಿ ಅವರು ಕೆಲಸ ಮಾಡುತ್ತಿದ್ದಾಗ ಅವರ ಮೇಲೆ ಏಕಾಏಕಿ ನೂರಾರು ಕಡಜದ ಹುಳುಗಳು ದಾಳಿ ನಡೆಸಿದೆ, ಪರಿಣಾಮ ಮೂವರು ತೀವ್ರವಾಗಿ ಗಾಯಗೊಂಡು ಅಸ್ವಸ್ಥಗೊಂಡಿದ್ದಾರೆ.

ಕೂಡಲೇ ಮೂವರನ್ನು ಚನ್ನರಾಯಪಟ್ಟಣದ ಸಾರ್ವಜನಿಕ ಸರ್ಕಾರಿ ಆಸ್ಪತ್ರೆಯಲ್ಲಿ ಪ್ರಾಥಮಿಕ ಚಿಕಿತ್ಸೆ ಕೊಡಿಸಿ ಹೆಚ್ಚಿನ ಚಿಕಿತ್ಸೆಗಾಗಿ ಹಾಸನದ ಖಾಸಗಿ ಆಸ್ಪತ್ರೆಗೆ ದಾಖಲಿಸಲಾಯಿತು. ಆದರೆ, ಚಿಕಿತ್ಸೆ ಫಲಕಾರಿಯಾಗದೇ ನಾಗರಾಜೇಗೌಡ ಭಾನುವಾರ ಮೃತಪಟ್ಟರೇ, ನಂಜಪ್ಪ ಸೋಮವಾರ ರಾತ್ರಿ ಮೃತಪಟ್ಟಿದ್ದಾರೆ.

ಮತ್ತೊರ್ವ ಗಾಯಾಳು ಕುಮಾರಸ್ವಾಮಿ ಚಿಕಿತ್ಸೆ ಪಡೆಯುತ್ತಿದ್ದು ಪ್ರಾಣಾಪಾಯದಿಂದ ಪಾರಾಗಿದ್ದಾರೆ. ವಿಷಯ ತಿಳಿದು ರೈತರ ಮನೆಗೆ ಮಂಡ್ಯ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಕೆ.ಶ್ರೀನಿವಾಸ್, ತಹಸೀಲ್ದಾರ್ ಎಂ.ವಿ.ರೂಪಾ ಭೇಟಿ ನೀಡಿ, ಕುಟುಂಬದವರಿಗೆ ಸಾಂತ್ವನ ಹೇಳಿದರು. ಅಲ್ಲದೆ ಸರ್ಕಾರ ದಿಂದ ಸೂಕ್ತ ಪರಿಹಾರ ಕೊಡಿಸಲು ಕ್ರಮವಹಿ ಸಲಾಗುವುದು ಎಂದು ಭರವಸೆ ನೀಡಿದರು.

ಈ ಸಂಬಂಧ ಕೆ.ಆರ್.ಪೇಟೆ ಪಟ್ಟಣ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಅ.1, ದಸರಾ ಉದ್ಯೋಗ ಮೇಳ

ಮಂಡ್ಯ, ಸೆ.13– ಶ್ರೀರಂಗಪಟ್ಟಣ ದಸರಾ ಮಹೋತ್ಸವದ ಪ್ರಯುಕ್ತ ಜಿಲ್ಲಾಡಳಿತ ಮಂಡ್ಯ, ಶ್ರೀರಂಗಪಟ್ಟಣ ದಸರಾ ಸಮಿತಿ, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆ ಹಾಗೂ ಜಿಲ್ಲಾ ಉದ್ಯೋಗ ವಿನಿಮಯ ಕಚೇರಿ ಇವರ ಸಂಯುಕ್ತಾಶ್ರಯದಲ್ಲಿ ಅ. 1ರಂದು ಬೆಳಗ್ಗೆ 9.00 ಗಂಟೆಗೆ ದಸರಾ ಉದ್ಯೋಗ ಮೇಳವನ್ನು ಶ್ರೀರಂಗಪಟ್ಟಣದ ಸರ್ಕಾರಿ ಪದವಿ ಪೂರ್ವ ಕಾಲೇಜಿನ ಆವರಣದಲ್ಲಿ ಆಯೋಜಿಸಲಾಗಿದೆ. 50ಕ್ಕೂ ಹೆಚ್ಚಿನ ಕಂಪನಿಗಳು ಭಾಗವಹಿಸಲಿದ್ದು, ಎಸ್‌ಎಸ್‌ಎಲ್‌ಸಿ, ಪಿಯುಸಿ, ಐಟಿಐ, ಡಿಪ್ಲೋಮಾ, ಯಾವುದೇ ಪದವಿ, ಬಿಎಸ್‌ಸಿ(ನರ್ಸಿಂಗ್), ಫಾರ್ಮಸಿ ಮತ್ತು ಟೈಲರಿಂಗ್ ಹುದ್ದೆಗಳಿಗೆ ಅಭ್ಯರ್ಥಿಗಳು ದಾಖಲಾತಿಗಳೊಂದಿಗೆ ಭಾಗವಹಿಸಬಹುದು. ಮಾಹಿತಿಗಾಗಿ ದೂ.08232–295010 ಅಥವಾ ಮೊ.ನಂ.9164443223 ಸಂಪರ್ಕಿಸಲು ಪ್ರಕಟಣೆ ತಿಳಿಸಿದೆ.

ಬಿಜೆಪಿ ಜನಪರ ಯೋಜನೆಗಳನ್ನು ತಿಳಿಸಲು ಸಲಹೆ



ಶ್ರೀರಂಗಪಟ್ಟಣ, ಸೆ.13– ವಿಧಾನಸಭೆ ಚುನಾವಣೆ ಸಮೀಪಿಸುತ್ತಿದ್ದು ಕಾರ್ಯಕರ್ತರು ಪ್ರತಿ ಗ್ರಾಮಗಳ ಮನೆ ಮನೆಗಳಿಗೆ ತೆರಳಿ ಬಿಜೆಪಿಯ ಜನಪರ ಯೋಜನೆಗಳನ್ನು ತಿಳಿಸಬೇಕು ಎಂದು ರಾಜ್ಯ ಕಾರ್ಯಕಾರಿಣಿ ಸದಸ್ಯ ಸಿದ್ದರಾಮಯ್ಯ ಹೇಳಿದರು.

ತಾಲೂಕಿನ ಪೇಪರ್‌ಮಿಲ್ ಸರ್ಕಲ್‌ನಲ್ಲಿ ನಡೆದ ಹೋಬಳಿ ಮಟ್ಟದ ಬಿಜೆಪಿ ಸಾಮಾನ್ಯ ಸಭೆಯಲ್ಲಿ ಭಾಗವಹಿಸಿ ಮಾತನಾಡಿದ ಅವರು, ಕೇಂದ್ರ ಹಾಗೂ ರಾಜ್ಯ ಸರ್ಕಾರಗಳು ಹಲವು ಜನಪರ ಯೋಜನೆಗಳನ್ನು ಜಾರಿಗೆ ತಂದಿದೆ. ಈ ಯೋಜನೆಗಳನ್ನು ಸಾಮಾನ್ಯ ಜನರಿಗೆ ತಲುಪಿಸುವ ಕೆಲಸವನ್ನು ಬೂತ್ ಮಟ್ಟದಲ್ಲಿ ಕಾರ್ಯಕರ್ತರು ಮಾಡಬೇಕು ಎಂದರು.

ಬಿಜೆಪಿ ಜಿಲ್ಲಾ ಕಾರ್ಯದರ್ಶಿ ಹೊಸಹಳ್ಳಿ ಪೈ.ಮಹದೇವು ಮಾತನಾಡಿ, ಪ್ರಧಾನಮಂತ್ರಿ ಗರೀಬ್ ಕಲ್ಯಾಣ ಯೋಜನೆಯಡಿ 80 ಕೋಟಿ ಜನರಿಗೆ ಉಚಿತ ಆಹಾರ ಸಾಮಗ್ರಿಗಳ ಪೂರೈಕೆ, ಪ್ರಧಾನಮಂತ್ರಿ ಆವಾಸ್ ಯೋಜನೆಯಡಿ 1.22 ಕೋಟಿ ಮನೆ ನಿರ್ಮಾಣಕ್ಕೆ ಅನುಮೋದನೆ ನೀಡಿದೆ. ಆಯುಷ್ಮಾನ್ ಯೋಜನೆಯಡಿ 3.2ಕೋಟಿ ಜನರಿಗೆ 5 ಲಕ್ಷ ರೂ. ಉಚಿತ ಚಿಕಿತ್ಸಾ ವಿಮೆ ಸೇರಿದಂತೆ ಹಲವು ಜನರಪರ ಯೋಜನೆಗಳನ್ನು ಜಾರಿಗೆ ತಂದಿದ್ದು, ಕಾರ್ಯಕರ್ತರು ಬಿಜೆಪಿ ಪಕ್ಷದ ಸಾಧನಾ ಕರಪತ್ರವನ್ನು ಹಂಚುವ ಮೂಲಕ ಪಕ್ಷಕ್ಕೆ ಶಕ್ತಿ ತುಂಬಬೇಕು ಎಂದರು.

ಸಭೆಯಲ್ಲಿ ಬಿಜೆಪಿ ರಾಜ್ಯ ರೈತ ಮೋರ್ಚಾ ಉಪಾಧ್ಯಕ್ಷ ಕೆ.ಎಸ್.ನಂಜುಂಡೇಗೌಡ, ತಾಲೂಕು ಅಧ್ಯಕ್ಷ ಪೀಹಳ್ಳಿ ರಮೇಶ್, ಮುಖಂಡರಾದ ಚಂದಗಾಲು ಶಂಕರ್, ರವಿ, ಕೃಷ್ಣ, ಮಲ್ಲೇಶ್‌ಕುಮಾರ್ ಇತರರು ಇದ್ದರು.

ಮಾನಸಿಕ ಖಿನ್ನತೆಯಿಂದ ಆತ್ಮಹತ್ಯೆ ಪ್ರಕರಣ ಹೆಚ್ಚಳ



ನಾಗಮಂಗಲ, ಸೆ.13– ಮಾನಸಿಕ ಖಿನ್ನತೆಗೆ ಇತ್ತೀಚಿನ ದಿನಗಳಲ್ಲಿ ಆತ್ಮಹತ್ಯೆಯಂತಹ ಪ್ರಕರಣಗಳು ಹೆಚ್ಚಳವಾಗುತ್ತಿದೆ ಎಂದು ಶ್ರೀಆದಿಚುಂಚನಗಿರಿ ವೈದ್ಯಕೀಯ ಮಹಾ ವಿದ್ಯಾಲಯದ ಪ್ರಾಂಶುಪಾಲರಾದ ಡಾ.ಎಂ.ಜಿ. ಶಿವರಾಮು ಆತಂಕ ವ್ಯಕ್ತಪಡಿಸಿದರು.

ಇಲ್ಲಿನ ಆದಿಚುಂಚನಗಿರಿಯ ವೈದ್ಯಕೀಯ ಮಹಾವಿದ್ಯಾಲಯದಲ್ಲಿ ಮಾನಸಿಕ ಆರೋಗ್ಯ ವಿಭಾಗ, ವಿದ್ಯಾರ್ಥಿ ಪೋಷಕ ಸಮಿತಿ ಹಾಗೂ ರಾಷ್ಟ್ರೀಯ ಸೇವಾ ಯೋಜನೆಯ ಸಂಯುಕ್ತಾಶ್ರಯದಲ್ಲಿ ನಡೆದ ವಿಶ್ವ ಆತ್ಮಹತ್ಯೆ ತಡೆಗಟ್ಟುವ ದಿನಾಚರಣೆ ಉದ್ಘಾಟಿಸಿ ಅವರು ಮಾತನಾಡಿದರು. ಇದೊಂದು ಆತಂಕಕಾರಿ ಬೆಳವಣಿಗೆಯಾಗಿದ್ದು, ಖಿನ್ನತೆಗೆ ಒಳಗಾದವರೊಂದಿಗೆ ಸಮಾಲೋಚಿಸಿ ಅವರಿಗೆ ಸಮಸ್ಯೆ ಎದುರಿಸುವ ನಿಟ್ಟಿನಲ್ಲಿ ತರಬೇತಿ ನೀಡಬೇಕು. ಜೀವ ಮತ್ತು ಜೀವನ ಅತ್ಯ ಮೂಲ್ಯವಾಗಿದ್ದು, ಜೀವನದಲ್ಲಿ ಯಾವುದೇ ಸವಾಲು ಗಳು ಎದುರಾದರೂ ಮಾನಸಿಕ ಸಬಲತೆಯಿಂದ ಎದುರಿಸಬೇಕು. ಈ ರೀತಿಯ ತರಬೇತಿಯಿಂದ ಪ್ರಾರಂಭಿಕ ಹಂತದಲ್ಲೇ ಆತ್ಮಹತ್ಯೆ ಮನೋಭಾವನೆ ಬದಲಿಸಲಾಗು ತ್ತದೆ ಎಂದು ಹೇಳಿದರು. ಮಾನಸಿಕ ತಜ್ಞ ಡಾ.ವಿನಯ್ ಮಾತನಾಡಿ, ಆತ್ಮಹತ್ಯೆಯ ಮುನ್ಸೂಚನೆಗಳು, ಗಂಭೀರತೆ, ಖಿನ್ನತೆಯ ಲಕ್ಷಣಗಳು, ಆತ್ಮಹತ್ಯೆ ಯೋಚನೆ ಮಾಡುತ್ತಿರುವ ವ್ಯಕ್ತಿಗಳೊಂದಿಗೆ ಆಪ್ತ ಸಮಾಲೋಚನೆ ಮಾಡುವ ಬಗ್ಗೆ ಮಾಹಿತಿ ನೀಡಿದರು. ಕಾರ್ಯಕ್ರಮದಲ್ಲಿ ಮಾನಸಿಕ ಆರೋಗ್ಯ ವಿಭಾಗದ ಮುಖ್ಯಸ್ಥ ಡಾ.ಶಿವ ಕುಮಾರ್, ಡಾ.ಶೀತಲ್, ಡಾ.ರಾಘವೇಂದ್ರ ಇದ್ದರು.

ಮೈಸೂರು ಮಿತ್ರ ಬುಧವಾರ 14 ಸೆಪ್ಟೆಂಬರ್ 2022

ವಿದ್ಯುತ್ ಸ್ಪರ್ಶದಿಂದ ಯುವಕ ಸಾವು

ಮಡಿಕೇರಿ, ಸೆ.13– ನಗರದ ಡೈರಿ ಫಾರಂ ಬಳಿ ನೂತನವಾಗಿ ನಿರ್ಮಾಣಗೊಳ್ಳುತ್ತಿರುವ ಪೊಲೀಸ್ ವರಿಷ್ಠಾಧಿಕಾರಿ ಕಚೇರಿ ಕಟ್ಟಡದಲ್ಲಿ ವಿದ್ಯುತ್ ತಗುಲಿ ಯುವಕನೋರ್ವ ಸಾವನ್ನಪ್ಪಿರುವ ಘಟನೆ ಸಂಭವಿಸಿದೆ.

ಪಶ್ಚಿಮ ಬಂಗಾಳ ಮೂಲದ ಕಟ್ಟಡ ಕಾರ್ಮಿಕ ಹಾಸಿಂ(21) ಮೃತಪಟ್ಟಿರುವ ಯುವಕ. ಕಟ್ಟಡದಲ್ಲಿ ಕೆಲಸ ಮಾಡುತ್ತಿದ್ದಾಗ ವಿದ್ಯುತ್ ಸ್ಪರ್ಶವಾಯಿತು ಎನ್ನಲಾಗಿದೆ. ತಕ್ಷಣವೇ ಯುವಕನನ್ನು ಚಿಕಿತ್ಸೆಗೆಂದು ಸ್ಥಳೀಯ ಜಿಲ್ಲಾಸ್ಪತ್ರೆಗೆ ಸಾಗಿಸಲಾಯಿತಾದರೂ ಮಾರ್ಗ ಮಧ್ಯೆ ಆತ ಮೃತಪಟ್ಟಿದ್ದಾನೆ. ಘಟನೆ ಕುರಿತು ಮಡಿಕೇರಿ ನಗರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ಪೊಲೀಸರು ಮುಂದಿನ ಕಾನೂನು ಕ್ರಮ ಕೈಗೊಂಡಿದ್ದಾರೆ.

ಯುವಕ ಆತ್ಮಹತ್ಯೆ

ಗುಡ್ಡೆಹೊಸೂರು, ಸೆ.13– ಇಲ್ಲಿನ ಬೋಳ್ಳುರು ಗ್ರಾಮದ ನಿವಾಸಿ ವಿಶ್ವನಾಥ (ವಿಶ್ವ) ಅವರ ಪುತ್ರ ಚಂದ್ರ(24) ತಮ್ಮ ದನದ ಕೊಟ್ಟಿಗೆಯಲ್ಲಿ ನೇಣು ಹಾಕಿಕೊಂಡು ಆತ್ಮಹತ್ಯೆಗೆ ಶರಣಾಗಿದ್ದಾರೆ. ಕುಶಾಲನಗರ ಗ್ರಾಮಾಂತರ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ಮೃತನ ಅಂತ್ಯಕ್ರಿಯೆ ನಾಳೆ (ಬುಧವಾರ) ಸ್ವಗ್ರಾಮದಲ್ಲಿ ನಡೆಯಲಿದೆ.

ಕೋಳಿ ಗೊಬ್ಬರದ ಲಾರಿ ಮಗುಚಿ ಚಾಲಕನಿಗೆ ಗಾಯ

ಸುಂಟಿಕೊಪ್ಪ ಸೆ13– ಕೋಳಿ ಗೊಬ್ಬರ ಸಾಗಿಸುತ್ತಿದ್ದ ಲಾರಿಯೊಂದು ನಿಯಂತ್ರಣ ತಪ್ಪಿ ಹೆದ್ದಾರಿಯಲ್ಲಿ ಮಗುಚಿ ಬಿದ್ದ ಘಟನೆ ಸುಂಟಿಕೊಪ್ಪದಲ್ಲಿ ನಡೆದಿದೆ.

ತಮಿಳುನಾಡಿನ ನಾಮಕ್ಕಲ್‌ನಿಂದ ಪುತ್ತೂರಿಗೆ ಕೋಳಿ ಗೊಬ್ಬರ ಸಾಗಿಸುತ್ತಿದ್ದ ಲಾರಿಯನ್ನು (ಟಿಎನ್–28–ಬಿಬಿ–3659) ಚಾಲಕ ರವಿ ಎಂಬುವರು ಚಲಾಯಿಸುತ್ತಿದ್ದು, ಮಂಗಳವಾರ ಬೆಳಗಿನ ಸುಂಟಿಕೊಪ್ಪ ಗದ್ದೆಹಳ್ಳದ ಬಳಿ ತಿರುವಿನಲ್ಲಿ ಚಾಲಕನ ನಿಯಂತ್ರಣ ತಪ್ಪಿ ಲಾರಿಯು ಹೆದ್ದಾರಿ ಬದಿಯಲ್ಲಿ ಮಗುಚಿಕೊಂಡಿದೆ.

ಇದರಿಂದ ತಮಿಳುನಾಡು ಮೂಲದ ಕೋವಿಲ್‌ಪಟ್ಟಿ ಅರಿಯಾರು ಗ್ರಾಮದ ಲಾರಿ ಚಾಲಕ ರವಿ ಅವರ ಎಡಗೈ, ಮುಂಗೈ, ಬಲಗೈ ಮೊಣಕೈಗೆ ಗಾಯವಾಗಿದೆ. ಸುಂಟಿಕೊಪ್ಪ ಪೊಲೀಸರು ಸ್ಥಳಕ್ಕೆ ಭೇಟಿ ನೀಡಿ ಮಹಜರು ನಡೆಸಿ ಮುಂದಿನ ಕಾನೂನು ಕ್ರಮ ಕೈಗೊಂಡಿದ್ದಾರೆ.

ಶುಕ್ರವಾರ ಪ್ರತಿಭಟನೆಗೆ ಅವಕಾಶ ಬೇಡ

ನಗರ ಕಾಂಗ್ರೆಸ್ ಅಲ್ಪಸಂಖ್ಯಾತರ ಘಟಕ ಮನವಿ



ಮಡಿಕೇರಿ, ಸೆ.13– ಶುಕ್ರವಾರ ದಿನ ಮಡಿಕೇರಿ ನಗರದಲ್ಲಿ ಪ್ರತಿಭಟನೆ, ಪ್ರತಿಭಟನಾ ಮೆರವಣಿಗೆಗೆ ಅನುಮತಿ ನೀಡಬಾರದು ಮತ್ತು ಯಾವುದೇ ದಿನಗಳಲ್ಲಿ ಜನರಲ್ ತಿಮ್ಮಯ್ಯ ವೃತ್ತದಲ್ಲಿ ಪ್ರತಿಭಟನೆ ಅಥವಾ ರಸ್ತೆ ತಡೆ ಪ್ರತಿಭಟನೆಗೆ ಅವಕಾಶ ನೀಡಬಾರದು ಎಂದು ಒತ್ತಾಯಿಸಿ ಮಡಿಕೇರಿ ನಗರ ಕಾಂಗ್ರೆಸ್ ಸಮಿತಿಯ ಅಲ್ಪಸಂಖ್ಯಾತರ ಘಟಕ ಜಿಲ್ಲಾಡಳಿತಕ್ಕೆ ಮನವಿ ಸಲ್ಲಿಸಿದೆ.

ಅಲ್ಪಸಂಖ್ಯಾತರ ಘಟಕದ ನಗರಾಧ್ಯಕ್ಷ ಕೆ.ಜಿ.ಪೀಟರ್ ನೇತೃತ್ವದಲ್ಲಿ ಹೆಚ್ಚುವರಿ ಜಿಲ್ಲಾಧಿಕಾರಿ ಡಾ.ನಂಜುಂಡೇಗೌಡ ಅವರಿಗೆ ಮನವಿ ಪತ್ರ ಸಲ್ಲಿಸಿದ ಪ್ರಮುಖರು ಪ್ರತಿಭಟನೆಗಳಿಂದ ಸಾರ್ವಜನಿಕರಿಗೆ ಆಗುತ್ತಿರುವ ಅನಾನುಕೂಲತೆಗಳ ಬಗ್ಗೆ ವಿವರಿಸಿದರು.

ದೇಶದ ಹೆಮ್ಮೆಯ ವೀರಸೇನಾನಿ, ಕೊಡಗಿನ ಶಿಸ್ತಿನ ಪುತ್ರ ಜನರಲ್ ಕೆ.ಎಸ್.ತಿಮ್ಮಯ್ಯ ಅವರ ಪ್ರತಿಮೆ ಇರುವ ವೃತ್ತ ಮಡಿಕೇರಿ ನಗರದಲ್ಲಿದೆ. ಇದು ಅತ್ಯಂತ ಗೌರವಯುತ ಪ್ರದೇಶವಾಗಿದೆ, ಆದರೆ ಇತ್ತೀಚಿನ ದಿನಗಳಲ್ಲಿ ಈ ವೃತ್ತದಲ್ಲಿ ನಡೆಯುತ್ತಿರುವ ಪ್ರತಿಭಟನೆಗಳಿಂದಾಗಿ ಅಗೌರವದ ವಾತಾವರಣ ಸೃಷ್ಟಿಯಾಗುತ್ತಿದೆ. ಕೊಡಗಿನ ಶಿಸ್ತಿನ ವಾತಾವರಣಕ್ಕೆ ಧಕ್ಕೆಯಾಗುತ್ತಿದೆ. ವೃತ್ತದ ಪಕ್ಕದಲ್ಲೇ ಜಿಲ್ಲಾ ಆಸ್ಪತ್ರೆ ಇದೆ. ಅಲ್ಲದೆ ಮೈಸೂರು, ಮಂಗಳೂರು ಹೆದ್ದಾರಿಯೂ ಹಾದು ಹೋಗುತ್ತದೆ.

ಜನರಲ್ ತಿಮ್ಮಯ್ಯ ವೃತ್ತದಲ್ಲಿ ಪ್ರತಿಭಟನೆ ಅಥವಾ ರಸ್ತೆ ತಡೆ ಪ್ರತಿಭಟನೆ ನಡೆಸುವುದರಿಂದ ಆಸ್ಪತ್ರೆಗೆ ರೋಗಿಗಳನ್ನು ಸಕಾಲದಲ್ಲಿ ಕರೆದೊಯ್ಯಲು ಸಾಧ್ಯವಾಗುತ್ತಿಲ್ಲ. ತುರ್ತು ಚಿಕಿತ್ಸೆಗಾಗಿ ಆಂಬುಲೆನ್ಸ್‌ನಲ್ಲಿ ಬರುವ ಅಥವಾ ಮೈಸೂರು, ಮಂಗಳೂರು ಆಸ್ಪತ್ರೆಗೆ ತೆರಳುವ ರೋಗಿಗಳು ಗಂಟೆಗಟ್ಟಲೆ ರಸ್ತೆಯಲ್ಲೇ ಬಾಕಿಯಾದ ಉದಾಹರಣೆಗಳಿವೆ. ಅಲ್ಲದೆ ನೂರಾರು ವಾಹನಗಳು ಕಿಲೋ ಮೀಟರ್‌ನಷ್ಟು ದೂರ ಸಾಲುಗಟ್ಟಿ ನಿಂತಿರುತ್ತವೆ. ವಿಮಾನ ನಿಲ್ದಾಣಕ್ಕೆ ತೆರಳುವವರಿಗೆ ಸಮಯಕ್ಕೆ ಸರಿಯಾಗಿ ತಲುಪಲು ಸಾಧ್ಯವಾಗುತ್ತಿಲ್ಲ. ಅಗತ್ಯ ವಸ್ತುಗಳನ್ನು ಸಕಾಲದಲ್ಲಿ ತಲುಪಿಸಲು ಲಾರಿ ಚಾಲಕರುಗಳಿಗೆ ಅಸಾಧ್ಯವಾಗಿದೆ. ಬಸ್ ಪ್ರಯಾಣಿಕರಂತು ಗಂಟೆಗಟ್ಟಲೆ ಬಸ್‌ನಲ್ಲೇ ಉಳಿಯುವ ಪರಿಸ್ಥಿತಿ ನಿರ್ಮಾಣವಾಗುತ್ತಿದೆ. ಸರ್ಕಾರಿ ನೌಕರರಿಗೆ, ಆಸ್ಪತ್ರೆ ಸಿಬ್ಬಂದಿಗಳಿಗೆ ಸಮಯಕ್ಕೆ ಸರಿಯಾಗಿ ಕರ್ತವ್ಯಕ್ಕೆ ಹಾಜರಾಗಲು ಸಾಧ್ಯವಾಗುತ್ತಿಲ್ಲ. ಜನರಲ್ ತಿಮ್ಮಯ್ಯ ವೃತ್ತದಲ್ಲಿ ಪ್ರತಿಭಟನೆ ನಡೆಸುವವರು ಮತ್ತು ಇತರರು ಮುಖಾಮುಖಿಯಾಗುವುದರಿಂದ ಘರ್ಷಣೆಗಳು ನಡೆಯುತ್ತಿದೆ, ಅಲ್ಲದೆ ಸಾರ್ವಜನಿಕ ಶಾಂತಿಭಂಗವಾಗುತ್ತಿದೆ ಎಂದು ಹೆಚ್ಚುವರಿ ಜಿಲ್ಲಾಧಿಕಾರಿಗಳ ಗಮನ ಸೆಳೆದರು.

ಜನರಲ್ ತಿಮ್ಮಯ್ಯ ವೃತ್ತದಲ್ಲೂ ಪ್ರತಿಭಟನೆ, ರಸ್ತೆ ತಡೆಗೆ ಅವಕಾಶ ಬೇಡ

ಇತ್ತೀಚಿನ ದಿನಗಳಲ್ಲಿ ಮಡಿಕೇರಿ ನಗರದಲ್ಲಿ ಪ್ರತಿಭಟನೆಗಳು ಮತ್ತು ಪ್ರತಿಭಟನಾ ಮೆರವಣಿಗೆಗಳು ಶುಕ್ರವಾರ ದಿನವೇ ಹೆಚ್ಚಾಗಿ ನಡೆಯುತ್ತಿದೆ. ಶುಕ್ರವಾರ ವಾರದ ಸಂತೆಯ ದಿನವಾಗಿದ್ದು, ಪ್ರತಿಭಟನೆಗಳಿಂದ ಜನಜೀವನಕ್ಕೆ ಅಡಚಣೆಯಾಗುತ್ತಿದೆ. ಗಂಟೆಗಟ್ಟಲೆ ವಾಹನಗಳು ನಿಲುಗಡೆಗೊಳ್ಳುವುದರಿಂದ ಪ್ರಯಾಣಿಕರಿಗೆ ಹಾಗೂ ವ್ಯಾಪಾರಿಗಳಿಗೆ ತೊಂದರೆಯಾಗುತ್ತಿದೆ. ಆದ್ದರಿಂದ ಅಲ್ಲಿ ಪ್ರತಿಭಟನೆ ಅವಕಾಶ ಕೊಡಬಾರದು ಎಂದು ಮನವಿ ಮಾಡಿದರು.

ಉಪಾಧ್ಯಕ್ಷ ಎಂ.ಹೆಚ್.ಶೌಕತ್, ಸಂಘಟನಾ ಕಾರ್ಯದರ್ಶಿ ರೆಹಮಾನ್ ಖಾನ್, ಖಜಾಂಚಿ ಎಂ.ಹೆಚ್.ಅಜೀಜ್, ನಗರ ಕಾಂಗ್ರೆಸ್ ಸಮಿತಿ ಉಪಾಧ್ಯಕ್ಷ ಎಂ.ಎಂ.ಯಾಕುಬ್, ಸಂಘಟನಾ ಕಾರ್ಯದರ್ಶಿ ಎಂ.ಬಿ.ಕೌಶರ್ ಮನವಿ ಸಲ್ಲಿಸುವ ಸಂದರ್ಭ ಹಾಜರಿದ್ದರು.

ಜಿಲ್ಲೆಯಲ್ಲಿ ಅಪರಾಧ ಪ್ರಕರಣಗಳ ಪತ್ತೆಗೆ ನುರಿತ ಅಪರಾಧ ಪತ್ತೆ ಸಿಬ್ಬಂದಿ ನೇಮಕ

ವಿಧಾನಸಭಾ ಕಲಾಪದಲ್ಲಿ ಶಾಸಕ ಅಪ್ಪಚ್ಚುರಂಜನ್ ಪ್ರಶ್ನೆಗೆ ಗೃಹ ಸಚಿವ ಆರಗ ಜ್ಞಾನೇಂದ್ರ ಉತ್ತರ


ಆರಗ ಜ್ಞಾನೇಂದ್ರ


ಅಪ್ಪಚ್ಚುರಂಜನ್

ಮಡಿಕೇರಿ, ಸೆ.13– ಕೊಡಗು ಜಿಲ್ಲೆಯಲ್ಲಿ ಅಪರಾಧ ಪ್ರಕರಣಗಳ ಪತ್ತೆ ಮಾಡಲು ಎಲ್ಲಾ ಪೊಲೀಸ್ ಠಾಣೆಗಳಲ್ಲಿ ನುರಿತ ಅಪರಾಧ ಪತ್ತೆ ಸಿಬ್ಬಂದಿಗಳನ್ನು ನೇಮಿಸಿ ಪತ್ತೆಕಾರ್ಯ ನಡೆಸಲಾಗುತ್ತಿದೆ ಎಂದು ಗೃಹ ಸಚಿವ ಆರಗ ಜ್ಞಾನೇಂದ್ರ ವಿಧಾನಸಭಾ ಕಲಾಪದಲ್ಲಿ ಮಾಹಿತಿ ನೀಡಿದ್ದಾರೆ.

ಕೊಡಗು ಜಿಲ್ಲೆಯಲ್ಲಿ ಕಳೆದ 3 ವರ್ಷಗಳಲ್ಲಿ ದಾಖಲಾದ ಅಪರಾಧ ಪ್ರಕರಣಗಳು, ಅವುಗಳ ಪತ್ತೆ ಕಾರ್ಯಕ್ಕೆ ಸರಕಾರ ಕೈಗೊಂಡ ಕ್ರಮಗಳು, ವಿವಿಧೆಡೆ ಸಿ.ಸಿ. ಕ್ಯಾಮರಾಗಳ ಅಳವಡಿಕೆ ಕುರಿತು ಮಡಿಕೇರಿ ಕ್ಷೇತ್ರ ಶಾಸಕ ಅಪ್ಪಚ್ಚು ರಂಜನ್ ಸರಕಾರವನ್ನು ಪ್ರಶ್ನಿಸಿದ್ದರು. ಇದಕ್ಕೆ ಸದನದಲ್ಲಿ ಉತ್ತರಿಸಿದ ಗೃಹ ಸಚಿವ ಆರಗ ಜ್ಞಾನೇಂದ್ರ, ಜಿಲ್ಲಾ ವ್ಯಾಪ್ತಿಯಲ್ಲಿ ನಡೆಯುವ ಕಾನೂನು ಬಾಹಿರ ಚಟುವಟಿಕೆಗಳನ್ನು ಪತ್ತೆ ಮಾಡುವುದು ಮತ್ತು ಪತ್ತೆಯಾಗದ ಪ್ರಕರಣಗಳನ್ನು ಪತ್ತೆ ಹಚ್ಚಲು ಎಲ್ಲಾ ರೀತಿಯ ಕ್ರಮಕೈಗೊಳ್ಳಲಾಗಿದೆ. ಜಿಲ್ಲೆಯ 20 ಪೊಲೀಸ್ ಠಾಣೆಗಳಿಗೆ ಸಿ.ಸಿ. ಕ್ಯಾಮರಾಗಳನ್ನು ಅಳವಡಿಸಲಾಗಿದೆ.

ಮಡಿಕೇರಿ ನಗರದಲ್ಲಿ 95, ಸೋಮವಾರಪೇಟೆ 48, ಕುಶಾಲನಗರದಲ್ಲಿ 55 ಸಿ.ಸಿ ಕ್ಯಾಮರಾ ಅಳವಡಿಸಲಾಗಿದ್ದು, ಎಲ್ಲಾ ಕ್ಯಾಮರಾಗಳನ್ನು ಸಕಾಲದಲ್ಲಿ ದುರಸ್ಥಿ ಮಾಡಲಾಗುತ್ತಿದೆ. ಮಾತ್ರವಲ್ಲದೇ ಶಾಸಕರು, ಸಂಸದರು ಹಾಗೂ ಜಿಲ್ಲಾಡಳಿತದ ಅನುದಾನದಿಂದಲೂ ಕ್ಯಾಮರಾಗಳನ್ನು ಅಳವಡಿಸಿ, ಅಪರಾಧ ಚಟುವಟಿಕೆ ತಡೆಗಟ್ಟಲು ಕ್ರಮ ಕೈಗೊಳ್ಳಲಾಗುತ್ತಿದೆ ಎಂದು ಗೃಹ ಸಚಿವ ಆರಗ ಜ್ಞಾನೇಂದ್ರ ಮಾಹಿತಿ ನೀಡಿದ್ದಾರೆ.

ಪರಿವೀಕ್ಷಕರ ವರ್ಗಾವಣೆ: ಪ್ರತಿಭಟನೆ ಕೈಬಿಟ್ಟ ಗ್ರಾಮಸ್ಥರು

ಮಡಿಕೇರಿ, ಸೆ.13– ಭಾಗಮಂಡಲ ಹೋಬಳಿಯ ಕಂದಾಯ ಪರಿವೀಕ್ಷಕರನ್ನು ಜಿಲ್ಲಾಡಳಿತ ವರ್ಗಾವಣೆ ಮಾಡಿರುವ ಹಿನ್ನೆಲೆಯಲ್ಲಿ ಸೆ.16 ರಂದು ಹಮ್ಮಿಕೊಂಡಿದ್ದ ಪ್ರತಿಭಟನೆಯನ್ನು ಕೈಬಿಡಲಾಗಿದೆ ಎಂದು ಚೇರಂಬಾಣೆ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದ ಅಧ್ಯಕ್ಷ ಬಾಚರಣಿಯಂಡ ಸುಮನ್ ಹಾಗೂ ಬೆಂಗೂರು ಗ್ರಾ.ಪಂ ಮಾಜಿ ಸದಸ್ಯ ಕೆ.ಪಿ.ಸಂತೋಷ್ ಕುಮಾರ್ ತಿಳಿಸಿದ್ದಾರೆ.

ಪತ್ರಿಕಾ ಪ್ರಕಟಣೆ ನೀಡಿರುವ ಅವರು, ಕಂದಾಯ ಪರಿವೀಕ್ಷಕರ ಕರ್ತವ್ಯ ಲೋಪದ ಹಿನ್ನೆಲೆ ವರ್ಗಾವಣೆಗೆ ಆಗ್ರಹಿಸಲಾಗಿತ್ತು, ಅಲ್ಲದೆ ಗ್ರಾಮಸ್ಥರು ಪ್ರತಿಭಟನೆ ನಡೆಸಲು ನಿರ್ಧರಿಸಿದ್ದರು. ಆದರೆ ಸಾರ್ವಜನಿಕರ ಮನವಿಗೆ ಸ್ಪಂದಿಸಿದ ಜಿಲ್ಲಾಧಿಕಾರಿಗಳು ತಕ್ಷಣ ಕಂದಾಯ ಪರಿವೀಕ್ಷಕರನ್ನು ವರ್ಗಾವಣೆ ಮಾಡಿರುವುದರಿಂದ ಪ್ರತಿಭಟನೆಯನ್ನು ಕೈಬಿಟ್ಟಿರುವುದಾಗಿ ಸ್ಪಷ್ಟಪಡಿಸಿದ್ದಾರೆ.

ಇಂದು ವಾರ್ಷಿಕ ಮಹಾಸಭೆ

ಮಡಿಕೇರಿ, ಸೆ.13– ಕೊಡಗು ಜಿಲ್ಲಾ ಸಹಕಾರ ಯೂನಿಯನ್‌ನ 2021–22 ನೇ ಸಾಲಿನ ಹಾಗೂ 55 ನೇ ವಾರ್ಷಿಕ ಮಹಾಸಭೆಯು ಸೆ.14 ರಂದು ಬೆಳಗ್ಗೆ 11.30 ಗಂಟೆಗೆ ನಗರದ ಪೆನ್‌ಶನ್ ಲೇನ್‌ನಲ್ಲಿರುವ ಜಿಲ್ಲಾ ಸಹಕಾರ ಯೂನಿಯನ್‌ನ ಸುವರ್ಣ ಮಹೋತ್ಸವ ಸಭಾಂಗಣದಲ್ಲಿ ಯೂನಿಯನ್ ಅಧ್ಯಕ್ಷ ಎ.ಕೆ.ಮನುಮುತ್ತಪ್ಪ ಅವರ ಅಧ್ಯಕ್ಷತೆಯಲ್ಲಿ ನಡೆಯಲಿದೆ.

ವಾರಸುದಾರನಿಲ್ಲದ ಅನಾಥ ಕಾರು!

ಗುಡ್ಡೆಹೊಸೂರು, ಸೆ.13– ಇಲ್ಲಿನ ಸಿದ್ದಾಪುರ ರಸ್ತೆಯ ಒಂದು ಕಿ.ಮೀ.ಅಂತರದಲ್ಲಿ ರಸ್ತೆಯ ಬದಿಯಲ್ಲಿ ಎರಡು ದಿನಗಳಿಂದ ರಸ್ತೆಯ ಬದಿಯಲ್ಲಿ ಅನಾಥ ಕಾರೊಂದು ನಿಂತಿದೆ.

ಕಾರು ಬೆಂಗಳೂರಿನ ನೋಂದಣಿ ಸಂಖ್ಯೆಯನ್ನು ಹೊಂದಿದ್ದು, ಎರಡು ದಿನಗಳಿಂದ ರಸ್ತೆಯ ಬದಿಯಲ್ಲಿದೆ. ಚಾಲಕ ಅಥವಾ ಯಾರಾದರೂ ಕಳ್ಳತನ ಮಾಡಿ ತಂದು ಇಲ್ಲಿ ನಿಲ್ಲಿಸಿ ಪರಾರಿಯಾಗಿರಬಹುದು ಎಂದು ಹೇಳಲಾಗುತ್ತಿದೆ. ಕುಶಾಲನಗರ ಗ್ರಾಮಾಂತರ ಪೊಲೀಸರು ಈ ಬಗ್ಗೆ ತನಿಖೆ ನಡೆಸುತ್ತಿದ್ದಾರೆ.

ಬೆಳೆ ಕಳೆದುಕೊಂಡ ರೈತರಿಗೆ ಕೂಡಲೇ ಪರಿಹಾರ ನೀಡದಿದ್ದರೆ ಪ್ರತಿಭಟನೆ

ಸಂಕೇತ್ ಪೂವಯ್ಯ ನೇತೃತ್ವದ ಸಭೆಯಲ್ಲಿ ಎಚ್ಚರಿಕೆ



ವಿರಾಜಪೇಟೆ, ಸೆ.13– ಕಾಡಾನೆಗಳ ದಾಳಿಯಿಂದ ಬೆಳೆ ಕಳೆದುಕೊಂಡಿರುವ ರೈತರಿಗೆ 4 ದಿನಗಳಲ್ಲಿ ಪರಿಹಾರ ನೀಡದಿದ್ದರೆ ಸ್ಥಳೀಯ ಸಂಘ–ಸಂಸ್ಥೆಗಳ ಜೊತೆಗೂಡಿ ರಸ್ತೆತಡೆ ನಡೆಸುವುದರೊಂದಿಗೆ ಬೇಜವಾಬ್ದಾರಿಯಿಂದ ವರ್ತಿಸುತ್ತಿರುವ ಅಧಿಕಾರಿಗಳ ವಿರುದ್ಧ ಉಚ್ಚ ನ್ಯಾಯಾಲಯದಲ್ಲಿ ಕಾನೂನು ಹೋರಾಟ ನಡೆಸುವುದಾಗಿ ವನ್ಯಜೀವಿ ಸಂಘರ್ಷ ಹೋರಾಟಗಾರ ಮೇರಿಯಂಡ ಸಂಕೇತ್ ಪೂವಯ್ಯ ಅವರ ಅಧ್ಯಕ್ಷತೆಯಲ್ಲಿ ನಡೆದ ಸಭೆಯಲ್ಲಿ ಎಚ್ಚರಿಕೆ ನೀಡಲಾಗಿದೆ.

ಸಮೀಪದ ಮರಂದೋಡ ಗ್ರಾಮದಲ್ಲಿ ಕಾಡಾನೆಗಳ ದಾಳಿಯಿಂದ ಭತ್ತ ಕಾಫಿ, ಬಾಳೆ, ಅಡಿಕೆ ಗಿಡ ಸೇರಿದಂತೆ ಕೃಷಿ ಫಸಲು ನಾಶವಾಗಿದ್ದು, ವಿರಾಜಪೇಟೆ ಅರಣ್ಯ ಇಲಾಖೆಗೆ ದೂರು ನೀಡಿದ್ದರೂ ಕ್ರಮ ಕೈಗೊಂಡಿಲ್ಲ. ಇನ್ನು ನಾಲ್ಕು ದಿನಗಳ ಕಾಲ ಗಡುವು ನೀಡಿ ಮರಂದೋಡ ಗ್ರಾಮಸ್ಥರು ಸಂಘ–ಸಂಸ್ಥೆಗಳೊಂದಿಗೆ ಅಲ್ಲಿನ ಮುಖ್ಯರಸ್ತೆ ತಡೆ ಮಾಡಿ ಪ್ರತಿಭಟನೆ ನಡೆಸಿ ಬಳಿಕ ಅರಣ್ಯ ಅಧಿಕಾರಿಗಳ ವಿರುದ್ಧ ಉಚ್ಚನ್ಯಾಯಾಲಯದಲ್ಲಿ ಕಾನೂನು ಹೋರಾಟ ನಡೆಸಲು ತೀರ್ಮಾನಿಸಿದ್ದಾರೆ.

ವಿರಾಜಪೇಟೆಯ ಕೃಷಿಕರು ಸಂಕೇತ್ ಪೂವಯ್ಯ ಅವರ ನಿವಾಸದಲ್ಲಿ ನಡೆದ ಸಭೆಯಲ್ಲಿ ಪಾಲ್ಗೊಂಡು ಆನೆ ಮಾನವ ಸಂಘರ್ಷ ಕೊಡಗಿನಲ್ಲಿ ಅನೇಕ ವರ್ಷಗಳಿಂದಲೂ ಮುಂದುವರೆದಿದ್ದು, ಅನೇಕರು ಮೃತಪಟ್ಟಿದ್ದಾರೆ. ಕೆಲವರು ಅಂಗವಿಕಲರಾಗಿದ್ದಾರೆ. ತೋಟದ ಕೆಲಸ ಮಾಡಲು ಕಾರ್ಮಿಕರು ಮತ್ತು ಮಾಲೀಕರು ತಮ್ಮ ಜೀವವನ್ನು ಕೈಯಲ್ಲಿ ಹಿಡಿದು ಕೆಲಸ ಮಾಡುವಂತಾಗಿದೆ. ಈ ಗ್ರಾಮದಲ್ಲಿ ಹುಲಿಯ ಹಾವಳಿ ಇದ್ದು, ಜನರು ಭಯಭೀತರಾಗಿದ್ದಾರೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಅರಣ್ಯ ಸಚಿವರು ಇತ್ತ ಗಮನಹರಿಸಿ ವಿಧಾನಸೌಧದಲ್ಲಿ ಪ್ರಸ್ತಾಪಿಸಿ ಕಾಡಾನೆ ಇರುವ ಅರಣ್ಯ ಪ್ರದೇಶದಲ್ಲಿ ಸರಿಯಾದ ಕಾರ್ಯಾಚರಣೆ ಹಾಗೂ ವೈಜ್ಞಾನಿಕ ಕಂದಕ ನಿರ್ಮಾಣ ಮಾಡಬೇಕು. ಕಾಡಾನೆಗಳನ್ನು ಹಿಡಿದು ಬೇರೆ ಕಡೆಗೆ ಸಾಗಿಸುವ ಕೆಲಸ ಅಧಿಕಾರಿಗಳು ಮಾಡಬೇಕು. ಆದರೆ ಅರಣ್ಯ ಇಲಾಖೆ ಮೌನ ವಹಿಸಿರುವುದರಿಂದ ಕಾನೂನು ಹೋರಾಟ ಅಗತ್ಯವಾಗಿದೆ ಎಂದು ಸಂಕೇತ್ ಪೂವಯ್ಯ ತಿಳಿಸಿದರು.

ಮರಂದೋಡ ಗ್ರಾಮ ಪಂಚಾಯಿತಿ ಸದಸ್ಯ ಹರೀಶ್ ಮೊಣ್ಣಪ್ಪ ಮಾತನಾಡಿ, ಕಾಡಾನೆಗಳ ಹಾವಳಿಯಿಂದಾಗಿ ತೋಟ ಮತ್ತು ಭತ್ತದ ಗದ್ದೆಯಲ್ಲಿ ಬೆಳೆದ ಬೆಳೆ ನಷ್ಟ ಸಂಭವಿಸಿರುವುದಾಗಿ ಅರಣ್ಯಾಧಿಕಾರಿಗಳಿಗೆ ದೂರು ನೀಡಿದಾಗ ಆನೆ ಓಡಿಸುವ ನೆಪ ಹೇಳಿ ಪಟಾಕಿ ಸಿಡಿಸಿ ಒಂದು ತೋಟದಿಂದ ಮತ್ತೊಂದು ತೋಟಕ್ಕೆ ಓಡಿಸುತ್ತಾರೆ. ಮರುದಿನ ಮತ್ತೆ ಆನೆಗಳು ಅದೇ ತೋಟಕ್ಕೆ ಬಂದು ಫಸಲನ್ನೂ ತಿಂದು ನಷ್ಟ ಮಾಡುತ್ತವೆ. ಈ ಸಂಬಂಧ ಅರಣ್ಯ ಇಲಾಖೆಗೆ ಅರ್ಜಿ ಸಲ್ಲಿಸಿದಾಗ 50 ಸಾವಿರ ರೂ. ನಷ್ಟವಾದರೆ 3 ರಿಂದ 4 ಸಾವಿರ ರೂ. ಕೊಡುತ್ತಾರೆ. ಇದರಿಂದ ರೈತರು ಸಂಕಷ್ಟದಲ್ಲಿರುವುದಾಗಿ ತಿಳಿಸಿದರು.

ಸಭೆಯಲ್ಲಿ ಉಪಸ್ಥಿತರಿದ್ದ ವಕೀಲ ನರೇಂದ್ರ ಕಾಮತ್ ಮಾತನಾಡಿ ಕಾಡಾನೆಗಳ ಹಾವಳಿ, ಬೆಳೆ ನಷ್ಟಕ್ಕೆ ಅರಣ್ಯ ಇಲಾಖೆಯ ಅಧಿಕಾರಿಗಳ ವಿರುದ್ಧ ಕೋರ್ಟಿನಲ್ಲಿ ಸಾರ್ವಜನಿಕ ಹಿತ ಶಕ್ತಿ ಅರ್ಜಿ ಸಲ್ಲಿಸಲಾಗುವುದು ಎಂದರು.

ಸಭೆಯಲ್ಲಿ ಮರಂದೋಡ ಗ್ರಾಮದ ಪಂಚಾಯಿತಿ ಸದಸ್ಯೆ ಕೆ.ಆರ್.ಲೀಲಾವತಿ, ಮಾಜಿ ಸದಸ್ಯ ಸಿ.ಬಿ.ಪೊಣಚ್ಚ, ಗ್ರಾಮಸ್ಥರಾದ ಮಂದಣ್ಣ, ಗಣಪತಿ, ಟೋನಿ, ಚಿಣ್ಣಪ್ಪ, ಸುಂದರ, ರತ್ನ, ಮುದ್ದಯ್ಯ, ಕಟ್ಟಿ, ಸರು, ವಿಜು ಮುಂತಾದವರು ಉಪಸ್ಥಿತರಿದ್ದರು.

ಅಧಿವೇಶನದಲ್ಲಿ ಹನೂರು ಸಮಸ್ಯೆಗಳ ಬಗ್ಗೆ ಗಮನ ಸೆಳೆದ ಶಾಸಕ ಆರ್.ನರೇಂದ್ರ

ಮಿನಿ ವಿಧಾನಸೌಧ ನಿರ್ಮಾಣ, ನೀರಾವರಿಗೆ ಅನುದಾನದ ಪ್ರಸ್ತಾಪ



ಹನೂರು, ಸೆ.13– ಹನೂರು ನೂತನ ತಾಲೂಕು ಕೇಂದ್ರದಲ್ಲಿ ಮಿನಿ ವಿಧಾನಸೌಧ ಹಾಗೂ ಗುಂಡಾಲ್ ಜಲಾಶಯಗಳ ಕಾಲುವೆಗಳ ನವೀಕರಣಕ್ಕೆ ಕನಿಷ್ಠ 12 ಕೋಟಿ ರೂ. ಅನುದಾನದ ಅವಶ್ಯಕತೆ ಇದೆ ಎಂದು ಶಾಸಕ ಆರ್.ನರೇಂದ್ರ ಅಧಿವೇಶನದಲ್ಲಿಂದು ಸಂಬಂಧಪಟ್ಟ ಸಚಿವರ ಗಮನ ಸೆಳೆದರು.

ಬೆಂಗಳೂರಿನಲ್ಲಿ ನಡೆಯುತ್ತಿರುವ ವಿಧಾನಸಭಾ ಅಧಿವೇಶನದಲ್ಲಿ ಕ್ಷೇತ್ರದ ಸಮಸ್ಯೆಗಳ ಬಗ್ಗೆ ಪ್ರಸ್ತಾಪಿಸಿದ ಆರ್.ನರೇಂದ್ರ, ಗುಂಡಾಲ್ ಜಲಾಶಯ 1980ರಲ್ಲಿ ನಿರ್ಮಾಣವಾಗಿ ಕಳೆದ 2 ವರ್ಷದಿಂದ ನಿರಂತರವಾಗಿ ತುಂಬುತ್ತಿದೆ. ಈ ಜಲಾಶಯವು 15 ಸಾವಿರ ಎಕರೆ ಅಚ್ಚುಕಟ್ಟು ಹೊಂದಿದ್ದು, ಕೇವಲ 2–3 ಸಾವಿರ ಎಕರೆಗೆ ಮಾತ್ರ ನೀರು ಬಳಕೆಯಾಗುತ್ತಿದೆ. ಈ ಬಗ್ಗೆ ಪರಿಶೀಲಿಸಿದಾಗ ಕಾಲುವೆಗಳು ದುಸ್ಥಿತಿ ತಲುಪಿದ್ದು, ನವೀಕರಣಕ್ಕಾಗಿ ಅಂದಾಜು 12 ಕೋಟಿ ರೂ. ಅಗತ್ಯವಿದೆ ಎಂದು ಅಧಿಕಾರಿಗಳು ಮಾಹಿತಿ ನೀಡಿದ್ದಾರೆ. ಈ ನಿಟ್ಟಿನಲ್ಲಿ ಸಚಿವರು ಹೆಚ್ಚಿನ ಅನುದಾನ ನೀಡಬೇಕು ಎಂದು ಮನವಿ ಮಾಡಿದರು.

ಇದಕ್ಕೆ ಪ್ರತಿಕ್ರಿಯಿಸಿದ ಜಲ ಸಂಪನ್ಮೂಲ ಸಚಿವ ಗೋವಿಂದ ಕಾರಜೋಳ, ನಿರ್ವಹಣೆಗಾಗಿ ಕಳೆದ 6 ವರ್ಷಗಳಿಂದೀಚೆಗೆ 1 ಕೋಟಿ ಅನುದಾನ ನೀಡಲಾಗಿದೆ. ಮುಂದಿನ ದಿನಗಳಲ್ಲಿ ಹೆಚ್ಚಿನ ಅನು ದಾನ ನೀಡಲಾಗುವುದು ಎಂದು ಭರವಸೆ ನೀಡಿದರು.

8.93 ಎಕರೆ ಜಮೀನು ಮೀಸಲು: ಹನೂರು ತಾಲೂಕು ಕೇಂದ್ರದ ಮಿನಿ ವಿಧಾನಸೌಧ ನಿರ್ಮಾಣ ಸಂಬಂಧ ಶಾಸಕ ನರೇಂದ್ರ ಪ್ರಶ್ನಿಸಿದ್ದು, ಈ ಬಗ್ಗೆ ಕಂದಾಯ ಸಚಿವ ಆರ್.ಅಶೋಕ್, ಈಗಾಗಲೇ ಕೆಲ ತಾಲೂಕು ಮಟ್ಟದ ಕಚೇರಿಗಳನ್ನು ಪ್ರಾರಂಭಿಸಲಾಗಿದೆ. ಆರ್ಥಿಕ ಇಲಾಖೆಯ ಸಹಮತದೊಂದಿಗೆ ಹುದ್ದೆಗಳನ್ನು ಸೃಜಿಸಿ ಹಂತ–ಹಂತವಾಗಿ ಉಳಿದ ಕಚೇರಿಗಳನ್ನು ಪ್ರಾರಂಭಿಸಲಾಗುವುದು. ಎಲ್ಲಾ ಇಲಾಖೆಗಳ ಪ್ರಧಾನ ಕಾರ್ಯದರ್ಶಿಗಳಿಗೆ ಕಂದಾಯ ಇಲಾಖೆಯಿಂದ ಸೂಚನೆ ನೀಡಲಾಗುವುದು. ಮಿನಿ ವಿಧಾನಸೌಧ ನಿರ್ಮಾಣಕ್ಕೆ ಈಗಾಗಲೇ ಹನೂರು ತಾಲೂಕಿನ ಹುಲ್ಲೇಪುರ ಗ್ರಾಮದ ಸರ್ವೆ ನಂ.312/ಡಿ ಹಾಗೂ 312/ಇ ಸೇರಿ ಒಟ್ಟು 8.93 ಎಕರೆ ಭೂಮಿ ಕಾಯ್ದಿರಿಸಲಾಗಿದೆ. ಜಿಲ್ಲಾಧಿಕಾರಿಗಳ ಸೂಕ್ತ ಪ್ರಸ್ತಾವನೆ ಪಡೆದು ಆಡಳಿತಾತ್ಮಕ ಅನುಮೋದನೆ ನೀಡುವ ಬಗ್ಗೆ ಕ್ರಮ ವಹಿಸಲಾಗುವುದು. ಈಗಾಗಲೇ ತಹಸೀಲ್ದಾರ್ ಕಚೇರಿ, ಉಪನೋಂದಣಿ ಕಚೇರಿ, ಕ್ಷೇತ್ರ ಶಿಕ್ಷಣಾಧಿಕಾರಿ ಕಚೇರಿ, ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿ ಕಚೇರಿ, ಅಗ್ನಿಶಾಮಕ ಠಾಣೆ ಹಾಗೂ ಸೆಸ್ಕ್ ಕಚೇರಿಯನ್ನು ಪ್ರಾರಂಭಿಸಲಾಗಿದ್ದು, ಇನ್ನುಳಿದ ಕಚೇರಿಗಳ ಸ್ಥಾಪನೆಗೆ ಅಗತ್ಯ ಕ್ರಮ ವಹಿಸಲಾಗುವುದು ಎಂದು ಸಚಿವ ಅಶೋಕ್ ಉತ್ತರಿಸಿದರು.

ಮದ್ಯದಂಗಡಿಗೆ ಅನುಮತಿಸದಂತೆ ಒತ್ತಾಯಿಸಿ

ಕುಲಗಾಣ ಗ್ರಾಮಸ್ಥರ ಪ್ರತಿಭಟನೆ


ಕುಲಗಾಣದಲ್ಲಿ ಮದ್ಯದಂಗಡಿ ತೆರೆಯದಂತೆ ಒತ್ತಾಯಿಸಿ ಗ್ರಾಮಸ್ಥರು ಪ್ರತಿಭಟಿಸಿದರು.

ಚಾಮರಾಜನಗರ, ಸೆ.13–ಎಂಎಸ್ಐಎಲ್ ಸೇರಿದಂತೆ ಗ್ರಾಮದಲ್ಲಿ ಯಾವುದೇ ಮದ್ಯ ಮಾರಾಟ ಮಳಿಗೆ ತೆರೆಯಲು ಅನುಮತಿ ನೀಡದಂತೆ ಒತ್ತಾಯಿಸಿ ತಾಲೂಕಿನ ಕುಲಗಾಣ ಗ್ರಾಮದಲ್ಲಿ ಮಂಗಳವಾರ ಮಹಿಳೆಯರು ಸೇರಿದಂತೆ ಗ್ರಾಮಸ್ಥರು ಪ್ರತಿಭಟಿಸಿದರು.

ತಾಲೂಕಿನ ಹರವೆ ಹೋಬಳಿಯ ಕುಲಗಾಣದಲ್ಲಿ ಎಂಎಸ್ಐಎಲ್ ಮದ್ಯದಂಗಡಿ ತೆರೆಯುವ ನಿಟ್ಟಿನಲ್ಲಿ ಅಬಕಾರಿ ನಿರೀಕ್ಷಕಿ ಮೀನಾ ಹಾಗೂ ಸಿಬ್ಬಂದಿ ಗ್ರಾಮಕ್ಕೆ ಆಗಮಿಸಿ, ಸ್ಥಳ ಪರಿಶೀಲಿಸುತ್ತಿದ್ದರು. ವಿಷಯ ತಿಳಿದ ಗ್ರಾಮಸ್ಥರು ಸ್ಥಳದಲ್ಲಿ ಜಮಾಯಿಸಿ ತಮ್ಮೂರಿನಲ್ಲಿ ಯಾವುದೇ ಮದ್ಯದಂಗಡಿ ತೆರೆಯದಂತೆ ಆಗ್ರಹಿಸಿದರು.

ಕುಲಗಾಣ ಗ್ರಾಮದಲ್ಲಿ ಬಡವರು, ಕೂಲಿ ಕಾರ್ಮಿಕರು ಹೆಚ್ಚಾಗಿದ್ದು, ಹೆಚ್ಚು ಕುಟುಂಬಗಳು ಆರ್ಥಿಕವಾಗಿ ದುರ್ಬಲವಾಗಿದ್ದು, ನಿತ್ಯ ಕೂಲಿ ಮಾಡಿ ಜೀವನ ನಡೆಸುತ್ತಿದ್ದಾರೆ. ಮದ್ಯ ಮಾರಾಟ ಮಳಿಗೆ ತೆರೆಯುವುದರಿಂದ ಸಹಜವಾಗಿ ಜನ ಸಾಮಾನ್ಯರು ಮದ್ಯ ವ್ಯಸನಕ್ಕೆ ಒಳಗಾಗುತ್ತಾರೆ. ಇದರಿಂದ ಕುಟುಂಬಗಳ ನಿರ್ವಹಣೆ, ಮಕ್ಕಳ ಶಿಕ್ಷಣ ಹಾಗೂ ಬೆಳವಣಿಗೆಗೆ ತೊಂದರೆಯಾಗಲಿದೆ ಎಂದು ಪ್ರತಿಭಟನಾಕಾರರು ಆತಂಕ ವ್ಯಕ್ತಪಡಿಸಿದರು. ಕುಲಗಾಣ ಗ್ರಾಮವು ಅತೀ ಸೂಕ್ಷ್ಮ ಪ್ರದೇಶವೆಂದು ಪೊಲೀಸ್ ಇಲಾಖೆಯು ವಿಶೇಷ ನಿಗಾ ವಹಿಸುತ್ತಿದೆ. ಗ್ರಾಮ ಯಜಮಾನರು, ಮಹಿಳಾ ಸ್ವಸಹಾಯ ಸಂಘಗಳು ಹಾಗೂ ವಿವಿಧ ಸಂಘಟನೆಗಳಿಂದ ಮದ್ಯ ಮಾರಾಟ ಮಳಿಗೆ ತೆರೆಯದಂತೆ ಗ್ರಾಮಪಂಚಾಯ್ತಿಗೆ ಈಗಾಗಲೇ ಲಿಖಿತ ಮನವಿ ಸಲ್ಲಿಸಲಾಗಿದೆ. ಅದರೂ ಸಹ ಮದ್ಯದಂಗಡಿ ತೆರಯಲು ಪ್ರಯತ್ನ ನಡೆದಿವೆ. ಇದು ಸರಿಯಲ್ಲ. ಈ ಪ್ರಯತ್ನ ಮುಂದುವರೆದರೆ ಹೋರಾಟ ಅನಿವಾರ್ಯ ಎಂದು ಎಚ್ಚರಿಸಿದರು.

ಇದೇ ವೇಳೆ ಅಬಕಾರಿ ನಿರೀಕ್ಷಕಿ ಮೀನಾ ಅವರಿಗೆ ಮನವಿ ಸಲ್ಲಿಸಲಾಯಿತು. ಚೂಡಾ ಮಾಜಿ ಅಧ್ಯಕ್ಷ ಪಿ.ಬಿ.ಶಾಂತಮೂರ್ತಿ ಕುಲಗಾಣ, ಗ್ರಾಪಂ ಅಧ್ಯಕ್ಷೆ ಸಿ.ಪ್ರಮೀಳಾ ಮಹದೇವಯ್ಯ, ಸದಸ್ಯರಾದ ಪ್ರಭುಸ್ವಾಮಿ, ಮಹೇಂದ್ರ ಅರಳೀಕಟ್ಟೆ, ಮಾಜಿ ಅಧ್ಯಕ್ಷ ಕೆ.ಸಿ.ಲಿಂಗಪ್ಪ, ಗುರುಸ್ವಾಮಿ ಹಿರೆಬೇಗೂರು, ಮಾಜಿ ಸದಸ್ಯರಾದ ಬಸವರಾಜಪ್ಪ, ಕೆ.ಸಿ. ಮಹದೇವಯ್ಯ, ಮುಖಂಡರಾದ ಗೌಡಿಕೆ ನಾಗರಾಜಪ್ಪ, ಪಿ.ಸಿ.ನಟರಾಜು, ನಂಜಪ್ಪ, ಶಿವಸ್ವಾಮಿ, ಶಿವಾರ್ಚಕ ಬಸವಣ್ಣ, ಪುಟ್ಟಪ್ಪ, ಯಜಮಾನ ಬಸವಯ್ಯ, ಮಹೇಶ ನಾಯಕ, ಶ್ರೀನಿವಾಸ, ಚಂದ್ರಪ್ಪ, ಬಸವಣ್ಣಸ್ವಾಮಿ, ಮಹದೇವಪ್ರಸಾದ, ಸತೀಶ್, ರಾಜಶೇಖರ, ಅಶೋಕ್, ಮಹದೇವಸ್ವಾಮಿ, ಡೈರಿ ಲಿಂಗಪ್ಪ, ಮಲ್ಲಿಗಮ್ಮ, ನೀಲಮ್ಮ, ಮಂಜುಳಾ, ಪುಟ್ಟಮ್ಮ, ರಂಗಸ್ವಾಮಿ, ಗೋವಿಂದ ನಾಯಕ, ಮಹೇಂದ್ರ, ಮಹದೇವ ಸೇರಿದಂತೆ ಇತರರಿದ್ದರು.

ಇಂದು ಜಿಲ್ಲೆಗೆ ಡಿಕೆಶಿ ಭೇಟಿ

ಚಾಮರಾಜನಗರ: ಭಾರತ್ ಜೋಡೋ ಯಾತ್ರೆ ಹಿನ್ನೆಲೆಯಲ್ಲಿ ಸೆ.14ರಂದು ಬೆಳಗ್ಗೆ 11 ಗಂಟೆಗೆ ಕೊಳ್ಳೇಗಾಲದ ಭ್ರಮರಾಂಭ ಕಲ್ಯಾಣ ಮಂಟಪದಲ್ಲಿ, ಮಧ್ಯಾಹ್ನ 2ಕ್ಕೆ ಚಾ.ನಗರದ ಅಂಬೇಡ್ಕರ್ ಭವನ ಹಾಗೂ ಸಂಜೆ 4.15ಕ್ಕೆ ಗುಂಡ್ಲು ಪೇಟೆಯ ಬಸವೇಶ್ವರ ಕಲ್ಯಾಣ ಮಂಟಪದಲ್ಲಿ ನಡೆಯುವ ಪೂರ್ವಭಾವಿ ಸಭೆಯಲ್ಲಿ ಕೆಪಿಸಿಸಿ ಅಧ್ಯಕ್ಷ ಡಿ.ಕೆ.ಶಿವಕುಮಾರ್ ಪಾಲ್ಗೊಳ್ಳುವರು.


ಇಂದಿನಿಂದ ಹಳೇ ಜಿಲ್ಲಾಸ್ಪತ್ರೆಯಲ್ಲಿ ತುರ್ತು ಚಿಕಿತ್ಸಾ ಘಟಕ ಆರಂಭ

ಚಾಮರಾಜನಗರ, ಸೆ.13–ನಗರದ ಹಳೇ ಜಿಲ್ಲಾ ಸಾರ್ವಜನಿಕ ಆಸ್ಪತ್ರೆಯಲ್ಲಿ ನಾಳೆಯಿಂದ(ಸೆ.14) ತುರ್ತು ಚಿಕಿತ್ಸಾ ಘಟಕ ಆರಂಭವಾಗಲಿದೆ.

ನಗರದ ಹೊರವಲಯದಲ್ಲಿರುವ ಯಡಬೆಟ್ಟದ ತಪ್ಪಲಿನಲ್ಲಿ ಜಿಲ್ಲಾ ವೈದ್ಯಕೀಯ ವಿಭಾಗಗಳ ಸಂಸ್ಥೆ ಮತ್ತು ಬೋಧನಾ ಆಸ್ಪತ್ರೆ(ಸಿಮ್ಸ್) ಆರಂಭವಾದ ಕಾರಣ ಹಳೇ ಜಿಲ್ಲಾಸ್ಪತ್ರೆಯಲ್ಲಿ ಹೆರಿಗೆ ಮತ್ತು ಮಕ್ಕಳ ವಿಭಾಗವನ್ನು ಹೊರತುಪಡಿಸಿ ಉಳಿದೆಲ್ಲ ವಿಭಾಗಗಳನ್ನು ನೂತನ ಸಿಮ್ಸ್ ಆಸ್ಪತ್ರೆಗೆ ಸ್ಥಳಾಂತರಿಸಲಾಗಿತ್ತು. ಸಿಮ್ಸ್ ಆಸ್ಪತ್ರೆಯು ನಗರದಿಂದ 8 ಕಿಮೀ ದೂರದಲ್ಲಿರುವುದರಿಂದ ರೋಗಿಗಳು ಹಾಗೂ ಸಂಬಂಧಿಕರಿಗೆ ಬಹಳ ತೊಂದರೆಯಾಗಿತ್ತು. ಹಳೇ ಜಿಲ್ಲಾಸ್ಪತ್ರೆಯಲ್ಲೇ ಈ ಮೊದಲು ನೀಡುತ್ತಿದ್ದ ಚಿಕಿತ್ಸೆಗಳನ್ನು ಪುನಾರಂಭಿಸು ವಂತೆ ಒತ್ತಾಯ ಕೇಳಿ ಬಂದ ಹಿನ್ನೆಲೆಯಲ್ಲಿ ಸೋಮವಾರದಿಂದ ಹೊರರೋಗಿಗಳ ವಿಭಾಗ ಆರಂಭಿಸಲಾಗಿತ್ತು. ಬುಧವಾರದಿಂದ ತುರ್ತು ಚಿಕಿತ್ಸೆ ಆರಂಭಿಸಲಾಗುತ್ತಿದೆ ಎಂದು ಆಸ್ಪತ್ರೆಯ ಜಿಲ್ಲಾ ಸರ್ಜನ್ ಡಾ.ಕೃಷ್ಣ ಪ್ರಸಾದ್ 'ಮೈಸೂರು ಮಿತ್ರ'ನಿಗೆ ತಿಳಿಸಿದ್ದು, ಹಳೇ ಆಸ್ಪತ್ರೆಯಲ್ಲಿ ಒಳರೋಗಿಗಳ ದಾಖಲಾತಿ ಮಾಡಿಕೊಳ್ಳುವ ಬಗ್ಗೆ ಸಿದ್ಧತೆ ಕೈಗೊಳ್ಳುತ್ತಿರುವುದಲ್ಲದೆ, ಇನ್ನೊಂದು ವಾರದೊಳಗೆ ದಾಖಲಾತಿ ಆರಂಭವಾಗಲಿದೆ ಎಂದು ಮಾಹಿತಿ ನೀಡಿದ್ದಾರೆ.

ಸರ್ಕಾರಿ ಶಾಲೆ ಶಿಕ್ಷಕರು ನಿಗದಿತ ಸಮಯಕ್ಕೆ ಹಾಜರಾಗುತ್ತಿಲ್ಲ

ಭಾರತೀಯ ಕಿಸಾನ್ ಸಂಘ ಗಂಭೀರ ಆರೋಪ



ಚಾಮರಾಜನಗರ, ಸೆ.13–ಜಿಲ್ಲೆಯ ಅನೇಕ ಸರ್ಕಾರಿ ಶಾಲೆಗಳಲ್ಲಿ ಶಿಕ್ಷಕರು ಸಮಯಕ್ಕೆ ಸರಿಯಾಗಿ ಹಾಜರಾಗುತ್ತಿಲ್ಲ ಹಾಗೂ ನಿಗದಿತ ಸಮಯಕ್ಕೂ ಮೊದಲೇ ಶಾಲೆಯನ್ನು ಬಿಡುತ್ತಿದ್ದಾರೆ ಎಂದು ಭಾರತಿಯ ಕಿಸಾನ್ ಸಂಘ ಗಂಭೀರ ಆರೋಪ ಮಾಡಿದೆ.

ಈ ಬಗ್ಗೆ ಜಿಲ್ಲಾಧಿಕಾರಿಗಳಿಗೆ ಲಿಖಿತ ದೂರು ಸಲ್ಲಿಸಿರುವ ಸಂಘವು, ಜಿಲ್ಲೆಯ ಎಲ್ಲಾ ತಾಲೂಕುಗಳ ಅನೇಕ ಸರ್ಕಾರಿ ಶಾಲೆಗಳಲ್ಲಿ ಶಿಕ್ಷಕರು ಬೇಕಾಬಿಟ್ಟಿಯಾಗಿ ಶಾಲೆಗೆ ಹೋಗುತ್ತಿದ್ದಾರೆ. ಬೆಳಗ್ಗೆ 10 ಗಂಟೆಗೆ ಶಾಲೆಗೆ ಹಾಜರಾಗಬೇಕಾದ ಶಿಕ್ಷಕರು, ಬೆಳಗ್ಗೆ 11 ಗಂಟೆ, 11–30, 12 ಗಂಟೆ ಹೀಗೆ ತಮಗೆ ಇಚ್ಛೆ ಬಂದ ಸಮಯಕ್ಕೆ ಶಾಲೆಗೆ ಹಾಜರಾಗುತ್ತಿದ್ದಾರೆ. ಇದಲ್ಲದೆ ಬಸ್ ಇಲ್ಲ ಎಂಬ ನೆಪವೊಡ್ಡಿ ಶಾಲೆಯನ್ನು ನಿಗದಿತ ಸಮಯಕ್ಕೂ ಅರ್ಧಗಂಟೆ ಮುನ್ನ, ಕೆಲವೆಡೆ 1 ಗಂಟೆ ಮುಂಚೆ ಶಾಲೆ ಬಿಡುತ್ತಿದ್ದಾರೆ ಎಂದು ಮನವಿಯಲ್ಲಿ ಆಪಾದಿಸಲಾಗಿದೆ.

ಕಾಡಂಚಿನ ಗ್ರಾಮಗಳಲ್ಲಿ ಶಿಕ್ಷಕರು ಒಬ್ಬರಿಗೊಬ್ಬರು ಹೊಂದಾಣಿಕೆ ಮಾಡಿಕೊಂಡು ಶಾಲೆಗೆ ರಜೆ ಹಾಕುತ್ತಾರೆ. ಆದರೆ ರಿಜಿಸ್ಟರ್‌ನಲ್ಲಿ ಹಾಜರಾತಿ ತೋರಿಸಲಾಗುತ್ತದೆ. ಈ ವಿಷಯ ಆಯಾ ಭಾಗದ ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ ತಿಳಿದಿದ್ದರೂ ಕ್ರಮ ಕೈಗೊಳ್ಳುತ್ತಿಲ್ಲ ಎಂದು ಸಂಘ ದೂರಿದೆ.

ಈ ವಿಷಯದ ಬಗ್ಗೆ ಜಿಲ್ಲಾಧಿಕಾರಿಗಳು ವಿಶೇಷ ಗಮನಹರಿಸಿ ಶಿಕ್ಷಕರು ಶಾಲೆಯಲ್ಲಿ ಸರಿಯಾಗಿ ಕರ್ತವ್ಯ ನಿರ್ವಹಿಸುವಂತೆ ಕ್ರಮ ಕೈಗೊಳ್ಳಬೇಕೆಂದು ಮನವಿ ಪತ್ರದಲ್ಲಿ ವಿನಂತಿಸಲಾಗಿದೆ. ಮನವಿ ಸಲ್ಲಿಸುವ ವೇಳೆ ಸಂಘದ ಅಧ್ಯಕ್ಷ ಯಲಕ್ಕೂರು ಲಿಂಗರಾಜು, ಕಾರ್ಯದರ್ಶಿ ಡಿ.ಎಂ.ಬೋಸ್ಕೋ, ಮುಖಂಡರಾದ ಪ್ರಸಾದ್, ಸದಾನಂದ, ಸಿದ್ದಪ್ಪ, ಹರೀಶ್, ಶಾಂತಮಲ್ಲಪ್ಪ ಇದ್ದರು.

ಮಳೆ ಹಾನಿ ಸಂತ್ರಸ್ತರಿಗೆ ಸಮರೋಪಾದಿ ಪರಿಹಾರ

ಶಾಸಕ ಸಿ.ಎಸ್.ನಿರಂಜನಕುಮಾರ್ ಮಾಹಿತಿ



ಗುಂಡ್ಲುಪೇಟೆ, ಸೆ.13–ಮಳೆಯಿಂದ ಹಾನಿಗೊಳಗಾಗಿ ಮನೆ ಕಳೆದುಕೊಂಡವರಿಗೆ ಸಮರೋಪಾದಿಯಲ್ಲಿ ಪರಿಹಾರ ನೀಡಲಾಗುತ್ತಿದೆ ಎಂದು ಶಾಸಕ ಸಿ.ಎಸ್. ನಿರಂಜನಕುಮಾರ್ ತಿಳಿಸಿದರು.

ತಾಲೂಕಿನ ಕೋಡಹಳ್ಳಿ ಗ್ರಾಮದಲ್ಲಿ 25 ಲಕ್ಷ ರೂ. ವೆಚ್ಚದಲ್ಲಿ ಸಿಸಿ ರಸ್ತೆ ಹಾಗೂ 65 ಲಕ್ಷ ರೂ. ವೆಚ್ಚದಲ್ಲಿ ಕಲ್ಲುಕಟ್ಟೆ ಜಲಾಶಯದ ನಾಲೆ ಅಭಿವೃದ್ಧಿ ಕಾಮಗಾರಿಗೆ ಭೂಮಿಪೂಜೆ ನೆರವೇರಿಸಿ ಅವರು ಮಾತನಾಡಿದರು.

ಇತ್ತೀಚೆಗೆ ಬೀಳುತ್ತಿರುವ ಮಳೆಯಿಂದ ತಾಲೂಕಿನ ಜನಜೀವನ ಅಸ್ತವ್ಯಸ್ತವಾಗಿದೆ. ಮನೆಗಳ ಗೋಡೆ ಕುಸಿದು ಹಲವರು ಸಂಕಷ್ಟಕ್ಕೆ ಸಿಲುಕಿದ್ದಾರೆ. ನಿರಂತರ ಮಳೆಯಿಂದ ತಾಲೂಕಿನ ರಾಘವಾಪುರ, ಕೆಲಸೂರು ಹಾಗೂ ಚಿಕ್ಕಾಟಿ ಗ್ರಾಪಂ ವ್ಯಾಪ್ತಿಯಲ್ಲಿ ಅತಿ ಹೆಚ್ಚು ಮನೆಗಳು ಹಾನೀಗಿಡಾಗಿವೆ. ಸಂತ್ರಸ್ತರನ್ನು ಗುರುತಿಸಿ ಸ್ಥಳದಲ್ಲಿಯೇ 50 ಸಾವಿರ ರೂ. ಪರಿಹಾರ ಹಾಗೂ ಮೇಲ್ಛಾವಣಿ ಕುಸಿತದಿಂದ ಸಂಪೂರ್ಣ ಮನೆ ಹಾನಿಯಾದವರಿಗೆ 5 ಲಕ್ಷ ರೂ. ಪರಿಹಾರ ನೀಡಲಾಗುತ್ತಿದೆ. ಮೂರು ದಿನಗಳಿಂದ ತಾಲೂಕಿನ ಬೇಗೂರು ಹೋಬಳಿಯ 15 ಗ್ರಾಮಗಳು, ತೆರಕಣಾಂಬಿ ಹೋಬಳಿಯ 14 ಹಾಗೂ ಹಂಗಳ ಹೋಬಳಿಯ 14 ಗ್ರಾಮಗಳ ಸುಮಾರು 70 ಗ್ರಾಮಗಳ 204 ಮನೆಗಳ ಗೋಡೆ ಕುಸಿದಿದೆ. ಸಂತ್ರಸ್ತರಿಗೆ ತಲಾ 50 ಸಾವಿರ ಹಾಗೂ ಸಂಪೂರ್ಣ ಮನೆ ಹಾನಿಯಾಗಿದ್ದ ಮೂವರು ಸಂತ್ರಸ್ತರಿಗೆ 5 ಲಕ್ಷ ರೂ. ಪರಿಹಾರ ವಿತರಿಸಲಾಗಿದೆ ಎಂದರು.

ಈ ಸಂದರ್ಭದಲ್ಲಿ ಪುತ್ತನಪುರ ಗ್ರಾಪಂ ಅಧ್ಯಕ್ಷೆ ಬೇಬಿ, ಉಪಾಧ್ಯಕ್ಷೆ ಚಿಕ್ಕತಾಯಮ್ಮ, ಮುಖಂಡರಾದ ಮಹದೇವಶೆಟ್ಟಿ, ಅಂಕಶೆಟ್ಟಿ, ಹಾಪ್‌ಕಾಮ್ಸ್ ಜಿಲ್ಲಾಧ್ಯಕ್ಷ ಕೆ.ಆರ್.ಲೋಕೇಶ್, ತಾಪಂ ಮಾಜಿ ಸದಸ್ಯ ಸಿ.ಮಹದೇವಪ್ರಸಾದ್, ಕಲ್ಲಹಳ್ಳಿ ಮಹೇಶ್ ಸೇರಿದಂತೆ ಹಲವರಿದ್ದರು.

ಆಲೆಮನೆಗೆ ಬೆಂಕಿ: ಲಕ್ಷಾಂತರ ರೂ. ನಷ್ಟ

ಚಾಮರಾಜನಗರ, ಸೆ.13–ತಾಲೂಕಿನ ದೊಡ್ಡಮೋಳೆ ಗ್ರಾಮದಲ್ಲಿ ಆಲೆಮನೆಯೊಂದಕ್ಕೆ ಬೆಂಕಿ ಬಿದ್ದು, ಟ್ರಾಕ್ಟರ್ ಸೇರಿದಂತೆ ಸುಮಾರು 10 ಲಕ್ಷ ರೂ. ಮೌಲ್ಯದ ವಸ್ತುಗಳು ಭಸ್ಮವಾಗಿರುವ ಘಟನೆ ನಡೆದಿದೆ.

ಗ್ರಾಮದ ನಿವಾಸಿ ಸಿದ್ದಶೆಟ್ಟಿ ಅವರಿಗೆ ಸೇರಿದ ಜಮೀನಿನಲ್ಲಿ ನಿರ್ಮಿಸಿದ್ದ ಆಲೆಮನೆಗೆ ಬೆಂಕಿ ಬಿದ್ದು, ಅಲ್ಲಿದ್ದ ಬಾಡಿಗೆ ಟ್ರಾಕ್ಟರ್, ಹುಲ್ಲಿನ ರಾಶಿ, ಡಿಸೇಲ್ ಇಂಜಿನ್, ಗಾಣ, ಕೊಪ್ಪರಿಕೆ, ಮರದ ಹೆಚ್ಚುಗಳು ಸೇರಿದಂತೆ ಇತರ ವಸ್ತುಗಳು ಹಾನಿಗೊಳಗಾಗಿವೆ. ಇದರಿಂದ ಸುಮಾರು 14 ಲಕ್ಷ ರೂ.ಗೂ ಹೆಚ್ಚು ನಷ್ಟವಾಗಿದೆ ಎಂದು ಸಂತ್ರಸ್ತರು ರಾಮಸಮುದ್ರ ಪೊಲೀಸ್ ಠಾಣೆಯಲ್ಲಿ ನೀಡಿರುವ ದೂರಿನಲ್ಲಿ ತಿಳಿಸಲಾಗಿದೆ.

ಪ್ರತ್ಯೇಕ ಪ್ರಕರಣ: ಇಬ್ಬರು ಬೈಕ್ ಸವಾರರಿಗೆ ಗಾಯ

ಬೇಗೂರು, ಸೆ.13– ಬೈಕ್‌ಗೆ ಜೀಪ್ ಡಿಕ್ಕಿ ಹೊಡೆದು ಸವಾರ ತೀವ್ರವಾಗಿ ಗಾಯಗೊಂಡಿರುವ ಘಟನೆ ಗುಂಡ್ಲುಪೇಟೆ ತಾಲೂಕಿನ ಹೊರೆಯಾಲ ಗೇಟ್ ಬಳಿ ನಡೆದಿದೆ.

ತಾಲೂಕಿನ ಯಡವನಹಳ್ಳಿ ಗ್ರಾಮದ ದಿನೇಶ್(20) ಗಾಯಗೊಂಡ ಯುವಕ. ಈತ ಯಡವನಹಳ್ಳಿಯಿಂದ ಬೇಗೂರಿನತ್ತ ತೆರಳುತ್ತಿದ್ದಾಗ ಹೊರೆಯಾಲ ಗೇಟ್ ಬಳಿ ಕೇರಳದತ್ತ ತೆರಳುತ್ತಿದ್ದ ಜೀಪ್ ಡಿಕ್ಕಿ ಹೊಡೆದಿದೆ. ಪರಿಣಾಮ ದಿನೇಶ್ ತೀವ್ರವಾಗಿ ಗಾಯಗೊಂಡರು. ಬೇಗೂರಿನ ಸರ್ಕಾರಿ ಆಸ್ಪತ್ರೆಯಲ್ಲಿ ಪ್ರಥಮ ಚಿಕಿತ್ಸೆ ಬಳಿಕ ಮೈಸೂರಿನ ಆಸ್ಪತ್ರೆಗೆ ರವಾನಿಸಲಾಯಿತು.

ಬೈಕ್‌ಗಳ ಮುಖಾಮುಖಿ ಡಿಕ್ಕಿ: ಮತ್ತೊಂದು ಪ್ರಕರಣದಲ್ಲಿ ಬೇಗೂರು ಗ್ರಾಮದ ಕೆಎಸ್ಆರ್‌ಟಿಸಿ ಬಸ್ ನಿಲ್ದಾಣದ ಮುಂಭಾಗ ಎರಡು ಬೈಕ್‌ಗಳ ಮುಖಾಮುಖಿ ಡಿಕ್ಕಿ ಸಂಭವಿಸಿ ಸವಾರನೋರ್ವ ಗಾಯಗೊಂಡಿದ್ದಾನೆ.

ಗುಂಡ್ಲುಪೇಟೆ ನಿವಾಸಿ ಉಬೇದ್‌ಖಾನ್ ಪುತ್ರ ತಾಯರ್‌ಗೆ ಗಂಭೀರ ಸ್ವರೂಪದ ಗಾಯಗಳಾಗಿದ್ದು, ಹೆಚ್ಚಿನ ಚಿಕಿತ್ಸೆಗೆ ಮೈಸೂರಿನ ಆಸ್ಪತ್ರೆಗೆ ರವಾನಿಸಲಾಗಿದೆ. ಗಾಯಾಳು ತನ್ನ ಪಲ್ಸರ್ ಬೈಕ್‌ನಲ್ಲಿ ಗುಂಡ್ಲುಪೇಟೆಯಿಂದ ಮೈಸೂರಿನ ಕಡೆಗೆ ತೆರಳುತ್ತಿದ್ದ ವೇಳೆ ರಂಗನಾಥಪುರದಿಂದ ಬೇಗೂರಿನತ್ತ ಟಿವಿಎಸ್ ರ್‍ಯಾಡಾನ್ ಬೈಕ್ ಸವಾರ ಚಿಕ್ಕಮಾದು ತಿರುವ ತಗೆದುಕೊಳ್ಳುವ ವೇಳೆ ಬೈಕ್‌ಗಳು ಮುಖಾಮುಖಿ ಡಿಕ್ಕಿಯಾಗಿ ಅಪಘಾತ ಸಂಭವಿಸಿದೆ. ಬೇಗೂರು ಪೊಲೀಸರು ಸ್ಥಳಕ್ಕಾಗಮಿಸಿ ಪರಿಶೀಲಿಸಿ ಮುಂದಿನ ಕ್ರಮ ಕೈಗೊಂಡಿದ್ದಾರೆ. ಎರಡೂ ಅಪಘಾತಗಳ ಕುರಿತು ಯಾವುದೇ ಪ್ರಕರಣಗಳು ದಾಖಲಾಗಿಲ್ಲ.

ಒಂದನೇ ಪುಟದಿಂದ

'ಲಕ್ಷ್ಮಿ'ಗೆ ಪುತ್ರ ಪ್ರಾಪ್ತಿ

ಸಾಕಿ ಬೆಳೆಸಿದ್ದ 'ಲಕ್ಷ್ಮಿ' ಇದೀಗ ಅರಮನೆ ಅಂಗಳದಲ್ಲೇ ತನ್ನ ಎರಡನೇ ಮರಿಗೆ ಜನ್ಮ ನೀಡಿರುವುದು ವಿಶೇಷವಾಗಿದೆ. ಈ ಹಿಂದೆ ತಾಯಿಯಿಂದ ಬೇರ್ಪಟ್ಟ ಮರಿಯನ್ನು ಅರಣ್ಯ ಇಲಾಖೆ ಒಪ್ಪಿಗೆ ಮೇರೆಗೆ ಬಂಡೀಪುರ ಕಾಡಂಚಿನ ತಮ್ಮ ರೆಸಾರ್ಟ್‌ನಲ್ಲಿ ಸಾಕಿ ಸಲಹಿದ್ದ ವಿಶಾಲಾಕ್ಷಿ ದೇವಿಯವರು, ನಂತರ ಸುಪ್ರೀಂಕೋರ್ಟ್ ನಿರ್ದೇಶನದ ಮೇರೆಗೆ ಇದನ್ನು ಅರಣ್ಯ ಇಲಾಖೆ ವಶಕ್ಕೆ ಒಪ್ಪಿಸಿದ್ದರು. ಮನೆ ಮಗಳಂತೆ ಸಾಕಿದ್ದ 'ಲಕ್ಷ್ಮಿ'ಯನ್ನು ನೋಡಲು ವಿಶಾಲಾಕ್ಷಿ ದೇವಿಯವರ ಮಕ್ಕಳು ರಾಂಪುರ ಕ್ಯಾಂಪ್‌ಗೆ ತೆರಳಿ, ಈಕೆಗೆ ಹಣ್ಣು-ಬೆಲ್ಲ ನೀಡಿ ಉಪಚರಿಸುವುದನ್ನು ಇಂದಿಗೂ ರೂಢಿಸಿಕೊಂಡಿದ್ದಾರೆ.

ಮೊದಲ ಬಾರಿಗೆ ನಾಡಹಬ್ಬ ದಸರಾದಲ್ಲಿ ಪಾಲ್ಗೊಳ್ಳಲು 2017ರಲ್ಲಿ 'ಲಕ್ಷ್ಮಿ'ಯನ್ನು ಕರೆತರಲಾಗಿತ್ತು. ಆದರೆ ಸಿಡಿಮದ್ದು ತಾಲೀಮು ವೇಳೆ ಬೆದರಿದ್ದರಿಂದ ಆ ವರ್ಷ ಜಂಬೂಸವಾರಿಯಲ್ಲಿ ಭಾಗಿಯಾಗಲು ಸಾಧ್ಯವಾಗದೆ, ಅರಮನೆ ಅಂಗಳದಲ್ಲೇ ಉಳಿಯ ಬೇಕಾಯ್ತು. ಇದೀಗ 2ನೇ ಬಾರಿಗೆ 'ಲಕ್ಷ್ಮಿ'ಯನ್ನು ಆ.7ರಂದು ಮೊದಲ ತಂಡದಲ್ಲೇ ಕರೆತರಲಾಗಿತ್ತು. ಅಂದಿನಿಂದ ಈವರೆಗೂ ತಾಲೀಮಿನಲ್ಲಿ ಭಾಗಿಯಾಗಿತ್ತು. ಆ ವೇಳೆ ಇತರೆ ಆನೆಗಳಂತೆ ಸಹಜವಾಗಿತ್ತು. ಆದರೆ ಇಂದು ಮಧ್ಯಾಹ್ನ 12 ಗಂಟೆ ವೇಳೆಗೆ 'ಲಕ್ಷ್ಮಿ' ವರ್ತನೆಯಲ್ಲಿ ಕೊಂಚ ಬದಲಾವಣೆ ಕಂಡುಬಂದಿದೆ. ಇದನ್ನು ಗಮನಿಸಿದ ಮಾವುತರು, ವೈದ್ಯರ ಗಮನಕ್ಕೆ ತಂದಿದ್ದಾರೆ. ನಂತರ ವೈದ್ಯರು ಪರೀಕ್ಷೆ ಮಾಡಿದಾಗ ಲಕ್ಷ್ಮಿ ತುಂಬು ಗರ್ಭಿಣಿಯಾಗಿದ್ದು ಆಕೆಗೆ ಪ್ರಸವದ ನೋವು ಕಾಣಿಸಿಕೊಂಡಿರುವುದು ಖಚಿತವಾಗಿದೆ. ಕೂಡಲೇ ಮುಂಜಾಗ್ರತಾ ಕ್ರಮವಾಗಿ ಆಕೆಯನ್ನು ಬ್ರಹ್ಮಪುರಿ ಗೇಟ್ ಸಮೀಪ ಅಡುಗೆ ತಯಾರಿಸುವ ಸ್ಥಳದಲ್ಲಿ ನಿಗಾ ವಹಿಸಲಾಗಿತ್ತು. ರಾತ್ರಿ 8.10ರ ವೇಳೆಗೆ 'ಲಕ್ಷ್ಮಿ' ಗಂಡುಮರಿಗೆ ಜನ್ಮ ನೀಡಿದ್ದು, ತಾಯಿ ಹಾಗೂ ಮರಿ ಆರೋಗ್ಯವಾಗಿವೆ.

ವಿಷಯ ತಿಳಿದು ಡಿಸಿಎಫ್ ಡಾ.ವಿ.ಕರಿಕಾಳನ್, ಪಶುವೈದ್ಯ ಡಾ.ಮುಜೀಬ್, ಆರ್‌ಎಫ್‌ಓ ಸಂತೋಷ್ ಹೂಗಾರ್ ಮತ್ತಿತರ ಅಧಿಕಾರಿಗಳು ಸ್ಥಳಕ್ಕೆ ದೌಡಾಯಿಸಿ ಅಲ್ಲಿಯೇ ಮೊಕ್ಕಾಂ ಹೂಡಿದ್ದಾರೆ. ಗುಪ್ತವಾಗಿ ಹಿರಿಯ ಮಾವುತರ ಸಹಕಾರದೊಂದಿಗೆ 'ಲಕ್ಷ್ಮಿ ಹಾಗೂ ಮರಿ'ಯ ಆರೈಕೆ ಮಾಡಲಾಗುತ್ತಿದ್ದು, ಅವುಗಳ ಸಮೀಪಕ್ಕೆ ಯಾರೂ ಹೋಗದಂತೆ ಎಚ್ಚರವಹಿಸಲಾಗಿದೆ. 'ಲಕ್ಷ್ಮಿ' ತನ್ನ ಕರುಳಕುಡಿಗೆ ಹಾಲುಣಿಸಿ ತಾಯ್ತನದ ಸುಖದಲ್ಲಿ ಮಿಂದೇಳುತ್ತಿದ್ದಾಳೆ.

ಈ ಹಿಂದೆ ದುರ್ಗಾಪರಮೇಶ್ವರಿ, ವಿಜಯ, ಚೈತ್ರಾ, ಜಂಬೂಸವಾರಿಯಲ್ಲಿ ಪಾಲ್ಗೊಂಡು ಕ್ಯಾಂಪ್‌ಗೆ ವಾಪಸ್ಸಾದ 2-3 ದಿನದಲ್ಲಿ ಮರಿಗೆ ಜನ್ಮ ನೀಡಿದ್ದವು. ಆದರೆ ದಸರಾ ಆರಂಭದ ಹೊತ್ತಲ್ಲಿ ಅರಮನೆ ಅಂಗಳದಲ್ಲೇ ಮರಿಗೆ ಜನ್ಮ ನೀಡಿದ ಎರಡನೇ ಪ್ರಸಂಗ ಇದಾಗಿದ್ದು, 15 ವರ್ಷದ ಹಿಂದೆ 'ಸರಳ' ಹೆಣ್ಣು ಮರಿಗೆ ಜನ್ಮ ನೀಡಿದ್ದಳು. ಅದಕ್ಕೆ 'ಚಾಮುಂಡಿ' ಎಂದು ಹೆಸರಿಟ್ಟಿದ್ದನ್ನು ಸ್ಮರಿಸಬಹುದು.

ಮಾವುತರಿಗೆ ತಿಳಿದಿರಲಿಲ್ಲ: ಸಾಮಾನ್ಯವಾಗಿ ಗರ್ಭಿಣಿ ಆನೆಯನ್ನು ದಸರಾಗೆ ಕರೆತರಲು ಅರಣ್ಯ ಅಧಿಕಾರಿಗಳು ಒಪ್ಪುವುದಿಲ್ಲ. ಈ ಬಾರಿ 2ನೇ ತಂಡದಲ್ಲಿ ಆಯ್ಕೆಯಾಗಿದ್ದ 'ಕುಂತಿ' ಗರ್ಭಿಣಿ ಎನ್ನುವುದು ಸೆ.5ರಂದು ತಿಳಿದಿದ್ದರಿಂದ ಆಕೆಯ ಬದಲಾಗಿ 'ಸುಗ್ರೀವ'ನನ್ನು ಕರೆತರಲಾಗಿದೆ. ಆದರೆ 'ಲಕ್ಷ್ಮಿ' ಗರ್ಭಿಣಿ ಎನ್ನುವುದು ಅಧಿಕಾರಿಗಳು, ಮಾವುತರು ಹಾಗೂ ಕಾವಾಡಿಗಳಿಗೆ ತಿಳಿದಿರಲಿಲ್ಲ. ಆನೆಯ ವರ್ತನೆ ಸಹಜವಾಗಿದ್ದ ಕಾರಣ ಎಲ್ಲಾ ಆನೆಗಳಂತೆ ಇದಕ್ಕೂ ಸಾಮಾನ್ಯ ಆರೋಗ್ಯ ತಪಾಸಣೆಯನ್ನಷ್ಟೇ ಮಾಡಲಾಗಿತ್ತು. ಸೂಕ್ಷ್ಮ ತಿಳಿದಿದ್ದರೆ ಅಗತ್ಯ ತಪಾಸಣೆ ನಡೆಸಲಾಗುತ್ತಿತ್ತು. ರಾಂಪುರ ಶಿಬಿರದಲ್ಲಿರುವ ಜಯಪ್ರಕಾಶ್ ಮಿಲನ ದಿಂದ ಲಕ್ಷ್ಮಿಗೆ ಈ ಮರಿ ಜನಿಸಿರಬಹುದೆಂದು ಹೇಳಲಾಗುತ್ತಿದೆ. ಈಗಾಗಲೇ ಅರಮನೆ ಮಂಡಳಿ ಈ ಮರಿಗೆ 'ಗಣಪತಿ' ಎಂದು ನಾಮಕರಣ ಮಾಡುವ ಚಿಂತನೆಯಲ್ಲಿದೆ.

ಶಾಲಾಪೂರ್ವ ಶಿಕ್ಷಣ ಜಾರಿ

1 ವರ್ಷದ ಡಿಪ್ಲೋಮಾ ತರಬೇತಿ ನೀಡಲಾಗುವುದು. ಎನ್‌ಇಪಿ ಪಠ್ಯಕ್ರಮ ಬೋಧನೆಗೆ ಹೊಸ ಶಿಕ್ಷಕರನ್ನು ನೇಮಿಸಿಕೊಳ್ಳುವುದಿಲ್ಲ ಎಂದರು. ರಾಜ್ಯ ಸರ್ಕಾರ ಸದ್ಯಕ್ಕೆ ಎನ್‌ಇಪಿ ಜಾರಿ ಮಾಡಿಲ್ಲ, ತರಬೇತಿ ಸೇರಿ ಅಗತ್ಯವಾದ ಪೂರ್ವ ತರಬೇತಿ ನಡೆಸಲಾಗಿದೆ. ಮೂರ್ನಾಲ್ಕು ತಿಂಗಳಲ್ಲಿ ಎಲ್ಲಾ ಸಿದ್ಧತೆಗಳನ್ನು ಪೂರ್ಣಗೊಳಿಸಲಾ ಗುವುದು. ಅದಕ್ಕಾಗಿಯೇ ಸಮಿತಿ ರಚಿಸ ಲಾಗಿದೆ. ಕೇಂದ್ರ ಸರ್ಕಾರವೇ ಶೀಘ್ರ ಶಾಲಾ ಪೂರ್ವ ಶಿಕ್ಷಣವನ್ನು ಘೋಷಣೆ ಮಾಡ ಲಿದೆ ಎಂದರು. ರಾಜ್ಯದ ಅಂಗನವಾಡಿಗಳ ಮೂಲ ಸೌಲಭ್ಯ ಅಭಿವೃದ್ಧಿಗೆ ಹಲವು ಯೋಜನೆಗಳ ಅನುದಾನವನ್ನು ಬಳಕೆ ಮಾಡಲಾಗುತ್ತಿದೆ.

ಬಜೆಟ್‌ನಲ್ಲಿ 1877 ಹೊಸ ಅಂಗನವಾಡಿ ಕಟ್ಟಡಗಳನ್ನು ಘೋಷಿಸಲಾಗಿದೆ. ಮುಖ್ಯಮಂತ್ರಿ 4780 ಹೊಸ ಅಂಗನವಾಡಿಗಳನ್ನು ಘೋಷಣೆ ಮಾಡಿದ್ದಾರೆ. 48 ವರ್ಷ ಮೇಲ್ಪಟ್ಟವರ ಹಿತರಕ್ಷಣೆಗೆ ಕ್ರಮ ಕೈಗೊಳ್ಳಲಾಗುವುದು ಎಂದು ತಿಳಿಸಿದರು.

ರಾಜ್ಯದ 66,361 ಅಂಗನವಾಡಿಗಳ ಪೈಕಿ 20 ಸಾವಿರ ಅಂಗನವಾಡಿಗಳಲ್ಲಿ ಪಿಯುಸಿ ವರೆಗೂ ಕಲಿತವರಿದ್ದಾರೆ. ಎಸ್‌ಎಸ್‌ಎಲ್‌ಸಿ ಕಲಿತವರಿಗೆ ಅಗತ್ಯ ತರಬೇತಿ ನೀಡಲಾಗುವುದು. ಬಿಜೆಪಿಯ ಪ್ರಾಣೇಶ್ ಕೇಳಿದ ಪ್ರಶ್ನೆಗೆ ಉತ್ತರಿಸಿದ ಸಚಿವರು, 18 ವರ್ಷದೊಳಗಿನ ಎಚ್‌ಐವಿ ಪೀಡಿತ ಮಕ್ಕಳ ಆರೈಕೆಗೆ ರಾಜ್ಯ ಸರ್ಕಾರ ಅಗತ್ಯ ಕ್ರಮ ಕೈಗೊಂಡಿದೆ. ಜಿಲ್ಲಾ ಆಸ್ಪತ್ರೆಗಳ ಎಟಿಆರ್ ಕೇಂದ್ರಗಳಲ್ಲಿ ಉಚಿತ ಚಿಕಿತ್ಸೆ ಕೊಡಿಸಲಾಗುತ್ತಿದೆ. ಸೋಂಕಿತ ಮಕ್ಕಳ ವಿಶೇಷ ಪಾಲನೆಗೆ ಮಾಸಿಕ ಒಂದು ಸಾವಿರ ರೂ. ನೀಡಲಾಗುತ್ತಿದೆ ಎಂದರು.

ಭೂಮಿ ಕಂಪಿಸಿದ ಅನುಭವ

ಬಸಪ್ಪನಪಾಳ್ಯ, ದಡದಹಳ್ಳಿ ಸೇರಿದಂತೆ ಇತರೆ ಗ್ರಾಮಗಳಲ್ಲಿ ಮಂಗಳವಾರ ರಾತ್ರಿ 8.25ಕ್ಕೆ ಕೆಲ ಸೆಕೆಂಡುಗಳ ಕಾಲ ಭೂಮಿ ಅದುರಿದ ಅನುಭವವಾಗಿದೆ. ಭೂಮಿಯ ಒಳಗಡೆಯಿಂದ ಭಾರೀ ಸದ್ದು ಕೇಳಿದ ನಂತರ 3 ಸೆಕೆಂಡುಗಳ ಕಾಲ ಭೂಮಿ ಕಂಪಿಸಿದೆ. ಮೊದಲಿಗೆ ನೆರೆ ಮನೆಯಲ್ಲೇನೋ ಆಗಿ ಸದ್ದು ಕೇಳಿ ಬಂದಿರಬಹುದು ಎಂದುಕೊಂಡ ಜನರಿಗೆ ತಕ್ಷಣ ಭೂಮಿ ಅದುರಿದ ಅನುಭವವಾಗಿದೆ. ಏಕಾಏಕಿ ಭಾರೀ ಶಬ್ಧ ಉಂಟಾಗಿರುವ ಹಿನ್ನೆಲೆ ಗಾಬರಿಗೊಂಡ ಜನರು ಅಂಗಡಿ-ಮುಂಗಟ್ಟು, ಮನೆಗಳಿಂದ ಹೊರ ಓಡಿ ಬಂದಿದ್ದಾರೆ. ರಾತ್ರಿ 8ರ ಸಮಯದಲ್ಲಿ ಮೂರು ಬಾರಿ ಭೂಮಿ ಕಂಪಿಸಿದ ಅನುಭವ ಉಂಟಾಗಿದ್ದು ಅಂಗಡಿ, ಮನೆಗಳಿಂದ ಜನರು ಭಯಭೀತರಾಗಿ ಹೊರಬಂದರು. ಈ ಭಾಗದಲ್ಲಿ ಇಂಥ ಅನುಭವ ಇದೇ ಮೊದಲು ಎಂದು ಬಸಪ್ಪನಪಾಳ್ಯ ಗ್ರಾಮಸ್ಥರು ತಿಳಿಸಿದ್ದಾರೆ. ಈ ಬಗ್ಗೆ ಜಿಲ್ಲಾಡಳಿತ, ಸಂಬಂಧಪಟ್ಟ ಇಲಾಖೆ ಯಾವುದೇ ಮಾಹಿತಿ ನೀಡಿಲ್ಲ ಹಾಗೂ ಭೂಕಂಪನದ ಬಗ್ಗೆ ಖಚಿತಪಡಿಸಿಲ್ಲ.

ನಷ್ಟಕ್ಕೆ ಕಾರಣವಾಯ್ತು...

ಲಕ್ಷಾಂತರ ಎಕರೆ ಭೂಮಿಯಲ್ಲಿದ್ದ ಬೆಳೆಯನ್ನು ರೈತ ಕಳೆದುಕೊಂಡಿದ್ದು, ಇದಕ್ಕೆಲ್ಲ ಸರ್ಕಾರವೇ ಹೊಣೆ. ಸರ್ಕಾರದ ಬೇಜವಾಬ್ದಾರಿಯಿಂದ ಈ ಪರಿಸ್ಥಿತಿ ನಿರ್ಮಾಣವಾಗಿದೆ. ಸುಮಾರು 29 ಜಿಲ್ಲೆಗಳಲ್ಲಿ ಪ್ರವಾಹ ಬಂದು ರೈತರ ಬೆಳೆಗಳು, ಮನೆ ಕುಸಿದು, ಜನ-ಜಾನುವಾರುಗಳು ಮೃತಪಟ್ಟಿವೆ. ಸರ್ಕಾರ ಮುಂಜಾಗ್ರತಾ ಕ್ರಮ ಕೈಗೊಂಡಿದ್ದರೆ ಈ ಸಮಸ್ಯೆ ಉಂಟಾಗುತ್ತಿರಲಿಲ್ಲ ಎಂದರು. ಮುಂದಿನ ದಿನಗಳಲ್ಲಿ ಭೀಕರ ಸಮಸ್ಯೆ ಉಂಟಾಗಬಹುದೆಂದು ಹವಾಮಾನ ಇಲಾಖೆ ಮುನ್ನೆಚ್ಚರಿಕೆ ಕೊಟ್ಟಿತ್ತು. ಈ ಕುರಿತಂತೆ ನಾನು ಕೂಡ ಸರ್ಕಾರಕ್ಕೆ ಪತ್ರ ಬರೆದು ಅಗತ್ಯ ಕ್ರಮ ಕೈಗೊಳ್ಳಲು ಸೂಚಿಸಿದ್ದೆ. ಕಳೆದ ವರ್ಷವು ಇದೇ ಪರಿಸ್ಥಿತಿ ನಿರ್ಮಾಣವಾಗಿತ್ತು ಎಂದು ಸದನದ ಗಮನ ಸೆಳೆದರು.

ಜೋಳ ಶೇ.24.5, ಕಬ್ಬು ಶೇ.6.1 ಹಾಗೂ ಹತ್ತಿ ಬೆಳೆ ಹೆಚ್ಚಾಗಬಹುದೆಂದು ಹವಾಮಾನ ತಜ್ಞರು ಹೇಳಿದ್ದಾರೆ. ಕರಾವಳಿ ಮತ್ತು ಮಲೆನಾಡಿನಲ್ಲಿ ಮಳೆ ಕಡಿಮೆಯಾಗಿ, ಬಯಲು ಸೀಮೆಯಲ್ಲಿ ವ್ಯಾಪಕ ಮಳೆಯಾಗಿದೆ. ಸರ್ಕಾರಕ್ಕೆ ಇದರ ಬಗ್ಗೆ ಮಾಹಿತಿ ಇದೆ. ನಾನು ಬೆಂಗಳೂರಿನ ಮಹದೇವಪುರದಲ್ಲಿ ಮಳೆಹಾನಿ ಪ್ರದೇಶಕ್ಕೆ ಭೇಟಿ ಕೊಟ್ಟಿದ್ದೆ. ಅಲ್ಲಿ ರಸ್ತೆ ಮೇಲೆ ಕಾಲಿಡಲು ಸಾಧ್ಯವಾಗದೆ ದೋಣಿ ಮೇಲೆ ಹೋಗುವ ಪರಿಸ್ಥಿತಿ ಇತ್ತು. ಪರಿಸ್ಥಿತಿ ಇಷ್ಟು ಹದಗೆಡುತ್ತದೆ ಎಂದು ಊಹೆ ಮಾಡಲು ಸಾಧ್ಯವಿರಲಿಲ್ಲ ಎಂದರು.

ಮಾತು ಮುಂದುವರೆಸಿದ ಸಿದ್ದರಾಮಯ್ಯ, ಕಳೆದ ವರ್ಷ ಪ್ರವಾಹ ಉಂಟಾಗಿ ಅನೇಕ ಕಡೆ ಬೆಳೆ ಕೊಚ್ಚಿ ಹೋಗಿ, ಮನೆಗಳು ಉರುಳಿಬಿದ್ದಿವೆ. ಸರ್ಕಾರ ಈವರೆಗೂ ಸಮೀಕ್ಷೆಯನ್ನೂ ನಡೆಸಲಿಲ್ಲ. ಅವರಿಗೆ ಒಂದು ವರ್ಷವಾದರೂ ಪರಿಹಾರ ಕೊಟ್ಟಿಲ್ಲ ಎಂದು ಆರೋಪಿಸಿದರು. ಈ ವೇಳೆ ಕಂದಾಯ ಸಚಿವ ಆರ್. ಅಶೋಕ್ ಮಾತನಾಡಿ, ಸದನಕ್ಕೆ ತಪ್ಪು ಮಾಹಿತಿ ನೀಡಬೇಡಿ. ನಾನು ಬೆಳೆಹಾನಿ ಸಮೀಕ್ಷೆ ನಡೆಸಿ ಯಾರ್ಯಾರಿಗೆ ಎಷ್ಟು ನಷ್ಟವಾಗಿದೆಯೋ ಅಂತಹ ಫಲಾನುಭವಿಗಳ ಖಾತೆಗೆ ನೇರ ಹಣ ವರ್ಗಾವಣೆ ಮಾಡಿದ್ದೇನೆ ಎಂದರು. ಇಡೀ ದೇಶದಲ್ಲಿ ಎನ್‌ಡಿಆರ್‌ಎಫ್ ನಿಯಮಾವಳಿಯನ್ನು ಮೀರಿ ಅತೀ ಹೆಚ್ಚು ಪರಿಹಾರ ನೀಡಿದ ಏಕೈಕ ಸರ್ಕಾರ ಕರ್ನಾಟಕ. ಇದಕ್ಕೆ ನೀವು ನಮಗೆ ಅಭಿನಂದನೆ ಸಲ್ಲಿಸಬೇಕು ಎಂದರು. ಆದರೆ ಅಶೋಕ್ ಅವರ ಮಾತನ್ನು ಸಿದ್ದರಾಮಯ್ಯ ಒಪ್ಪಲಿಲ್ಲ. ಅನೇಕ ಕಡೆ ಮನೆಗಳನ್ನು ಕಟ್ಟಿಕೊಟ್ಟಿಲ್ಲ. ಮಳೆ ಹಾನಿ ಪರಿಹಾರ ಪಡೆಯಲು ಜನರು ಇಲಾಖೆಯಿಂದ ಇಲಾಖೆಗೆ ಅಲೆಯುತ್ತಿದ್ದಾರೆ ಇದು ನಿಮ್ಮ ಸರ್ಕಾರದ ವೈಫಲ್ಯಕ್ಕೆ ಹಿಡಿದ ಕೈಗನ್ನಡಿ ಎಂದು ಕಿಡಿಕಾರಿದರು. ಇದಕ್ಕೆ ಪ್ರತಿಕ್ರಿಯಿಸಿದ ಬೊಮ್ಮಾಯಿ, ಹಿಂದಿನ ಯಾವುದೇ ಸರ್ಕಾರಗಳು ಕೊಡದಿರುವಷ್ಟು ಪರಿಹಾರವನ್ನು ನಾವು ಕೊಟ್ಟಿದ್ದೇವೆ. ಎನ್‌ಡಿಆರ್‌ಎಫ್, ಎಸ್‌ಡಿಆರ್‌ಎಫ್ ನಿಯಮಾವಳಿಯನ್ನು ಮೀರಿ ಹೆಚ್ಚಿನ ಪರಿಹಾರ ನೀಡಿದ ಏಕೈಕ ರಾಜ್ಯ ಎಂದರೆ ಕರ್ನಾಟಕ. ನಿಮ್ಮ ಸರ್ಕಾರದ ಅವಧಿಯಲ್ಲಿ ಪರಿಹಾರ ಕೊಟ್ಟಿದ್ದರೆ ಈ ಪರಿಸ್ಥಿತಿ ಬರುತ್ತಿತ್ತೇ ಎಂದು ತಿರುಗೇಟು ನೀಡಿದರು.

ಇದಕ್ಕೆಲ್ಲಾ ಹೆದರೋ ಮಕ್ಕಳಲ್ಲ

ಖಡ್ಗ ಹಿಡಿದಿದ್ರಲ್ಲ ಆಗ ನಾಚಿಕೆ ಆಗಲಿಲ್ವಾ? ಕೊಡಗಿನಲ್ಲಿ ಒಂದು ರೂಪಾಯಿ ಅಭಿವೃದ್ಧಿ ಆಗಿಲ್ಲ. ಕೊಡಗಿನ ಜನ ಒಳ್ಳೆಯವರು ನಿಮ್ಮ ನಡವಳಿಕೆಯಿಂದ ಕೊಡಗು ಹಾಳಾಗುತ್ತಿದೆ. ಘಟನೆ ಆದಾಗ ಪೊಲೀಸರು ನಿಷ್ಕ್ರಿಯರಾಗಿದ್ದರು. ಅದಕ್ಕಾಗಿ ಅಲ್ಲಿನ ಎಸ್‌ಪಿ ಕೆಲಸ ಮಾಡಲು ನಾಲಾಯಕ್ ಎಂದು ಹೇಳಿದ್ದೆ ಎಂದು ವಿವರಿಸಿದರು.

ಬಳಿಕ ಮಧ್ಯಪ್ರವೇಶಿಸಿದ ಗೃಹ ಸಚಿವ ಆರಗ ಜ್ಞಾನೇಂದ್ರ, ಪೊಲೀಸರು ನಿಷ್ಕ್ರಿಯರಾಗಿರಲಿಲ್ಲ. ಸೂಕ್ತ ಬಂದೋಬಸ್ತ್ ಹಾಗೂ ಎಲ್ಲ ರೀತಿಯಲ್ಲಿ ರಕ್ಷಣೆ ನೀಡಿದ್ದಾರೆ ಎಂದು ಸಮರ್ಥಿಸಿಕೊಂಡರು. ಆಗ ಸಿದ್ದರಾಮಯ್ಯ ಮೊಟ್ಟೆ ಎಸೆದವರನ್ನು ಪೊಲೀಸ್ ಠಾಣೆಯಿಂದ ಬಿಡಿಸಲು ಶಾಸಕ ಅಪ್ಪಚ್ಚು ರಂಜನ್ ಏಕೆ ಹೋದರು? ಎಂದು ಗರಂ ಆದರು. ನಾವು ಪೊಲೀಸ್ ಸ್ಟೇಷನ್‌ಗೆ ಹೋಗಿದ್ದು ಕಪ್ಪು ಬಾವುಟ ಹಿಡಿದವರ ಬಿಡಿಸೋಕೆ ಹೋಗಿದ್ದು ಎಂದು ಅಪ್ಪಚ್ಚು ರಂಜನ್ ಸಮಜಾಯಿಷಿ ನೀಡಿದರು. ಇವರು ಕುಮ್ಮಕ್ಕು ಕೊಡದೇ ಮೊಟ್ಟೆ ಎಸೆದ್ರಾ? ಈ ಇಸ್ ಗಿಲ್ಟಿ ಎಂದು ಸಿದ್ದರಾಮಯ್ಯ ವಾಗ್ದಾಳಿ ನಡೆಸಿದರು.

ಮೈಸೂರು ಚಲೋ ಚಳುವಳಿಯಲ್ಲಿ ಹುತಾತ್ಮರಾದ ರಾಮಸ್ವಾಮಿ ಸ್ಮರಣೆ



ಮೈಸೂರಿನ ರಾಮಸ್ವಾಮಿ ವೃತ್ತದಲ್ಲಿ ಯುವಭಾರತ್ ಸಂಘಟನೆ ವತಿಯಿಂದ ಮೈಸೂರು ಚಲೋ ಚಳವಳಿಯಲ್ಲಿ ಹುತಾತ್ಮರಾದವರ ಸ್ಮರಣಾ ಕಾರ್ಯಕ್ರಮ ಮಂಗಳವಾರ ನಡೆಯಿತು.

ಮೈಸೂರು,ಸೆ.13(ಪಿಎಂ)– ದೇಶದ ಸ್ವಾತಂತ್ರ್ಯ ನಂತರ ಭಾರತದ ಒಕ್ಕೂಟಕ್ಕೆ ಅಂದಿನ ಮೈಸೂರು ಸಂಸ್ಥಾನ ಸೇರ್ಪಡೆಗೊಳಿಸಲು ನಡೆದ ಮೈಸೂರು ಚಲೋ ಚಳುವಳಿಯ ಭಾಗವಾಗಿ ಜರುಗಿದ ಹೋರಾಟದಲ್ಲಿ ಸೆ.13ರಂದು ಹುತಾತ್ಮರಾದ ಬಾಣಾವರದ ರಾಮಸ್ವಾಮಿ, ಕಡಕೊಳ ತೋರನಾಯಕ ಮತ್ತು ರಂಗ ಅವರ 75ನೇ ವರ್ಷದ ಪುಣ್ಯಸ್ಮರಣೆ ಕಾರ್ಯಕ್ರಮ ಮಂಗಳವಾರ ನಡೆಯಿತು.

ಮೈಸೂರಿನ ರಾಮಸ್ವಾಮಿ ವೃತ್ತದಲ್ಲಿ ಯುವ ಭಾರತ್ ಸಂಘಟನೆ ವತಿಯಿಂದ ಹಮ್ಮಿಕೊಂಡಿದ್ದ ಕಾರ್ಯಕ್ರಮದಲ್ಲಿ ಶಾಸಕ ಎಲ್.ನಾಗೇಂದ್ರ, ಮೇಯರ್ ಶಿವಕುಮಾರ್ ಸೇರಿದಂತೆ ಮತ್ತಿತರ ಗಣ್ಯರು ರಾಮಸ್ವಾಮಿ ಭಾವಚಿತ್ರಕ್ಕೆ ಪುಷ್ಪ ನಮನ ಸಲ್ಲಿಸಿ, ವೃತ್ತದಲ್ಲಿರುವ ರಾಮಸ್ವಾಮಿಯವರ ಸ್ಮಾರಕ ಫಲಕಕ್ಕೆ ಪುಷ್ಪ ನಮನ ಸಲ್ಲಿಸುವ ಮೂಲಕ ಮೂವರು ಹುತಾತ್ಮರನ್ನು ಸ್ಮರಿಸಿದರು.

ಇದೇ ವೇಳೆ ಮಾತನಾಡಿದ ಶಾಸಕರು, ಅಂದು ಇದೇ ವೃತ್ತದಲ್ಲಿ ಮೈಸೂರು ಚಲೋ ಭಾಗವಾಗಿ ನಡೆದ ಹೋರಾಟದಲ್ಲಿ ರಾಮಸ್ವಾಮಿ ಸೇರಿದಂತೆ ಮೂವರು ಗುಂಡಿಗೆ ಬಲಿಯಾಗಿ ಹುತಾತ್ಮರಾದರು. ಹಾಗಾಗಿ ಈ ವೃತ್ತಕ್ಕೆ ರಾಮಸ್ವಾಮಿ ವೃತ್ತ ಎಂದು ನಾಮಕರಣ ಮಾಡಿದ್ದು, ರಾಮಸ್ವಾಮಿಯವರ ಮಾಹಿತಿ ನಾಮಫಲಕವನ್ನು ವೃತ್ತದ 5 ರಸ್ತೆಗಳ ಬದಿಗಳಲ್ಲಿ ಅನಾವರಣಗೊಳಿಸಲಾಗುವುದು ಎಂದು ತಿಳಿಸಿದರು.

1947ರ ಆ.15ರಂದು ಭಾರತಕ್ಕೆ ಸ್ವಾತಂತ್ರ್ಯ ಸಿಕ್ಕರೂ ಮೈಸೂರು ಸಂಸ್ಥಾನ ಭಾರತದೊಂದಿಗೆ ವಿಲೀನಗೊಳ್ಳಲು ಮೈಸೂರು ಚಲೋ ಚಳವಳಿ ನಡೆಯಬೇಕಾಯಿತು. ಹಾರ್ಡ್ವಿಕ್ ಶಾಲೆಯ ವಿದ್ಯಾರ್ಥಿ ಬಾಣಾವರದ ರಾಮಸ್ವಾಮಿ 13 ವರ್ಷದ ಬಾಲಕನು 1947ರ ಸೆ.13ರಂದು ತನ್ನ ಹುಟ್ಟಿದ ದಿನ ಆಚರಿಸಲು ಸ್ನೇಹಿತರಿಗೆ ಸಿಹಿ ಹಂಚಲು ಸಿದ್ಧನಾಗಿದ್ದ. ಆದರೆ ವಿಧಿ ಆಟವೇ ಬೇರೆಯಾಗಿತ್ತು ಎಂದರು.

ಅದೇ ದಿನ ಮಹಾರಾಜ ಕಾಲೇಜು, ಡಿ.ಬನುಮಯ್ಯ ಶಾಲೆ, ಶಾರದಾವಿಲಾಸ ಕಾಲೇಜು ಮತ್ತು ಹಾರ್ಡ್ವಿಕ್ ಶಾಲೆಯಿಂದ ವಿದ್ಯಾರ್ಥಿಗಳು ಮೈಸೂರು ಚಲೋ ಚಳುವಳಿಯ ಹಿನ್ನೆಲೆಯಲ್ಲಿ ಅಂದು ಫೈವ್‌ಲೈಟ್ ವೃತ್ತ ವಾಗಿದ್ದ ಇದೇ ರಾಮಸ್ವಾಮಿ ವೃತ್ತದಲ್ಲಿ ಜಮಾಯಿಸಿದ್ದರು. ಈ ವೇಳೆ ರಾಮಸ್ವಾಮಿಯು ಭಾರತದ ತ್ರಿವರ್ಣ ಧ್ವಜ ಹಾರಿಸಲು ಕಂಬದ ಮೇಲೇರಿದ್ದ. ಆಗ ಮೈಸೂರು ಸಂಸ್ಥಾನದ ಜಿಲ್ಲಾಧಿಕಾರಿ ನಾಗರಾಜರಾವ್ ಫೈರಿಂಗ್ ಮಾಡಿದಾಗ ರಾಮಸ್ವಾಮಿ ಗುಂಡಿಗೆ ಬಲಿಯಾಗಬೇಕಾಯಿತು ಎಂದು ಸ್ಮರಿಸಿದರು.

ಮೇಯರ್ ಶಿವಕುಮಾರ್ ಮಾತನಾಡಿ, ಅಂದು ಮೈಸೂರು ಸಂಸ್ಥಾನವು ಸ್ವತಂತ್ರ ಭಾರತದಲ್ಲಿ ವಿಲೀನಗೊಳ್ಳಲು ತಮ್ಮ ಪ್ರಾಣವನ್ನೇ ಅರ್ಪಿಸಿದ ರಾಮಸ್ವಾಮಿ, ಕಡಕೊಳ ತೋರ ನಾಯಕ ಮತ್ತು ರಂಗ ಅವರ ಸ್ಮರಣೆ ನಮ್ಮ ಕರ್ತವ್ಯ. ಮುಂದಿನ ದಿನಗಳಲ್ಲಿ ಪಾಲಿಕೆಯಿಂದ ಸಮಿತಿಯೊಂದನ್ನು ರಚಿಸಿ ಇಂತಹ ಹುತಾತ್ಮರು, ಮಹನೀಯರ ಸಾಧನೆ-ಕೊಡುಗೆ ಬಗ್ಗೆ ತಿಳಿಸಲು ಕಾರ್ಯಕ್ರಮಗಳನ್ನು ರೂಪಿಸಲಾಗುವುದು ಎಂದು ತಿಳಿಸಿದರು.

ಪಾಲಿಕೆ ಸದಸ್ಯೆ ಪ್ರಮೀಳಾ ಭರತ್, ಮುಡಾ ಸದಸ್ಯ ನವೀನ್‌ಕುಮಾರ್, ಯುವ ಭಾರತ್ ಸಂಘಟನೆ ಸಂಚಾಲಕ ಅಜಯ್ ಶಾಸ್ತ್ರಿ, ವೀರ ಸಾವರ್ಕರ್ ಸಂಘದ ಅಧ್ಯಕ್ಷ ರಾಕೇಶ್ ಭಟ್, ದಿ ಮೈಸೂರು ಕೋ ಆಪರೇಟಿವ್ ಬ್ಯಾಂಕ್ ನಿರ್ದೇಶಕ ಪಡುವಾರಹಳ್ಳಿ ಎಂ.ರಾಮಕೃಷ್ಣ, ಬಿಜೆಪಿ ಹಿಂದುಳಿದ ವರ್ಗಗಳ ಮೋರ್ಚಾದ ನಗರಾಧ್ಯಕ್ಷ ಜೋಗಿ ಮಂಜು, ಮುಖಂಡ ಕೆಆರ್‌ಎಸ್ ವಿಜಯ್ ಕುಮಾರ್, ಮೈಸೂರು ಯುವ ಬಳಗದ ನವೀನ್, ಮುಖಂಡರಾದ ರವಿಶಾಸ್ತ್ರಿ, ರಂಗನಾಥ್, ಸುಚೀಂದ್ರ, ಶರತ್, ವಿಕಾಸ್ ಶಾಸ್ತ್ರಿ, ಲಿಂಗರಾಜು, ನಾಗೇಶ್, ಚಕ್ರಪಾಣಿ, ಪ್ರತಾಪ್ ದಟ್ಟಗಳ್ಳಿ ಮತ್ತಿತರರು ಹಾಜರಿದ್ದರು.

ಹುಟ್ಟುಹಬ್ಬದಂದೇ ಹುತಾತ್ಮನಾದ ರಾಮಸ್ವಾಮಿ



ಮೈಸೂರು, ಸೆ13(ಪಿಎಂ)– ಮೈಸೂರು ಚಲೋ ಚಳುವಳಿಯಲ್ಲಿ ಹುತಾತ್ಮರಾದ ಬಾಣಾವರದ ರಾಮಸ್ವಾಮಿ, ಕಡಕೊಳ ತೋರನಾಯಕ ಮತ್ತು ರಂಗ ಅವರ 75ನೇ ವರ್ಷದ ಪುಣ್ಯಸ್ಮರಣೆ ಕಾರ್ಯಕ್ರಮವು ಎಐಡಿಎಸ್‌ಓ ಸಂಘಟನೆ ವತಿಯಿಂದಲೂ ಮಂಗಳವಾರ ನಡೆಯಿತು.

ಮೈಸೂರಿನ ರಾಮಸ್ವಾಮಿ ವೃತ್ತದಲ್ಲಿ ವಿವಿಧ ಶಾಲಾ-ಕಾಲೇಜುಗಳ ವಿದ್ಯಾರ್ಥಿಗಳೊಂದಿಗೆ ಸಂಘಟನೆ ಕಾರ್ಯಕರ್ತರು ಹುತಾತ್ಮರ ಸ್ಮರಿಸಿ, ವೃತ್ತದಲ್ಲಿರುವ ರಾಮಸ್ವಾಮಿ ಸ್ಮಾರಕ ಫಲಕಕ್ಕೆ ಪುಷ್ಪ ನಮನ ಸಲ್ಲಿಸಿದರು. ಇದೇ ವೇಳೆ ಮಾತನಾಡಿದ ಸಂಘಟನೆ ಜಿಲ್ಲಾಧ್ಯಕ್ಷ ಬಿ.ಜೆ.ಸುಭಾಷ್, ರಾಮಸ್ವಾಮಿ ಅಂದಿನ ಮೈಸೂರು ಸಂಸ್ಥಾನದ ಸ್ವಾತಂತ್ರ್ಯಕ್ಕಾಗಿ ಹುತಾತ್ಮನಾದ ವೀರ ಬಾಲಕ. 1947ರಲ್ಲಿ ಇಡೀ ದೇಶಕ್ಕೆ ಸ್ವಾತಂತ್ರ್ಯ ಲಭಿಸಿದರೂ ಅಂದಿನ ಮೈಸೂರು ಸಂಸ್ಥಾನಕ್ಕೆ ಅದು ಮರೀಚಿಕೆಯಾಗಿತ್ತು. ಹಾಗಾಗಿ ಭಾರತದ ಒಕ್ಕೂಟಕ್ಕೆ ಮೈಸೂರು ಸಂಸ್ಥಾನ ವಿಲೀನಗೊಳಿಸಲು ಮೈಸೂರು ಚಲೋ ಚಳುವಳಿ ನಡೆಸಬೇಕಾಯಿತು ಎಂದು ಹೇಳಿದರು.

ಬಾಲಕ ರಾಮಸ್ವಾಮಿ ಚಳುವಳಿಯ ಕರೆ ಬಂದೊಡನೆಯೇ ತಾನೂ ಭಾಗವಹಿಸುವ ಜೊತೆಗೆ ತನ್ನ ಸ್ನೇಹಿತರೂ ಭಾಗವಹಿಸುವಂತೆ ಮಾಡಿದ್ದ. 1947ರ ಸೆ.13ರಂದು ತನ್ನ ಹುಟ್ಟಿದ ದಿನಕ್ಕೆ ಮನೆಯಲ್ಲಿ ಸಿಹಿ ಮಾಡಿಸಲು ದಿನಸಿ ತರಲು ಹೊರಟಿದ್ದ ರಾಮಸ್ವಾಮಿ ಜನ್ಮದಿನದ ಸಂಭ್ರಮವನ್ನೇ ಮರೆತು ಚಳುವಳಿ ಸೇರಿಕೊಂಡ ಎಂದರು.

ಹೋರಾಟಗಾರರನ್ನು ಚದುರಿಸಲು ಪೊಲೀಸರು ಲಾಠಿ ಪ್ರಹಾರ ಮಾಡಿದರು. ಅಲ್ಲದೆ, ಅಶ್ರುವಾಯು ಪ್ರಯೋಗಿಸಿದಾಗ ವಿದ್ಯಾರ್ಥಿಗಳು ಚೆಲ್ಲಾಪಿಲ್ಲಿಯಾದರು. ಆದರೆ ಇದರ ನಡುವೆಯೂ ಧೈರ್ಯಶಾಲಿ ರಾಮಸ್ವಾಮಿ ತ್ರಿವರ್ಣ ಧ್ವಜ ಹಿಡಿದು ವೃತ್ತವನ್ನು ಪ್ರವೇಶಿಸಿ, ಧ್ವಜವನ್ನು ಹಾರಿಸಲು ಕಂಬವೇರಿದ. ಇದನ್ನು ನೋಡಿದ ಅಂದಿನ ಜಿಲ್ಲಾಧಿಕಾರಿ ನಾಗರಾಜರಾವ್ ಹಾರಿಸಿದ ಗುಂಡಿಗೆ ರಾಮಸ್ವಾಮಿ ಹುತಾತ್ಮನಾದ ಎಂದು ಸ್ಮರಿಸಿದರು. ಸಂಘಟನೆಯ ಜಿಲ್ಲಾ ಕಾರ್ಯದರ್ಶಿಗಳಾದ ಚಂದ್ರಕಲಾ, ಆಸಿಯಾ ಬೇಗಂ ಸೇರಿದಂತೆ ಶಾಲಾ-ಕಾಲೇಜು ವಿದ್ಯಾರ್ಥಿಗಳು ಹಾಜರಿದ್ದರು.

ಧರ್ಮ, ರಾಜಕಾರಣದ ಅಪವಿತ್ರ ಮೈತ್ರಿಯಿಂದ ಸಮಾಜದಲ್ಲಿ ಅಲ್ಲೋಲ ಕಲ್ಲೋಲ ಸೃಷ್ಟಿ

ಬಿಎಂಶ್ರೀ ಸ್ಮಾರಕ ಪ್ರತಿಷ್ಠಾನದ ಅಧ್ಯಕ್ಷ ಡಾ. ಬೈರಮಂಗಲ ರಾಮೇಗೌಡ ಆತಂಕ



ಮೈಸೂರು, ಸೆ.13(ಜಿಎ)– ಧರ್ಮ ಮತ್ತು ರಾಜಕಾರಣದ ಅಪವಿತ್ರ ಮೈತ್ರಿಯಿಂದ ಸಮಾಜದಲ್ಲಿ ಅಲ್ಲೋಲ ಕಲ್ಲೋಲ ಸೃಷ್ಟಿಯಾಗುತ್ತಿದೆ ಎಂದು ಬೆಂಗಳೂರಿನ ಬಿಎಂಶ್ರೀ ಸ್ಮಾರಕ ಪ್ರತಿಷ್ಠಾನದ ಅಧ್ಯಕ್ಷ ಡಾ. ಬೈರಮಂಗಲ ರಾಮೇಗೌಡ ಆತಂಕ ವ್ಯಕ್ತಪಡಿಸಿದರು.

ಮೈಸೂರಿನ ಕೃಷ್ಣಮೂರ್ತಿಪುರಂನಲ್ಲಿರುವ ಶ್ರೀ ಧರ್ಮಸ್ಥಳ ಮಂಜುನಾಥೇಶ್ವರ (ಎಸ್‌ಡಿಎಂ) ಮಹಿಳಾ ಮಹಾವಿದ್ಯಾಲಯದ ಸಭಾಂಗಣದಲ್ಲಿ ಹಂಪಿ ಕನ್ನಡ ವಿಶ್ವವಿದ್ಯಾನಿಲಯದ ಜೈನ ಸಾಹಿತ್ಯ ಸಂಸ್ಕೃತಿ ಅಧ್ಯಯನ ಕೇಂದ್ರ ಹಾಗೂ ಮಹಾ ವಿದ್ಯಾಲಯದ ಜಂಟಿ ಆಶ್ರಯದಲ್ಲಿ 'ಜೈನ ಧರ್ಮ; ಸಮಾಜ ಮುಖಿ ಚಿಂತನೆಗಳು' ಕುರಿತು ಆಯೋಜಿಸಿದ್ದ ಎರಡು ದಿನಗಳ ರಾಷ್ಟ್ರ ಮಟ್ಟದ ವಿಚಾರ ಸಂಕಿರಣದ ಸಮಾರೋಪ ಸಮಾರಂಭದಲ್ಲಿ ಅವರು ಮಾತನಾಡಿದರು.

ತಮ್ಮ ಕ್ಷೇತ್ರದಲ್ಲಿ ಕಾರ್ಯ ನಿರ್ವಹಿಸಬೇಕಿದ್ದ ಧರ್ಮ ಮತ್ತು ರಾಜಕಾರಣವು ಪರಸ್ಪರ ಲಾಭಕ್ಕೆ ಹೊಂಚು ಹಾಕುತ್ತಿದ್ದು, ರಾಜಕಾರಣವು ಮತಗಳನ್ನು ಸುಲಭವಾಗಿ ಪಡೆಯಬಹುದು ಎಂಬ ಉದ್ದೇಶದಿಂದ ಧರ್ಮಕ್ಕೆ ಶರಣಾಗುತ್ತಿದೆ. ಧರ್ಮವನ್ನು ಮತ್ತಷ್ಟು ಪ್ರಚಾರ ಮಾಡೋಣ ಮತ್ತು ನಾವು ಅದರೊಟ್ಟಿಗೆ ಮೆರೆಯೋಣ ಎಂಬ ಆಲೋಚನೆಯಿಂದ ಧರ್ಮವು ರಾಜಕಾರಣದ ಬೆಂಬಲವನ್ನು ಪಡೆಯುತ್ತಿದ್ದು, ಇವೆರಡರ ಮಧ್ಯದಲ್ಲಿ ದೇಶದ ಸಾಮಾನ್ಯ ಪ್ರಜೆ ಸಿಕ್ಕಿ ಹಾಕಿಕೊಂಡು ಒದ್ದಾಡುತ್ತಿದ್ದಾನೆ ಎಂದರು.

ನಮಗೆ ಮತ ನೀಡುವುದರಿಂದ ಅಚ್ಛೆ ದಿನ್ ಬರುತ್ತದೆ ಎಂದು ಹೇಳಿದವರನ್ನು ನಂಬಿ ಜನರು ಅವರಿಗೆ ಮತ ನೀಡಿದರು. ಅದರ ಪ್ರತಿಫಲವಾಗಿ ಅಧಿಕಾರಕ್ಕೆ ಬಂದು. ಒಂದು ಬಾರಿಯ ಅವಧಿ ಮುಗಿಸಿ ಈಗ ಮತ್ತೊಂದು ಅವಧಿಯನ್ನು ಮುಂದುವರೆಸಿದ್ದಾರೆ. ಆದರೆ, ಇತ್ತ ಅಚ್ಛೆ ದಿನ್ ಎಂದರೆ ಏನು? ಎಂದು ನಿರೀಕ್ಷೆಯಲ್ಲಿದ್ದವರಿಗೆ ಅಚ್ಛೆ ದಿನ್ ಎಂಬುದೇ ಬರಲಿಲ್ಲ. ಇದರ ಬಗ್ಗೆ ಪ್ರಶ್ನಿಸಲು ಜನರು ಮುಂದಾದರೆ ರಾಜಕಾರಣಿಗಳು ಉತ್ತರ ನೀಡದೆ ತಪ್ಪಿಸಿಕೊಳ್ಳುತ್ತಿರುವುದನ್ನು ಗಮನಿಸುತ್ತಿದ್ದೇವೆ. ಅಚ್ಛೆ ದಿನ್ ಎಂಬುದನ್ನೆ ಮತಗಳಿಕೆಯ ಸಾಧನವಾಗಿ ಮಾಡಿಕೊಂಡು ಆಕರ್ಷಕ ನಾಟಕಗಳನ್ನು ಆಡಿದರು. ಅದನ್ನು ಪ್ರಶ್ನಿಸಬೇಕಿದ್ದ ನಾವು ಅಸಹಾಯಕ ಸ್ಥಿತಿಯಲ್ಲಿದ್ದೇವೆ ಎಂದರು.

ರಾಜಕಾರಣ ಸೃಷ್ಟಿ ಮಾಡಿರುವ ಸಮಸ್ಯೆಯು ಜನರನ್ನು ಕಿತ್ತು ತಿನ್ನುತ್ತಿದ್ದು, ಇಂತಹ ಸಮಸ್ಯೆಗಳ ಬಗ್ಗೆ ಮಾತನಾಡಬೇಕಿರುವ ಕವಿಗಳು, ಸಾಹಿತಿಗಳು ಮತ್ತು ಪ್ರಜ್ಞಾವಂತ ನಾಗರಿಕರು ಮೌನ ವಹಿಸಿದ್ದಾರೆ. ಅದರ ಬಗ್ಗೆ ಬರೆಯಲು ಮುಂದಾಗುತ್ತಿಲ್ಲ. ಅವುಗಳ ಕುರಿತು ಬರೆದರೆ ಮುಂದೇನಾಗುತ್ತದೆಯೋ ಎಂಬ ಭೀತಿಯಲ್ಲಿದ್ದೇವೆ. ಸರ್ಕಾರದ ನೀತಿಯನ್ನು ಟೀಕಿಸುವುದಾಗಲಿ ಅಥವಾ ವಿಮರ್ಶೆ ಮಾಡುವುದೇ ಅಪರಾಧ ಎಂದು ಭಾವಿಸಿ ಅಂತಹವರನ್ನು ಸೆರೆಮನೆಯಲ್ಲಿ ಹಾಕುತ್ತಾರೆ. ಪೊಲೀಸ್ ಠಾಣೆಗೆ ಮತ್ತೆ ಮತ್ತೆ ಅಲೆಯುವಂತೆ ಮಾಡುತ್ತಿರುವುದನ್ನು ಗಮನಿಸುತ್ತಿದ್ದೇವೆ.

ಇಂತಹ ಸಂದರ್ಭದಲ್ಲಿ ಸಾಮಾನ್ಯವಾಗಿ ಪ್ರಜ್ಞಾವಂತರು ಪಂಪನನ್ನು ನೆನಪು ಮಾಡಿಕೊಳ್ಳಬೇಕು. ಪಂಪನ ಮಾದರಿಯನ್ನು ಅನುಸರಿಸಿದ ರನ್ನ, ಜನ್ನರಂತಹವರು ಎಲ್ಲರೂ ರಾಜಾಶ್ರಯದಲ್ಲಿದ್ದು, ರಾಜನನ್ನು ಟೀಕಿಸುವುದು ಮತ್ತು ಅವರ ಜನ ವಿರೋಧಿ ಕೆಲಸಗಳನ್ನು ಧಿಕ್ಕರಿಸುತ್ತಿದ್ದರು ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಜೈನ ಸಾಹಿತ್ಯ ಸಂಸ್ಕೃತಿ ಅಧ್ಯಯನ ಕೇಂದದ ಸಂಯೋಜನಾಧಿಕಾರಿ ಡಾ.ತಾರಿಹಳ್ಳಿ ಹನುಮಂತಪ್ಪ, ಶ್ರೀ ಧರ್ಮಸ್ಥಳ ಮಂಜುನಾಥೇಶ್ವರ ಮಹಿಳಾ ಮಹಾವಿದ್ಯಾಲಯದ ಪ್ರಾಂಶುಪಾಲ ಪ್ರೊ.ಸಾಯಿನಾಥ್ ಮಲ್ಲಿಗೆಮಾಡು, ಎಚ್. ನರಸಿಂಹರಾಜು ಮತ್ತಿತರರು ಹಾಜರಿದ್ದರು.

ದಸರಾ ಅಂಗವಾಗಿ ನೈಪುಣ್ಯ ದಸರಾ ಪ್ರಶಸ್ತಿ

ಮೈಸೂರು, ಸೆ.13(ಎಂಕೆ)– ಮೈಸೂರಿನ ಆರ್.ಟಿ.ನಗರದಲ್ಲಿರುವ ನೈಪುಣ್ಯ ಸ್ಕೂಲ್ ಆಫ್ ಎಕ್ಸಲೆನ್ಸ್ ಶಾಲೆಯಲ್ಲಿ ನಾಡಹಬ್ಬ ದಸರಾ ಅಂಗವಾಗಿ 'ನೈಪುಣ್ಯ ದಸರಾ ಪ್ರಶಸ್ತಿ' ಹಾಗೂ ನಗದು ಬಹುಮಾನವನ್ನೊಳಗೊಂಡ ಅಂತರಶಾಲಾ ಚಿತ್ರಕಲಾ ಸ್ಪರ್ಧೆಯನ್ನು ಆಯೋಜಿಸಲಾಗಿದೆ. ಚಿತ್ರಕಲಾ ಸ್ಪರ್ಧೆಯು ಸೆ.18 ರಂದು ನಡೆಯಲಿದ್ದು, ಆಸಕ್ತರು ಸೆ.16ರೊಳಗೆ ನೋಂದಣಿ ಮಾಡಿಕೊಳ್ಳಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ಮೊ.ನಂ. 9108002966, ದೂ.ಸಂಖ್ಯೆ.0821-2340041 ಗೆ ಸಂಪರ್ಕಿಸುವಂತೆ ಕೋರಲಾಗಿದೆ.

ಸೆ.18, ಸರ್ ಎಂ.ವಿ. ಕುರಿತ ಡಿಎನ್ಕೆ ಅವರ 'ಕರ್ಮ ಯೋಗಿ' ಕೃತಿ ಬಿಡುಗಡೆ

ಮೈಸೂರು, ಸೆ. 13– ನಗರದ ಡಿಎನ್ಕೆ ಸ್ನೇಹ ಬಳಗದ ವತಿಯಿಂದ ಸಾಹಿತಿ ಡಿ.ಎನ್.ಕೃಷ್ಣಮೂರ್ತಿ ಅವರು ಬರೆದಿರುವ ಭಾರತರತ್ನ ಸರ್ ಎಂ.ವಿಶ್ವೇಶ್ವರಯ್ಯನವರ ಸಮಗ್ರ ಜೀವನಚರಿತ್ರೆಯಾದ 'ಕರ್ಮಯೋಗಿ' ಕೃತಿ ಬಿಡುಗಡೆ ಹಾಗೂ ಡಿಎನ್ಕೆ ಅರವತ್ತರ ಹೆಜ್ಜೆ ಅಭಿನಂದನಾ ಸಮಾರಂಭವು ಸೆ. 18 ರಂದು ಮೈಸೂರು ನಗರದ ದಿ ಇನ್ಸ್ಟಿಟ್ಯೂಟ್ ಆಫ್ ಇಂಜಿನಿಯರ್ಸ್ ಸಭಾಂಗಣದಲ್ಲಿ ನಡೆಯಲಿದೆ.

ಅಂದು ಸಂಜೆ 4-15ಕ್ಕೆ ಆರಂಭವಾಗುವ ಈ ಸಾಹಿತ್ಯಕ ಸಮಾರಂಭವನ್ನು ಮಾಜಿ ಸಚಿವ ಸಿ.ಹೆಚ್. ವಿಜಯಶಂಕರ್ ಉದ್ಘಾಟಿಸಲಿದ್ದು, ನಾಡೋಜ ಪ್ರೊ.ಭಾಷ್ಯಂ ಸ್ವಾಮೀಜಿ ಸಾನ್ನಿಧ್ಯ ವಹಿಸಲಿದ್ದಾರೆ. ರಾಜ್ಯದ ಸಹಕಾರ ಮತ್ತು ಮೈಸೂರು ಜಿಲ್ಲಾ ಉಸ್ತುವಾರಿ ಸಚಿವ ಎಸ್.ಟಿ.ಸೋಮಶೇಖರ್ ಅವರು ಭಾರತರತ್ನ ಸರ್ ಎಂ. ವಿ ಜೀವನ ಚರಿತ್ರೆ "ಕರ್ಮಯೋಗಿ"ಕೃತಿಯನ್ನು ಬಿಡುಗಡೆ ಮಾಡಲಿದ್ದು, ಕನ್ನಡ ಸಾಹಿತ್ಯ ಪರಿಷತ್ತಿನ ರಾಜ್ಯಾಧ್ಯಕ್ಷ ನಾಡೋಜ ಡಾ.ಮಹೇಶ್ ಜೋಶಿ ಅಧ್ಯಕ್ಷತೆ ವಹಿಸುವರು. ಹಿರಿಯ ವಿದ್ವಾಂಸ ಡಾ.ಸಿ.ಪಿ.ಕೆ ಕೃತಿಯ ಪ್ರಥಮ ಪ್ರತಿ ಸ್ವೀಕರಿಸಲಿದ್ದು ಇದೇ ಸಂದರ್ಭದಲ್ಲಿ ಅರವತ್ತನೇ ವಸಂತಕ್ಕೆ ಕಾಲಿಡುತ್ತಿರುವ ಕೃತಿಯ ಕರ್ತೃ ಡಿ.ಎನ್. ಕೃಷ್ಣಮೂರ್ತಿ ಅವರನ್ನು ಡಿಎನ್ಕೆ ಸ್ನೇಹ ಬಳಗದ ವತಿಯಿಂದ ಅಭಿನಂದಿಸಲಾಗುವುದು. ಸಾಹಿತಿ ಹಾಗೂ ಪತ್ರಕರ್ತ ಬನ್ನೂರು ಕೆ.ರಾಜು ಅಭಿನಂದನಾ ನುಡಿಗಳನ್ನಾಡುವರು. ಮೈಸೂರು ನಗರ ಭಾಜಪ ಅಧ್ಯಕ್ಷ ಶ್ರೀವತ್ಸ ಅವರು ಮುಖ್ಯ ಅತಿಥಿಯಾಗಿ ಭಾಗವಹಿಸುವರು.ಸಾಹಿತಿ ಡಿಎನ್ಕೆ ಅವರ ಸ್ನೇಹಿತರು, ಭಾರತ ರತ್ನ ಸರ್ ಎಂ.ವಿಶ್ವೇಶ್ವರಯ್ಯ ಅವರ ಅಭಿಮಾನಿಗಳು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸುವಂತೆ ಪ್ರಕಟಣೆಯಲ್ಲಿ ಕೋರಲಾಗಿದೆ.

ಗಾಂಜಾ ಮಾರಾಟ: ಒಬ್ಬನ ಬಂಧನ

ಐದು ಕೆಜಿ ಮಾಲು ವಶ

ಮೈಸೂರು, ಸೆ.13(ಎಸ್‌ಬಿಡಿ)– ಗಾಂಜಾ ಮಾರಾಟಕ್ಕೆ ಯತ್ನಿಸುತ್ತಿದ್ದ ವ್ಯಕ್ತಿಯನ್ನು ಮೈಸೂರಿನ ಸಿಸಿಬಿ ಪೊಲೀಸರು ಬಂಧಿಸಿ, ಆತನಿಂದ 5 ಕೆಜಿಗಿಂತ ಹೆಚ್ಚು ಪ್ರಮಾಣದ ಗಾಂಜಾ ವಶಪಡಿಸಿಕೊಂಡಿದ್ದಾರೆ.

ಮೈಸೂರಿನ ಮಂಡಿಮೊಹಲ್ಲಾದ ಸುನ್ನಿಚೌಕದಲ್ಲಿ ಆ.9ರಂದು ಆಕ್ಸಿಸ್ ಸ್ಕೂಟರ್ ನಿಲ್ಲಿಸಿಕೊಂಡು ಇಬ್ಬರು ನಿಂತಿದ್ದರು. ಆ ವೇಳೆ ಗಸ್ತಿನಲ್ಲಿದ್ದ ಪೊಲೀಸರನ್ನು ಕಂಡು ಇಬ್ಬರೂ ಅಲ್ಲಿಂದ ಪರಾರಿಯಾಗಲು ಯತ್ನಿಸಿದರು. ಇದರಿಂದ ಅನುಮಾನಗೊಂಡು ಬೆನ್ನತ್ತಿದ ಪೊಲೀಸರಿಗೆ ಓರ್ವ ಸಿಕ್ಕಿ ಹಾಕಿಕೊಂಡಿದ್ದು, ಮತ್ತೋರ್ವ ಪರಾರಿಯಾಗಿದ್ದಾನೆ.

ಬಳಿಕ ಸ್ಕೂಟರ್ ಪರಿಶೀಲಿಸಿದಾಗ ಅದರ ಡಿಕ್ಕಿಯಲ್ಲಿ 5 ಕೆಜಿ 150 ಗ್ರಾಂ ಗಾಂಜಾ, ತೂಕ ಮಾಡಲು ಬಳಸುವ ಸಣ್ಣ ಯಂತ್ರ ಪತ್ತೆಯಾಗಿದೆ. ಈ ವಸ್ತುಗಳ ಜೊತೆಗೆ ಕೃತ್ಯಕ್ಕೆ ಬಳಸಿದ ಸ್ಕೂಟರ್ ಅನ್ನೂ ಪೊಲೀಸರು ವಶಪಡಿಸಿಕೊಂಡಿದ್ದಾರೆ. ದ್ವಿಚಕ್ರವಾಹನದಲ್ಲಿ ಅಕ್ರಮವಾಗಿ ಗಾಂಜಾ ಇಟ್ಟುಕೊಂಡಿದ್ದ ಆರೋಪದಡಿ ಆತನನ್ನು ಬಂಧಿಸಲಾಗಿದ್ದು, ತಲೆಮರೆಸಿಕೊಂಡಿರುವ ಮತ್ತೋರ್ವ ಆರೋಪಿ ಪತ್ತೆಗೆ ಕ್ರಮ ಕೈಗೊಂಡಿದ್ದಾರೆ. ವಶಪಡಿಸಿಕೊಳ್ಳಲಾಗಿರುವ ಗಾಂಜಾ ಬೆಲೆ ಸುಮಾರು 2.06 ಲಕ್ಷ ರೂ. ಇರಬಹುದೆಂದು ಅಂದಾಜಿಸಲಾಗಿದೆ. ಈ ಸಂಬಂಧ ಮಂಡಿ ಠಾಣೆ ಪೊಲೀಸರು ಪ್ರಕರಣ ದಾಖಲಿಸಿಕೊಂಡು, ತನಿಖೆ ಮುಂದುವರೆಸಿದ್ದಾರೆ.

ಅಪರಾಧ ಮತ್ತು ಸಂಚಾರ ವಿಭಾಗದ ಡಿಸಿಪಿ ಗೀತಾ ಮಾರ್ಗದರ್ಶನ, ಸಿಸಿಬಿ ಎಸಿಪಿ ಸಿ.ಕೆ.ಅಶ್ವತ್ಥನಾರಾಯಣರ ನಿರ್ದೇಶನದಲ್ಲಿ ನಡೆದ ಕಾರ್ಯಾಚರಣೆಯಲ್ಲಿ ಸಿಸಿಬಿ ಇನ್‌ಸ್ಪೆಕ್ಟರ್(ಹೆಚ್&ಬಿ ವಿಭಾಗ) ಜಿ.ಶೇಖರ್, ಸಿಬ್ಬಂದಿ ಸಲೀಂಪಾಷ, ಉಮಾಮಹೇಶ್, ಮಧುಸೂಧನ ಭಾಗಿಯಾಗಿದ್ದರು.

ಬಿಜೆಪಿ ರಾಷ್ಟ್ರೀಯ ಪ್ರಧಾನ ಕಾರ್ಯದರ್ಶಿ ಸಿ.ಟಿ.ರವಿ ವಿರುದ್ಧ ಪ್ರತಿಭಟನೆ

ಮೈಸೂರು,ಸೆ.13(ಪಿಎಂ)– ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯರ ಬಗ್ಗೆ ಅವಹೇಳನಕಾರಿ ಹೇಳಿಕೆ ನೀಡಿರುವ ಬಿಜೆಪಿ ರಾಷ್ಟ್ರೀಯ ಪ್ರಧಾನ ಕಾರ್ಯ ದರ್ಶಿ ಸಿ.ಟಿ.ರವಿ ವಿರುದ್ಧ ರಾಜ್ಯ ಹಿಂದುಳಿದ ವರ್ಗಗಳ ಜಾಗೃತ ವೇದಿಕೆ ಹಾಗೂ ರಾಜ್ಯ ಅತಿ ಹಿಂದುಳಿದ ವರ್ಗಗಳ ಜಾಗೃತ ವೇದಿಕೆ ಜಂಟಿ ಆಶ್ರಯದಲ್ಲಿ ಮಂಗಳವಾರ ಪ್ರತಿಭಟನೆ ನಡೆಸಲಾಯಿತು.

ಮೈಸೂರಿನ ಪುರಭವನ ಆವರಣದಲ್ಲಿ ಜಮಾಯಿಸಿದ ಪ್ರತಿಭಟನಾಕಾರರು, ಸಿ.ಟಿ.ರವಿ ವಿರುದ್ಧ ಧಿಕ್ಕಾರ ಕೂಗಿ ಆಕ್ರೋಶ ವ್ಯಕ್ತಪಡಿಸಿದರಲ್ಲದೆ, ಹಗಲು ಕುಡುಕ ಸಿ.ಟಿ.ರವಿ ಎಂದು ಟೀಕಾಪ್ರಹಾರ ನಡೆಸಿದರು. ಅಲ್ಲದೆ, ಸಿ.ಟಿ.ರವಿಯವರ ಕಟೌಟ್ ಮಾದರಿಯ ಪ್ರತಿಕೃತಿ ದಹಿಸಲು ಪ್ರತಿಭಟನಾಕಾರರು ಮುಂದಾದರು.

ಈ ವೇಳೆ ಸ್ಥಳದಲ್ಲಿದ್ದ ಪೊಲೀಸರು ಅದನ್ನು ವಶಕ್ಕೆ ಪಡೆಯುವ ಮೂಲಕ ಪ್ರತಿಕೃತಿ ದಹಿಸುವುದನ್ನು ವಿಫಲಗೊಳಿಸಿದರು. ಬಳಿಕ ಸಿ.ಟಿ.ರವಿ ಭಾವಚಿತ್ರ ಒಳಗೊಂಡ ಧಿಕ್ಕಾರದ ಫಲಕವೊಂದಕ್ಕೆ ಪೊಲೀಸರ ಕಣ್ಣುತಪ್ಪಿಸಿ ಪ್ರತಿಭಟನಾಕಾರರು, ಬೆಂಕಿ ಹಚ್ಚಿದರು. ಕೂಡಲೇ ಪೊಲೀಸರು ಫಲಕದ ಬೆಂಕಿ ನಂದಿಸಿದರು.

ಸಿದ್ದರಾಮಯ್ಯನವರ ವಿರುದ್ಧ ಬಿಜೆಪಿ ಮುಖಂಡರು ಪದೇ ಪದೆ ಅವಹೇಳನಕಾರಿಯಾಗಿ ಮಾತನಾಡುತ್ತಿದ್ದು, ಆ ಮೂಲಕ ವೈಯಕ್ತಿಕ ಟೀಕೆಗೆ ಮುಂದಾಗಿದ್ದಾರೆ. ಸಿದ್ದರಾಮಯ್ಯನವರು ಹಿಂದುಳಿದ ವರ್ಗಗಳ ನಾಯಕರಾಗಿದ್ದು, ಅವರ ತೇಜೋವಧೆ ಯನ್ನು ಹೀಗೆ ಮುಂದುವರೆಸಿದರೆ ಮುಂದಿನ ದಿನಗಳಲ್ಲಿ ಬಿಜೆಪಿ ಪಕ್ಷ ಪರಿಣಾಮ ಎದುರಿಸಬೇಕಾಗುತ್ತದೆ ಎಂದು ಪ್ರತಿಭಟನಾಕಾರರು ಆಕ್ರೋಶ ವ್ಯಕ್ತಪಡಿಸಿದರು.

ಇದೇ ವೇಳೆ ಮಾಧ್ಯಮದವರೊಂದಿಗೆ ಮಾತನಾಡಿದ ಹಿಂದುಳಿದ ವರ್ಗಗಳ ಜಾಗೃತ ವೇದಿಕೆ ರಾಜ್ಯಾಧ್ಯಕ್ಷ ಕೆಎಸ್.ಶಿವರಾಮು, ಸಿ.ಟಿ.ರವಿಯವರು ಸಿದ್ದರಾಮಯ್ಯರನ್ನು ವೈಯಕ್ತಿಕವಾಗಿ ಟೀಕೆ ಮಾಡುವ ನಿಟ್ಟಿನಲ್ಲಿ ಆಕ್ಷೇಪಾರ್ಹ ಪದ ಬಳಕೆ ಮಾಡಿದ್ದಾರೆ. ಇದು ಖಂಡನೀಯ ಎಂದು ಕಿಡಿಕಾರಿದರು.



ಮೈಸೂರಿನ ಪುರಭವನ ಆವರಣದಲ್ಲಿ ರಾಜ್ಯ ಹಿಂದುಳಿದ ವರ್ಗಗಳ ಜಾಗೃತ ವೇದಿಕೆ ಹಾಗೂ ರಾಜ್ಯ ಅತಿ ಹಿಂದುಳಿದ ವರ್ಗಗಳ ಜಾಗೃತ ವೇದಿಕೆ ಜಂಟಿ ಆಶ್ರಯದಲ್ಲಿ ಮಂಗಳವಾರ ಪ್ರತಿಭಟನೆ ನಡೆಸಲಾಯಿತು.

ಸಿದ್ದರಾಮಯ್ಯನವರು ರಾಜ್ಯದ ಮುಖ್ಯಮಂತ್ರಿ ಯಾಗಿ ಐದು ವರ್ಷಗಳ ಕಾಲ ಜನಪರ ಆಡಳಿತ ನೀಡಿದ್ದಾರೆ. ಶೋಷಿತ ಸಮುದಾಯಗಳ ಬಗ್ಗೆ ಕಾಳಜಿಯಿಂದ ಒಳ್ಳೆಯ ಯೋಜನೆಗಳನ್ನು ಜಾರಿಗೊಳಿ ಸಿದರು. ಅಂತಹವರ ಬಗ್ಗೆ ಆಕ್ಷೇಪಾರ್ಹ ಪದಗಳ ಬಳಸಿ ಟೀಕಿಸುವ ಮೂಲಕ ಇಡೀ ರಾಜ್ಯದ ಜನತೆಗೆ ಸಿ.ಟಿ.ರವಿ ಅಪಮಾನ ಮಾಡಿದ್ದಾರೆ. ಪ್ರವಾಹದಿಂದ ಇಂದು ರಾಜ್ಯದ ಜನತೆ ಸಂಕಷ್ಟದಲ್ಲಿದ್ದಾರೆ. ಅವರಿಗೆ ಸ್ಪಂದಿಸುವ ಯೋಗ್ಯತೆ ಇಲ್ಲದ ಸಿ.ಟಿ.ರವಿಯವರು ಸಿದ್ದರಾಮಯ್ಯನವರ ಬಗ್ಗೆ ಹೀಗೆ ವೈಯಕ್ತಿಕವಾಗಿ ದಾಳಿ ಮಾಡಿರುವುದು ಖಂಡನಾರ್ಹ ಎಂದರು.

ಈ ಕೂಡಲೇ ಸಿ.ಟಿ.ರವಿ ರಾಜ್ಯದ ಜನತೆ ಕ್ಷಮೆಯಾಚಿಸಬೇಕು. ಇಲ್ಲದಿದ್ದರೆ, ಅವರ ವಿರುದ್ಧ ಉಗ್ರ ಪ್ರತಿಭಟನೆ ನಡೆಸಬೇಕಾಗುತ್ತದೆ. ಅಲ್ಲದೆ, ಅವರು ಮೈಸೂರಿಗೆ ಭೇಟಿ ನೀಡಿದಾಗ, ಕಪ್ಪು ಬಾವುಟ ಪ್ರದರ್ಶಿಸಿ, ಮುಖಕ್ಕೆ ಮಸಿ ಬಳಿಯಬೇಕಾಗುತ್ತದೆ ಎಂದು ಎಚ್ಚರಿಸಿದರು. ಅತಿ ಹಿಂದುಳಿದ ವರ್ಗಗಳ ಜಾಗೃತ ವೇದಿಕೆ ಅಧ್ಯಕ್ಷ ಡಿ.ನಾಗಭೂಷಣ್, ಜಿಲ್ಲಾ ಸವಿತ ಸಮಾಜದ ಅಧ್ಯಕ್ಷ ಎನ್.ಆರ್.ನಾಗೇಶ್, ಅಖಿಲ ಕರ್ನಾಟಕ ಸಿದ್ದರಾಮಯ್ಯ ಅಭಿಮಾನಿಗಳ ಬ್ರಿಗೇಡ್ ಅಧ್ಯಕ್ಷ ಹಿನಕಲ್ ಉದಯ್, ಪ್ರಧಾನ ಕಾರ್ಯದರ್ಶಿ ಶಿವು ಮತ್ತಿತರರು ಪ್ರತಿಭಟನೆಯಲ್ಲಿ ಪಾಲ್ಗೊಂಡಿದ್ದರು.

ಮೈಸೂರು ಮಿತ್ರ

ವರದಕ್ಷಿಣೆ ಕಿರುಕುಳಕ್ಕೆ ಗೃಹಿಣಿ ಬಲಿ



ಭೇರ್ಯ, ಸೆ.13– ವರದಕ್ಷಿಣೆ ಕಿರುಕುಳಕ್ಕೆ ಗೃಹಿಣಿ ಬಲಿಯಾಗಿರುವ ಘಟನೆ ಸೋಮವಾರ ರಾತ್ರಿ ಸಾಲಿಗ್ರಾಮದಲ್ಲಿ ನಡೆದಿದೆ. ಅಂಕನಹಳ್ಳಿ ಗ್ರಾಮದ ಸೋಮಶೇಖರ್ ಅವರ ಪುತ್ರಿ ರಾಜೇಶ್ವರಿ ವರದಕ್ಷಿಣೆ ಕಿರುಕುಳಕ್ಕೆ ಬಲಿಯಾದ ಗೃಹಿಣಿ.

ವಿವರ: 6 ವರ್ಷಗಳ ಹಿಂದೆ ರಾಜೇಶ್ವರಿಯನ್ನು ಸಾಲಿ ಗ್ರಾಮದ ನಿವಾಸಿ ಹರೀಶ್‌ಗೆ ಕೊಟ್ಟು ಅದ್ದೂರಿಯಾಗಿ ಮದುವೆ ಮಾಡಿಕೊಡಲಾಗಿತ್ತು. ಮದುವೆ ಬಳಿಕ ಅನ್ಯೋನ್ಯವಾಗಿದ್ದ ದಂಪತಿಗೆ 5 ವರ್ಷದ ಮಗು ಇದೆ. ಕುಡಿತದ ಚಟಕ್ಕೆ ದಾಸನಾಗಿದ್ದ ಹರೀಶ್ ರಾಜೇಶ್ವರಿಗೆ ಹಣ ತರುವಂತೆ ದೈಹಿಕ ಹಾಗೂ ಮಾನಸಿಕ ಹಿಂಸೆ ನೀಡಲು ಆರಂಭಿಸಿದ್ದಾನೆ. ಈ ಸಂಬಂಧ ಸಾಕಷ್ಟು ಬಾರಿ ನ್ಯಾಯ ಪಂಚಾಯಿತಿ ಮಾಡಿದರೂ ಪ್ರಯೋಜನವಾಗಿರಲಿಲ್ಲ ಎನ್ನಲಾಗಿದೆ.

ಸೆ.12ರ ಸೋಮವಾರ ರಾತ್ರಿಯೂ ಕುಡಿದು ಮನೆಗೆ ಬಂದ ಹರೀಶ್, ಹಣಕ್ಕಾಗಿ ಪೀಡಿಸಿ ರಾಜೇಶ್ವರಿ ಕುತ್ತಿಗೆಯಲ್ಲಿದ್ದ ಮಾಂಗಲ್ಯ ಸರ ಕೇಳಿದ್ದಾನೆ. ಆಕೆ ನಿರಾಕರಿಸಿದ್ದರಿಂದ ಆಕ್ರೋಶಗೊಂಡ ಹರೀಶ್ ಆಕೆ ಮೇಲೆ ಹಲ್ಲೆ ನಡೆಸಿ, ಸೀಮೆಎಣ್ಣೆ ಸುರಿದು ಬೆಂಕಿ ಹಚ್ಚಿದ್ದಾನೆ ಎನ್ನಲಾಗಿದೆ. ಈ ವೇಳೆ ರಾಜೇಶ್ವರಿ ತನ್ನ ಪತಿಯನ್ನು ಅಪ್ಪಿಕೊಂಡಿದ್ದಾಳೆ. ಇಬ್ಬರ ಚೀರಾಟದಿಂದ ಎಚ್ಚೆತ್ತುಗೊಂಡ ನೆರೆ ಮನೆಯವರು ಸ್ಥಳಕ್ಕಾಗಮಿಸಿ ಬೆಂಕಿ ನಂದಿಸಿ ಇಬ್ಬರನ್ನೂ ಚಿಕಿತ್ಸೆಗಾಗಿ ಮೈಸೂರಿನ ಕೆಆರ್.ಆಸ್ಪತ್ರೆಗೆ ದಾಖಲಿಸಿದರು. ಚಿಕಿತ್ಸೆ ಫಲಕಾರಿಯಾಗದೇ ಮಂಗಳವಾರ ಮುಂಜಾನೆ ರಾಜೇಶ್ವರಿ ಅಸುನೀಗಿದ್ದಾರೆ. ಗಾಯಾಳು ಹರೀಶ್ ಚಿಕಿತ್ಸೆ ಪಡೆಯುತ್ತಿದ್ದಾನೆ.

ಈ ಸಂಬಂಧ ಅಳಿಯನ ವಿರುದ್ಧ ಸಾಲಿಗ್ರಾಮ ಠಾಣೆಯಲ್ಲಿ ದೂರು ನೀಡಿರುವ ರಾಜೇಶ್ವರಿ ತಂದೆ ಸೋಮಶೇಖರ್, ಮದುವೆ ವೇಳೆ ಹರೀಶ್‌ಗೆ 2 ಲಕ್ಷ ರೂ. ನಗದು ಹಾಗೂ 100 ಗ್ರಾಂ ಚಿನ್ನ, ಬೈಕ್ ನೀಡಿ ಮದುವೆ ಮಾಡಿಕೊಡಲಾಗಿತ್ತು. ಮತ್ತೆ ವರದಕ್ಷಿಣೆ ತರುವಂತೆ ಮಗಳಿಗೆ ಹಿಂಸೆ ನೀಡುತ್ತಿದ್ದ. ಸೋಮವಾರ ಹರೀಶ್ ಆಕೆ ಮೇಲೆ ಸೀಮೆಎಣ್ಣೆ ಸುರಿದು ಹತ್ಯೆ ಮಾಡಿದ್ದಾನೆ ಎಂದು ದೂರಿನಲ್ಲಿ ತಿಳಿಸಿದ್ದಾರೆ. ಸಾಲಿಗ್ರಾಮ ಠಾಣೆ ಎಸ್‌ಐ ಕುಮುದಾ ಪ್ರಕರಣ ದಾಖಲಿಸಿಕೊಂಡಿದ್ದು, ತನಿಖೆ ಕೈಗೊಂಡಿದ್ದಾರೆ.

ಇಂದು ವಿದ್ಯುತ್ ವ್ಯತ್ಯಯ

ನಂಜನಗೂಡು, ಸೆ.13– ತಾಲೂಕಿನ ಸುತ್ತೂರು ಮತ್ತು ದೇವನೂರು ವಿದ್ಯುತ್ ವಿತರಣಾ ಕೇಂದ್ರಗಳಲ್ಲಿ 2ನೇ ತ್ರೈಮಾಸಿಕ ನಿರ್ವಹಣಾ ಕಾಮಗಾರಿ ಹಮ್ಮಿಕೊಂಡಿರುವ ಕಾರಣ ಸೆ.14ರಂದು ಬೆಳಗ್ಗೆ 10ರಿಂದ ಸಂಜೆ 5ರವರೆಗೆ ತಾಲೂಕಿನ ತಗಡೂರು, ಬದನವಾಳು, ಚುಂಚನಹಳ್ಳಿ, ಗಟ್ಟವಾಡಿಪುರ, ಕಾರ್ಯ, ಅಳಗಂಚಿ, ಹೆಡತಲೆ, ಕೋಣನೂರು, ನೇರಳೆ ಹೆಮ್ಮರಗಾಲ ಕೌಲಂದೆ, ನಗರ್ಲೆ, ಬಿಳಿಗೆರೆ, ಮಲ್ಲೂಪುರ, ಸುತ್ತೂರು ಗ್ರಾಪಂಗೆ ಒಳಪಡುವ ಗ್ರಾಮಗಳಲ್ಲಿ ವಿದ್ಯುತ್ ವ್ಯತ್ಯಯ ವಾಗಲಿದೆ ಎಂದು ಚೆಸ್ಕಾಂ ಕಾರ್ಯಪಾಲಕ ಇಂಜಿನಿಯರ್ ದೇವರಾಜು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಅಧಿವೇಶನದಲ್ಲಿ ನ್ಯಾ.ಎಚ್.ಎನ್.ನಾಗಮೋಹನ್ ದಾಸ್ ವರದಿ ಜಾರಿಗೆ ಚರ್ಚಿಸಲು ಮನವಿ

ತಿ.ನರಸೀಪುರ, ಸೆ.13– ಪ್ರಸ್ತುತ ನಡೆಯುತ್ತಿರುವ ವಿಧಾನಸಭಾ ಅಧಿವೇಶನದಲ್ಲಿ ನ್ಯಾ.ಎಚ್.ಎನ್.ನಾಗಮೋಹನ್ ದಾಸ್ ವರದಿ ಜಾರಿ ಸಂಬಂಧ ಚರ್ಚಿಸುವಂತೆ ಕರ್ನಾಟಕ ಸ್ವಾಭಿಮಾನಿ ಎಸ್‌ಸಿ/ಎಸ್‌ಟಿ ಸಂಘಟನೆಗಳ ಒಕ್ಕೂಟ ಹಾಗೂ ಮೀಸಲಾತಿ ಹೆಚ್ಚಳ ಹೋರಾಟ ಸಮಿತಿ ಸದಸ್ಯರು ಶಾಸಕರಾದ ಯತೀಂದ್ರ ಸಿದ್ದರಾಮಯ್ಯ ಹಾಗೂ ಎಂ.ಅಶ್ವಿನ್ ಕುಮಾರ್ ಅವರಿಗೆ ಮನವಿ ಸಲ್ಲಿಸಿದರು.



ಪಟ್ಟಣದ ಮಿನಿ ವಿಧಾನಸೌಧದ ಆವರಣದಲ್ಲಿರುವ ಡಾ.ಬಿ.ಆರ್.ಅಂಬೇಡ್ಕರ್ ಪ್ರತಿಮೆಗೆ ಮಾಲಾರ್ಪಣೆ ಮಾಡಿದ ಬಳಿಕ ಪ್ರತ್ಯೇಕವಾಗಿ ಇಬ್ಬರೂ ಶಾಸಕರಿಗೆ ಸಲ್ಲಿಸಿದರು.

ತಾಲೂಕು ನಾಯಕ ಸಂಘದ ಅಧ್ಯಕ್ಷ ಬನ್ನೂರು ಚಿಕ್ಕಯ್ಯ ಹಾಗೂ ತಾಲೂಕು ಹೋರಾಟ ಸಮಿತಿ ಕಾರ್ಯದರ್ಶಿ ಆಲಗೂಡು ನಾಗರಾಜು ಮಾತನಾಡಿ, ಪ್ರಸ್ತುತ ರಾಜ್ಯದಲ್ಲಿ ಪರಿಶಿಷ್ಟ ಜಾತಿ /ಪಂಗಡದ ಜನಸಂಖ್ಯೆ ಹೆಚ್ಚಾಗಿದ್ದು, ಸದರಿ ನೀಡುತ್ತಿರುವ ಮೀಸಲಾತಿ ಪ್ರಮಾಣ ಕಡಿಮೆ ಇದೆ. ಕರ್ನಾಟಕದಲ್ಲಿ ಪರಿಶಿಷ್ಟ ಜಾತಿಗೆ ಶೇ.15 ಮತ್ತು ಪರಿಶಿಷ್ಟ ಪಂಗಡಕ್ಕೆ ಶೇ.3ರಷ್ಟು ಮೀಸಲಾತಿ ನೀಡಲಾಗುತ್ತಿದ್ದು, ಈಗ ಈ 2 ವರ್ಗದಲ್ಲಿ ಭಾರೀ ಜನಸಂಖ್ಯೆ ಹೆಚ್ಚಾಗಿದ್ದು, ಜನಸಂಖ್ಯೆಗೆ ಅನುಗುಣವಾಗಿ ಮೀಸಲಾತಿ ಪರಿಷ್ಕರಣೆ ಮಾಡಲು ಸರ್ಕಾರವೇ ನ್ಯಾ. ನಾಗಮೋಹನ್ ದಾಸ್ ಆಯೋಗ ರಚನೆ ಮಾಡಿತ್ತು. ಆದರೆ, ವರದಿ ಸಿದ್ಧಗೊಂಡ ನಂತರ ಯಾವ ಸರ್ಕಾರ ಕೂಡ ವರದಿ ಜಾರಿಗೆ ಮನಸ್ಸು ಮಾಡಿಲ್ಲ ಎಂದು ಆರೋಪಿಸಿದರು.

ಪರಿಶಿಷ್ಟ ಜಾತಿ /ಪಂಗಡಗಳ ಜನಸಂಖ್ಯೆಗೆ ಅನುಗುಣವಾಗಿ ಪ.ಜಾತಿಗೆ ಶೇ.17 ಮತ್ತು ಪರಿಶಿಷ್ಟ ವರ್ಗಕ್ಕೆ ಶೇ.7 ರಷ್ಟು ಮೀಸಲಾತಿ ಹೆಚ್ಚಳದ ಬಗ್ಗೆ ಸದನದಲ್ಲಿ ಚರ್ಚಿಸುವಂತೆ ಇಬ್ಬರೂ ಶಾಸಕರಿಗೆ ಮನವಿ ಮಾಡಿದರು.

ಮನವಿ ಸ್ವೀಕರಿಸಿ ಮಾತನಾಡಿದ ಶಾಸಕರು, ಈ ಬಗ್ಗೆ ಮಳೆಗಾಲದ ಅಧಿವೇಶನದಲ್ಲಿ ಚರ್ಚಿಸುವುದಾಗಿ ಭರವಸೆ ನೀಡಿದರು. ಸಮಾಜದಲ್ಲಿ ಅತ್ಯಂತ ಹಿಂದುಳಿದ ಪರಿಶಿಷ್ಟ ಜಾತಿ / ಪಂಗಡಗಳ ಜನರು ಮೀಸಲಾತಿ ಹೆಚ್ಚಳಕ್ಕೆ ಒತ್ತಾಯ ಮಾಡುವುದರಲ್ಲಿ ಅರ್ಥವಿದೆ. ಎಲ್ಲ ರಂಗಗಳಲ್ಲೂ ಹಿಂದುಳಿದಿರುವ ಪ.ಜಾತಿ/ಪಂಗಡಗಳ ಶೇ.50 ರಷ್ಟು ಜನರು ಆರ್ಥಿಕ, ಶೈಕ್ಷಣಿಕವಾಗಿ ಸಬಲರಾಗಿಲ್ಲದಿರುವುದರಿಂದ ಸಂವಿಧಾನ ಬದ್ಧವಾಗಿ ಅವರಿಗೆ ಮೀಸಲಾತಿ ದೊರಕಬೇಕು. ಅದು ಅವರ ಹಕ್ಕೂ ಸಹ ಆಗಿದೆ ಎಂದರು.

ಈ ವೇಳೆ ತಾಲೂಕು ನಾಯಕ ಸಂಘದ ಮಾಜಿ ಅಧ್ಯಕ್ಷ ಹೊನ್ನನಾಯ್ಕ, ಎಂ.ಡಿ.ಬಸವರಾಜು, ಪುರಸಭಾಧ್ಯಕ್ಷ ಎಸ್.ಮದನ್‌ರಾಜ್, ಸದಸ್ಯ ಬಾದಾಮಿ ಮಂಜು, ತಾಲೂಕು ಬಿ.ಆರ್.ಅಂಬೇಡ್ಕರ್ ಅಭಿವೃದ್ಧಿ ಸಂಘದ ಅಧ್ಯಕ್ಷ ಕರೋಹಟ್ಟಿ ಮಹದೇವಯ್ಯ, ಬಾಬು ಜಗಜೀವನರಾಂ ಸಂಘದ ಅಧ್ಯಕ್ಷ ಮಲಿಯೂರು ಶಂಕರ್, ಕರೋಹಟ್ಟಿ ಪ್ರಭುಸ್ವಾಮಿ, ಅಮಾಸೆ ಲಿಂಗರಾಜು, ಗೋವಿಂದರಾಜು, ಎ.ಜಿ.ವೆಂಕಟೇಶ್, ಬಿಎಸ್‌ಪಿ ಮುಖಂಡ ಪುಟ್ಟಸ್ವಾಮಿ, ಕೃಷ್ಣಮೂರ್ತಿ, ಯಡದೊರೆ ಮಹದೇವ, ಹೆಮ್ಮಿಗೆ ಸೋಮಣ್ಣ, ಡಾ.ಮಹದೇವಯ್ಯ, ಶಶಿಧರ್, ಮರುಡಯ್ಯ ಸೇರಿದಂತೆ ಮತ್ತಿತರರಿದ್ದರು.

ಡಿಆರ್‌ಸಿ ಸಿನಿಮಾಸ್

ದೂ : 4240422/4241800

ಸ್ಕ್ರೀನ್ 1	ಕ್ಯಾಪ್ಟನ್ (ತ): ಬೆ.10.40ಕ್ಕೆ, ಲಕ್ಕಿಮ್ಯಾನ್ (ಕ): ಮ.1.05ಕ್ಕೆ, ಸಂ.4ಕ್ಕೆ, ರಾ.7ಕ್ಕೆ, ರಾ.10ಕ್ಕೆ.
ಸ್ಕ್ರೀನ್ 2	9 ಸುಳ್ಳು ಕಥೆಗಳು (ಕ): ರಾ.10.30ಕ್ಕೆ, ತಿರುಚಿಟ್ರಂಬಲಂ (ತ): ಮ.1.20ಕ್ಕೆ, ಒಕೇ ಒಕ ಜೀವಿತಂ (ತೆ): ಸಂ.4ಕ್ಕೆ, ಗಾಳಿಪಟ 2(ಕ): ರಾ.7.05ಕ್ಕೆ, ಒಟ್ಟು (ಮ): ರಾ.9.55ಕ್ಕೆ.
ಸ್ಕ್ರೀನ್ 3	ಲಕ್ಕಿಮ್ಯಾನ್ (ಕ): ಬೆ.10.45ಕ್ಕೆ, ಕ್ಯಾಪ್ಟನ್ (ತ): ಮ.1.45ಕ್ಕೆ, ಅಬತಾರ ಮಾತೆರ್ನಾಳ (ತು): ಸಂ.4.15ಕ್ಕೆ, ಒರು ತೆಕ್ಕನ್ ತಾಲು ಕೇಸ್ (ಮ): ರಾ.7ಕ್ಕೆ, ಪಥೋಪಥಂ ನೋಟಂಡು (ಮ): ರಾ.9.55ಕ್ಕೆ.
ಸ್ಕ್ರೀನ್ 4	ಬ್ರಹ್ಮಾಸ್ತ್ರ (3ಡಿ) (ಹಿಂ): ಬೆ.9.55ಕ್ಕೆ, ಮ.1ಕ್ಕೆ, ಸಂ.4ಕ್ಕೆ, ರಾ.7ಕ್ಕೆ, ರಾ.10.05ಕ್ಕೆ.

ಐನಾಕ್ಸ್ ಮೂವೀಸ್

INOX LIVE THE MOVIE

ದೂ : 2533444 / 2433456

ಸ್ಕ್ರೀನ್ 1	ಬ್ರಹ್ಮಾಸ್ತ್ರ (3ಡಿ)(ಹಿಂ): ಬೆ.9ಕ್ಕೆ, ಮ.12.20ಕ್ಕೆ, ಮ.3.40ಕ್ಕೆ, ರಾ.7.05ಕ್ಕೆ, ರಾ.10.30ಕ್ಕೆ.
ಸ್ಕ್ರೀನ್ 2	ಒಕೇ ಒಕ ಜೀವಿತಂ (ತೆ): ಬೆ.10ಕ್ಕೆ, ಕ್ಯಾಪ್ಟನ್ (ಇಂ): ಮ.1.10ಕ್ಕೆ, ಲಕ್ಕಿ ಮ್ಯಾನ್ (ಕ): ಮ.3.40ಕ್ಕೆ, ಸಂ.6.50ಕ್ಕೆ, ರಾ.10ಕ್ಕೆ.
ಸ್ಕ್ರೀನ್ 3	ಲವ್ 360 (ಕ): ಬೆ.10.50ಕ್ಕೆ, ಲಕ್ಕಿಮ್ಯಾನ್ (ಕ): ಮ.1.30ಕ್ಕೆ, ಒಕೇ ಒಕ ಜೀವಿತಂ (ತೆ): ಸಂ.4.40ಕ್ಕೆ, ಕ್ಯಾಪ್ಟನ್ (ತ): ರಾ.7.50ಕ್ಕೆ, ಪಥೋಪಥಂ ನೋಟಂಡು (ಮ): ರಾ.10.20ಕ್ಕೆ.
ಸ್ಕ್ರೀನ್ 4	ಬ್ರಹ್ಮಾಸ್ತ್ರ (3ಡಿ)(ಹಿಂ): ಬೆ.10.30ಕ್ಕೆ, ಸಂ.5.30ಕ್ಕೆ, ರಾ.9ಕ್ಕೆ, ಬ್ರಹ್ಮಾಸ್ತ್ರ (3ಡಿ)(ಕ): ಮ.2ಕ್ಕೆ.

ಮೈಸೂರು ವಿಷನ್ ಸಿನಿಮಾ

ದೂ : 0821–2973519

ಸ್ಕ್ರೀನ್ 1	ಲೈಗರ್ (ತೆ): ಬೆ.10.45ಕ್ಕೆ, ಲವ್ 360 (ಕ): ಮ.1.30ಕ್ಕೆ, ಲೈಗರ್ (ಕ): ಸಂ.4.05ಕ್ಕೆ, ಧಮಾಕ (ಕ): ಸಂ.6.50ಕ್ಕೆ
ಸ್ಕ್ರೀನ್ 2	ಗಾಳಿಪಟ 2(ಕ): ಬೆ.10.30ಕ್ಕೆ, ಸೀತಾರಾಮಂ (ತೆ): ಮ.1.30ಕ್ಕೆ, ರಂಗ ರಂಗ ವೈಭವಂಗ (ತೆ): ಸಂ.4.45ಕ್ಕೆ, ಕೋಬ್ರಾ (ತ): ರಾ.9.15ಕ್ಕೆ.
ಸ್ಕ್ರೀನ್ 3	ಕೋಬ್ರಾ (ತ): ಮ.1.30ಕ್ಕೆ, ಸಂ.6.50ಕ್ಕೆ.
ಸ್ಕ್ರೀನ್ 4	ರಂಗ ರಂಗ ವೈಭವಂಗ (ತೆ): ಬೆ.10.30ಕ್ಕೆ, ಗಾಳಿಪಟ–2 (ಕ): ಮ.1.20ಕ್ಕೆ, ರಾ.7.15ಕ್ಕೆ, ಕೋಬ್ರಾ (ತ): ಸಂ.4.15ಕ್ಕೆ.

ಪಿವಿಆರ್ ಸಿನಿಮಾಸ್

PVR CINEMAS

ಮೊ.ನಂ: 8951357139

ನೆಕ್ಸಸ್ ಸೆಂಟರ್‌ಸಿಟಿ ಮಾಲ್, 2ನೇ ಮಹಡಿ,

ಲಕ್ಕಿಮ್ಯಾನ್ (ಕ): ಬೆ.9ಕ್ಕೆ, ಮ.12.15ಕ್ಕೆ, ಮ.3.30ಕ್ಕೆ, ಸಂ.6.45ಕ್ಕೆ, ರಾ.10ಕ್ಕೆ, ಬ್ರಹ್ಮಾಸ್ತ್ರ (ಕ): ಮ.2.55ಕ್ಕೆ, ಗಾಳಿಪಟ–2 (ಕ): ಮ.3.25ಕ್ಕೆ, ನಾನ್ ರೌಡಿ (ಕ): ಮ.11.45ಕ್ಕೆ, ಬ್ರಹ್ಮಾಸ್ತ್ರ (3ಡಿ) (ಹಿಂ): ಬೆ.8.30ಕ್ಕೆ, ಬೆ.11ಕ್ಕೆ, ಮ.12ಕ್ಕೆ, ಮ.2.30ಕ್ಕೆ, ಮ.3.30ಕ್ಕೆ, ಸಂ.6ಕ್ಕೆ, ರಾ.7ಕ್ಕೆ, ರಾ.9.30ಕ್ಕೆ, ರಾ.10.30ಕ್ಕೆ, ಬ್ರಹ್ಮಾಸ್ತ್ರ (2ಡಿ) (ಹಿಂ): ಬೆ.11.30ಕ್ಕೆ, ಮ.3ಕ್ಕೆ, ರಾ.9.15ಕ್ಕೆ, ಕ್ಯಾಪ್ಟನ್ (ತ): ಮ.12.10ಕ್ಕೆ, ಸಂ.6.35ಕ್ಕೆ, ಒಕೇ ಒಕ ಜೀವಿತಂ (ತೆ): ಸಂ.6.30ಕ್ಕೆ, ರಾ.9.45ಕ್ಕೆ, ಪಥೋಪಥಂ ನೋಟಂಡು (ಮ): ಸಂ.6.25ಕ್ಕೆ, ಒರು ತೆಕ್ಕ (ಮ): ರಾ.9.45ಕ್ಕೆ.

ಸೂಚನೆ : ಸಿನಿಮಾ ಮಾರ್ಗದರ್ಶಿಯಲ್ಲಿ ಮಾಹಿತಿಯನ್ನು ಪರಿಪೂರ್ಣಗೊಳಿಸಲು ನಾವು ಸಾಧ್ಯವಾದಷ್ಟೂ ಪ್ರಯತ್ನಿಸುತ್ತಿದ್ದೇವೆ. ಆದರೂ ಕೆಲವೊಮ್ಮೆ ಮಾಹಿತಿ ಅಲಭ್ಯತೆಯಿಂದ ಲೋಪಗಳು ಉಂಟಾಗುವ ಸಾಧ್ಯತೆಯಿದ್ದು, ಸಾರ್ವಜನಿಕರು ಸಹಕರಿಸಬೇಕಾಗಿ ಕಳಕಳಿ ಮನವಿ.

ಪದ್ಮ ಚಿತ್ರಮಂದಿರ	(ದೂ: 2521923)
ಬ್ರಹ್ಮಾಸ್ತ್ರ (ಕ)	4 ಪ್ರದರ್ಶನಗಳು
ವುಡ್‌ಲ್ಯಾಂಡ್ಸ್ ಚಿತ್ರಮಂದಿರ	(ದೂ: 2422871)
ತಾಜ್ ಮಹಲ್–2 (ಕ)	4 ಪ್ರದರ್ಶನಗಳು
ಉಮಾ ಚಿತ್ರಮಂದಿರ	(ದೂ: 2520009)
ಮಿಸ್ ಮಲ್ಲಿಗೆ (ಕ)	4 ಪ್ರದರ್ಶನಗಳು
ಬಾಲಾಜಿ ಚಿತ್ರಮಂದಿರ	(ದೂ: 2497199)
ಬ್ರಹ್ಮಾಸ್ತ್ರ (ಹಿಂ)	4 ಪ್ರದರ್ಶನಗಳು
ಮಹದೇಶ್ವರ ಚಿತ್ರಮಂದಿರ	(ಮೊ:9900820093)
ಲಕ್ಕಿಮ್ಯಾನ್ (ಕ)	4 ಪ್ರದರ್ಶನಗಳು
ಗಾಯಿತ್ರಿ	
ಲಕ್ಕಿಮ್ಯಾನ್ (ಕ)	4 ಪ್ರದರ್ಶನಗಳು
ರಾಜ್‌ಕಮಲ್	
ಒಕೇ ಒಕ ಜೀವಿತಂ (ತೆ)	4 ಪ್ರದರ್ಶನಗಳು
ಸಂಗಂ	
ಬ್ರಹ್ಮಾಸ್ತ್ರ (ಹಿಂ)	4 ಪ್ರದರ್ಶನಗಳು
ಲಿಡೋ	
ಕ್ಯಾಪ್ಟನ್ (ತ)	4 ಪ್ರದರ್ಶನಗಳು
ತಿಬ್ಬಾದೇವಿ	
ಬ್ರಹ್ಮಾಸ್ತ್ರ (ಹಿಂ)	4 ಪ್ರದರ್ಶನಗಳು
ಸ್ಟರ್ಲಿಂಗ್	
ಓ ಮೈ ಲವ್ (ಕ)	4 ಪ್ರದರ್ಶನಗಳು
ಸ್ಕೈಲೈನ್	
ಅಂಜನ (ಕ)	4 ಪ್ರದರ್ಶನಗಳು
ಪ್ರಭಾ	
ಗಾಳಿಪಟ–2 (ಕ)	4 ಪ್ರದರ್ಶನಗಳು

ಸರಗೂರು ಅಭಿವೃದ್ಧಿಗೆ ಶ್ರಮಿಸುವೆ: ಶಾಸಕ ಅನಿಲ್ ಚಿಕ್ಕಮಾದು



ಸರಗೂರು, ಸೆ.13– ಪಟ್ಟಣದ ಅಭಿವೃದ್ಧಿಗೆ ಪ್ರಾಮಾಣಿಕವಾಗಿ ಶ್ರಮಿಸುತ್ತಿದ್ದೇನೆ ಎಂದು ಶಾಸಕ ಅನಿಲ್ ಚಿಕ್ಕಮಾದು ತಿಳಿಸಿದರು.

ಪಟ್ಟಣದ ಪಟ್ಟಣ ಪಂಚಾಯತ್ ವತಿಯಿಂದ ವಸತಿ ರಹಿತರಿಗೆ ವಸತಿ ಮಂಜೂರಾತಿ ಆದೇಶ ಪತ್ರ ವಿತರಿಸಿ ಮಾತನಾಡಿದ ಅವರು, ಪಟ್ಟಣದ ಮೊದಲನೇ ಮುಖ್ಯ ರಸ್ತೆ ಡಾಂಬರೀಕರಣ, ಪಟ್ಟಣ ಪಂಚಾಯತಿ ಕಚೇರಿ ಕಟ್ಟಡ ಕಾಮಗಾರಿ ಸೇರಿದಂತೆ ನಗರೋತ್ಥಾನ ಯೋಜನೆ ಅಡಿ ಪಟ್ಟಣದ ಅಭಿವೃದ್ಧಿಗೆ 6 ಕೋಟಿ ರೂ. ಅನುದಾನ ತಂದಿದ್ದೇನೆ. ಮುಂದಿನ ದಿನಗಳಲ್ಲಿಯೂ ಅಭಿವೃದ್ಧಿಗೆ ಪೂರಕವಾದ ಕೆಲಸ ಮಾಡುವುದಾಗಿ ಭರವಸೆ ನೀಡಿದರು.

ಪಪಂನಲ್ಲಿ ಸಿಬ್ಬಂದಿಗಳ ಕೊರತೆ ಇದ್ದು, ಶೀಘ್ರ ಬಗೆಹರಿಸಲಾಗುವುದು. ಅಲ್ಲದೇ ಪಟ್ಟಣದ ನಿವಾಸಿಗಳು ನಿವೇಶನ ವಂಚಿತರಾಗಿದ್ದು, ಅವರ ಅರ್ಜಿಗಳನ್ನು ಅಧಿಕಾರಿಗಳು ಪರಿಹರಿಸಲು ಕ್ರಮವಹಿಸಬೇಕೆಂದು ತಾಕೀತು ನೀಡಿದರು.

ಪಟ್ಟಣ ಪಂಚಾಯತಿ ಸದಸ್ಯ ಎಸ್.ಎಲ್. ರಾಜಣ್ಣ ಮಾತನಾಡಿ, ಸಾಮಾನ್ಯ ವರ್ಗದವರಿಗೆ 2.70 ಲಕ್ಷ ರೂ. ಪರಿಶಿಷ್ಟ ಜಾತಿ–ಪಂಗಡದವರಿಗೆ 3.50 ಲಕ್ಷ ರೂ. ಅನುದಾನ ಸಾಲದು. ಇಂದು ಮನೆ ನಿರ್ಮಾಣದ ಪರಿಕರಗಳ ಬೆಲೆ ದುಬಾರಿಯಾಗಿದೆ. ಹೀಗಾಗಿ ಹೆಚ್ಚುವರಿ ಅನುದಾನ ನೀಡಲು ಸರ್ಕಾರಕ್ಕೆ ಮನವಿ ಮಾಡಬೇಕು ಎಂದರು.

9ನೇ ವಾರ್ಡ್ ಸದಸ್ಯ ಮಾತನಾಡಿ, ಪಟ್ಟಣ ಪಂಚಾಯತಿಯಲ್ಲಿ ಸಿಬ್ಬಂದಿಗಳ ಕೊರತೆ ಹಾಗೂ ಹಳೆ ಕಾರ್ಯಾಲಯದಲ್ಲಿ ಸ್ಥಳಾವಕಾಶ ಸಾಲದಾಗಿದ್ದು ನೂತನ ಕಾರ್ಯಾಲಯ ಕಟ್ಟಡ ಗುದ್ದಲಿ ಪೂಜೆ ಮಾಡಲು ಶಾಸಕರಲ್ಲಿ ಮನವಿ ಮಾಡಿದರು.

ಈ ವೇಳೆ ಪಟ್ಟಣದ 50 ಮಂದಿ ಫಲಾನುಭವಿಗಳಿಗೆ ಆದೇಶ ಪತ್ರ ವಿತರಿಸಲಾಯಿತು. ಪಪಂ ಅಧ್ಯಕ್ಷೆ ರಾಧಿಕಾ, ಉಪಾಧ್ಯಕ್ಷ ವಿನಯ್, ಸದಸ್ಯರಾದ ಎಸ್.ಎಲ್. ರಾಜಣ್ಣ, ಹೇಮಾವತಿ, ಚೈತ್ರಾ, ಸಣ್ಣತಾಯಮ್ಮ ಉಮಾ, ಶ್ರೀನಿವಾಸ್, ಚಲುವಕೃಷ್ಣ, ಶಿವಕುಮಾರ್, ನೂರಾಳಸ್ವಾಮಿ, ಮುಖ್ಯಾಧಿಕಾರಿ ಬಿ.ಜಿ.ಸತೀಶ್, ಜಿಪಂ ಮಾಜಿ ಸದಸ್ಯರಾದ ಚಿಕ್ಕವೀರನಾಯಕ, ಪಿ.ರವಿ, ಮುಖಂಡರಾದ ರಮೇಶ್, ನವೀನ್, ರಾಮು, ಚಿನ್ನಸ್ವಾಮಿ, ಮುಜೀಪ್, ಸುಭಾನ್, ಜಲೀಲ್, ಜಾವೀದ್, ವಾಣಿ, ಶ್ಯಾಂಶಿವಾಜಿ, ಪಟ್ಟಣ ಪಂಚಾಯಿತಿ ಅಧಿಕಾರಿ ವರ್ಗ ಸೇರಿದಂತೆ ಇನ್ನಿತರರಿದ್ದರು.



2020–21ನೇ ಸಾಲಿನಲ್ಲಿ ಎನ್‌ಎಸ್‌ಎಸ್ ಮೂಲಕ ವಿವಿಧ ಕಾರ್ಯಕ್ರಮ ಹಮ್ಮಿಕೊಂಡು ಸಮಾಜದ ಸರ್ವತೋಮುಖ ಅಭಿವೃದ್ಧಿಗಾಗಿ ಶ್ರಮಿಸಿರುವ ಹುಣಸೂರಿನ ಸರ್ಕಾರಿ ಡಿ.ದೇವರಾಜ ಅರಸ್ ಪ್ರಥಮ ದರ್ಜೆ ಕಾಲೇಜಿನ ರಾಷ್ಟ್ರೀಯ ಸೇವಾ ಯೋಜನೆಯ ಕಾರ್ಯಕ್ರಮಾಧಿಕಾರಿ ಡಾ. ಕಿರಣ್ ಕುಮಾರ್ ಅವರ ಸೇವೆ ಪರಿಗಣಿಸಿ ಸರ್ಕಾರ ರಾಜ್ಯಮಟ್ಟದ ಪ್ರಶಸ್ತಿ ನೀಡಿ ಗೌರವಿಸಿದೆ. ಈ ಹಿನ್ನೆಲೆಯಲ್ಲಿ ಉದ್ಯಮಿ ಹೆಚ್.ಪಿ.ಮಂಜುನಾಥ್, ಡಾ.ಕಿರಣ್ ಕುಮಾರ್ ಅವರನ್ನು ಸನ್ಮಾನಿಸಿದರು. ಈ ವೇಳೆ ಉಪನ್ಯಾಸಕ ಹರ್ಷವರ್ಧನ್, ರಮೇಶ್, ಯುವ ಮುಖಂಡರಾದ ಮಧು, ರಮೀಝ್, ಚೇತನ್, ರಾಖೀಬ್, ಮಣಿ, ಕಾಸೀಫ್ ಸೇರಿದಂತೆ ಇತರರಿದ್ದರು.

ಅರ್ಜಿ ಆಹ್ವಾನ

ಹುಣಸೂರು, ಸೆ.13– ನಗರಸಭೆಯ 2021–22ನೇ ಸಾಲಿನ ಎಸ್‌ಎಫ್‌ಸಿ ಮುಕ್ತ ನಿಧಿ ಅನುದಾನ ಹಾಗೂ ನಗರಸಭಾ ಸಾಮಾನ್ಯ ನಿಧಿ ಅನುದಾನದಡಿ ಮೀಸಲಿರಿಸುವ ಶೇ.24.10, ಶೇ.7.25 ಮತ್ತು ಶೇ.5.00 ರಲ್ಲಿ ಹುಣಸೂರು ನಗರ ವ್ಯಾಪ್ತಿಯ ಪರಿಶಿಷ್ಟ ಜಾತಿ, ಪಂಗಡ ಮತ್ತು ಇತರೆ ಹಿಂದುಳಿದ ವರ್ಗದ ಮಹಿಳಾ ನಿರುದ್ಯೋಗಿಗಳಿಗೆ ಹೊಲಿಗೆ ಯಂತ್ರ ಖರೀದಿಸಲು ಸಹಾಯಧನಕ್ಕಾಗಿ ಅರ್ಜಿ ಆಹ್ವಾನಿಸಲಾಗಿದೆ. ಅಗತ್ಯ ದಾಖಲಾತಿಗಳೊಂದಿಗೆ ಅರ್ಜಿ ಸಲ್ಲಿಸಲು ಸೆ.20 ಕೊನೆ ದಿನ ಎಂದು ಆಯುಕ್ತ ಕಲೀಲ್‌ಉಲ್ಲಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಮೂಗೂರು ಪಿಎಸಿಎಸ್‌ಗೆ 13.81 ಲಕ್ಷ ನಿವ್ವಳ ಲಾಭ

ತಿ.ನರಸೀಪುರ, ಸೆ.13– ಸರ್ವ ಸದಸ್ಯರ ಸಹಕಾರದಿಂದ ಸಂಘ ಪ್ರಸಕ್ತ ಸಾಲಿನಲ್ಲಿ 13,81,483 ರೂ. ನಿವ್ವಳ ಲಾಭಗಳಿಸಿದೆ ಎಂದು ಮೂಗೂರು ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದ ಅಧ್ಯಕ್ಷ ಎಂ.ಬಿ.ಮಹೇಂದ್ರ ಕುಮಾರ್ ತಿಳಿಸಿದರು.



ಸಂಘದ ಆವರಣದಲ್ಲಿ ನಡೆದ ಸರ್ವ ಸದಸ್ಯರ ವಾರ್ಷಿಕ ಮಹಾಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಕೃಷಿ ಕ್ಷೇತ್ರದಲ್ಲಿ ಸಾಕಷ್ಟು ಸಮಸ್ಯೆಗಳಿದ್ದರೂ, ರೈತರು ಅದನ್ನೇ ಅವಲಂಬಿಸಿದ್ದಾರೆ. ಸರ್ಕಾರ ಕೂಡ ಅವರಿಗೆ ಶೂನ್ಯ ಬಡ್ಡಿ ದರದಲ್ಲಿ ಸಾಲ ನೀಡುತ್ತಿದೆ. ಇದನ್ನು ಸಂಪೂರ್ಣವಾಗಿ ಸದ್ಬಳಕೆ ಮಾಡಿಕೊಳ್ಳಬೇಕು ಎಂದರು.

ಸಂಘದಿಂದ ನೀಡುವ ಸಾಲ ಪಡೆದು ರೈತರು ಹೈನುಗಾರಿಕೆ ಹಾಗೂ ನೀರಾವರಿ ಸೇರಿದಂತೆ ಇನ್ನಿತರೆ ಚಟುವಟಿಕೆಗೆ ಹಣ ಬಳಸಿಕೊಳ್ಳಬೇಕು. ರೈತರಿಗೆ ಸರ್ಕಾರದ ಆದೇಶದ ಮೇರೆಗೆ ಸಾಕಷ್ಟು ಸೌಲಭ್ಯ ನೀಡಲಾಗುತ್ತದೆ. ಅವುಗಳನ್ನು ಸಮರ್ಪಕವಾಗಿ ಬಳಕೆ ಮಾಡಿಕೊಂಡರೆ ಆರ್ಥಿಕವಾಗಿ ಸಬಲರಾಗಲು ಸಾಧ್ಯ ಎಂದರು.

ಎಂಸಿಡಿಸಿಸಿ ಬ್ಯಾಂಕ್ ಮೇಲ್ವಿಚಾರಕ ರಾಜಪ್ಪ ಮಾತನಾಡಿ, ಪ್ರಾಥಮಿಕ ಕೃಷಿಪತ್ತಿನ ಸಹಕಾರ ಸಂಘಗಳು ರೈತರ ಜೀವನಾಡಿಯಾಗಿದ್ದು, ಇವುಗಳ ಪ್ರಗತಿಗೆ ಆದ್ಯತೆ ನೀಡುವುದು ಪ್ರತಿಯೊಬ್ಬರ ಜವಾಬ್ದಾರಿ. ಸಂಘದಿಂದ ಪಡೆದ ಸಾಲವನ್ನು ಸಕಾಲದಲ್ಲಿ ಮರುಪಾವತಿ ಮಾಡಿದರೆ ಸಂಘ ಅಭಿವೃದ್ಧಿ ಹೊಂದಲು ಸಾಧ್ಯ ಎಂದರು.

ಸಹಕಾರ ಸಂಘಗಳಿಂದ ಗ್ರಾಮೀಣ ಜನರಿಗೆ ಅನುಕೂಲವಾಗಿದೆ ರೈತರು ಹಾಗೂ ಷೇರುದಾರರು ಸಂಘದಿಂದ ಪಡೆದ ಸಾಲವನ್ನು ಸುಸ್ತಿದಾರರಾಗದೇ ನಿಗದಿತ ಸಮಯಕ್ಕೆ ಮರುಪಾವತಿಸುವ ಮೂಲಕ ಸಂಘದ ಬೆಳವಣಿಗೆಗೆ ಸಹಕರಿಸುವಂತೆ ಮನವಿ ಮಾಡಿದರು.

ಸಭೆಯಲ್ಲಿ ಉಪಾಧ್ಯಕ್ಷೆ ಜಯಮ್ಮ, ನಿರ್ದೇಶಕರಾದ ಎಂ.ಚಂದ್ರಶೇಖರ್, ಎನ್.ಮೋಹನ್, ಎಂ.ದೇವರಾಜು, ಎಂ.ಆರ್.ಸುಂದರ, ಎ.ಬಿ.ಮಂಜುನಾಥ್, ಎಂ.ಎನ್.ನಿಜಗುಣ, ಎಂ.ಶಿವಮೂರ್ತಿ, ಎಂ.ಬಿ.ಪರಶಿವ ಮೂರ್ತಿ, ರಾಚಮ್ಮ, ಎಸ್.ಸತೀಶ್ ಹಾಜರಿದ್ದರು.



ಪಿರಿಯಾಪಟ್ಟಣ ತಾಲೂಕು ಕುರುಬರ ಸಂಘದ ನೂತನ ಅಧ್ಯಕ್ಷ ಹೆಚ್.ಡಿ.ಗಣೇಶ್ ಹಾಗೂ ವೇದಾವತಿ ಗಣೇಶ್ ಅವರನ್ನು ಬೆಟ್ಟದಪುರ ಹೋಬಳಿ ಕುರುಬರ ಸಂಘದ ಮುಖಂಡ ಕೆ.ಹೆಚ್. ಬಸವರಾಜ್, ಗೊರಹಳ್ಳಿ ಗ್ರಾಮದ ನಿವೃತ್ತ ಶಿಕ್ಷಣ ಇಲಾಖೆ ಅಧಿಕಾರಿ ಮರಿಗೌಡರು ಅಭಿನಂದಿಸಿದರು.

ಗ್ರಾಪಂ ಭ್ರಷ್ಟಾಚಾರ ಪ್ರಶ್ನಿಸಿದ್ದಕ್ಕೆ ಸುಳ್ಳು ದೂರು ದಾಖಲಿಸಿರುವ ಅಧಿಕಾರಿಗಳ ವಿರುದ್ಧ

ಸೆ.20, ಕಳಲೆ ಗ್ರಾಪಂ ಎದುರು ಬೃಹತ್ ಪ್ರತಿಭಟನೆ

ನಂಜನಗೂಡು, ಸೆ.13– ಗ್ರಾಪಂ ವೈಫಲ್ಯ ಮತ್ತು ಭ್ರಷ್ಟಾಚಾರ ಪ್ರಶ್ನಿಸಿದ್ದಕ್ಕಾಗಿ ಗ್ರಾಮಸ್ಥನನ್ನು ಅವಾಚ್ಯ ಶಬ್ದಗಳಿಂದ ನಿಂದಿಸಿ, ಆತನ ಮೇಲೆ ಪೊಲೀಸ್ ಠಾಣೆಯಲ್ಲಿ ಸುಳ್ಳು ದೂರು ದಾಖಲಿಸಿರುವ ಪಂಚಾಯ್ತಿ ಅಧಿಕಾರಿಗಳ ಧೋರಣೆ ಖಂಡಿಸಿ ಸೆ.20ರಂದು ತಾಲೂಕಿನ ಕಳಲೆ ಗ್ರಾಪಂ ಎದುರು ಬೃಹತ್ ಪ್ರತಿಭಟನೆ ಹಮ್ಮಿಕೊಳ್ಳಲಾಗಿದೆ ಎಂದು ಸಾಮೂಹಿಕ ರೈತ ಸಂಘದ ಜಿಲ್ಲಾಧ್ಯಕ್ಷ ಟಿ.ಆರ್.ವಿದ್ಯಾಸಾಗರ್ ತಿಳಿಸಿದರು.



ನಗರದ ಎಪಿಎಂಸಿ ಕಚೇರಿ ಸಭಾಂಗಣದಲ್ಲಿ ನಡೆದ ರೈತ ಸಂಘದ ಸಭೆಯಲ್ಲಿ ಮಾತನಾಡಿದ ಅವರು, ಕಳಲೆ ಗ್ರಾಮದ ರೈತ ಸಂಘದ ಕಾರ್ಯಕರ್ತ ಹಾಗೂ ಗ್ರಾಮಸ್ಥ ಕಾರ್ತಿಕ್, ಗ್ರಾಮದ ನೈರ್ಮಲ್ಯ ಕಾಪಾಡಿ, ರಸ್ತೆ, ಚರಂಡಿ ದುರಸ್ತಿ ಪಡಿಸಿ, ಅಕ್ರಮ ಕಟ್ಟಡ ತೆರವುಗೊಳಿಸಿ ಕೆರೆ ಏರಿ ಸರಿಪಡಿಸಿ ಎಂದು ಮನವಿ ಮಾಡಿಕೊಂಡು ಮತ್ತು 15ನೇ ಹಣಕಾಸಿನ ಬಗ್ಗೆ ಮಾಹಿತಿ ಕೇಳಿದ್ದಕ್ಕಾಗಿ ಪಂಚಾಯ್ತಿ ಅಧಿಕಾರಿ ವಿದ್ಯಾಧರ ಎಂಬುವರು ಅವಾಚ್ಯ ಶಬ್ದಗಳಿಂದ ನಿಂದಿಸಿ ದರ್ಪ ತೋರಿರುವುದಲ್ಲದೆ, ಸುಳ್ಳು ದೂರು ದಾಖಲಿಸಿದ್ದಾರೆ. ಈ ಕ್ರಮ ಖಂಡಿಸಿ ರೈತ ಸಂಘಟನೆ ಸೆ.20 ರಂದು ತಾಲೂಕಿನ ಕಳಲೆ ಗ್ರಾಪಂ ಕಚೇರಿ ಮುಂಭಾಗ ಬೃಹತ್ ಪ್ರತಿಭಟನೆ ನಡೆಸಲಾಗುವುದು. ತಪ್ಪಿತಸ್ಥ ಅಧಿಕಾರಿಗಳ ವಿರುದ್ಧ ಕ್ರಮ ಕೈಗೊಂಡು ಅವರನ್ನು ಸೇವೆಯಿಂದ ವಜಾಗೊಳಿಸಬೇಕು ಮತ್ತು ತಾಲೂಕಿನ ಎಲ್ಲಾ ಗ್ರಾಪಂಗಳಲ್ಲಿ ಆರ್‌ಟಿಐ ಮೂಲಕ ನಮ್ಮ ಹಣ ಲೆಕ್ಕ ಕೊಡಿ ಎಂಬ ಅಭಿಯಾನ ನಡೆಸಲಾಗುವುದು ಎಂದು ಮಾಹಿತಿ ನೀಡಿದರು.

ಮಾಧ್ಯಮ ಕಾರ್ಯದರ್ಶಿ ಮಂಜು ಕಿರಣ್ ಮಾತನಾಡಿ, ಗ್ರಾಮಗಳ ಸಮಸ್ಯೆಗಳನ್ನು ನಿವಾರಿಸುವ ಆಶಯಗಳೊಂದಿಗೆ ಗ್ರಾಪಂ ಅಸ್ತಿತ್ವಕ್ಕೆ ಬಂದಿವೆ. ಆದರೆ ಗ್ರಾಮಗಳ ಸಮಸ್ಯೆಗಳ ಬಗ್ಗೆ, ವ್ಯಾಪಕ ಭ್ರಷ್ಟಾಚಾರದ ಬಗ್ಗೆ ಪ್ರಶ್ನೆ ಮಾಡಿದ್ದೆ ತಪ್ಪೆಂದು ಭಾವಿಸಿ ಅವರ ಮೇಲೆ ದರ್ಪ ತೋರಿ ಪೊಲೀಸ್ ಠಾಣೆಯಲ್ಲಿ ರೌಡಿಶೀಟರ್ ದೂರು ದಾಖಲಿಸಿರುವ ಅಧಿಕಾರಿಗಳ ವಿರುದ್ಧ ಅನಿರ್ದಿಷ್ಟಾವಧಿ ಹೋರಾಟ ನಡೆಸಲಾಗುವುದು ಎಂದರು.

ಸಭೆಯಲ್ಲಿ ರೈತ ಸಂಘದ ತಾಲೂಕು ಅಧ್ಯಕ್ಷ ಸತೀಶ್ ರಾವ್, ಜಿಲ್ಲಾ ಕಾರ್ಯದರ್ಶಿ ಇಮ್ಮಾವು ರಘು, ಶಿವಣ್ಣ, ಶಂಕರ ನಾಯಕ, ಶೈಲಜಾ, ಮಹದೇವು, ಮೋಹನ್, ಶಿರಮಳ್ಳಿ ಮಂಜು, ಜಯಶಂಕರ್, ಮಂಜು ಸೇರಿದಂತೆ ನೂರಾರು ರೈತರು ಇದ್ದರು.

ಹುಲ್ಲಹಳ್ಳಿಯಲ್ಲಿ ಕ್ಲಸ್ಟರ್ ಮಟ್ಟದ ಪ್ರತಿಭಾ ಕಾರಂಜಿ

ಹುಲ್ಲಹಳ್ಳಿ, ಸೆ.13– ಮಕ್ಕಳ ಪ್ರತಿಭೆ ಗುರುತಿಸಲು ಪ್ರತಿಭಾ ಕಾರಂಜಿ ಉತ್ತಮ ವೇದಿಕೆ ಎಂದು ಅಕ್ಷರ ದಾಸೋಹದ ಸಹಾಯಕ ನಿರ್ದೇಶಕ ಮಲ್ಲಿಕಾರ್ಜುನ್ ಹೇಳಿದರು.

ಹುಲ್ಲಹಳ್ಳಿಯ ಶ್ರೀ ಬಸವೇಶ್ವರ ಹಿರಿಯ ಪ್ರಾಥಮಿಕ ಶಾಲೆಯ ಆವರಣದಲ್ಲಿ ನಡೆದ ಕ್ಲಸ್ಟರ್ ಮಟ್ಟದ ಪ್ರತಿಭಾ ಕಾರಂಜಿ ಉದ್ಘಾಟಿಸಿ ಮಾತನಾಡಿದರು. ಈ ವೇಳೆ ಮಕ್ಕಳು ನೃತ್ಯ, ನಾಟಕ, ಜಾನಪದ ಗೀತೆ ಸೇರಿದಂತೆ ಇನ್ನಿತರ ಚಟುವಟಿಕೆಗಳಲ್ಲಿ ಭಾಗವಹಿಸಿದ್ದರು. ಗ್ರಾಪಂ ಅಧ್ಯಕ್ಷ ಹೆಚ್.ಎನ್.ಮಹೇಶ್ ಅಧ್ಯಕ್ಷತೆ ವಹಿಸಿದ್ದರು. ಶಿಕ್ಷಣ ಇಲಾಖೆ ತಾಲೂಕು ಅಧ್ಯಕ್ಷ ಧರ್ಮರತ್ನಾಕರ್ ಹಾಗೂ ಕಾರ್ಯದರ್ಶಿ



ಸೋಮೇಶ್, ರಮೇಶ್, ರಘುನಾಥ್, ಕ್ಲಸ್ಟರ್ ಸಿಆರ್‌ಪಿ ಶಿವಕುಮಾರ್, ಸಿದ್ದೇಶ್, ಗುರುಸ್ವಾಮಿ, ಮುಖ್ಯಶಿಕ್ಷಕಿ ರಾಜೇಶ್ವರಿ ಹಾಗೂ ಶಿಕ್ಷಕ ವೃಂದ ಹಾಜರಿದ್ದರು.



ಹೆಚ್.ಡಿ.ಕೋಟೆ ತಾಲೂಕಿನ ಹೊಮ್ಮರಗಳ್ಳಿ ಕನ್ನಡ ಮತ್ತು ಆಂಗ್ಲ ಮಾಧ್ಯಮ ಹಿರಿಯ ಪ್ರಾಥಮಿಕ ಶಾಲೆಯಲ್ಲಿ 1 ರಿಂದ 8ನೇ ತರಗತಿ ಮಕ್ಕಳಿಗೆ ಉಚಿತ ಸಮವಸ್ತ್ರ ವಿತರಿಸಲಾಯಿತು. ಎಸ್‌ಡಿಎಂಸಿ ಅಧ್ಯಕ್ಷೆ ಯಶೋಧ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದರು. ಈ ವೇಳೆ ಉಪಾಧ್ಯಕ್ಷ ಪಿ.ರವಿಕುಮಾರ್, ಸದಸ್ಯರಾದ ಹೆಚ್.ಎಸ್.ಶಿವಕುಮಾರ್, ಗೋವಿಂದರಾಜು, ಭಾಗ್ಯ, ಜಿಮಶೀನಾ, ಮುಖ್ಯಶಿಕ್ಷಕ ಬಿ.ಎನ್.ನಾಗಾರ್ಜುನ, ಶಿಕ್ಷಕಿಯರಾದ ಎಸ್.ಮಹಾದೇವಿ, ಎಂ.ವೇದಾವತಿ, ಕೆ.ಸಿ.ತಾರಾ, ಚಿತ್ರಾವತಿ, ಮಂಗಳಮ್ಮ, ಶಶಿಕಲಾ, ಮತೀನ್ ಜಹಾನ್, ಸಾವಿತ್ರಿಬಾಯಿ ಆಲಮೇಲ, ಅಡುಗೆ ಸಿಬ್ಬಂದಿ ಸೇರಿದಂತೆ ಇನ್ನಿತರರಿದ್ದರು.



ಮೈಸೂರಿನ ನೂತನ ಮೇಯರ್ ಶಿವಕುಮಾರ್ ಅವರನ್ನು ರಾಜ್ಯ ಕೆಪಿಸಿಸಿ ಪ್ರಧಾನ ಕಾರ್ಯದರ್ಶಿ ಕ್ಯಾತನಹಳ್ಳಿ ನಾಗರಾಜು, ಹೆಚ್.ಡಿ. ಕೋಟೆ ತಾಲೂಕು ಚಿಕ್ಕಮಾದು ಅಭಿಮಾನಿ ಬಳಗದ ಅಧ್ಯಕ್ಷ ಜಿನ್ನಹಳ್ಳಿ ರಾಜನಾಯಕ ಅಭಿನಂದಿಸಿದರು.

ಒಕ್ಕಲಿಗರ ಸೊಸೈಟಿಗೆ ಸಿಎ ನಿವೇಶನದ ಜೊತೆಗೆ ಅಗತ್ಯ ಅನುದಾನ

ಸರ್ವ ಸದಸ್ಯರ ವಾರ್ಷಿಕ ಮಹಾಸಭೆಯಲ್ಲಿ ಶಾಸಕ ಸಾ.ರಾ.ಮಹೇಶ್

ಕೆ.ಆರ್.ನಗರ, ಸೆ.13– ತಾಲೂಕು ಒಕ್ಕಲಿಗರ ಕ್ರೆಡಿಟ್ ಕೋ–ಆಪರೇಟಿವ್ ಸೊಸೈಟಿ ಕಟ್ಟಡ ನಿರ್ಮಾಣಕ್ಕೆ ಸಿಎ ನಿವೇಶನ ಕೊಡಿಸುವ ಜೊತೆಗೆ ಅಗತ್ಯ ಅನುದಾನ ನೀಡಲಾಗುವುದು ಎಂದು ಶಾಸಕ ಸಾ.ರಾ.ಮಹೇಶ್ ತಿಳಿಸಿದರು.

ಪಟ್ಟಣದ ಹೆಚ್.ಡಿ.ದೇವೇಗೌಡ ಸಮುದಾಯ ಭವನದಲ್ಲಿ ನಡೆದ ಸಂಘದ ಸರ್ವ ಸದಸ್ಯರ ವಾರ್ಷಿಕ ಮಹಾಸಭೆ ಉದ್ಘಾಟಿಸಿ ಮಾತನಾಡಿದ ಅವರು, ಸಂಘದ ಷೇರುದಾರ ಸದಸ್ಯರಿಗೆ ಅನುಕೂಲವಾಗುವ ರೀತಿ ವ್ಯವಹಾರ ನಡೆಸುವಂತೆ ಸಲಹೆ ನೀಡಿದರು.

ಮಿರ್ಲೆ ಮತ್ತು ಹರದನಹಳ್ಳಿ ಕೃಷಿ ಪತ್ತಿನ ಸಹಕಾರ ಸಂಘಗಳಲ್ಲಿ 80 ಲಕ್ಷ ಅವ್ಯವಹಾರ ನಡೆದಿದ್ದು, ಕಾರ್ಯದರ್ಶಿ ಆತ್ಮಹತ್ಯೆ ಮಾಡಿಕೊಂಡಿದ್ದಾರೆ. ಆದ್ದರಿಂದ ಕೋ–ಆಪರೇಟಿವ್ ಸಂಸ್ಥೆಗಳನ್ನು ನಡೆಸುವಾಗ ಆಡಳಿತ ಮಂಡಳಿ ಮತ್ತು ಮುಖ್ಯ ಕಾರ್ಯ ನಿರ್ವಾಹಕ ಅಧಿಕಾರಿಗಳು ಬಹಳ ಎಚ್ಚರಿಕೆಯಿಂದ ಇರಬೇಕು. ಆಗ ಮಾತ್ರ ಸಂಘ



ಆರ್ಥಿಕ ಪ್ರಗತಿ ಕಾಣಲು ಸಾಧ್ಯ ಎಂದರು.

ಸೊಸೈಟಿ ಅಧ್ಯಕ್ಷರೂ ಆದ ವಸ್ತು ಪ್ರದರ್ಶನ ಪ್ರಾಧಿಕಾರದ ಅಧ್ಯಕ್ಷ ಮಿರ್ಲೆ ಶ್ರೀನಿವಾಸ ಗೌಡ ಮಾತನಾಡಿ, ಸೊಸೈಟಿ 3,96,766 ರೂ. ನಿವ್ವಳ ಲಾಭದಲ್ಲಿದ್ದು, 11 ಲಕ್ಷದ 13 ಸಾವಿರ ಷೇರು ಬಂಡವಾಳ ಹೊಂದಿದೆ. ವಾರ್ಷಿಕ 1,36,66,571 ರೂ. ವಹಿವಾಟು ನಡೆಸಿದೆ. ಇದಕ್ಕೆ ಸಹಕಾರ ನೀಡಿದ ಆಡಳಿತ ಮಂಡಳಿ ನಿರ್ದೇಶಕರಿಗೆ ಮತ್ತು ಷೇರುದಾರ ಸದಸ್ಯರಿಗೆ ಕೃತಜ್ಞತೆ ಸಲ್ಲಿಸುವುದಾಗಿ ಹೇಳಿದರು.

ಈ ವೇಳೆ ಹೆಚ್ಚು ಷೇರು ಬಂಡವಾಳ ಹೂಡಿದ ಸದಸ್ಯರನ್ನು ಸನ್ಮಾನಿಸಲಾಯಿತು. ಮತ್ತು ಸಂಘದ ಸದಸ್ಯರ ಮಕ್ಕಳಿಗೆ ಪ್ರತಿಭಾ ಪುರಸ್ಕಾರ ನೀಡಿ ಗೌರವಿಸಲಾಯಿತು. ನವನಗರ ಬ್ಯಾಂಕ್ ಅಧ್ಯಕ್ಷ ಕೆ.ಎನ್. ಬಸಂತ್, ಸಂಘದ ಉಪಾಧ್ಯಕ್ಷ ವಿ.ಸಿ.ಶಿವರಾಮು ಮಾತನಾಡಿದರು.

ತಹಶೀಲ್ದಾರ್‌ಗಳಾದ ಎಸ್. ಸಂತೋಷ್, ಎಂ.ಎಸ್. ಯದುಗಿರೀಶ್, ನಿವೃತ್ತ ಬಿಇಓ ಎಂ.ರಾಜು, ಜಿಪಂ ಮಾಜಿ ಸದಸ್ಯೆ ಕಲ್ಪನಾ, ಸರ್ಕಾರಿ ನೌಕರರ ಸಂಘದ ಅಧ್ಯಕ್ಷ ಸಿ.ಜೆ.ಅರುಣ್ ಕುಮಾರ್, ಸಂಘದ ನಿರ್ದೇಶಕರಾದ ಸುದೀಶ್ ಕುಮಾರ್, ತಿಮ್ಮಪ್ಪ, ಶಂಕರೇಗೌಡ, ಸಿ.ಆರ್.ಉದಯ್ ಕುಮಾರ್, ಚಂದ್ರಶೇಖರ್, ಕವಿತಾ, ಅನೀಫ್ ಗೌಡ, ಸಿ.ಜೆ. ಆನಂದ್, ಎಂ.ಟಿ.ಕುಮಾರ್, ದೇವೇಂದ್ರ ಈಶ್ವರ್, ಯೋಗೇಶ್, ಜೆಡಿಎಸ್ ತಾಲೂಕು ವಕ್ತಾರ ಕೆ.ಎಲ್.ರಮೇಶ್, ದಿವಾಕರ್, ಶಿವಣ್ಣ ಸೇರಿದಂತೆ ಇನ್ನಿತರರಿದ್ದರು.

ಶತಾಯುಷಿ ಲಕ್ಷ್ಮೀಬಾಯಿ ಘಾಟ್ಕೆ ನಿಧನ



ಗಾವಡಗೆರೆ, ಸೆ.13– ಗ್ರಾಮದ ಶತಾಯುಷಿ ಲಕ್ಷ್ಮೀಬಾಯಿ ಘಾಟ್ಕೆ (105) ಮಂಗಳವಾರ ನಿಧನರಾದರು. ಮೃತರು ಓರ್ವ ಪುತ್ರ, ಇಬ್ಬರು ಪುತ್ರಿಯರು ಸೇರಿದಂತೆ ಅಪಾರ ಬಂಧುಗಳನ್ನು ಅಗಲಿದ್ದಾರೆ. ಅಂತ್ಯಸಂಸ್ಕಾರ ಗ್ರಾಮದ ರುದ್ರಭೂಮಿಯಲ್ಲಿ ನೆರವೇರಿತು ಎಂದು ಕುಟುಂಬದ ಮೂಲಗಳು ತಿಳಿಸಿವೆ.

ಸೆ.16, ರಿಯಾ ಚಿತ್ರ ಬಿಡುಗಡೆ

ಮೈಸೂರು,ಸೆ.13(ಆರ್‌ಕೆಬಿ)– ಮಹಿಳಾ ನಿರ್ದೇಶಕಿ, ಆಂಧ್ರಪ್ರದೇಶ ಮೂಲದ ವಿಜಯಾ ನರೇಶ್ ನಿರ್ದೇಶಿಸಿರುವ ಸಸ್ಪೆನ್ಸ್, ಹಾರರ್ ಹಾಗೂ ಥ್ರಿಲ್ಲರ್ ಕಥಾ ವಸ್ತುವುಳ್ಳ 'ರಿಯಾ' ಕನ್ನಡ ಚಲನಚಿತ್ರ ಸೆ.16ರಂದು ರಾಜ್ಯಾದ್ಯಂತ ಬಿಡುಗಡೆಗೊಳ್ಳುತ್ತಿದೆ ಎಂದು ಚಿತ್ರತಂಡದ ಕಾರ್ತಿಕ್ ವರ್ಣೇಕರ್ ತಿಳಿಸಿದರು.

ಮೈಸೂರು ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಚಲನಚಿತ್ರ ಕುಶಾಲನಗರದಲ್ಲಿಯೇ ಹೆಚ್ಚಿನ ಭಾಗ ಚಿತ್ರೀಕರಣಗೊಂಡಿದೆ. 14 ಪಾತ್ರಗಳ ಸುತ್ತ ಒಂದೇ ಮನೆಯಲ್ಲಿ ಸಾಗುವ ಚಲನ ಚಿತ್ರ ಇದಾಗಿದೆ. ನಿರ್ಮಾಪಕ ಹಾಗೂ ನಿರ್ದೇಶಕರನ್ನು ಹೊರತುಪಡಿಸಿದರೆ ಉಳಿದವರೆಲ್ಲರೂ ಕನ್ನಡಿಗರೇ ಆಗಿದ್ದಾರೆ ಎಂದರು.

ಚಿತ್ರದಲ್ಲಿ ರಿಯಾ ಎನ್ನುವ ಪ್ರಮುಖ ಪಾತ್ರವನ್ನು ಮೈಸೂರಿನ ಬಾಲಕಿ ಅನನ್ಯ ನಿರ್ವಹಿಸಿದ್ದು, ನಾಯಕ ನಟರಾಗಿ ತಾವು ನಟಿಸಿರುವುದಾಗಿ ತಿಳಿಸಿದರು. ಈಗಾಗಲೇ ಚಿತ್ರದ ಟ್ರೈಲರ್ ಬಿಡುಗಡೆಯಾಗಿದ್ದು, ಸಾಕಷ್ಟು ಕುತೂಹಲ ಹಾಗೂ ಕಾತುರಗಳನ್ನು ಚಿತ್ರ ಹುಟ್ಟುಹಾಕಿದೆ. ಹೀಗಾಗಿ ಚಿತ್ರ ಯಶಸ್ವಿಯಾಗುವ ನಿರೀಕ್ಷೆಯಿದೆ ಎಂದರು. ಗೋಷ್ಠಿಯಲ್ಲಿ ಅನನ್ಯ, ಸಾವಿತ್ರಿ ಕೃಷ್ಣ, ಸುಧೀರ್, ರಣವೀರ್ ಪಾಟೀಲ್ ಉಪಸ್ಥಿತರಿದ್ದರು.

ಸಫಾಯಿ ಕರ್ಮಚಾರಿ ಆಯೋಗದ ಅಧ್ಯಕ್ಷ ಇಂದು ಮೈಸೂರಿಗೆ

ಮೈಸೂರು, ಸೆ.13– ಕರ್ನಾಟಕ ರಾಜ್ಯ ಸಫಾಯಿ ಕರ್ಮಚಾರಿ ಆಯೋಗದ ಅಧ್ಯಕ್ಷ ಎಂ. ಶಿವಣ್ಣ (ಕೋಟೆ) ಸೆ.14 ರಂದು ಮೈಸೂರಿಗೆ ಆಗಮಿಸಲಿದ್ದಾರೆ. ಬೆಳಗ್ಗೆ 9 ಗಂಟೆಗೆ ಜಯನಗರದ ಇಸ್ಕಾನ್ ಟೆಂಪಲ್ ಹತ್ತಿರ ಖಾಯಂ ಪೌರಕಾರ್ಮಿಕರಿಗೆ ನಗರಾಭಿವೃದ್ಧಿ ಪ್ರಾಧಿಕಾರದಿಂದ ಜಿ+3 ಮಾದರಿ ಮನೆಗಳನ್ನು ನಿರ್ಮಿಸುತ್ತಿರುವ ಸ್ಥಳಕ್ಕೆ ಭೇಟಿ ನೀಡುವರು. ನಂತರ ಬೆಳಗ್ಗೆ 11ಕ್ಕೆ ಜಲದರ್ಶಿನಿ ಪ್ರವಾಸಿ ಮಂದಿರದಲ್ಲಿ ಪೌರಕಾರ್ಮಿಕರ ಮುಖಂಡರ ಜೊತೆ ಸಭೆ ನಡೆಸುವರು.

ಗೌರವಾನ್ವಿತ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ. ರವರ ನ್ಯಾಯಾಲಯ. ತಿ. ನರಸೀಪುರ.

ಅಸಲು ದಾವಾ ಸಂಖ್ಯೆ: 9/2020

[illegible]

ಸಾರ್ವಜನಿಕ ಪ್ರಕಟಣೆ

[illegible] ದಿನಾಂಕ 27-10-2022 ರಂದು ಬೆಳಗ್ಗೆ 11.00 ಗಂಟೆಗೆ [illegible]

ಷೆಡ್ಯೂಲ್

[illegible] ನಂ.96/1 ರ ವಿಸ್ತೀರ್ಣ 1 ಎಕರೆ [illegible] ನಂ. 97/1 ರ ವಿಸ್ತೀರ್ಣ 1 ಎಕರೆ 32 ಗುಂಟೆ [illegible] ದಿನಾಂಕ : 12-09-2022 ರಂದು ನೀಡಿದೆ.

ನ್ಯಾಯಾಲಯದ ಅಪ್ಪಣೆಯ ಮೇರೆಗೆ

Sd/-Chief Ministerial Officer
CJ & JMFC Court of
T. Narasipura

ನೈಋತ್ಯ ರೈಲ್ವೆ

ಇ-ಟೆಂಡರ್ ಪ್ರಕಟಣೆ ಸಂ. ವೈ/ಇ.29/2022-23/16
ದಿನಾಂಕ : 07-09-2022

ಭಾರತದ ರಾಷ್ಟ್ರಪತಿಗಳ ಪರವಾಗಿ ಕೆಳಸಹಿದಾರರು ಕೆಳಕಂಡ ಕೆಲಸಕ್ಕಾಗಿ ಇ-ಟೆಂಡರ್‌ಗಳನ್ನು ಆಹ್ವಾನಿಸಿದ್ದಾರೆ.

ಕೆಲಸದ ಹೆಸರು	ಅಂದಾಜು ಮೌಲ್ಯ
ಮೈಸೂರು ಹೊಸ ಗೂಡ್ಸ್ ಟರ್ಮಿನಲ್‌ನಲ್ಲಿ ಸರಕು ಸಾಗಾಣಿಕೆಯ ಪರೀಕ್ಷಾ ಸೌಲಭ್ಯಗಳ ಉನ್ನತೀಕರಣ ಮತ್ತು ಹೆಚ್ಚಿಸುವುದು.	ರೂ. 14,67,830/-

ಬಿಡ್‌ಗಳನ್ನು ಸಲ್ಲಿಸಲು ಕೊನೆಯ ದಿನಾಂಕ : 28-09-2022 ರಂದು 11:00 ಗಂಟೆವರೆಗೆ
ಹೆಚ್ಚಿನ ವಿವರಗಳಿಗಾಗಿ www.ireps.gov.in ಗೆ ಲಾಗ್ ಆನ್ ಮಾಡಿ.
ಹಿರಿಯ ವಿಭಾಗೀಯ ವಿದ್ಯುತ್ ಇಂಜಿನಿಯರ್, ಮೈಸೂರು
S.W.Railways SWRRLY SWRRLY

ನೈಋತ್ಯ ರೈಲ್ವೆ

ಟೆಂಡರ್ ಪ್ರಕಟಣೆ ಸಂ. [illegible]/34/2022
ದಿನಾಂಕ : 07-09-2022

[illegible]

ಅರ್ಜಿಗಳನ್ನು ಸಲ್ಲಿಸಲು ಕೊನೆಯ ದಿನಾಂಕ : 14-10-2022 ರಂದು 15:00 ಗಂಟೆವರೆಗೆ
ಹೆಚ್ಚಿನ ವಿವರಗಳಿಗಾಗಿ www.swr.indianrailways.gov.in ಗೆ ಲಾಗ್ ಆನ್ ಮಾಡಿ
ಹಿರಿಯ ವಿಭಾಗೀಯ ವಾಣಿಜ್ಯ ವ್ಯವಸ್ಥಾಪಕರು, ಮೈಸೂರು
S.W.Railways SWRRLY SWRRLY

VIDYAVARDHAKA SANGHA (R), Mysuru
Vidyavardhaka First Grade College
Sheshadri Iyer Road, Mysuru - 01 | Ph : 0821-2422385
Email : vvfgc@yahoo.co.in, principal@vvfgc.ac.in
Website : www.vvfgc.ac.in

WANTED

Sl.No	Name of the post	Education Qualification	Remarks
1	Assistant Professors	MCA / MSc., in Computer Science	02 Posts
2	Assistant Professors	M.A in English	02 Posts
3	Assistant Professors	M.A in Kannada	01 Post
4	Assistant Professors	M.A in Hindi	01 Post

Eligibility for the above posts is NET/K-SET. Preference will be given to candidates with experience & Ph.D., Please submit the applications within 7 days along with copies of Certificates, Bio-Data & Passport size photo to the office.

Sd/- Hon.President Sd/- Hon. Secretary

ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘ ನಿ. ಕುದೇರು

ಕುದೇರು ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘ ನಿ. ಕುದೇರು ಇದರ 2021–2022ನೇ ಸಾಲಿನ ಸರ್ವ ಸದಸ್ಯರ ವಾರ್ಷಿಕ ಮಹಾ ಸಭೆಯನ್ನು ದಿನಾಂಕ: 17.09.2022ನೇ ಶನಿವಾರ ಸಮಯ 12.00ಗಂಟೆಗೆ ಸರಿಯಾಗಿ ಸಂಘದ ಆವರಣದಲ್ಲಿ ಆಯೋಜಿಸಿದ್ದು, ಸದಸ್ಯರಿಗೆ ಅಂಚೆ ಮೂಲಕ ಆಹ್ವಾನ ಪತ್ರಿಕೆಯನ್ನು ಕಳುಹಿಸಲಾಗಿದ್ದು, ಕಾರಣಾಂತರಗಳಿಂದ ಆಹ್ವಾನ ಪತ್ರಿಕೆ ತಲುಪದಿದ್ದಲ್ಲಿ ಇದನ್ನೇ ಆಹ್ವಾನವೆಂದು ತಿಳಿದು ಸಭೆಗೆ ಹಾಜರಾಗಬೇಕೆಂದು ಕೋರಿಕೊಳ್ಳುತ್ತೇವೆ.

ಆಡಳಿತ ಮಂಡಳಿ ಅಪ್ಪಣೆಯ ಮೇರೆಗೆ

ಸಹಿ/– ಟಿ.ಮಹೇಶ ಸಿ.ಇ.ಓ ಪ್ರಾ.ಕೃ.ಪ.ಸ.ಸಂಘ ನಿ., ಕುದೇರು

